ಸಂಪುಟ: 04 ಸಂಚಿಕೆ: 238 ಪುಟಗಳು: 08 ಸೋಮವಾರ 11 ನವೆಂಬರ್ 2024 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಧರ್ಮವು ಜೀವನವನ್ನು ಮತ್ತು ಎಲ್ಲಾ ಆದರ್ಶಗಳನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುತ್ತದೆ. ಈ ಕಾರಣಕ್ಕಾಗಿ ನಾವು ನಮ್ಮ ಧರ್ಮವನ್ನು ಮೊದಲು ಪಾಲಿಸಬೇಕು.

## ಸುಳ್ಳು ಬಿಜೆಪಿಯ ಪ್ರಬಲ ಅಸ್ತ್ರ ಡಿಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಚುನಾವಣೆಗಳಲ್ಲಿ ಸುಳ್ಳೇ ಬಿಜೆಪಿಯ ಪ್ರಬಲ ಅಸ್ತ್ರವಾಗಿದೆ. ಹೀಗಾಗಿ ಪ್ರಧಾನಮಂತ್ರಿಯಂತಹ ಉನ್ನತ ಹುದ್ದೆಯಲ್ಲಿರುವವರು ಆಧಾರರಹಿತ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.ಸದಾಶಿವನಗರ ನಿವಾಸದ ಬಳಿ ಶಿವಕುಮಾರ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು. ಮಹಾರಾಷ್ಟ್ರ ಚುನಾವಣೆಗಾಗಿ ಕರ್ನಾಟಕ ಕಾಂಗ್ರೆಸ್ ಸರ್ಕಾರ ಅಬಕಾರಿ ಇಲಾಖೆಯಲ್ಲಿ 700 ಕೋಟಿ ವಸೂಲಿ ಮಾಡಿದೆ ಎಂಬ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆರೋಪದ ಬಗ್ಗೆ ಕೇಳಿದಾಗ, ಪ್ರಧಾನಮಂತ್ರಿಗಳು ರಾಜಕೀಯ ಆರೋಪ ಮಾಡುತ್ತಿದ್ದಾರೆ. ಅವರು ಈ ಆರೋಪಗಳನ್ನು ಸಾಬೀತುಪಡಿಸಲಿ. ನಾವು ಯಾವುದೇ ಶಿಕ್ಷೆಗೆ ಬೇಕಾದರೂ ಗುರಿಯಾಗುತ್ತೇವೆ. ಕೇಂದ್ರ ಸಚಿವರುಗಳು ಯಾವ ಯಾವ ಚುನಾವಣೆಗೆ ಎಷ್ಟೆಷ್ಟು ಹಣ ಸಂಗ್ರಹಿಸುತ್ತಿದ್ದಾರೆ ಎಂದು ನನಗೂ ಗೊತ್ತಿದೆ. ಉನ್ನತ ಹುದ್ದೆಯಲ್ಲಿರುವವರು ಆಧಾರವಿಲ್ಲದೆ ಆರೋಪ ಮಾಡಬಾರದು. ಮಹಾರಾಷ್ಟ್ರ ಕಾಂಗ್ರೆಸ್ ನವರು ಈ ಬಗ್ಗೆ ನಮ್ಮ ಜತೆ ಚರ್ಚೆಯನ್ನೇ ಮಾಡಿಲ್ಲ. ಬಿಜೆಪಿ ಹಾಗೂ ಅದರ ಮಿತ್ರ ಪಕ್ಷಗಳ ನಾಯಕರು ನಮ್ಮ ರಾಜ್ಯದ ಗ್ಯಾರಂಟಿ ಯೋಜನೆಗಳ ಬಗ್ಗೆ ಸುಳ್ಳು ಹೇಳಿಕೆ ನೀಡುತ್ತಿದ್ದಾರೆ.

## ಉಪಚುನಾವಣೆ ಬಳಿಕ ಸಿಎಂ ಸ್ಥಾನಕ್ಕೆ ರಾಜೀನಾಮೆ: ಬಿವೈವಿ

• ಉದಯವಾಹಿನಿ, ಬಳ್ಳಾರಿ

ರಾಜ್ಯದಲ್ಲಿ ನಡೆಯುತ್ತಿರುವ ಉಪಚುನಾವಣೆ ಬಳಿಕ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಭವಿಷ್ಯ ನುಡಿದಿದ್ದಾರೆ. ಉಪಚುನಾವಣೆ ಬಳಿಕ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡ್ತಾರೆ.ಯಾವುದೇ ಅನುಮಾನ ಬೇಡ ಎಂದು ಸ್ಫೋಟಕ ಹೇಳಿಕೆ ನೀಡಿದ್ದಾರೆ. ಕೋವಿಡ್ ಹಗರಣದ ಬಗ್ಗೆ ಮಧ್ಯಂತರ ವರದಿ ಸಲ್ಲಿಕೆ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಉಪಚುನಾವಣೆ ವೇಳೆ ಮಧ್ಯಂತರ ವರದಿ ಸ್ವೀಕರಿಸುವ ಅಗತ್ಯವಿತ್ತಾ ಉಪಚುನಾವಣೆಯಿಂದ ಬಿ.ಎಸ್. ಯಡಿಯೂರಪ್ಪ ಹಾಗೂ ಶ್ರೀರಾಮುಲು ಅವರನ್ನು ದೂರ ಇಡುವ ಕುತಂತ್ರ ಇದು. ಮಧ್ಯಂತರ ವರದಿ ಹಾಗೂ ಉಪಚುನಾವಣೆಗೆ ಸಂಬಂಧವಿದೆ. ಮುಂದೆ ನಾವು ಕಾನೂನು ಹೋರಾಟ ಮಾಡುತ್ತೇವೆ ಎಂದರು.

## ವಕ್ಫ್ ಬೋರ್ಡ್ ಆಧುನಿಕ ಭಸ್ಮಾಸುರ ಎಲ್ಲಾರ ಜಾಗದ ಮೇಲೆ ಕೈ ಇಡುತ್ತಿದ್ದಾರೆ

• ಉದಯವಾಹಿನಿ, ಚಿಕ್ಕಮಗಳೂರು

ವಕ್ಫ್ ಬೋರ್ಡ್ ನಿಂದ ರೈತರ ಭೂಮಿ ಕಬಳಿಕೆ ವಿಚಾರವಾಗಿ ಕಿಡಿ ಕಾರಿರುವ ಬಿಜೆಪಿ ಎಂಎಲ್ ಸಿ ಸಿ.ಟಿ.ರವಿ ವಕ್ಫ್ ಭೋರ್ಡ್ ಆಧುನಿಕ ಭಸ್ಮಾಸುರ ಇದ್ದಂತೆ. ಎಲ್ಲಾರ ಭೂಮಿ ಮೇಲೆ ಕೈ ಇಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.ದತ್ತಮಾಲಾ ಅಭಿಯಾನ ಹಿನ್ನೆಲೆಯಲ್ಲಿ ಚಿಕ್ಕಮಗಳೂರಿನಲ್ಲಿ ನಡೆದ ಧರ್ಮ ಸಭೆಯಲ್ಲಿ ಮಾತನಾಡಿದ ಸಿ.ಟಿ.ರವಿ, ಹಿಂದೆ ಭಸ್ಮಾಸುರ ಇದ್ದ. ಆತ ಎಲ್ಲಾರ ತಲೆ ಮೇಲೆ ಕೈ ಇಟ್ಟು ನಾಶ ಮಾಡುತ್ತಿದ್ದ. ರಾಕ್ಷಸರು ದೇವರನ್ನೇ ನಾಶ ಮಾಡಲು ಮುಮ್ಮಾಗಿದ್ದರು. ಈಗ ಕಾಂಗ್ರೆಸ್ ಸರ್ಕಾರ ವೋಟಿಗಾಗಿ ವಕ್ಫ್ ಬೋರ್ಡ್ ಎಂಬ ಭಸ್ಮಾಸುರನಿಗೆ ವರ ನೀಡಿದೆ. ಹಾಗಾಗಿ ವಕ್ಫ್ ಬೋರ್ಡ್ ಆಧುನಿಕ ಭಸ್ಮಾರನಂತೆ ಎಲ್ಲಾರ ಆಸ್ತಿಗಳ ಮೇಲೆ ಕೈ ಇಡುತ್ತಿದೆ ಎಂದು ಗುಡುಗಿದರು. ರೈತರ ಜಮೀನು, ಮಠ-ಮಂದಿರಗಳ ಭೂಮಿ ಸೇರಿ ಎಲ್ಲಾವೂ ತನ್ನದೆಂದು ವಕ್ಫ್ ಬೋರ್ಡ್ ಹೇಳುತ್ತಿದೆ. ಹಿಂದೆ ಭಸ್ಮಾಸುರನ ನಾಶಕ್ಕಾಗಿ ದೇವರು ಮೋಹಿನಿ ಅವತಾರ ತಾಳಿ ಬಂದಿದ್ದರು. ಈಗ ಆಧುನಿಕ ಭಸ್ಮಾಸುರನ ನಾಶ ಮಾಡಬೇಕಿದೆ ಎಂದು ಹೇಳಿದರು.

## 3 ಕ್ಷೇತ್ರದಲ್ಲಿ ಗೆದ್ದರೆ ಸಿಎಂ ಸ್ಥಾನಕ್ಕೆ ರಾಜಿನಾಮೆ ಕೊಡುತ್ತೀರಾ

• ಉದಯವಾಹಿನಿ, ಹಾವೇರಿ

ಉಪ ಚುನಾವಣೆಯಲ್ಲಿ ಶಿಗ್ಗಾವಿ ಸೇರಿದಂತೆ ಮೂರು ಕ್ಷೇತ್ರದಲ್ಲಿ ಬಿಜೆಪಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಪರವಾದ ಗಾಳಿ ಇದೆ. ಮೂರು ಕ್ಷೇತ್ರದಲ್ಲಿ ಬಿಜೆಪಿ ಗೆದ್ದರೆ, ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುತ್ತೀರಾ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪ್ರಶ್ನಿಸಿದ್ದಾರೆ. ಶಿಗ್ಗಾವಿ ಸವಣೂರು ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ್ ಬೊಮ್ಮಾಯಿ ಪರವಾಗಿ ಹುಲಗೂರು, ತಡಸ್ ಗ್ರಾಮಗಳಲ್ಲಿ ರೋಡ್ ಶೋ ನಡೆಸಿ ಚುನಾವಣಾ ಪ್ರಚಾರ ಮಾಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ಶಿಗ್ಗಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ 50000 ಮತಗಳ ಅಂತರದಿಂದ ಗೆಲ್ಲುವುದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ. ಸೂರ್ಯ ಚಂದ್ರ ಇರುವುದು ಎಷ್ಟು ಸತ್ಯವವೋ ಭರತ್ ಬೊಮ್ಮಾಯಿ ಗೆಲುವು ಅಷ್ಟೇ ಸತ್ಯ ಎಂದು ಹೇಳಿದರು.ಈ ಉಪ ಚುನಾವಣೆಯಲ್ಲಿ ಬಿಜೆಪಿ ಮೂರು ಕ್ಷೇತ್ರದಲ್ಲಿ ಗೆಲ್ಲಲಿದೆ. ಮೂರು ಕ್ಷೇತ್ರ ಗೆದ್ದರೆ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜಿನಾಮೆ ಕೊಡ್ತಿರಾ ಎಂದು ಪ್ರಶ್ನಿಸಿದರು.

**ರಾಜ್ಯದಲ್ಲಿ ಇತ್ತೀಚೆಗೆ ನಡೆದ ವಾಲ್ಮೀಕಿ ನಿಗಮದಲ್ಲಿನ ಹಗರಣ, ಮುಡಾ ಹಗರಣ, ವಕ್ಫ್ ವಿವಾದ, ಅಬಕಾರಿ ಇಲಾಖೆಯಲ್ಲಿ ಸಚಿವರೇ ಲಂಚ ಪಡೆಯುತ್ತಾರೆ ಎನ್ನುವ ಆರೋಪ ಹಾಗೂ ಸಚಿವೆ ಹೆಬ್ಬಾಳ್ಕರ್ ಅವರ ಆಪ್ತನ ಕಿರುಕುಳದಿಂದ ಸರ್ಕಾರಿ ನೌಕರರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಆರೋಪದ ಪ್ರಕರಣಗಳು ರಾಜ್ಯ ಸರ್ಕಾರಕ್ಕೆ ಮುಜುಗರ ತಂದೊಡ್ಡಿದೆ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಮಹಾರಾಷ್ಟ್ರ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ್ದಾರೆ. ಹಾಗಾಗಿ ರಾಜ್ಯದಲ್ಲಿ ನಡೆದಿದೆ ಎನ್ನಲಾದ ಹಗರಣಗಳು ಇದೀಗ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡುತ್ತಿವೆ.**

■ ರಾಷ್ಟ್ರಮಟ್ಟದಲ್ಲಿ ಸದ್ದು ಮಾಡಿದ ರಾಜ್ಯದ ಹಗರಣಗಳು! ■ `ಕೈ' ಸಚಿವರ ವಿರುದ್ಧ ಹೈಕಮಾಂಡ್ ಗರಂ ■ ವರದಿ ಕೇಳಿ ನೋಟೀಸ್! ■ ಹಗರಣಗಳ ಬಗ್ಗೆ ಮಹಾರಾಷ್ಟ್ರದಲ್ಲಿ ಮೋದಿ ಗುಡುಗು


# ಹಗರಣಗಳ ಸದ್ದು ಹೈ ಕಮಾಂಡ್ ಗುದ್ದು

ರಾಜ್ಯ ಸರ್ಕಾರಕ್ಕೆ ಮುಜುಗರ









### ಕಾಂಗ್ರೆಸ್ ಹೈಕಮಾಂಡ್‌ಗೆ ತೀವ್ರ ಮುಜುಗರ

ಸರ್ಕಾರದ ವಿರುದ್ಧ ಈ ಹಿಂದಿನ ಹಲವು ಹಗರಣಗಳು ವಿವಾದಗಳು ಇದೀಗ ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡುತ್ತಿದ್ದು ಕಾಂಗ್ರೆಸ್ ಹೈಕಮಾಂಡ್‌ಗೆ ತೀವ್ರ ಮುಜುಗರ ತಂದೊಡ್ಡಿವೆ. ಕೇಂದ್ರ ಬಿಜೆಪಿ ನಾಯಕರು ಮಹಾರಾಷ್ಟ್ರ ಚುನಾವಣೆಗೆ ಈ ರಾಜ್ಯ ಸರ್ಕಾರದ ಮೇಲಿನ ಆರೋಪಗಳನ್ನೇ ಅಸ್ತ್ರ ಮಾಡಿಕೊಂಡಿವೆ.

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ನಡೆದ ಸರಣಿ ಹಗರಣಗಳು ಹಾಗೂ ವಿವಾದಗಳು ಇದೀಗ ರಾಷ್ಟ್ರ ಮಟ್ಟದಲ್ಲಿ ಸದ್ದು ಮಾಡುತ್ತಿವೆ. ಕಾಂಗ್ರೆಸ್ ಹೈಕಮಾಂಡ್‌ಗೆ ಇದರಿಂದ ತೀವ್ರ ಮುಜುಗರ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಕಾಂಗ್ರೆಸ್ ಸಚಿವರಿಗೆ ನೋಟೀಸ್ ಕೊಟ್ಟಿದ್ದು, ವರದಿ ನೀಡಲು ಹೇಳಿದ್ದಾರೆ ಎನ್ನಲಾಗುತ್ತಿದೆ. ಇದರಿಂದ ಮೂವರು ಸಚಿವರಿಗೆ ಸಂಕಷ್ಟ ಎದುರಾಗಿದೆ.

**ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ**

ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರವಿದೆ. ಅಬಕಾರಿ ಸಚಿವರೇ ಕೋಟಿ ಕೋಟಿ ಹಣ ಲಂಚ ಕೇಳ್ತಾರೆ. ಈ ಬಗ್ಗೆ ಅಬಕಾರಿ ಇಲಾಖೆಯ ಅಧಿಕಾರಿಗಳು ನಮ್ಮ ಮುಂದೆ ಹೇಳಿದ್ದಾರೆ ಎಂದು ಮದ್ಯ ಮಾರಾಟಗಾರ ಸಂಘದ ಉಪಾಧ್ಯಕ್ಷ ಕರುಣಾಕರ ಹೆಗಡೆ ಆರೋಪ ಮಾಡಿದ್ದರು.

**ಭ್ರಷ್ಟಾಚಾರದಲ್ಲಿ ಸಚಿವ ತಿಮ್ಮಾಪುರ ಭಾಗಿ**

ವರ್ಗಾವಣೆಗಾಗಿ ಕೋಟಿಗಟ್ಟಲೆ ಹಣ ಕೊಟ್ಟು ಬಂದಿದ್ದೇವೆ ಎಂದು ಹೇಳಿ ಅಧಿಕಾರಿಗಳು ನಮ್ಮ ಮಾರಾಟಗಾರರಿಂದ ಹಣ ಪೀಕುತ್ತಿದ್ದಾರೆ. ಅಬಕಾರಿ ಸಚಿವ ತಿಮ್ಮಾಪುರ ಭ್ರಷ್ಟಾಚಾರದಲ್ಲಿ ಭಾಗಿ ಯಾಗಿದ್ದಾರೆ. ಇದು ಕೇವಲ ಆರೋಪವಲ್ಲ, ನಾವು ಯಾವುದೇ ಸರ್ಕಾರ ಎಂದಲ್ಲ, ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡುತ್ತೇವೆ ಎಂದು ಕರುಣಾಕರ ಹೆಗಡೆ ಆಕ್ರೋಶ ವ್ಯಕ್ತಪಡಿಸಿದ್ದರು.

**ಲಿಕ್ಕರ್ ಶಾಪ್ ಲೈಸೆನ್ಸ್‌ಗೆ 1 ಕೋಟಿ!**

ನಮಗೆ ಸಚಿವ ತಿಮ್ಮಾಪುರ ಬೇಡ, ಸಿಎಂ ನೇತೃತ್ವದಲ್ಲಿ ಸಭೆ ನಡೆಸಿ ನಮ್ಮ ಸಮಸ್ಯೆ ಬಗೆಹರಿಸಬೇಕು. ಅಬಕಾರಿ ಇಲಾಖೆಗೆ ಸಚಿವರನ್ನು ಬದಲಾಯಿಸಿ, ನಮ್ಮ ಒಂದೇ ಒಂದು ಬೇಡಿಕೆ ಈಡೇರಿಸಿಲ್ಲ. ಒಂದು ಲಿಕ್ಕರ್ ಶಾಪ್ ಲೈಸೆನ್ಸ್‌ಗೆ ಒಂದು ಕೋಟಿ ಕೊಡಬೇಕು. ಅಬಕಾರಿ ಇಲಾಖೆಯಲ್ಲಿನ ಭ್ರಷ್ಟಾಚಾರ ತಡೆಯಬೇಕಿದೆ.

| | |
|---|---|
| 1 | ವರ್ಗಾವಣೆಗಾಗಿ ಕೋಟಿಗಟ್ಟಲೆ ಹಣ ಕೊಟ್ಟು ಬಂದಿದ್ದೇವೆ ಎಂದು ಹೇಳಿ ಅಧಿಕಾರಿಗಳು ನಮ್ಮ ಮಾರಾಟಗಾರರಿಂದ ಹಣ ಪೀಕುತ್ತಿದ್ದಾರೆ. |
| 2 | ಒಂದು ಲಿಕ್ಕರ್ ಶಾಪ್ ಲೈಸೆನ್ಸ್‌ಗೆ ಒಂದು ಕೋಟಿ ಕೊಡಬೇಕು. |
| 3 | ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸಹಾಯಕ ಸೋಮು ಸೇರಿ ಮೂರು ಜನರ ವಿರುದ್ಧ ಎಫ್‌ಐಆರ್ |

ಈಗಾಗಲೇ ಸಾಮಾಜಿಕ ಕಾರ್ಯಕರ್ತರು ರಾಜ್ಯಪಾಲರಿಗೆ ದೂರು ಕೊಟ್ಟಿದ್ದಾರೆ, ಅದು ಸತ್ಯಾಂಶದಿಂದ ಕೂಡಿದೆ. ಇದೇ 25ರಂದು ಎಲ್ಲಾ ಲಿಕ್ಕರ್ ಶಾಪ್ ಬಂದ್ ಮಾಡಿ ಹೋರಾಟ ಮಾಡುತ್ತಿದ್ದೇವೆ. ನಮ್ಮ ಬೇಡಿಕೆಗಳನ್ನು ಸಿಎಂ ಈಡೇರಿಸಬೇಕು ಎಂದು ಅವರು ಆಗ್ರಹಿಸಿದ್ದರು.

**ಲಕ್ಷ್ಮೀ ಹೆಬ್ಬಾಳ್ಕರ್ ಆಪ್ತನ ಕಿರುಕುಳದಿಂದ ನೌಕರ ಆತ್ಮಹತ್ಯೆ**

ಬೆಳಗಾವಿ ತಹಶೀಲ್ದಾರ್ ಕಚೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿದ್ದ 35 ವರ್ಷದ ರುದ್ರಣ್ಣ ಯಡಣ್ಣನವರ್ ಆತ್ಮಹತ್ಯೆಗೆ ಶರಣಾಗಿದ್ದರು. ಈ ಪ್ರಕರಣ ರಾಜ್ಯದಲ್ಲಿ ದೊಡ್ಡ ಸಂಚಲನವನ್ನೇ ಸೃಷ್ಟಿಸಿದೆ. ವರ್ಗಾವಣೆ ದಂಧೆಗೆ ರುದ್ರಣ್ಣ ಬಲಿಯಾದ್ರಾ ಎನ್ನುವ ಅನುಮಾನ ಹುಟ್ಟುವಂತೆ ಮಾಡಿದೆ. ಅದಕ್ಕೆ ಕಾರಣ ರುದ್ರಣ್ಣ ಅವರು ಆತ್ಮಹತ್ಯೆ ಮಾಡಿಕೊಳ್ಳುವ ಹಿಂದಿನ ದಿನ ತಮ್ಮ ವಾಟ್ಸಾಪ್ ಮೆಸೇಜ್‌ನಲ್ಲಿ ಬಹಿರಂಗಪಡಿಸಿದ್ದಾರೆ. ನನ್ನ ಸಾವಿಗೆ ತಹಶೀಲ್ದಾರ್ ಬಸವರಾಜ್ ನಾಗರಾಳ ಹಾಗೂ ಸೋಮು ಇವರೇ ನೇರಕಾರಣ ಎಂದು ಉಲ್ಲೇಖಿಸಿದ್ದರು. ಈ ಸೋಮು ಎಂಬಾತ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಆಪ್ತ ಸಹಾಯಕರಾಗಿದ್ದಾರೆ.

ಎಸ್‌ಡಿಎ ರುದ್ರಣ್ಣ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆಪ್ತ ಸಹಾಯಕ ಸೋಮು ಸೇರಿ ಮೂರು ಜನರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಬೆಳಗಾವಿಯ ಖಡೇಬಜಾರ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ತಾಯಿ ಮಲ್ಲವ್ವ ಅವರು ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಿಸಲಾಗಿದೆ.



### ಆರೋಪಕ್ಕೆ ಸಂಬಂಧಿಸಿದಂತೆ ವರದಿ ಕೇಳಿ ಸೂಚನೆ

ಪ್ರಧಾನಿ ನರೇಂದ್ರ ಮೋದಿ ಅವರು ಮಹಾರಾಷ್ಟ್ರ ಚುನಾವಣಾ ಭಾಷಣದ ವೇಳೆ ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಬೆನ್ನಲ್ಲೇ ಎಚ್ಚರಗೊಂಡ ಕಾಂಗ್ರೆಸ್ ಹೈಕಮಾಂಡ್ ಹಗರಣಗಳ ಆರೋಪಕ್ಕೆ ಸಂಬಂಧಿಸಿದಂತೆ ವರದಿ ಕೇಳಿ ಸೂಚನೆ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಚಿವ ತಿಮ್ಮಾಪುರ, ಜಮೀರ್ ಅಹ್ಮದ್ ಖಾನ್ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ವಿವರಣೆ ಕೇಳಿ ಸೂಚನೆ ನೀಡಿದ್ದಾರೆ ಎಂದು ಹೇಳಲಾಗಿದೆ.

# ವಿವಾದಿತ ನಿರ್ದೇಶನಗಳನ್ನು ಹಿಂಪಡೆಯಲು ಮುಂದಾದ ರಾಜ್ಯ ಸರ್ಕಾರ

## ವಕ್ಫ್ ಆಸ್ತಿ ವಿಚಾರವಾಗಿ ತೀವ್ರ ಮುಜುಗರಕ್ಕೆ ಒಳಗಾಗಿದ್ದ ರಾಜ್ಯಸರ್ಕಾರ ಗೊಂದಲಗಳಿಗೆ ತೆರೆ ಎಳೆಯುವ ಪ್ರಯತ್ನ

• ಉದಯವಾಹಿನಿ, ಬೆಂಗಳೂರು

ವಕ್ಫ್ ಆಸ್ತಿ ವಿಚಾರವಾಗಿ ತೀವ್ರ ಮುಜುಗರಕ್ಕೆ ಒಳಗಾಗಿದ್ದ ರಾಜ್ಯಸರ್ಕಾರ ಅದರಿಂದ ಪಾರಾಗಲು ಸ್ಪಷ್ಟ ನಿರ್ದೇಶನದ ಸುತ್ತೋಲೆಯನ್ನು ಹೊರಡಿಸುವ ಮೂಲಕ ರಾಜಕೀಯ ಗೊಂದಲಗಳಿಗೆ ತೆರೆ ಎಳೆಯುವ ಪ್ರಯತ್ನ ನಡೆಸಿದೆ.ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು ಎಲ್ಲಾ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದು, ವಕ್ಫ್ ಹೆಸರಿನಲ್ಲಿ ಖಾತೆ ಬದಲಾವಣೆ ಕುರಿತು ಈ ಮೊದಲು ನೀಡಲಾಗಿದ್ದ ವಿವಾದಿತ ನಿರ್ದೇಶನಗಳನ್ನು ಹಿಂಪಡೆಯುವುದಾಗಿ ತಿಳಿಸಿದ್ದಾರೆ.

ವಕ್ಫ್ ವಿವಾದ ತೀವ್ರಗೊಂಡ ಬಳಿಕ ಎಚ್ಚೆತ್ತುಕೊಂಡ ಮುಖ್ಯಮಂತ್ರಿ ಹಾಗೂ ಇತರೆ ಸಚಿವರು ರೈತರು ಹಾಗೂ ಇತರರ ವಕ್ಫ್ ಹೆಸರಿನಲ್ಲಿರುವ ಆಸ್ತಿಗಳನ್ನು ಒಕ್ಕಲೆಬ್ಬಿಸುವುದಿಲ್ಲ ಎಂದು ಹಲವು ಬಾರಿ ಹೇಳಿದರು. ಅದರ ಹೊರತಾಗಿಯೂ ಕೆಲವು ಅಧಿಕಾರಿಗಳು ರಾಜ್ಯಸರ್ಕಾರದ ನಿರ್ದೇಶನ ಎಂದು ಹೇಳುತ್ತಾ ನೋಟೀಸ್



**ಮುಖ್ಯಮಂತ್ರಿಯವರ ಆದೇಶ ಮೇಲಧಿಕಾರಿಗಳ ಅನುಮೋದನೆ**

ನೀಡುವುದು, ಒಕ್ಕಲೆಬ್ಬಿಸಲು ಪ್ರಯತ್ನಿಸುವ ಕಾರ್ಯಗಳನ್ನು ಮುಂದುವರೆಸಿದ್ದರು. ನ.7 ರಂದು ಕಳೆದ ಮೂರು ದಿನಗಳ ಹಿಂದೆ ಕೆಲವು ಅಧಿಕಾರಿಗಳು ವಕ್ಫ್ ಆಸ್ತಿ ಹೆಸರಿನಲ್ಲಿ ಮತ್ತೊಮ್ಮೆ ನೋಟೀಸ್ ನೀಡಿದ್ದರು. ಇದು ಉಪಚುನಾವಣೆಯ ಹೊಸ್ತಿಲಿನಲ್ಲಿ ಕಾಂಗ್ರೆಸ್ ಸರ್ಕಾರಕ್ಕೆ ಭಾರಿ ಮುಜುಗರ ಉಂಟು ಮಾಡಿತ್ತು.

ಹೀಗಾಗಿ ನಿನ್ನೆ ಸ್ಪಷ್ಟ ನಿರ್ದೇಶನದ ಪತ್ರ ಬರೆಯಲಾಗಿದೆ. ಅದರ ಪ್ರಕಾರ ವಕ್ಫ್ ಆಸ್ತಿಗಳ ಮಿಟೇಷನ್ ಮಾಡಲು ಯಾವುದೇ ಕಚೇರಿ ಅಥವಾ ಪ್ರಾಧಿಕಾರದಿಂದ ನೀಡಲಾದ ನಿರ್ದೇಶನಗಳನ್ನು ತಕ್ಷಣದಿಂದಲೇ ಹಿಂಪಡೆಯುವುದಾಗಿ ಮತ್ತು ಮಿಟೇಷನ್ ಪ್ರಕ್ರಿಯೆಗಳನ್ನು ಕೂಡಲೇ ಸ್ಥಗಿತಗೊಳಿಸಬೇಕು ಎಂದು ಸೂಚಿಸಲಾಗಿದೆ.

ಈ ಕುರಿತು ನೀಡಲಾದ ಎಲ್ಲಾ ನೋಟೀಸ್‌ಗಳನ್ನು ಹಿಂಪಡೆಯುವುದು ಸದರಿ ಜಮೀನುಗಳಲ್ಲಿ ವ್ಯವಸಾಯ ಮಾಡುತ್ತಿರುವ ರೈತರ ವಿರುದ್ಧ ಯಾವುದೇ ಕ್ರಮಗಳನ್ನು ಜರುಗಿಸಬಾರದು ಎಂದು ಆದೇಶಿಸಲಾಗಿದೆ. ಮುಖ್ಯಮಂತ್ರಿಗಳ ಸೂಚನೆ ಅನುಸಾರ ಈ ಮೊದಲು ಇದೇ ವರ್ಷದ ಏ.15, ಏ.23 ಮತ್ತು ನ.11 ರಂದು ಬರೆಯಲಾಗಿದ್ದ ನೆನಪೋಲೆ -2 ಇವುಗಳನ್ನು ತಕ್ಷಣದಿಂದ ಹಿಂಪಡೆಯಲಾಗಿದೆ ಎಂದು ತಿಳಿಸಲಾಗಿದೆ.

ಮುಖ್ಯಮಂತ್ರಿಯವರ ಆದೇಶ, ಮೇಲಧಿಕಾರಿಗಳ ಅನುಮೋದನೆ, ಅನುಮತಿ ಇಲ್ಲದೆಯೇ ನ.7 ರಂದು ನೆನಪೋಲೆ-2 ಅನ್ನು ಹೊರಡಿಸಿದ್ದ ಅಧಿಕಾರಿಯ ವಿರುದ್ಧ ಕ್ರಮ ಜರುಗಿಸುವುದಾಗಿಯೂ ತಿಳಿಸಲಾಗಿದೆ. ಈ ಬಾರಿ ಕಟ್ಟುನಿಟ್ಟಿನ ಆದೇಶ ನೀಡಲಾಗುತ್ತಿದೆ. ಇದನ್ನು ಉಲ್ಲಂಘಿಸಿದರೆ ಕ್ರಮ ಜರುಗಿಸುವ ಎಚ್ಚರಿಕೆಯನ್ನು ನೀಡಲಾಗಿದೆ. ವಕ್ಫ್ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿ ರಾಜ್ಯಾದ್ಯಂತ ಜನಾಂದೋಲನಗಳನ್ನು ರೂಪಿಸಿದ್ದು, ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಉಸಿರು ಕಟ್ಟಿಸುವ ವಾತಾವರಣ ನಿರ್ಮಿಸಿತ್ತು.

ಇದನ್ನು ತಪ್ಪಿಸಲು ಮುಖ್ಯಮಂತ್ರಿಯವರು ಹಲವು ಬಾರಿ ಮೌಖಿಕ ನಿರ್ದೇಶನಗಳನ್ನು ನೀಡಿದ್ದರೂ ಅದೇನೂ ಪರಿಣಾಮ ಬೀರಲಿಲ್ಲ. ಉರಿಯುವ ಬೆಂಕಿಗೆ ತುಪ್ಪ ಸುರಿಯುವಂತೆ ನ.7 ರಂದು ಕೆಲವು ಅಧಿಕಾರಿಗಳು ಮತ್ತಷ್ಟು ನೋಟೀಸ್‌ಗಳನ್ನು ನೀಡಿದರು. ಇದು ಭಾರಿ ಪ್ರಮಾಣದ ವಿವಾದಕ್ಕೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಹೊಸದಾಗಿ ಆದೇಶ ಹೊರಡಿಸಲಾಗಿದೆ.

# 3 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ: ಬಹಿರಂಗ ಪ್ರಚಾರಕ್ಕೆ ಸಂಜೆ ತೆರೆ

## ಸಂಡೂರು, ಚನ್ನಪಟ್ಟಣ, ಶಿಗ್ಗಾವಿಗಳಲ್ಲಿ ಸಂಜೆ 5.30ಕ್ಕೆ ಬಹಿರಂಗ ಪ್ರಚಾರ ಅಂತ್ಯ | ಬಿರುಸಿನ ಪ್ರಚಾರದಲ್ಲಿ ಅಖಾಡಕ್ಕಿಳಿದ ರಾಜಕೀಯ ಪಕ್ಷಗಳ ಘಟಾನುಘಟಿ ನಾಯಕರು

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮಿನಿ ಮಹಾಸಮರ ಎಂದೇ ಪರಿಗಣಿಸಲಾಗಿರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳ ಬಹಿರಂಗ ಪ್ರಚಾರಕ್ಕೆ ಸಂಜೆ ತೆರೆ ಬೀಳಲಿದೆ. ಹೀಗಾಗಿ ರಾಜಕೀಯ ಪಕ್ಷಗಳ ಘಟಾನುಘಟಿ ನಾಯಕರೇ ಅಖಾಡಕ್ಕಿಳಿದು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಸಂಡೂರು, ಚನ್ನಪಟ್ಟಣ, ಶಿಗ್ಗಾವಿ ವಿಧಾನಸಭಾ ಕ್ಷೇತ್ರಗಳಲ್ಲಿ ಸಂಜೆ 5.30ಕ್ಕೆ ಬಹಿರಂಗ ಪ್ರಚಾರ ಅಂತ್ಯವಾಗಲಿದ್ದು, ಮತದಾರರಲ್ಲದವರು ಆಯಾ ಕ್ಷೇತ್ರ ಬಿಟ್ಟು ತೆರಳಬೇಕಾಗುತ್ತದೆ. ಹೀಗಾಗಿ ಇಂದು ಮತ್ತು ನಾಳೆ ರಾಜಕೀಯ ಪಕ್ಷಗಳ ನಾಯಕರು, ಮುಖಂಡರು, ಕಾರ್ಯಕರ್ತರು ಬಿರುಸಿನ ಚುನಾವಣಾ ಪ್ರಚಾರವನ್ನು ಕೈಗೊಂಡಿದ್ದಾರೆ.

ಚನ್ನಪಟ್ಟಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್, ಎನ್ಡಿಎ ಅಭ್ಯರ್ಥಿ ನಿಖಿಲ್‌ಕುಮಾರಸ್ವಾಮಿ ಸೇರಿದಂತೆ ಒಟ್ಟು 31 ಅಭ್ಯರ್ಥಿಗಳು ಸ್ಪರ್ಧೆಗಿಳಿದಿದ್ದಾರೆ.ಸಂಡೂರು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಬಂಗಾರ ಹನುಮಂತ, ಕಾಂಗ್ರೆಸ್‌ನ ಇ.ಅನ್ನಪೂರ್ಣ ಸೇರಿದಂತೆ 6 ಮಂದಿ ಅಭ್ಯರ್ಥಿ ಚುನಾವಣಾ ಕಣದಲ್ಲಿದ್ದರೆ, ಶಿಗ್ಗಾವಿಯಲ್ಲಿ ಬಿಜೆಪಿ




**ಪ್ರತಿಪಕ್ಷಗಳ ನಡುವಿನ ರಾಜಕೀಯ ಸಂಘರ್ಷ**

ಅಭ್ಯರ್ಥಿ ಭರತ್ ಬೊಮಾಯಿ, ಕಾಂಗ್ರೆಸ್ ಅಭ್ಯರ್ಥಿ ಪಠಾಣ ಯಾಸೀರ್ ಅಹಮದ್ ಖಾನ್ ಸೇರಿದಂತೆ ಒಟ್ಟು 8 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಹೈವೋಲ್ಟೇಜ್ ಕ್ಷೇತ್ರವೆಂದೇ ಪರಿಗಣಿಸಲಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಪರವಾಗಿ ಮಾಜಿ ಸಂಸದ ಡಿ.ಕೆ.ಸುರೇಶ್ ನಿರಂತರ ಪ್ರಚಾರದಲ್ಲಿ ತೊಡಗಿದ್ದಾರೆ. ಈಗಾಗಲೇ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಕ್ಷೇತ್ರದಲ್ಲಿ ಪ್ರಚಾರ ನಡೆಸಿದ್ದಾರೆ. ಸಚಿವರು, ಶಾಸಕರು ಸೇರಿದಂತೆ ನಾಯಕರ ದಂಡೇ ಕ್ಷೇತ್ರದಲ್ಲಿದ್ದು, ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ.

### ಆರೋಪ-ಪ್ರತ್ಯಾರೋಪಗಳ ಸುರಿಮಳೆ, ಪ್ರಚಾರದ ಕಾವು ತಾರಕಕ್ಕೇರಿದೆ

ಬಹಿರಂಗ ಪ್ರಚಾರಕ್ಕೆ ನಾಳೆ ಕಡೆ ದಿನವಾಗಿರುವುದರಿಂದ ಆಯಾ ಕ್ಷೇತ್ರಗಳಲ್ಲಿ ರ್ಯಾಲಿ, ಸಭೆ, ಬಹಿರಂಗ ಸಭೆ, ಸಮಾರಂಭಗಳ ಮೂಲಕ ಪ್ರಚಾರ ಕೈಗೊಂಡು ಮತ ಯಾಚಿಸುತ್ತಿದ್ದಾರೆ. ಅಲ್ಲದೆ ಮನೆ ಮನೆಗಳಿಗೆ ತೆರಳಿ ಕರಪತ್ರ ವಿತರಿಸಿ ಮತಯಾಚನೆ ಮಾಡುತ್ತಿದ್ದಾರೆ. ಮತದಾರರ ಓಲೈಕೆಗೆ ತಮ ತಮ ಪಕ್ಷಗಳ ಸಾಧನೆ ಮುಂದಿಟ್ಟಿರುವುದಲ್ಲದೆ ನಾನಾ ಭರವಸೆಗಳನ್ನು ನೀಡುತ್ತಿದ್ದಾರೆ. ಪ್ರತಿ ಕ್ಷೇತ್ರದಲ್ಲೂ ರಾಜಕೀಯ ನಾಯಕರ ದಂಡೇ ಬೀಡುಬಿಟ್ಟಿದ್ದು, ಚುನಾವಣಾ ಕಣ ರಂಗೇರಿದೆ. ಆರೋಪ-ಪ್ರತ್ಯಾರೋಪಗಳ ಸುರಿಮಳೆಯಾಗುತ್ತಿದ್ದು, ಪ್ರಚಾರದ ಕಾವು ತಾರಕಕ್ಕೇರಿದೆ. ಈ ಉಪಚುನಾವಣೆಯನ್ನು ಪ್ರತಿಷ್ಠೆಯಾಗಿ ಪರಿಗಣಿಸಿರುವ ಆಡಳಿತಾರೂಢ ಕಾಂಗ್ರೆಸ್ ಪ್ರತಿಪಕ್ಷಗಳಾದ ಬಿಜೆಪಿ-ಜೆಡಿಎಸ್ ತಮ ತಮ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ಹರಸಾಹಸ ಪಡುತ್ತಿವೆ. ಇದಕ್ಕಾಗಿ ನಾನಾ ತಂತ್ರ, ಪ್ರತಿತಂತ್ರಗಳ ಮೂಲಕ ಚುನಾವಣಾ ಅಖಾಡಕ್ಕೆ ಇಳಿದಿವೆ.

ಅದೇ ರೀತಿ ಎನ್ಡಿಎ ಅಭ್ಯರ್ಥಿ ನಿಖಿಲ್ಕುಮಾರಸ್ವಾಮಿ ಪರವಾಗಿ ಎಚ್.ಡಿ.ದೇವೇಗೌಡರು, ಎಚ್.ಡಿ.ಕುಮಾರಸ್ವಾಮಿ ನಿರಂತರ ಪ್ರಚಾರ ನಡೆಸುತ್ತಿದ್ದು, ಇದಕ್ಕೆ ಬಿಜೆಪಿ ಮತ್ತು ಜೆಡಿಎಸ್ನ ಇತರ ನಾಯಕರು ಸಾಥ್ ನೀಡಿದ್ದಾರೆ. ಇಂದು ಜೆಡಿಎಸ್ ನಾಯಕರೊಂದಿಗೆ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಚನ್ನಪಟ್ಟಣದಲ್ಲಿ ಪ್ರಚಾರದಲ್ಲಿ ಭಾಗಿಯಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಇಂದು ಸಂಜೆ ಶಿಗ್ಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪಠಾಣ ಯಾಸೀರ್ ಅಹಮದ್ ಖಾನ್ ಪರವಾಗಿ ಪ್ರಚಾರ ಕೈಗೊಳ್ಳಲಿದ್ದಾರೆ.ಆಡಳಿತ ಮತ್ತು ವಿರೋಧ ಪಕ್ಷಗಳ ಪ್ರತಿಷ್ಠೆಯಾಗಿರುವ ಈ ಉಪಚುನಾವಣೆಯಲ್ಲಿ ಅಭಿವೃದ್ಧಿ ವಿಚಾರ ಮುನ್ನಲೆಗೆ ಬಂದಿದ್ದು, ಪರಸ್ಪರ ಆರೋಪ, ಪ್ರತ್ಯಾರೋಪಗಳಿಗೆ ಎಡೆ ಮಾಡಿಕೊಟ್ಟಿದೆ. ಕಾಂಗ್ರೆಸ್ ನಾಯಕರು, ಮುಖಂಡರು ತಮ ಪಕ್ಷದ ಅಭ್ಯರ್ಥಿಗಳ ಪರ ಮೂರು ಕ್ಷೇತ್ರಗಳಲ್ಲಿ ಬಿರುಸಿನ ಪ್ರಚಾರ ಕೈಗೊಂಡು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸೇರಿದಂತೆ ಕಾಂಗ್ರೆಸ್ ಆಡಳಿತದ ಸಾಧನೆಗಳನ್ನು ಮುಂದಿಟ್ಟು ಮತ ಯಾಚಿಸುತ್ತಿದ್ದಾರೆ. ಬಿಜೆಪಿ, ಜೆಡಿಎಸ್ ನಾಯಕರು, ಮುಖಂಡರು ತಮ ತಮ ಪಕ್ಷಗಳ ಆಡಳಿತಾವಧಿಯಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳು, ಕೇಂದ್ರ ಸರ್ಕಾರದ ಸಾಧನೆ ಮುಂದಿಟ್ಟುಕೊಂಡು ಎನ್ಡಿಎ ಅಭ್ಯರ್ಥಿಗಳ ಪರ ಪ್ರಚಾರ ನಡೆಸುತ್ತಿದ್ದಾರೆ. ಚುನಾವಣೆಯಲ್ಲಿ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿರುವ ವಿಚಾರ ಆಡಳಿತ ಮತ್ತು ಪ್ರತಿಪಕ್ಷಗಳ ನಡುವಿನ ರಾಜಕೀಯ ಸಂಘರ್ಷಕ್ಕೆ ಎಡೆ ಮಾಡಿಕೊಟ್ಟಿದೆ. ಎನ್ಡಿಎ ನಾಯಕರು ಇದನ್ನೇ ಪ್ರಮುಖ ಅಸ್ತ್ರವಾಗಿ ಬಳಸುತ್ತಿದ್ದಾರೆ.ಅಭ್ಯರ್ಥಿಗಳ ಪರ ಮತದಾರರ ಮನವೊಲಿಸಲು ನಿರಂತರ ಪ್ರಯತ್ನ ಪಡೆಯುತ್ತಿದ್ದು, ಶತಾಯಗತಾಯ ಗೆಲುವು ಸಾಧ್ಯವಿರುವ ಎಲ್ಲಾ ತಂತ್ರಗಾರಿಕೆಗಳನ್ನು ಹಾಗೂ ಪ್ರಯತ್ನಗಳನ್ನು ಹಗಲಿರುಳು ಎನ್ನದೆ ಮಾಡುತ್ತಿವೆ. ಹೀಗಾಗಿ ಮೂರು ಕ್ಷೇತ್ರಗಳಲ್ಲೂ ಚುನಾವಣೆ ಪ್ರಚಾರ ಕೊರೆಯುವ ಚಳಿಯಲ್ಲೂ ಕಾವೇರಿದಂತಾಗಿದೆ.



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಧರ್ಮ ಬೆಸೆಯುವುದು, ಒಡೆಯುವುದಲ್ಲ

ಇಂದು ಜಮಖಂಡಿ ತಾಲ್ಲೂಕಿನ ಅಲಗೂರಿನ ಧರಿದೇವರ ಮಠದ ಜಾತ್ರಾ ಮಹೋತ್ಸವದ ಧರ್ಮಸಭೆಯಲ್ಲಿ ಮಾತನಾಡಿದೆ. ಜೇಡರ ದಾಸಿಮಯ್ಯನವರ ಇಳೆ ನಿಮ್ಮ ದಾನ ಬೆಳೆ ನಿಮ್ಮ ದಾನ ವಚನ ಉದ್ಧರಿಸಿದೆ. ನಾವು ಸಂಪತ್ತು ಅಧಿಕಾರ ಜಾತಿ ರೂಪ ವಿದ್ಯೆಗಳಿಂದ ನಾನು ಅಂತಿಂಥವನು ಎಂದು ಅಭಿಮಾನಪಡುತ್ತೇವೆ, ಹೊಡೆದಾಡುತ್ತೇವೆ, ಪ್ರಾಣ ಕೀಳುತ್ತೇವೆ, ಪ್ರಾಣ ಬಿಡುತ್ತೇವೆ. ಆದರೆ ನೆನಪಿರಲಿ ಇದಾವುದೂ ನಮ್ಮದಲ್ಲ, ಈ ಪ್ರಕೃತಿ ಪರಮಾತ್ಮ ನೀಡಿದ ಭಿಕ್ಷೆ. ಇದಕ್ಕಾಗಿ ಸದಾ ನಾವು ದೈವಕ್ಕೆ ಕೃತಜ್ಞರಾಗಿರಬೇಕು. ಸಮಾಜದಿಂದ ನೆರವನ್ನು ಉಂಡ ನಾವು ಸಮಾಜದ ಋಣ ತೀರಿಕೆಗೆ ಸಮಾಜಕ್ಕೆ ನೆರವಾಗಬೇಕು. ಧರ್ಮ ಬೆಸೆಯುವುದು ಒಡೆಯುವುದಲ್ಲ. ದಯೆ ಕರುಣೆ ಮುಂತಾದವು ಧರ್ಮಾಂಶಗಳು. ಬಿದ್ದವನನ್ನು ಬೀಳುತ್ತಿರುವವನನ್ನು ಬೀಳಲಿರುವವನನ್ನು ಎತ್ತಿ ಹಿಡಿದು ರಕ್ಷಿಸುವುದು ಧರ್ಮ. ಹೊಡಿ ಬಡಿ ಕಡಿ ಎಂದು ಹೇಳುವುದು ಧರ್ಮವಲ್ಲ. ಯಾವುದೇ ಧರ್ಮದಲ್ಲಿ ಇಂಥದ್ದು ಇದ್ದರೆ ಅದನ್ನು ಧರ್ಮದ ಹೆಸರಿನಲ್ಲಿ ಹಿಡಿತ ಸಾಧಿಸಲು ಸ್ವಾರ್ಥಿಗಳು ಸೇರಿಸಿದ್ದು ಎಂದರ್ಥ. ಅಂಥದ್ದನ್ನು ತಿದ್ದುಪಡಿ ಮಾಡಿದರೆ ಎಲ್ಲಾಧರ್ಮದವರೂ ಸಹಬಾಳ್ವೆಯಿಂದ ಇರಬಹುದು. ಹಿಂದು ಜೈನ ಬೌದ್ಧ ಶಿಖ್ಖರಲ್ಲಿ ಪರಸ್ಪರ ದ್ವೇಷ ಇಲ್ಲ. ಮತಾಂತರದ ಹಾವಳಿ ಇಲ್ಲಿಲ್ಲ. ಹಿಂದು – ಮುಸ್ಲಿಂ, ಹಿಂದು–ಕ್ರೈಸ್ತರಲ್ಲಿ ಪರಸ್ಪರ ಗುದ್ದಾಟ, ಮತಾಂತರದ ಹಾವಳಿ ಇಲ್ಲಿದೆ. ತ್ಯಾಗ ಸಹಿಷ್ಣುತೆಗೆ ಹೆಸರಾದ ಹತ್ತಾರು ಸಾವಿರ ವರ್ಷಗಳ ಪ್ರಾಚೀನತೆಯ ಹಿಂದು ಧರ್ಮ ಅಹಿಂಸೆ ಶಾಂತಿಗಳ ಪ್ರತೀಕ. ಇದು ಹಿಂದುತ್ವದ ಶಕ್ತಿ. ಇದನ್ನು ದೌರ್ಬಲ್ಯವೆಂದು ಅನ್ಯಧರ್ಮಿಯರು ಭ್ರಮಿಸಿದರೆ ಹಿಂದು ಹೆಡೆ ಎತ್ತಿ ನಿಲ್ಲಬೇಕಾಗುತ್ತದೆ.

# ಜನರಿಗೆ ಹೊಸ ವರ್ಷಕ್ಕೆ ಹೊಸ ಶುಲ್ಕದ ಬರೆ


## ವಾರ್ಷಿಕ 600 ಕೋಟಿ ರೂ.ಹೆಚ್ಚುವರಿ ಅನುದಾನವನ್ನು ಸಂಗ್ರಹ ಮಾಡುವ ಗುರಿಯನ್ನು ಸಹ ಹಾಕಿಕೊಳ್ಳಲಾಗಿದೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರದಲ್ಲಿ ಮನೆಯಿಂದ ಕಸ ಸಂಗ್ರಹಣೆ ಮಾಡಲು ಶುಲ್ಕ ನೀಡಬೇಕೆ. ಹೌದು 2025ರಿಂದ ಈ ಮಾದರಿ ಶುಲ್ಕವನ್ನು ವಸೂಲಿ ಮಾಡಲು ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಪ್ರಸ್ತಾವನೆ ಸಿದ್ಧಗೊಳಿಸಿದೆ. ಇದರಿಂದಾಗಿ ವಾರ್ಷಿಕ 600 ಕೋಟಿ ರೂ.ಹೆಚ್ಚುವರಿ ಅನುದಾನವನ್ನು ಸಂಗ್ರಹ ಮಾಡುವ ಗುರಿಯನ್ನು ಸಹ ಹಾಕಿಕೊಳ್ಳಲಾಗಿದೆ. ಇದು ಇನ್ನೂ ಪ್ರಸ್ತಾವನೆ ಹಂತದಲ್ಲಿದ್ದು, ಅಂತಿಮ ಒಪ್ಪಿಗೆ ಸಿಕ್ಕಿಲ್ಲ.

ಮನೆಯಿಂದ ಕಸ ಸಂಗ್ರಹ ಮಾಡಲು ಬಳಕೆದಾರರ ಶುಲ್ಕವನ್ನು ವಸೂಲಿ ಮಾಡುವುದು ಪ್ರಸ್ತಾವನೆಯಾಗಿದೆ. 2025–26ನೇ ಆರ್ಥಿಕ ವರ್ಷದಿಂದ ಈ ಮಾದರಿ ಶುಲ್ಕವನ್ನು 46 ಲಕ್ಷ ಮನೆ ಗಳಿಂದ ಸಂಗ್ರಹ ಮಾಡಲು ಪ್ರಸ್ತಾವನೆ ಸಿದ್ಧ ಗೊಳಿಸಲಾಗಿದೆ. ಹಲವು ದಿನಗಳಿಂದ ಕೇಳಿ ಬರುತ್ತಿದ್ದ ಈ ಮಾದರಿ ಶುಲ್ಕಕ್ಕೆ ಈಗ ಅಂತಿಮ ರೂಪ ನೀಡಿ ಪ್ರಸ್ತಾವನೆ ತಯಾರು ಮಾಡಲಾಗಿದೆ.

ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಮನೆಯಿಂದ ಕಸ ಸಂಗ್ರಹ ಮಾಡಲು ಶುಲ್ಕವನ್ನು ಸಂಗ್ರಹ ಮಾಡುವ ಪ್ರಸ್ತಾವನೆ ಸಿದ್ಧಗೊಳಿಸಿ ಸರ್ಕಾರಕ್ಕೆ ಸಲ್ಲಿಕೆ ಮಾಡಿದೆ. ಜನರು ಆಸ್ತಿ ತೆರಿಗೆ ಪಾವತಿ ಮಾಡುವಾಗಲೇ ಕಸ ನಿರ್ವಹಣಾ ಶುಲ್ಕವನ್ನು ಸೇರಿಸಿ ಸಂಗ್ರಹ ಮಾಡುವ ಪ್ರಸ್ತಾವನೆ ಇದಾಗಿದ್ದು, ಸರ್ಕಾರ ಇನ್ನೂ ಅಂತಿಮ ಒಪ್ಪಿಗೆ ನೀಡಿಲ್ಲ.


ಉದಯವಾಹಿನಿ ಚಿತ್ರ

**46 ಲಕ್ಷ ಮನೆಗಳಿಂದ ಸಂಗ್ರಹ**

**ಎಷ್ಟು ಶುಲ್ಕ ಸಂಗ್ರಹ:** ಕಳೆದ ಹಲವು ವರ್ಷಗಳಿಂದ ಕೇಳಿ ಬರುತ್ತಿದ್ದ ಸುದ್ದಿಗಳಿಗೆ ಈಗ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಅಂತಿಮ ರೂಪ ನೀಡಿ ಪ್ರಸ್ತಾವನೆ ಸಲ್ಲಿಕೆ ಮಾಡಿದೆ. ನಗರದ ಶಾಸಕರು ಪ್ರತಿ ಮನೆಗೆ 200 ರೂ. ಶುಲ್ಕವನ್ನು ಸಂಗ್ರಹ ಮಾಡಬಹುದು ಎಂದು ಕಳೆದ ವರ್ಷ ಸಲಹೆಗಳನ್ನು ನೀಡಿದ್ದರು. ಈ ಪ್ರಸ್ತಾವನೆಗೆ ಅಂತಿಮ ಒಪ್ಪಿಗೆ ಸಿಗಲಿದೆ ಎಂಬ ನಿರೀಕ್ಷೆಯಲ್ಲಿ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ. ಇದೆ. ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಈ ಕುರಿತು ಅಂತಿಮ ತೀರ್ಮಾನವನ್ನು ಕೈಗೊಳ್ಳಬೇಕಿದೆ.

> **ಒಂದು ವೇಳೆ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಲಿ . ಮನೆಯಿಂದ ಕಸ ಸಂಗ್ರಹ ಮಾಡಲು ಶುಲ್ಕ ಹಾಕಿದರೆ ನಗರದ ಖಾಲಿ ಸೈಟುಗಳಲ್ಲಿ ಎಲ್ಲೆಂದರಲ್ಲಿ ಜನರು ಕಸವನ್ನು ಎಸೆಯುತ್ತಾರೆ. ಈಗಲೇ ಕಸ ಸಂಗ್ರಹ ಸರಿಯಾದ ಸಮಯಕ್ಕೆ ಆಗುತ್ತಿಲ್ಲ. ಪ್ರತಿ ತಿಂಗಳು ಶುಲ್ಕ ಕಟ್ಟಿಯೂ ಸರಿಯಾಗಿ ಮನೆಗಳಿಂದ ಕಸ ಸಂಗ್ರಹ ಮಾಡದಿದ್ದರೆ ಯಾರು ಹೊಣೆ ಎಂದು ಜನರು ಪ್ರಶ್ನೆ ಮಾಡಿದ್ದಾರೆ.**

> **ಬಿಬಿಎಂಪಿ ಕಸ ಸಂಗ್ರಹ ಶುಲ್ಕ ಸಂಗ್ರಹ ಮಾಡಲು ಘನ ತ್ಯಾಜ್ಯ ನಿರ್ವಹಣಾ ಬೈಲಾ 2019, ಬಿಬಿಎಂಪಿ ಕಾಯ್ದೆ 2020ರ ಅಡಿ ಕಾನೂನಿನ ಅಡೆತಡೆಗಳಿವೆ. ಹಸಿರು ನ್ಯಾಯಾಧೀಕರಣದ ಆದೇಶವನ್ನು ಪಾಲಿಕೆ ಪಾಲನೆ ಮಾಡಬೇಕಿದೆ. ಆದ್ದರಿಂದ ಇದನ್ನು ಆಸ್ತಿ ತೆರಿಗೆ ಜೊತೆಯೇ ಸೇರಿಸಿ ಸಂಗ್ರಹಣೆ ಮಾಡುವ ಬಗ್ಗೆ ಚಿಂತನೆ ನಡೆದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.**

ಕಸ ಸಂಗ್ರಹ ಶುಲ್ಕ ನಿಗದಿಗೆ ಒಟ್ಟು 6 ವಿಭಾಗ ಮಾಡಲಾಗಿದೆ. ಪ್ರತಿ ತಿಂಗಳು 200 ರೂ. ನಿಂದ 400 ರೂ. ತನಕ ಶುಲ್ಕವನ್ನು ಸಂಗ್ರಹ ಮಾಡುವ ಪ್ರಸ್ತಾವನೆ ಇದಾಗಿದೆ. ಆದರೆ ಹೋಟೆಲ್, ವಾಣಿಜ್ಯ ಸಂಕೀರ್ಣ ಇವುಗಳಿಗೆ ಯಾವ ಮಾದರಿಯಲ್ಲಿ ಶುಲ್ಕ ಸಂಗ್ರಹ ಮಾಡಲಾಗುತ್ತದೆ ಎಂಬ ಬಗ್ಗೆ ಇನ್ನೂ ಖಚಿತವಾದ ಮಾಹಿತಿ ಇಲ್ಲ. ಕೇವಲ ಮನೆಯಿಂದ ಶುಲ್ಕ ಸಂಗ್ರಹ ಮಾಡುವ ಪ್ರಸ್ತಾವನೆ ಸಲ್ಲಿಕೆ ಮಾಡಲಾಗಿದೆ.

## ಜನಸಾಮಾನ್ಯರಿಗೆ ಮತ್ತೊಂದು ಶಾಕ್ ಶತಕದತ್ತ ದಾಪುಗಾಲು ಇಟ್ಟ ಈರುಳ್ಳಿ!

• **ಉದಯವಾಹಿನಿ ಬೆಂಗಳೂರು**

ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ ಮತ್ತೊಂದು ಶಾಕ್ ಎದುರಾಗಿದ್ದು, ಇದೀಗ ಈರುಳ್ಳಿ ಬೆಲೆಯಲ್ಲಿ ಭಾರೀ ಏರಿಕೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಹೌದು, ರಾಜ್ಯದಲ್ಲಿ ಅಕಾಲಿಕ ಮಳೆಗೆ ಈರುಳ್ಳಿ ಬೆಳೆ ನೀರು ಪಾಲಾಗಿದ್ದು, ಮಳೆಯಿಂದ ರಕ್ಷಿಸಿದ ಈರುಳ್ಳಿ ಇಟ್ಟಲ್ಲೇ ಕೊಳೆತು ಹೋಗುತ್ತಿದೆ. ಹೀಗಾಗಿ ದರ ಏರಿಕೆಯಾಗಿದೆ. ಕೆಜಿಗೆ 50 ರೂ. ಇದ್ದ ಈರುಳ್ಳಿಯ ಬೆಲೆ ಇದೀಗಾ 60 ರಿಂದ 80 ರೂಪಾಯಿ ವರೆಗೆ ಮಾರಾಟ ಮಾಡಲಾಗುತ್ತಿದೆ. ಕಳೆದ ಮೂರು ತಿಂಗಳಿನಿಂದ ಈರುಳ್ಳಿಯ ಬೆಲೆ ಏರಿಕೆಯಾಗುತ್ತಲೇ ಇದೆ. ಮಳೆ ಇಲ್ಲದಿದ್ದರೂ ಬೆಲೆ 70 ರ ಗಡಿ ದಾಟಿದೆ. ಕಳೆದ ತಿಂಗಳು ಸುರಿದ ಭಾರಿ ಮಳೆಯ ಪರಿಣಾಮ ನಿರೀಕ್ಷೆಯಷ್ಟು ಈರುಳ್ಳಿ ಮಾರುಕಟ್ಟೆಗೆ ಬಂದಿಲ್ಲ.ಹಾಗೂ ಹೊರ ರಾಜ್ಯಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಈರುಳ್ಳಿ ಪೂರೈಕೆಯಾಗುತ್ತಿಲ್ಲ ಈ ಹಿನ್ನೆಲೆಯಲ್ಲಿ ಈರುಳ್ಳಿ ಬೆಲೆ ಏರಿಕೆಗೆ ಕಾರಣ ಎನ್ನಲಾಗಿದೆ. ಬೇಡಿಕೆ ಗಣನೀವಾಗಿ ಹೆಚ್ಚಾದ ಪರಿಣಾಮವಾಗಿ ಈರುಳ್ಳಿ ಬೆಲೆ ಏರಿಕೆಯಾಗುತ್ತಿದೆ. ಶೀಘ್ರವೇ ಈರುಳ್ಳಿ ಬೆಲೆ ಕೆಜಿಗೆ 100 ರೂ. ಗಡಿ ದಾಟುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

## ರಾಮೇಶ್ವರಂ ಕೆಫೆ :ಸ್ಫೋಟಕ ವಿಚಾರ

• **ಉದಯವಾಹಿನಿ ಬೆಂಗಳೂರು**

ಕಳೆದ ಮಾರ್ಚ್ ಒಂದರಂದು ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದಂತಹ ಬಾಂಬ್ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಲ್ಲಿಸಿರುವ ಚಾರ್ಜ್ ಶೀಟ್‌ನಲ್ಲಿ ಮತ್ತೊಂದು ಸ್ಫೋಟಕ ವಾದಂತಹ ವಿಷಯ ಬಹಿರಂಗವಾಗಿದ್ದು ಶಂಕಿತ 6 ಜನ ಉಗ್ರರಿಗೆ ಐಸಿಸ್ ನಂಟು ಇದೆ ಎಂದು ಚಾರ್ಜ್ ಶೀಟ್‌ನಲ್ಲಿ ಉಲ್ಲೆಖಿಸಿದ್ದು ಇದೀಗ ಬಹಿರಂಗವಾಗಿದೆ.

ಹೌದು ಶಂಕಿತ ಉಗ್ರರಾದ ಅಬ್ದುಲ್ ಮತಿನ್, ಮಾಜ್ ಮುನೀರ್, ಮುಜಾಮಿಲ್ ಶರೀಫ್, ಮೊಹಮ್ಮದ್ ಶರೀಫ್, ಶಾಜೀಬ್ ಮತ್ತು ಅರಮತ್ ಅಲಿ ಐಸಿಸ್ ಜೊತೆ ಸಂಪರ್ಕ ಹೊಂದಿರುವುದು ಎನ್‌ಐಎ ಸಲ್ಲಿಸಿದ ಚಾರ್ಜ್ ಶೀಟ್ ನಲ್ಲಿ ಬಯಲಾಗಿದೆ. ಬೆಂಗಳೂರಿನ ರಾಮೇಶ್ವರಂ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಪಟ್ಟಂತೆ 6 ಶಂಕಿತ ಉಗ್ರರಿಗೆ ಐಸಿಸ್ ಗೆ ಸಂಪರ್ಕ ಇತ್ತು. ಅಲ್ಲದೇ ಕೆಫೆ ಬಾಂಬ್ ಬ್ಲಾಸ್ಟ್ ಅಷ್ಟೇ ಅಲ್ಲದೆ ಐಸಿಸ್ ಇವರಿಗೆ ಮತ್ತೊಂದು ಕೆಲಸವನ್ನು ಕೂಡ ಇವರಿಗೆ ನೀಡಿತ್ತು. ಶಂಕಿತ ಉಗ್ರರಲ್ಲಿ ಪ್ರಮುಖ ನಾದವನಿಗೆ ಉಸ್ತುವಾರಿ ನೋಡಿಕೊಳ್ಳಲು ಸೂಚಿಸಿತ್ತು ಅಲ್ಲದೆ ಅವರಿಗೆ ಹಣದ ಸಹಾಯ ಕೂಡ ಐಸಿಸ್ ಮಾಡಿತ್ತು ಎಂಬ ಸ್ಫೋಟಕ ವಿಷಯ ಬಯಲಾಗಿದೆ. ಏನೇ ಟಾಸ್ಕ್ ಕ್ಲಿಯರ್ ಮಾಡಿದರು ವಿಡಿಯೋ ಮಾಡಲು ಸೂಚನೆ ನೀಡಿತ್ತು. ಅದರಂತೆ ಶಂಕಿತ ಉಗ್ರರು ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಬ್ಲಾಸ್ಟ್ ಮಾಡಿರುವ ಕುರಿತು ವಿಡಿಯೋ ಮಾಡಿರುವ ಸಾಧ್ಯತೆ ಇದೆ ಎನ್ನಲಾಗಿದೆ. ಎಲ್ಲಾ ಅಂಶಗಳು ಎನ್‌ಐಎ ಸಲ್ಲಿಸಿರುವ ಚಾರ್ಜ ಶೀಟ್‌ನಲ್ಲಿ ಉಲ್ಲೇಖವಾಗಿದೆ.



ಉದಯವಾಹಿನಿ ಚಿತ್ರ

## ಹೊತ್ತಿ ಉರಿದ ಫರ್ನಿಚರ್ ಕಾರ್ಖಾನೆ: ಕಾರ್ಮಿಕ ಸಾವು

• **ಉದಯವಾಹಿನಿ ಆನೇಕಲ್**

ತಾಲ್ಲೂಕಿನ ಅತ್ತಿಬೆಲೆ ಕೈಗಾರಿಕಾ ಪ್ರದೇಶದ ಯಡವನಹಳ್ಳಿ ಸಮೀಪ ಶನಿವಾರ ಬೆಳಗಿನ ಜಾವ ಶ್ರೀರಾಮ್ ವುಡ್ ಮತ್ತು ಫರ್ನಿಚರ್ ಕಾರ್ಖಾನೆಯಲ್ಲಿ ಸಂಭವಿಸಿದ ಬೆಂಕಿ ದುರಂತದಲ್ಲಿ ಉತ್ತರಪ್ರದೇಶ ಮೂಲದ ಕಾರ್ಮಿಕ ಮೃತಪಟ್ಟಿದ್ದಾನೆ. 5 ಕೋಟಿಗೂ ಹೆಚ್ಚು ಮೌಲ್ಯದ ಮರದ ತುಂಡಗಳು ಮತ್ತು ಫರ್ನಿಚರ್ ಸಾಮಗ್ರಿ ಸುಟ್ಟು ಭಸ್ಮವಾಗಿವೆ.

ಉತ್ತರಪ್ರದೇಶದ ಗೋವಿಂದ (24) ಮೃತಪಟ್ಟ ಕಾರ್ಮಿಕ. ಭಾರಿ ಪ್ರಮಾಣದಲ್ಲಿ ಬೆಂಕಿ ಆವರಿಸಿದ್ದರಿಂದ ಭಯದಿಂದ ಕಾರ್ಖಾನೆಯಲ್ಲಿಯೇ ಉಳಿದ ಗೋವಿಂದ ಬೆಂಕಿಗೆ ಸಿಲುಕಿ ಮೃತಪಟ್ಟಿದ್ದಾರೆ. ಕಾರ್ಖಾನೆಯಲ್ಲಿಯೇ ವಾಸವಾಗಿದ್ದ ಬೇರೆ ರಾಜ್ಯಗಳ 24 ಕಾರ್ಮಿಕರು ಹೊರಗೆ ಓಡಿ ಬಂದು ಪ್ರಾಣ ರಕ್ಷಿಸಿಕೊಂಡಿದ್ದಾರೆ. ಬೆಳಗಿನ ಜಾವ 3.30ಕ್ಕೆ ಬೆಂಕಿ ತಗುಲಿ ಗಾಳಿಗೆ ಕೆನ್ನಾಲಿಗೆ ಕಾರ್ಖಾನೆಯ ಇತರ ಕಡೆ ವ್ಯಾಪಿಸಿದ್ದರಿಂದ ಮರದ ತುಂಡುಗಳು ಹೊತ್ತು ಉರಿದಿವೆ.


ಉದಯವಾಹಿನಿ ಚಿತ್ರ

ಬೆಂಕಿ ನಂದಿಸಲು ಅಗ್ನಿಶಾಮಕ ದಳದ ಸಿಬ್ಬಂದಿ ಪರದಾಡಿದರು.

ಎಲೆಕ್ಟ್ರಾನಿಕ್‌ಸಿಟಿ, ಸರ್ಜಾಪುರ, ಜಯನಗರ, ಆನೇಕಲ್ ಅಗ್ನಿಶಾಮಕ ದಳದ ಐದಕ್ಕೂ ಹೆಚ್ಚು ವಾಹನ ಮತ್ತು ಸಿಬ್ಬಂದಿ ಸತತ ಏಳು ತಾಸಿಗೂ ಹೆಚ್ಚು ಸಮಯ ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು.

> **ಶ್ರೀರಾಮ್ ಫುಡ್ ಕಾರ್ಖಾನೆ ಪಕ್ಕದಲ್ಲಿ ಯೇ ಆಶೀರ್ವಾದ್ ಪೈಪ್, ಟಿಂಬರ್ಸ್ ಕಾರ್ಖಾನೆಗಳಿದ್ದು ಅಲ್ಲಿಗೂ ಬೆಂಕಿ ಹಬ್ಬಿತ್ತು. ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ ಅಪಾಯ ತಪ್ಪಿಸಿದರು.ಎಲೆಕ್ಟ್ರಿಕ್ ಶಾರ್ಟ್ ಸರ್ಕಿಟ್ ಅಥವಾ ಕಾರ್ಮಿಕರು ಅಡುಗೆ ಮಾಡಿಕೊಳ್ಳುತ್ತಿದ್ದ ಮನೆಯಿಂದ ಬೆಂಕಿ ಹೊತ್ತಿರಬಹುದು ಎಂದು ಪೊಲೀಸರು ಅನುಮಾನಿಸಿದ್ದಾರೆ. ಎಸ್‌ಪಿ ಸಿ.ಕೆ. ಬಾಬಾ, ಎಎಸ್ಪಿ ನಾಗೇಶ್ ಕುಮಾರ್, ಡಿವೈಎಸ್ಪಿ ಮೋಹನ್ ಕುಮಾರ್ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.**

## ಅನ್ಯಭಾಷಿಕರು ಕನ್ನಡ ಕಲಿಯಬೇಕು: ಬಿ.ಟಿ.ಲಲಿತಾ ನಾಯಕ್

• **ಉದಯವಾಹಿನಿ, ಆನೇಕಲ್**

ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಈಚೆಗೆ ಕನ್ನಡ ರಾಜ್ಯೋತ್ಸವ ಆಯೋಜಿಸಲಾಗಿತ್ತು. ಡೊಳ್ಳು ಕುಣಿತ, ಯಕ್ಷಗಾನ, ತಮಟೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ರಾಜ್ಯೋತ್ಸವಕ್ಕೆ ಮೆರಗು ನೀಡಿದವು. ವಿದ್ಯಾರ್ಥಿಗಳಿಗೆ ಸಾಹಿತ್ಯ ಚರ್ಚೆ ಸೇರಿದಂತೆ ವಿವಿಧ ಸ್ಪರ್ಧೆಯಲ್ಲಿ ಆಯೋಜಿಸಲಾಗಿತ್ತು.ಕಾರ್ಯಕ್ರಮ ಉದ್ಘಾಟಿಸಿದ ಸಾಹಿತಿ ಬಿ.ಟಿ.ಲಲಿತಾ ನಾಯಕ್, ಕನ್ನಡ ಭಾಷೆ ಒಂದು ಶಕ್ತಿ. ತಿಯೊಬ್ಬರಿರೂ ತಮ್ಮ ಮಾತೃಭಾಷೆ ಮೇಲೆ ಪ್ರೀತಿಯಿರುತ್ತದೆ. ಕರ್ನಾಟಕದಲ್ಲಿರುವ ಅನ್ಯಭಾಷಿಕರು ಕನ್ನಡ ಕಲಿಯಬೇಕು. ಈ ಭಾಷೆಯ ಆನಂದ ಆಸ್ವಾದಿಸಬೇಕು ಎಂದರು. ವಿವಿಧ ರಾಜ್ಯಗಳ ವಿದ್ಯಾರ್ಥಿಗಳು ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಅಧ್ಯಯನ ಮಾಡುತ್ತಿದ್ದಾರೆ. ಈ ವಿದ್ಯಾರ್ಥಿಗಳಿಗೆ ಕನ್ನಡ ಭಾಷಾ ಕೇಂದ್ರ ಮತ್ತು ಸಾಹಿತ್ಯ ವಿಭಾಗದಿಂದ ಕನ್ನಡ ಕಲಿಸುವ ಕಾರ್ಯಕ್ರಮ ರೂಪಿಸಲಾಗುವುದು. ಈ ಮೂಲಕ ಅನ್ಯಭಾಷಿಕ ವಿದ್ಯಾರ್ಥಿಗಳು ಕನ್ನಡ ಭಾಷೆ ಕಲಿಯಲು ಪೂರಕ ಅವಕಾಶ ನೀಡಲಾಗುವುದು ಎಂದು ವಿಶ್ವವಿದ್ಯಾಲಯದ ರಿಜಿಸ್ಟರ್ ಮಠಂ ವಿಶ್ವನಾಥಯ್ಯ ಹೇಳಿದರು.ವಿಶ್ವವಿದ್ಯಾಲಯದ ಆಡಳಿತ ಮಂಡಳಿತ ಶೈಲಾ ಛೆಬ್ಬಿ, ಉಪ ಕುಲಪತಿ ಪ್ರಿಸ್ಲಿಶಾನ್, ಕನ್ನಡ ಭಾಷಾ ಕೇಂದ್ರದ ವಿವೇಕಾನಂದ ಸಜ್ಜನ್ ಇದ್ದರು.

## ಮನೆ ಬಾಡಿಗೆ ಕೇಳೋ ನೆಪದಲ್ಲಿ ದರೋಡೆ ಮಾಡುತ್ತಿದ್ದ ಕುಖ್ಯಾತಿ ದಂಪತಿ ಅರೆಸ್ಟ್!

• **ಉದಯವಾಹಿನಿ ಬೆಂಗಳೂರು**

ಮನೆ ಬಾಡಿಗೆ ಕೇಳುವ ನೆಪದಲ್ಲಿ ಸರ ಎಗರಿಸುತ್ತಿದ್ದ ದಂಪತಿ ಅರೆಸ್ಟ್ ಆಗಿದ್ದಾರೆ. ಪತಿ ಜೀವನ್ ಅಲಿಯಾಸ್ ಜೀವ (30)ಪತ್ನಿ ಆಶಾ (30) ಇಬ್ಬರ ಬಂಧನವಾಗಿದೆ. ಬಂಧಿತ ದಂಪತಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಮೂಲದವರು ಎಂದು ತಿಳಿದುಬಂದಿದೆ.

17 ಲಕ್ಷ ಮೌಲ್ಯದ 240 ಗ್ರಾಮ್ ಚಿನ್ನಾಭರಣ 90 ಗ್ರಾಂ ಬೆಳ್ಳಿಯನ್ನು ಅವರಿಂದ ಜಪ್ತಿ ಮಾಡಿಕೊಳ್ಳಲಾಗಿದೆ. ದರೋಡೆ ಕೊಲೆ, ಕೊಲೆ ಯತ್ನ ಸೇರಿದಂತೆ ಹಲವು ಕೇಸ್ ಇವರ ಮೇಲೆ ದಾಖಲಾಗಿದ್ದವು. ಬಂಧಿತ ದಂಪತಿಯ ವಿರುದ್ಧ ಒಟ್ಟು 15 ಪ್ರಕರಣಗಳು ದಾಖಲಾಗಿದ್ದವು. 2024 ಫೆ.13 ರಂದು ಲಕ್ಷ್ಮಿಪುರದಲ್ಲಿ ವೃದ್ಧೆ ಭಾಗ್ಯಮ್ಮ ಎನ್ನುವ ಕೊಲೆಯಾಗಿತ್ತು. ಮಾದನಾಯಕನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಲಕ್ಷ್ಮಿಪುರದಲ್ಲಿ ಈ ಒಂದು ಕೊಲೆ ಆಗಿತ್ತು. ಕೊಲೆಯ ಬಳಿಕ ಸಂಪ್ನಲ್ಲಿ ಮೃತ ದೇಹ ಹಾಕಿ ಈ ಇಬ್ಬರು ದಂಪತಿಗಳು ಪರಾರಿಯಾಗಿದ್ದರು. ಕೇಂದ್ರವಲಯ ಐಜಿಪಿ ಲಾಬೂರಾಮ್ ನೇತೃತ್ವದಲ್ಲಿ ತಂಡ ರಚಿಸಲಾಗಿತ್ತು. ತಾವರೆಕೆರೆ ಇನ್ಸ್ಪೆಕ್ಟರ್ ಮೋಹನ್ ನೇತೃತ್ವದಲ್ಲಿ ಈ ಒಂದು ಕಾರ್ಯಾಚರಣೆ ನಡೆದಿದ್ದು, ಹೊಸಕೋಟೆಯ ಬಳಿ ಮತ್ತೊಂದು ಕೃತ್ಯ ಎಸಗುವ ವೇಳೆ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಬಂಧಿತ ಆರೋಪಿ ಜೀವನ್ ಬೇಕರಿಯಲ್ಲಿ ತಿಂಡಿ ತಯಾರಿಸುವ ಕೆಲಸವನ್ನು ಮಾಡುತ್ತಿದ್ದ ಇನ್ನು ಪತ್ನಿ ಆಶಾ ಒಂಟಿ ಮಹಿಳೆಯರು ವಾಸಿಸುವುದ ಸ್ಥಳವನ್ನು ಗುರುತಿಸುತ್ತಿದ್ದಳು. ಬಳಿಕ ಇಬ್ಬರು ಸೇರಿಕೊಂಡು ಸ್ಥಳವನ್ನು ಗುರುತಿಸಿ ಪತ್ನಿ ಜೀವನ್ ಜೊತೆಗೆ ತೆರಳಿ ಆಶಾ ಕೃತ್ಯ ವ್ಯಸಗುತ್ತಿದ್ದಳು. ಜುವೆಲ್ಲರಿ ಅಂಗಡಿಗೆ ತೆರಳಿ ಕದ್ದ ಮಾಲನ್ನು ಮಾರಾಟ ಮಾಡುವ ಮುನ್ನ ಕಷ್ಟ ಇದೆ ಅಂತ ದಂಪತಿಗಳು ಹೇಳುತ್ತಿದ್ದರು. ಚಿನ್ನಾಭರಣ ಮಾರಾಟ ಮಾಡಿ ಬರುತ್ತಿದ್ದ ಹಣದಲ್ಲಿ ಮೋಜು ಮಸ್ತಿ ಮಾಡುತ್ತಿದ್ದರು ಎಂದು ವಿಚಾರಣೆ ವೇಳೆ ತಿಳಿದು ಬಂದಿದೆ.



## ದಟ್ಟ ಮಂಜಿನಿಂದಾಗಿ 15 ವಿಮಾನಗಳ ಹಾರಾಟ ವಿಳಂಬ, 6 ವಿಮಾನಗಳ ಮಾರ್ಗ

• **ಉದಯವಾಹಿನಿ ಬೆಂಗಳೂರು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾನುವಾರ ಬೆಳಗ್ಗೆ ದಟ್ಟ ಮಂಜಿನಿಂದಾಗಿ 15 ವಿಮಾನಗಳ ಹಾರಾಟ ವಿಳಂಬವಾಗಿದ್ದು, 6 ವಿಮಾನಗಳ ಮಾರ್ಗ ಬದಲಿಸಲಾಗಿದೆ. ಬೆಳಿಗ್ಗೆ 5:08 ರಿಂದ 7:25 ರವರೆಗೆ ಕಡಿಮೆ ಗೋಚರತೆಯಿಂದಾಗಿ ವಿಮಾನ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರಿದೆ ಎಂದು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (ಬಿಐಎಎಲ್) ಅಧಿಕಾರಿಗಳು ತಿಳಿಸಿದ್ದಾರೆ.ಒಳಬರುವ ಆರು ವಿಮಾನಗಳನ್ನು ಚೆನ್ನೈ ಮತ್ತು ಹೈದರಾಬಾದ್ ವಿಮಾನ ನಿಲ್ದಾಣಗಳಿಗೆ ತಿರುಗಿಸಲಾಗಿದೆ. ಇವುಗಳಲ್ಲಿ ಮುಂಬೈನ ಅಕಾಸಾ ಏರ್, ನವದೆಹಲಿಯ ಸ್ಪೈಸ್ ಜೆಟ್, ಮುಂಬೈ ಮತ್ತು ಅಬುಧಾಬಿಯ ಏರ್ ಇಂಡಿಯಾ ಸೇರಿವೆ. ಹೆಚ್ಚುವರಿಯಾಗಿ, ಹೈದರಾಬಾದ್ನಿಂದ ಇಂಡಿಗೊ ವಿಮಾನ ಮತ್ತು ದೆಹಲಿಯಿಂದ ಸರಕು ವಿಮಾನವನ್ನು ಹೈದರಾಬಾದ್ಗೆ ತಿರುಗಿಸಲಾಗಿದೆ.ಐಎಂಡಿ ಅಧಿಕಾರಿಗಳ ಪ್ರಕಾರ, ಕೆಐಎನಲ್ಲಿ ಗೋಚರತೆ 50 ರಿಂದ 100 ಮೀಟರ್ ನಡುವೆ ಇತ್ತು, ಇದನ್ನು ದಟ್ಟ ಮಂಜು ಎಂದು ವರ್ಗೀಕರಿಸಲಾಗಿದೆ. ಡಿಸೆಂಬರ್ 2020 ರಲ್ಲಿ, ಕೆಐಎನ ದಕ್ಷಿಣ ರನ್ವೇ ಸಿಎಟಿ –3ಬಿ ಕಾರ್ಯಾಚರಣೆಗಳಿಗೆ ಅನುಗುಣವಾಗಿದೆ, ಇದು ಕಡಿಮೆ ಗೋಚರತೆ ಪರಿಸ್ಥಿತಿಗಳಲ್ಲಿ ವಿಮಾನವನ್ನು ಇಳಿಯಲು ಅನುವು ಮಾಡಿಕೊಡುವ ನ್ಯಾವಿಗೇಷನ್ ವ್ಯವಸ್ಥೆಯಾಗಿದೆ. ಆದಾಗ್ಯೂ, ನವೀಕರಣ ಕಾರ್ಯ ನಡೆಯುತ್ತಿದ್ದರೂ, ಉತ್ತರದ ರನ್ವೇ ಸಿಎಟಿ 1 ರನ್ವೇ ಆಗಿ ಉಳಿದಿದೆ.

## ಟಿಪ್ಪು ಸುಲ್ತಾನ್ ಕಾದಂಬರಿ ಬಿಡುಗಡೆ ಮಾಡಿದ ಸಂಸದ ತೇಜಸ್ವಿ ಸೂರ್ಯ

• **ಉದಯವಾಹಿನಿ ಬೆಂಗಳೂರು**

60 ವರ್ಷದ ಇತಿಹಾಸವುಳ್ಳ ವಕ್ಫ್ ಬೋರ್ಡ್, 1000 ವರ್ಷದ ಇತಿಹಾಸವುಳ್ಳ ನಮ್ಮ ದೇವಲಾಯ, ಕಲ್ಯಾಣಿ, ಪುಷ್ಕರಣಿಗಳನ್ನು ತನ್ನ ವಶಕ್ಕೆ ಪಡೆಯಲು ಹುನ್ನಾರ ನಡೆಸಿರುವುದು ಇತಿಹಾಸದ ದುರಂತಕ್ಕೆ ಸಾಕ್ಷಿ ಎಂದು ಸಂಸದ ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ. ಖಾಸಗಿ ಹೋಟೆಲ್‌ನಲ್ಲಿ ಪ್ರಭಾ ಕೇತಾನ್‌ಫೌಂಡೇಶನ್ ಆಯೋಜಿಸಿದ್ದ ಡಾ.ವಿಕ್ರಮ್ ಸಂಪತ್ ಅವರ ಟಿಪ್ಪು ಸುಲ್ತಾನ್ ಐತಿಹಾಸಿಕ ಕಾದಂಬರಿ ಬಿಡುಗಡೆ ಮಾಡಿ ಮಾತನಾಡಿದರು.

ದೇಶದ ಭವಿಷ್ಯಕ್ಕೆ ಇತಿಹಾಸ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಇತಿಹಾಸಕಾರರು, ಸಮಾಜ ವಿಜ್ಞಾನದ ಬರಹಗಾರರ ಕೊಡುಗೆ ಅಮೂಲ್ಯವಾಗಿದೆ.

ಸಂಸ್ಕೃತಿ, ಪರಂಪರೆ, ಇತಿಹಾಸದ ಸತ್ಯವನ್ನು ಕತೆ, ಕಾದಂಬರಿಗಳ ಮೂಲಕ ಮುಂದಿನ ಪೀಳಿಗೆಗೆ ಕೊಡುವ ಕೆಲಸ ಅಗತ್ಯವಾಗಿದೆ. ಅಂತಹ ಜವಾಬ್ದಾರಿಯುತ ಕೆಲಸವನ್ನು ವಿಕ್ರಮ ಸಂಪತ್ ಕಳೆದ ಹಲವು ವರ್ಷಗಳಿಂದ ಮಾಡುತ್ತಾ ಬಂದಿದ್ದು, ಅದರ ಭಾಗವಾಗಿ ಸುಮಾರು ಸಾವಿರ ಪುಟದ ಟಿಪ್ಪು ಸುಲ್ತಾನ್ ಕಾದಂಬರಿ ಇಂದು ಪ್ರಕಟವಾಗಿದೆ. ಟಿಪ್ಪು ಸುಲ್ತಾನ್ ಇತಿಹಾಸ ನಮಗೆ ಯಾಕೆ ಬೇಕು ಎಂಬ ಪ್ರಶ್ನೆ ಸಹಜವಾಗಿ ಮೂಡಬಹುದು. ಔರಂಗಜೇಬ್ ಮರಣಹೊಂದಿ 400 ವರ್ಷವಾದರೂ ಈಗಲೂ ರೈತರ ಜಮೀನು ವಶಪಡಿಸಿಕೊಳ್ಳುತ್ತಿದ್ದಾನೆಂದು ಹೈದ್ರಾಬಾದ್ ರೈತರು ಸಂಸತ್ತಿನ ಜಂಟಿ ಸಮಿತಿ (ಜೆಪಿಸಿ) ಮುಂದೆ ದೂರು ನೀಡಿದರು. ಕರ್ನಾಟಕದಲ್ಲಿ ನಡೆಯುತ್ತಿರುವ ವಕ್ಫ್ ವಿವಾದಕ್ಕೆ ಸಂಬಂಧಪಟ್ಟಂತೆ ಇತ್ತೀಚೆಗೆ ರಾಜ್ಯಕ್ಕೆ ಭೇಟಿ ನೀಡಿದ ಜೆಪಿಸಿ ಮುಂದೆ ಹಾವೇರಿಯ ರೈತರೊಬ್ಬರು ತಮ್ಮ ಮಗ ತಮ್ಮ ಜಮೀನಿನಲ್ಲಿ ವಕ್ಫ್ ಹೆಸರು ಉಲ್ಲೇಖಗೊಂಡಿದ್ದರಿಂದ ಸಾಲ, ಸಹಾಯಧನಗಳ ಸೌಲಭ್ಯದಿಂದ ವಂಚಿರಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ದೂರು ನೀಡಿದ್ದಾರೆ.

ಆದರೆ ಸರ್ಕಾರ ಮಾತ್ರ ಪೋಷಕರು ಹೇಳಿಕೆಯನ್ನು ಮರೆಮಾಚಿ ಪ್ರತ್ಯೇಕ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಎಫ಼ಐಆರ್‌ನಲ್ಲಿ ನಮೂದಿಸಿದೆ. ಇಂತಹ ಸಮಾಜ ವಿರೋಧಿ ಬೆಳವಣಿಗೆಗಳ ಬಗ್ಗೆ, ಇತಿಹಾಸದಲ್ಲಿ ನಡೆದಿರುವ ಅನ್ಯಾಯಗಳ ಬಗ್ಗೆ ಹೊಸ ಪೀಳಿಗೆಗೆ ತಿಳಿಸುವುದಕ್ಕೆ ಐತಿಹಾಸಿಕ ಕಾದಂಬರಿಗಳು ಅವಶ್ಯಕವೆಂದು ತೇಜಸ್ವಿ ಸೂರ್ಯ ಪ್ರತಿಪಾದಿಸಿದರು. ಸಮಾರಂಭದಲ್ಲಿ ನೃತ್ಯ ನಿರ್ದೇಶಕಿ ಮಧು ನಟರಾಜ್, ಲೇಖಕ ಡಾ.ವಿಕ್ರಮ್ ಸಂಪತ್, ಓಲಾ ಸಂಸ್ಥೆ ಮುಖ್ಯಸ್ಥ ಭಾವೀಶ್ ಅಗರವಾಲ್ ಮತ್ತಿತರರಿದ್ದರು.



ಉದಯವಾಹಿನಿ ಚಿತ್ರ

> **'ಈ ಹಿಂದೆ ಉರಿಗೌಡ, ನಂಜೇಗೌಡ ಹೆಸರನ್ನು ಸೃಷ್ಟಿಮಾಡಿದ್ದರಿಂದ ಬಿಜೆಪಿಗೆ ಸ್ವಲ್ಪ ಮತಗಳು ಬಂದಿರಬಹುದು; ಆದರೆ ಇತಿಹಾಸದಲ್ಲಿ ಅವರ ಹೆಸರಿಲ್ಲ. ಟಿಪ್ಪು ಸುಲ್ತಾನ್ ಧಾರವಾಹಿ ನನ್ನ ಆಸಕ್ತಿ ಕೆರಳಿಸಿತ್ತು. ಸರ್ಕಾರ ಟಿಪ್ಪು ಜಯಂತಿ ಮಾಡಲು ಮುಂದಾದಾಗ ರಾಜ್ಯಾದ್ಯಂತ ಗಲಭೆಗಳಾಗಿ, ಕೊಡಗಿನಲ್ಲಿ ಇಬ್ಬರು ಪ್ರಾಣ ಕಳೆದುಕೊಂಡಿದ್ದರು. ಈ ಎಲ್ಲಾ ಘಟನೆಗಳು ಕಾದಂಬರಿಗೆ ಪ್ರೇರಣೆ' ಎಂದು ಲೇಖಕ ಡಾ.ವಿಕ್ರಮ ಸಂಪತ್ ಹೇಳಿದರು.**

## ಕೊಚುವೇಲಿ – ಬೆಂಗಳೂರು ನಡುವೆ ವಿಶೇಷ ರೈಲುಗಳ ಸೇವೆ ಆರಂಭ

• **ಉದಯವಾಹಿನಿ ಬೆಂಗಳೂರು**

ಪ್ರಯಾಣಿಕರ ಅನುಕೂಲಕ್ಕಾಗಿ ಮತ್ತು ಮುಂಬರುವ ಶಬರಿಮಲೆ ಋತುವಿನಲ್ಲಿ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು, ದಕ್ಷಿಣ ರೈಲ್ವೆ ಕೊಚುವೇಲಿ ಮತ್ತು ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು (ಎಸ್‌ಎಂವಿಟಿ) ನಿಲ್ದಾಣಗಳ ನಡುವೆ ವಿಶೇಷ ರೈಲುಗಳ ಸೇವೆಯನ್ನು ಪ್ರತಿ ದಿಕ್ಕಿನಲ್ಲಿ ಹನ್ನೆರಡು ಟ್ರಿಪ್‌ಗಳನ್ನು ಓಡಿಸಲು ಸೂಚಿಸಿದೆ. 1. ರೈಲು ಸಂಖ್ಯೆ 06083 ಕೊಚುವೇಲಿ–ಎಸ್‌ಎಂವಿಟಿ ಬೆಂಗಳೂರು ಸಾಪ್ತಾಹಿಕ ಎಕ್ಸ್‌ಪ್ರೆಸ್ ವಿಶೇಷ ರೈಲು ಕೊಚುವೇಲಿ ನಿಲ್ದಾಣದಿಂದ ನವೆಂಬರ್ 12 ರಿಂದ ಜನವರಿ 28, 2025 ವರಗೆ 18:05 ಗಂಟೆಗೆ ಹೊರಟು, ಮರುದಿನ ದಿನ 10:55 ಗಂಟೆಗೆ ಎಸ್‌ಎಂವಿಟಿ ಬೆಂಗಳೂರು ತಲುಪಲಿದೆ. 2. ರೈಲು ಸಂಖ್ಯೆ 06084 ಎಸ್‌ಎಂವಿಟಿ ಬೆಂಗಳೂರು–ಕೊಚುವೇಲಿ ಸಾಪ್ತಾಹಿಕ ಎಕ್ಸ್‌ಪ್ರೆಸ್ ವಿಶೇಷ ರೈಲು ಎಸ್‌ಎಂವಿಟಿ ಬೆಂಗಳೂರು ನಿಲ್ದಾಣದಿಂದ ನವೆಂಬರ್ 13 ರಿಂದ ಜನವರಿ 29, 2025 ವರಗೆ 12:45 ಗಂಟೆಗೆ ಹೊರಟು, ಮರುದಿನ ದಿನ 06:45 ಗಂಟೆಗೆ ಕೊಚುವೇಲಿ ತಲುಪಲಿದೆ.




ಈ ರೈಲು ಎರಡು ದಿಕ್ಕಿನ ಮಾರ್ಗದಲ್ಲಿ, ಕೊಲ್ಲಮ್, ಕಾಯಂಕುಳಂ, ಪಾಲಕಾಡ್, ಪೊದನೂರ್, ಈರೋಡ್, ಸೇಲಂ, ಜೋಲಾರ್ ಪೆಟ್ಟಾಯ್, ಜಂಕ್ಷನ್‌ಗಳ ನಡುವೆ ಸಂಚರಿಸಲಿದೆ. ಪ್ರಯಾಣಿಕರು ಅಧಿಕೃತ ವೆಬ್ಸೈಟ್ (www.enquiry.indianrail.gov.in) ಗೆ ಭೇಟಿ ನೀಡಿ, , NTES ಅಪ್ಲಿಕೇಶನ್ ಬಳಸಿ ಅಥವಾ 139 ಗೆ ಡಯಲ್ ಮಾಡುವ ಮೂಲಕ ಈ ರೈಲುಗಳ ಸಮಯವನ್ನು ಪರಿಶೀಲಿಸಬಹುದು.

## ಗೃಹ ಇಲಾಖೆಯ ಮತ್ತೊಂದು ಎಡವಟ್ಟು

• **ಉದಯವಾಹಿನಿ ಬೆಂಗಳೂರು**

ಈಗಾಗಲೇ ರಾಜ್ಯ ಸರ್ಕಾರ ವಾಲ್ಮೀಕಿ, ಮುಡಾ ಹಾಗೂ ವಕ್ಫ್ ವಿವಾದದಿಂದ ತೀವ್ರ ಮುಜುಗರಕ್ಕೆ ಒಳಗಾಗಿದ್ದು, ಇದರ ಬೆನ್ನಲ್ಲೇ ಗೃಹ ಇಲಾಖೆ ಮತ್ತೊಂದು ಎಡವಟ್ಟು ಮಾಡಿಕೊಂಡಿದೆ. ಬೆಂಗಳೂರಿನ ಎರಡು ಪೊಲೀಸ್ ಠಾಣೆಗಳಲ್ಲಿ ಕಳೆದ ಆರು ತಿಂಗಳಿನಿಂದ ಇನ್ಸ್ಪೆಕ್ಟರ್ ಗಳನ್ನೇ ನೇಮಿಸಿಲ್ಲ. ಹೌದು ಗೃಹ ಇಲಾಖೆಯಿಂದ ಮತ್ತೊಂದು ಎಡವಟ್ಟು ಆಗಿದ್ದು ಕಳೆದ 6 ತಿಂಗಳಿಂದ ಗಂಗಮ್ಮನ ಗುಡಿ ಠಾಣೆಗೆ ಇನ್ಸ್ಪೆಕ್ಟರ್ ನೇಮಕ ಮಾಡಿಲ್ಲ. 6 ತಿಂಗಳ ಹಿಂದೆ ಇನ್ಸ್ಪೆಕ್ಟರ್ ಸಿದ್ದೇಗೌಡ ನಿವೃತ್ತಿಯಾಗಿದ್ದಾರೆ. ಹಾಗಾಗಿ ಕಳೆದ 6 ತಿಂಗಳಿಂದ ಗಂಗಮ್ಮನ ಗುಡಿ ಠಾಣೆಗೆ ಇನ್ಸ್ಪೆಕ್ಟರ್ ನೇಮಿಸಿಲ್ಲ. ಅದೇ ರೀತಿಯಾಗಿ ಸೋಲದೇವನಹಳ್ಳಿ ಠಾಣೆಯಲ್ಲೂ ಕಳೆದ 3 ತಿಂಗಳಿನಿಂದ ಇನ್ಸ್ಪೆಕ್ಟರ್ ನೇಮಕವಾಗಿಲ್ಲ. 3 ತಿಂಗಳ ಹಿಂದೆಯೇ ಸೋಲದೇವನಹಳ್ಳಿಯ ಇನ್ಸ್ಪೆಕ್ಟರ್ ಹರಿಯಪ್ಪ ನಿವೃತ್ತಿಯಾಗಿದ್ದಾರೆ. ಇದುವರೆಗೂ ಎರಡು ಠಾಣೆಗಳಿಗೆ ಇನ್ಸ್ಪೆಕ್ಟರ್ ನೇಮಕ ಮಾಡಿಲ್ಲ. ಡ್ರಗ್ಸ್, ಆಸ್ತಿ ಕಲಹ ಸೇರಿ ಹಲವು ದೂರು ನೀಡಲು ಜನರು ಠಾಣೆಗಳಿಗೆ ಬರುತ್ತಿದ್ದಾರೆ.ಎರಡು ಠಾಣೆಗಳ ಕೆಳಹಂತದ ಅಧಿಕಾರಿಗಳಿಂದ ಉಡಾಫೆ ಉತ್ತರ ನೀಡುತ್ತಿರುವ ಆರೋಪ ಇದೀಗ ಕೇಳಿಬಂದಿದೆ. ಅಲ್ಲದೇ ಕ್ರೈಮ ರೇಟ್ ಹೆಚ್ಚಾಗುತ್ತಿರುವ ಆರೋಪ ಕೂಡ ಕೇಳಿ ಬಂದಿದೆ.

# ಕೋವಿಡ್ ಕಿಟ್ ಖರೀದಿ ಹಗರಣದ ಬಗ್ಗೆ ಮಹತ್ವದ ಮಾಹಿತಿ

## ■ ಯಡಿಯೂರಪ್ಪ, ಶ್ರೀ ರಾಮುಲು ಹೆಣದ ಮೇಲೆ ಹೇಗೆ ಹಣ, ■ ಜಸ್ಟೀಜ್ ಕುನ್ಹಾ ಕೊರೋನ ಮಧ್ಯಂತರ ವರದಿ

• **ಉದಯವಾಹಿನಿ ಬೆಂಗಳೂರು**

ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದಂತ ಕೋವಿಡ್ ಕಿಟ್ ಖರೀದಿ ಹಗರಣದ ಬಗ್ಗೆ ಗ್ರಾಮೀಣಾಭಿವೃದ್ಧಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ. ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದಂತ ಅವರು, ಕೊರೋನ ಸಮಯದಲ್ಲಿ ಯಡಿಯೂರಪ್ಪ ಹಾಗೂ ಶ್ರೀ ರಾಮುಲು ಅವರು ಹೆಣದ ಮೇಲೆ ಹೇಗೆ ಹಣ ಮಾಡಿದರು ಎಂಬುದನ್ನು ಜಸ್ಟೀಜ್ ಕುನ್ಹಾ ಅವರ ಕೊರೋನ ಮಧ್ಯಂತರ ವರದಿಯಲ್ಲಿದೆ. ಈ ಮಧ್ಯಂತರ ವರದಿಯಲ್ಲಿ ಸುಮಾರು 700 ಕೋಟಿ ಹಗರಣದ ಬಗ್ಗೆ ಬೆಳಕು ಚೆಲ್ಲಲಾಗಿದೆ. ಸುಮಾರು 3 ಸಾವಿರ ಕೋಟಿಗೂ ಹೆಚ್ಚಿನ ಹಗರಣ ನಡೆದಿದೆ ಎನ್ನಬಹುದು ಎಂದರು.

17.03.2020 ರಂದು 416.48 ಕೋಟಿ ಮೊತ್ತದ ಔಷಧಿಗಳು, ಕೆಮಿಕಲ್ ಗಳು, ವೈದ್ಯಕೀಯ ಸಲಕರಣೆಗಳನ್ನು ಖರೀದಿ ಮಾಡಲಾಗುತ್ತದೆ. 18.03.2020 ರಂದು ಆರೋಗ್ಯ ಇಲಾಖೆಯ ಅಡಿಯಲ್ಲಿ ಬರುವ ಅಗತ್ಯ ವಸ್ತುಗಳ ನಿಗಾವಹಿಸುವ ಸಮಿತಿಯು ನಮಗೆ 12 ಲಕ್ಷ ಪಿಪಿಈ ಕಿಟ್‌ಗಳು ಬೇಕು ಎಂದು ತೀರ್ಮಾನ ಮಾಡಿ ಒಂದು ಕಿಟ್ ಗೆ 2,117.53 ಎಂದು ತೀರ್ಮಾನ ಮಾಡುತ್ತದೆ. ಪಿಪಿಇ ಕಿಟ್‌ಗಳಿಗೆ ಇಷ್ಟೇ ದರವನ್ನು ಏಕೆ ನಿಗದಿ ಮಾಡಲಾಯಿತು. ನಂತರ ಕಾಮರ್ಸ್ ಮತ್ತು ಇಂಡಸ್ಟ್ರಿ ವಿಭಾಗವನ್ನು ಸಂಪರ್ಕಿಸಲಾಗುತ್ತದೆ. ಅವರು ಚೀನಾದಲ್ಲಿ ಬಿಗ್ ಫಾರ್ಮಸಿಟಿಕಲ್ ಮತ್ತು ಡಿಎಚ್ ಬಿ ಫಾರ್ಮಸಿಟಿಕಲ್ ಎನ್ನುವ ಕಂಪನಿಗಳಿಂದ ದರಪಟ್ಟಿಯನ್ನು ನಾವು ತರಿಸಿಕೊಂಡಿದ್ದೇವೆ ಎಂದು ಹೇಳಿದಾಗ. ಇವರು ಯಾವುದೇ ಮುಂದಾಲೋಚನೆ ಮಾಡದೇ, ಇತರಡೆ ದರವನ್ನು ಪರಿಶೀಲನೆ ಮಾಡದೆ ಪಿಪಿಇ ಕಿಟ್‌ಗಳನ್ನು ಖರೀದಿ ಮಾಡಲಾಗುತ್ತದೆ. ಇದರ ಬಗ್ಗೆ ಅಧಿಕಾರಿಗಳು ಮೂರು ರೀತಿಯ ದರಪಟ್ಟಿ ಬಂದಿದ್ದು ಎಂದು ಹೇಳಿದಾಗ ಮುಖ್ಯಮಂತ್ರಿ ಯಡಿಯೂರಪ್ಪನವರು ಹಾಗೂ ಆರೋಗ್ಯ ಸಚಿವ ಶ್ರೀರಾಮುಲು ಅವರು ಅಧಿಕಾರಿಗಳಿಗೆ ನೀವು ಕಡತವನ್ನು ತಯಾರು ಮಾಡಿ ಮುಂದಿನದು ನಾವು ನೋಡಿಕೊಳ್ಳುತ್ತೇವೆ ಎಂದು ಸೂಚನೆ ನೀಡುತ್ತಾರೆ.


ಉದಯವಾಹಿನಿ ಚಿತ್ರ

**ಸುಮಾರು 3 ಸಾವಿರ ಕೋಟಿಗೂ ಹೆಚ್ಚಿನ ಹಗರಣ**

02.04.2020 ರಲ್ಲಿ ಯಡಿಯೂರಪ್ಪ ಅವರು ಡಿಎಚ್ ಬಿ ಹಾಂಕಾಂಗ್ ಗ್ಲೋಬಲ್ ಕಂಪನಿ ಗೆ ಒಂದು 1 ಲಕ್ಷ ಪಿಪಿಇ ಕಿಟ್ ಸರಬರಾಜು ಮಾಡುವಂತೆ ನೇರ ಆದೇಶ ಕೊಡುತ್ತಾರೆ. ಒಟ್ಟು 21.18 ಕೋಟಿ ರೂಪಾಯಿಯಾಯಿತು. ಜೊತೆಗೆ ಇಷ್ಟು ಪ್ರಮಾಣದ ಪಿಪಿಇ ಕಿಟ್‌ಗಳನ್ನು ಏಳು ದಿನದ ಒಳಗಾಗಿ ಸರಬರಾಜು ಮಾಡಬೇಕು ಇಲ್ಲದಿದ್ದರೆ ದಂಡ ವಿಧಿಸಲಾಗುವುದು ಎನ್ನುವ ಷರತ್ತನ್ನು ವಿಧಿಸಲಾಗುತ್ತದೆ.

ನಂತರ 10.04.2020 ರಂದು ಯಡಿಯೂರಪ್ಪ ಅವರಿಂದ ಮತ್ತೊಂದು ನೇರ ಆದೇಶ ಇದೇ ಡಿಎಚ್ ಬಿ ಕಂಪನಿಗೆ ಮತ್ತೊಮ್ಮೆ 1 ಲಕ್ಷ ಪಿಪಿಇ ಕಿಟ್ ಗಳನ್ನು ಸರಬರಾಜು ಮಾಡುವಂತೆ ಸೂಚಿಸಲಾಗುತ್ತದೆ. ಆದರೆ ಈ ಬಾರಿ 2,104.53 ರೂಪಾಯಿಗೆ ನೀಡುವಂತೆ ಹೇಳಲಾಗುತ್ತದೆ. ಇದೇ ದಿನದಂದು ಬಿಗ್ ಫಾರ್ಮಸಿಟಿಕಲ್ ಕಂಪನಿ ಅವರಿಗೂ 1 ಲಕ್ಷ ಕಿಟ್‌ಗಳನ್ನು ಸರಬರಾಜು ಮಾಡುವಂತೆ ಸೂಚಿಸಲಾಗುತ್ತದೆ. ಇದನ್ನು ರೂ 2,049.84 ಗಳಿಗೆ ನೀಡುವಂತೆ ಸೂಚನೆ ನೀಡಲಾಗುತ್ತದೇ. ಅಂದರೆ 62.57 ಕೋಟಿ ಹಣದ ವಹಿವಾಟು ನಡೆದಿದೆ.ಪ್ರಧಾನಿ ನರೇಂದ್ರ ಮೋದಿಯವರು ಡಿಜಿಟಲ್ ಇಂಡಿಯಾ, ಸ್ಕಿಲ್ ಇಂಡಿಯಾ, ಮೇಕ್ ಇನ್ ಇಂಡಿಯಾ ಹೀಗೆ ಅನೇಕ ಯೋಜನೆಗಳನ್ನು ಜಾರಿಗೆ ತರುತ್ತಾರೆ. ಪಾಪ ಇದನ್ನು ಬಿಜೆಪಿಯವರೇ ಹಾಳು ಮಾಡುತ್ತಿದ್ದಾರೆ.

ಕರ್ನಾಟಕದಲ್ಲಿ ಹಾಗೂ ಭಾರತದಲ್ಲಿಯೇ ಸ್ಥಳೀಯವಾಗಿ ಪಿಪಿಇ ಕಿಟ್‌ಗಳನ್ನು ತಯಾರು ಮಾಡುತ್ತಿದ್ದರೂ ಸಹ ಯಡಿಯೂರಪ್ಪನವರು ಏಕೆ ಚೀನಾದಿಂದ ತರಿಸಿಕೊಂಡರು ಎಂಬುದಕ್ಕೆ ಉತ್ತರವಿಲ್ಲ.

### ಒಂದು ಪಿಪಿಇ ಕಿಟ್ ದರ ನಿಗದಿ

**24.03.2020 ರಲ್ಲಿ ನಡೆದ ನಡೆದ ಪ್ರಕ್ಯೂರ್ಮೆಂಟ್ ಅಲ್ಲಿ ಸ್ಥಳೀಯ ಸಂಸ್ಥೆ ಇಂಡಸ್ ಬಯೋ ಸೊಲ್ಯೂಷನ್ ಸಂಸ್ಥೆಗೆ 656.25 ದರದಲ್ಲಿ ಒಂದು ಪಿಪಿಇ ಕಿಟ್ ದರ ನಿಗದಿ ಮಾಡಲಾಗಿತ್ತು. ಆದರೆ 23.03.2020 ರಂದು ಅಂದ್ರೆ ಹಿಂದಿನ ದಿನ ಸ್ಥಳೀಯ 8 ತಯಾರಿಕಾ ಸಂಸ್ಥೆಗಳಿಂದ ರೂ 1,444.80 ದರಕ್ಕೆ ಪಿಪಿಇ ಕಿಟ್ ಗಳನ್ನು ಒಂದು ದಿನದ ಅಂತರದಲ್ಲಿ ಹೆಚ್ಚು ಅಂತರಕ್ಕೆ ಖರೀದಿ ಮಾಡುತ್ತಾರೆ.**

> **ಕರ್ನಾಟಕ ಸ್ಟೇಟ್ ಮೆಡಿಕಲ್ ಸಪ್ಲೈ ಕಾರ್ಪೊರೇಷನ್ ಅವರು ವರದಿ ಪ್ರಕಾರ 14.03.2020 ರಂದು ಸುಮಾರು 1.2 ಲಕ್ಷ ಪಿಪಿಇ ಕಿಟ್ ಗಳನ್ನು ರೂ. 330.40 ಗೆ ಅಂದರೆ ಒಂದು ತಿಂಗಳ ಹಿಂದೆಯೇ ಖರೀದಿ ಮಾಡಿತ್ತು. ನಂತರ ಸುಮಾರು 1,900 ರೂಪಾಯಿ ದರ ವ್ಯತ್ಯಾಸದಲ್ಲಿ ಖರೀದಿ ಮಾಡಲಾಗಿದೆ. ಈ ಹಣ ಯಾರ ಜೇಬಿಗೆ ಹೋಯಿತು.**

# ಸರ್ಕಾರಿ ಹಾಸ್ಟೆಲ್‌ನ ಅವ್ಯವಸ್ಥೆ ವಿರುದ್ಧ ಬೀದಿಗಿಳಿದ ವಿದ್ಯಾರ್ಥಿನಿಯರು

## ಒಂದು ತಾಸಿಗೂ ಅಧಿಕ ಕಾಲ ಪ್ರತಿಭಟನೆ ನಡೆಸಿ, ವಾರ್ಡನ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ

• **ಉದಯವಾಹಿನಿ ಕೋಲಾರ**

ನಗರದ ಮೆಟ್ರಿಕ್ ನಂತರದ ಹಾಸ್ಟೆಲ್‌ನಲ್ಲಿ ಮೂಲ ಸೌಕರ್ಯ ಕಲ್ಪಿಸುತ್ತಿಲ್ಲ ಎಂದು ಆರೋಪಿಸಿ, ಅಲ್ಲಿನ ಅವ್ಯವಸ್ಥೆ ಖಂಡಿಸಿ ವಿದ್ಯಾರ್ಥಿನಿಯರು ಸಮೀಪದ ಕೋರ್ಟ್ ಸರ್ಕಲ್‌ನಲ್ಲಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಒಳಪಡುವ ಈ ಹಾಸ್ಟೆಲ್‌ನಲ್ಲಿ ಸೌಲಭ್ಯಗಳಿಲ್ಲದೆ ರೋಸಿ ಹೋಗಿದ್ದ ಕಾಲೇಜು ವಿದ್ಯಾರ್ಥಿನಿಯರು ಬಕೆಟ್‌ಗಳ ಸಮೇತ ಜಮಾಯಿಸಿ ರಸ್ತೆಯಲ್ಲಿ ಸಂಚರಿಸುತ್ತಿದ್ದ ವಾಹನಗಳನ್ನು ತಡೆದರು.

ಒಂದು ತಾಸಿಗೂ ಅಧಿಕ ಕಾಲ ಪ್ರತಿಭಟನೆ ನಡೆಸಿ, ವಾರ್ಡನ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ವಿದ್ಯಾರ್ಥಿನಿಯರಿಗೆ ವಿವಿಧ ಸಂಟನೆಗಳ ಮುಖಂಡರು ಸಾಥ್ ನೀಡಿದರು.

'ಮೂರು ದಿನಗಳಿಂದ ಬಳಕೆಗೂ ನೀರು ಬರುತ್ತಿಲ್ಲ. ಈ ಬಗ್ಗೆ ಕೇಳಿದರೆ ಮೇಲಧಿಕಾರಿಗಳು ನಮಗೇ ಕೊಟ್ಟಿಲ್ಲ ಎಂದು ವಾರ್ಡನ್ ಹೇಳುತ್ತಾರೆ. ಸಮಸ್ಯೆಗಳ ಬಗ್ಗೆ ಹಲವು ಬಾರಿ ವಾರ್ಡನ್ ಗಮನಕ್ಕೆ ತಂದಿದ್ದರೂ ಸ್ಪಂದಿಸದೆ ಬೇಜವಾಬ್ದಾರಿತನದಿಂದ ವರ್ತಿಸುತ್ತಿದ್ದಾರೆ' ಎಂದು ವಿದ್ಯಾರ್ಥಿನಿಯರು ಕಿಡಿಕಾರಿದರು.

> **ನೀರಿನ ಮೋಟಾರ್ ಕೆಟ್ಟು ಹೋಗಿದ್ದು ರಿಪೇರಿ ಮಾಡಲಾಗುವುದು. ಈಗಾಗಲೇ ಟ್ರ್ಯಾಕ್ಟರ್‌ನಲ್ಲಿ ನೀರು ಸರಬರಾಜು ಮಾಡಲಾಗಿದೆ. ಊಟದ ಸಮಸ್ಯೆ ಏನೂ ಇಲ್ಲ. ಶೌಚಾಲಯ ಸ್ವಚ್ಛಗೊಳಿಸಲಾಗಿದೆ ಬಾಗಿಲು ದುರಸ್ತಿ ಮಾಡಲಾಗಿದೆ -ಡಿ.ಚನ್ನಬಸಪ್ಪ ಸಹಾಯಕ ನಿರ್ದೇಶಕ, ಸಮಾಜ ಕಲ್ಯಾಣ ಇಲಾಖೆ**

ಊಟದ ಸಂಬಂಧ ದೂರು ನೀಡಿದರೂ ಏನೂ ಪ್ರಯೋಜವಾಗಿಲ್ಲ. ಸರಿಯಾಗಿ ಅನ್ನ ಬೆಂದಿರುವುದಿಲ್ಲ. ಇಡ್ಲಿ ಗಟ್ಟಿಯಾಗಿರುತ್ತವೆ.

ಇದರ ವಿರುದ್ಧ ಪ್ರಶ್ನೆ ಮಾಡಿದರೆ ಆಹಾರ ಪದಾರ್ಥಗಳು ಸರಬರಾಜು ಆಗಿರುವುದನ್ನು ಬೇಯಿಸಿ ಹಾಕಿದ್ದೇವೆ ಎನ್ನುತ್ತಾರೆ. ಅಲ್ಲದೆ ಸಮಯಕ್ಕೆ ಸರಿಯಾಗಿ ಊಟ, ತಿಂಡಿ ನೀಡುವುದಿಲ್ಲ, ನಾವು ತರಗತಿಗಳಿಗೆ ಹೋಗಲು ತಡವಾಗುತ್ತದೆ' ಎಂದು ದೂರಿದರು. ಸಮಾಜ ಕಲ್ಯಾಣ ಇಲಾಖೆ ಸಹಾಯ ನಿರ್ದೇಶಕ ಚನ್ನಬಸಪ್ಪ ಅವರಿಗೆ ದೂರವಾಣಿ ಕರೆ ಮಾಡಿ ಸಮಸ್ಯೆಗಳ ಬಗ್ಗೆ ತಿಳಿಸಲಾಗಿದೆ. ಆದರೆ, ಯಾವುದೇ ರೀತಿ ಸ್ಪಂದಿಸಿಲ್ಲ. ನೀನು ಯಾವ ಕಾಲೇಜು ಏನು ಮಾಡುತ್ತಿಯ ಮಾಡಿಕೊ ಹೋಗು ಎಂದು ಉಡಾಫೆ ಉತ್ತರ ಕೊಡುತ್ತಾರೆ' ಎಂದು ಕಿಡಿಕಾರಿದರು.



ಉದಯವಾಹಿನಿ ಚಿತ್ರ

**ಪರಸ್ಪರ ಹೊಂದಾಣಿಕೆ ಇಲ್ಲ**

**ವಿದ್ಯಾರ್ಥಿನಿಯರಲ್ಲಿಯೇ ಪರಸ್ಪರ ಹೊಂದಾಣಿಕೆ ಇಲ್ಲ. ಒಬ್ಬರನ್ನು ಕಂಡರೆ ಒಬ್ಬರಿಗೆ ಆಗಲ್ಲ. ಸಣ್ಣಪುಟ್ಟ ಸಮಸ್ಯೆಗಳನ್ನು ದೊಡ್ಡದು ಮಾಡಿ ಸುಳ್ಳು ಹೇಳುತ್ತಿದ್ದಾರೆ. ಟ್ಯಾಂಕ್‌ನೊಳಗೆ ಯಾರೂ ಬಟ್ಟೆ ಹಾಕಿದ್ದಾರೆ. ಪೈಪ್‌ಗೆ ಬಟ್ಟೆ ಸಿಕ್ಕಿಕೊಂಡಿದೆ. ಅದನ್ನು ನೆಪ ಇಟ್ಟುಕೊಂಡು ಪ್ರತಿಭಟನೆ ಮಾಡಿದ್ದಾರೆ. ಕೆಲವೊಂದು ಸಮಸ್ಯೆ ಇದ್ದು ಸರಿಪಡಿಸಲಾಗುತ್ತಿದೆ.**

ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದ ವಿಚಾರ ತಿಳಿದು ಸ್ಥಳಕ್ಕೆ ಬಂದ ಗಲ್‌ಪೇಟೆ ಪೊಲೀಸ್ ಠಾಣೆ ಪಿಎಸ್‌ಐ ಅರುಣ್ ಪಾಟೀಲ್, ಸ್ಥಳಕ್ಕೆ ಇಲಾಖೆ ಅಧಿಕಾರಿಗಳನ್ನು ಕರೆಯಿಸಿ ವಿದ್ಯಾರ್ಥಿಗಳ ಸಮಸ್ಯೆಗಳನ್ನು ಒಂದು ಕಾಲಮಿತಿಯೊಳಗೆ ಸರಿ ಪಡಿಸುವಂತೆ ಸೂಚಿಸಿದರು. ವಿದ್ಯಾರ್ಥಿಗಳನ್ನು ಸಮಾಧಾನಪಡಿಸಿ ಪ್ರತಿಭಟನೆ ಹಿಂಪಡೆಯುವಂತೆ ತಿಳಿಸಿದರು.

ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳಾದ ಆರ್. ಆರತಿ, ವಿ.ಶೋಭಾ, ಎಸ್.ನಂದಿನಿ, ಎಂ.ಮಹಾಲಕ್ಷ್ಮಿ, ಸಿ.ಸುಖನ್ಯಾ, ಮೌನಿಕಾ, ಡಿ.ಎಸ್.ದೀಪಾ ಸೇರಿದಂತೆ ಹಲವರು ಪಾಲ್ಗೊಂಡಿದ್ದರು. ಅಧಿಕಾರಿಗಳು ಹಾಗೂ ಪೊಲೀಸರು ಬಂದು ಹಾಸ್ಟೆಲ್ ವಿದ್ಯಾರ್ಥಿನಿಯರ ಸಮಸ್ಯೆ ಆಲಿಸಿ ಸಮಾಧಾನಪಡಿಸಿದರು. ಅಧಿಕಾರಿಗಳ ಜೇಬಿಗೆ ಅನುದಾನ' ಹಾಸ್ಟೆಲ್‌ನಲ್ಲಿ ಶೌಚಗೃಹಗಳಿಗೆ ಬಾಗಿಲುಗಳೇ ಇಲ್ಲ ಹಾನಿಯಾಗಿ ಸುಮಾರು ತಿಂಗಳು ಕಳೆದರೂ ರಿಪೇರಿ ಮಾಡಲು ಕ್ರಮವಹಿಸಿಲ್ಲ. ರಿಪೇರಿ ಕೆಲಸಕ್ಕಾಗಿ ಲಕ್ಷಾಂತರ ರೂಪಾಯಿ ಬಂದರೂ ವಾರ್ಡನ್ ಅಧಿಕಾರಿಗಳ ಜೇಬು ಸೇರುತ್ತಿದೆ' ಎಂದು ವಿದ್ಯಾರ್ಥಿನಿಯರು ಆರೋಪಿಸಿದರು.

**ಅಧಿಕಾರಿಗಳ ಜೇಬಿಗೆ ಅನುದಾನ**

'ಪ್ರತಿದಿನ ಒಂದೇ ರೀತಿ ಊಟವನ್ನು ತಯಾರಿಸಿ ನೀಡುತ್ತಿದ್ದಾರೆ ವೇಳಾಪಟ್ಟಿಯಂತೆ ಊಟ ನೀಡುತ್ತಿಲ್ಲ. ಅನ್ನ ಸಾಂಬರ್‌ನಲ್ಲಿ ಹುಳ ಹಲ್ಲಿ ಕಾಣಿಸಿಕೊಂಡಿತ್ತು.

ಅದನ್ನು ಹೇಳಿದಕ್ಕೆ ವಾರ್ಡನ್ ಬೇಜವಾಬ್ದಾರಿ ಉತ್ತರ ನೀಡುತ್ತಾರೆ. ಈಗಲೂ ಹಾಸ್ಟೆಲ್‌ನಲ್ಲಿ ದಾಸ್ತಾನು ಆಗಿರುವ ತರಕಾರಿ ಆಹಾರ ಪದಾರ್ಥಗಳನ್ನು ನೋಡಿದರೆ ವಾಂತಿ ಬರುತ್ತದೆ' ಎಂದು ವಿದ್ಯಾರ್ಥಿನಿರುರು ಅಸಮಾಧಾನ ಹೊರಹಾಕಿದರು.

---

## ವಿ.ಸಿ.ಫಾರಂನಲ್ಲಿ 11 ಸಾವಿರ ಭತ್ತದ ತಳಿ

• **ಉದಯವಾಹಿನಿ ಮಂಡ್ಯ**

ದೇಶದ ಪ್ರಮುಖ ಆಹಾರ ಬೆಳೆಯಾದ ಭತ್ತದ 11,290 ವೈವಿಧ್ಯಮಯ ತಳಿಗಳನ್ನು ಒಂದೇ ಜಾಗದಲ್ಲಿ ಬಿತ್ತನೆ ಮಾಡಿ, ಏಕಕಾಲದಲ್ಲಿ ಬೆಳೆಸುವ ಮೂಲಕ ಮಹತ್ವದ ಸಂಶೋಧನೆಗೆ ತಾಲ್ಲೂಕಿನ ವಿ.ಸಿ. ಫಾರಂನಲ್ಲಿರುವ ಬೆಂಗಳೂರು ಕೃಷಿ ವಿ.ವಿ.ಯ ವಲಯ ಕೃಷಿ ಸಂಶೋಧನಾ ಕೇಂದ್ರ ಮುಂದಾಗಿದೆ.

ಕೇಂದ್ರ ಸರ್ಕಾರದ ಜೈವಿಕ ತಂತ್ರಜ್ಞಾನ ವಿಭಾಗ' ನಿರ್ದೇಶನದ ಮೇರೆಗೆ ನಡೆಯುತ್ತಿರುವ ಈ ಸಂಶೋಧನಾ ಕಾರ್ಯಕ್ಕೆ ವಿ.ಸಿ.ಫಾರಂ ಸೇರಿದಂತೆ ರಾಷ್ಟ್ರಮಟ್ಟದ 14 ಕೃಷಿ ಸಂಶೋಧನಾ ಸಂಸ್ಥೆಗಳು ಮತ್ತು ರಾಜ್ಯದ ಕೃಷಿ ವಿಶ್ವವಿದ್ಯಾನಿಲಯಗಳು ಕೈಜೋಡಿಸಿವೆ. ಐದು ವರ್ಷಗಳ ಸಂಶೋಧನೆಗೆ ಒಟ್ಟು 50 ಕೋಟಿ ಮೀಸಲಿಡಲಾಗಿದೆ.

ಸ್ಥಳೀಯ ತಳಿಗಳ ಸಂರಕ್ಷಣೆ ಜೊತೆಗೆ ಅವುಗಳ ಗುಣಲಕ್ಷಣಗಳ ಅಧ್ಯಯನ ಹಾಗೂ ಅವುಗಳಲ್ಲಿರುವ ಉಪಯುಕ್ತ ವಂಶವಾಹಿಗಳ ಕುರಿತು ಸಂಶೋಧನೆ ನಡೆಸಿ, ಅಧಿಕ ಇಳುವರಿ ಮತ್ತು ರೋಗ ನಿರೋಧಕ ಗುಣಗಳಿರುವ ಸುಧಾರಿತ ತಳಿಗಳನ್ನು ಅಭಿವೃದ್ಧಿಪಡಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರಾಜ್ಯದ ಸ್ಥಳೀಯ ಭತ್ತದ ತಳಿಗಳಾದ ಕರಿಚಿಪ್ಪಿಗ, ಗೌರಿಸಣ್ಣ, ಗಿಡ್ಡ ಬಂಗಾರಕೋವಿ, ಪರಿಮಳ ಸಣ್ಣ, ಜೀರಿಗೆ ಸಣ್ಣ, ಸಿದ್ದಸಾಲೆ, ನಂದಿ ಹಾಗೂ ಇತರ ರಾಜ್ಯಗಳ ತಳಿಗಳಾದ ಅಂಬೆಮೋಹರ್, ಕಾಲಜೀರಾ, ಕಾಲನಮಕ್, ಪೋಕ್ಕಾಲಿ, ಮಾಪಿಲ್ಲೈ, ಸಾಂಬಾ ಸೇರಿದಂತೆ ಸಾವಿರಾರು ಭತ್ತದ ಪ್ರಭೇದಗಳ ವೈವಿಧ್ಯತೆಯ ಸಿರಿಯನ್ನು ವಿ.ಸಿ. ಫಾರಂನಲ್ಲಿ ಕಾಣಬಹುದಾಗಿದೆ.



ಉದಯವಾಹಿನಿ ಚಿತ್ರ

ಹಕ್ಕಿಗಳ ಕಾಟದಿಂದ ಈ ಅಪರೂಪದ ತಳಿಗಳನ್ನು ಸಂರಕ್ಷಿಸಲು ಭತ್ತದ ಗದ್ದೆಯಲ್ಲಿ ಬಲೆ ಕಟ್ಟಲಾಗಿದೆ. ಕೀಟ ಮತ್ತು ರೋಗಬಾಧೆ ನಿಯಂತ್ರಿಸಲು ಕೃಷಿ ವಿಜ್ಞಾನಿಗಳ ತಂಡ ವಿಶೇಷ ನಿಗಾ ಇಟ್ಟಿದೆ.

> **ದೇಶದಲ್ಲಿ 'ಹಸಿರು ಕ್ರಾಂತಿ'ಯ ನಂತರ ಅಧಿಕ ಇಳುವರಿ ನೀಡುವ ಸಾಮರ್ಥ್ಯದ ಭತ್ತದ ತಳಿಗಳ ಅಭಿವೃದ್ಧಿಯಿಂದ ಸ್ಥಳೀಯ ತಳಿಗಳು ನಶಿಸಿ ಹೋಗುವುದರೊಂದಿಗೆ ರೈತರ ಜಮೀನುಗಳಿಂದ ಕಣ್ಮರೆಯಾಗುತ್ತಿವೆ. ಈ ಬೆಲೆ ಕಟ್ಟಲಾಗದಂತಹ ಸ್ಥಳೀಯ ತಳಿಗಳನ್ನು ಸಂರಕ್ಷಿಸುವುದು ನವದೆಹಲಿಯಲ್ಲಿರುವ 'ರಾಷ್ಟ್ರೀಯ ಸಸ್ಯ ಅನುವಂಶಿಕ ಸಂಪನ್ಮೂಲಗಳ ಸಂಸ್ಥೆ'ಯ ಜವಾಬ್ದಾರಿಯಾಗಿದೆ. ಹೀಗಾಗಿ ಇಲ್ಲಿ ಒಂದು ಲಕ್ಷಕ್ಕೂ ಅಧಿಕ ಭತ್ತದ ತಳಿಗಳನ್ನು ಸಂಗ್ರಹಿಸಿ ಇಡಲಾಗಿದೆ. ಇಲ್ಲಿಂದಲೇ ವಿ.ಸಿ.ಫಾರಂಗೆ 11 ಸಾವಿರ ಭತ್ತದ ತಳಿಗಳನ್ನು ಕಳುಹಿಸಿ ಕೊಡಲಾಗಿದೆ' ಎನ್ನುತ್ತಾರೆ ಕೃಷಿ ವಿಜ್ಞಾನಿಗಳು.ಈ ಸಾವಿರಾರು ತಳಿಗಳಲ್ಲಿರುವ ಉಪಯುಕ್ತ ಅಂಶಗಳನ್ನು ಒಗ್ಗೂಡಿಸಿ ಹೊಸ ತಳಿಗಳಿಗೆ ವರ್ಗಾಯಿಸುವ ಉದ್ದೇಶ ಹೊಂದಲಾಗಿದೆ -ಸಿ.ಎ. ದೀಪಕ್, ವಿ.ಸಿ.ಫಾರಂನ ಭತ್ತದ ತಳಿ ವಿಜ್ಞಾನಿ**


---

## ಶಂಕರ್‌ನಾಗ್ ಹೆಸರು ಸದಾ ಹಸಿರು: ಯೋಗಣ್ಣ

• **ಉದಯವಾಹಿನಿ, ಮಂಡ್ಯ**

ಕನ್ನಡ ಚಿತ್ರರಂಗ ಕಂಡ ಅತ್ಯುತ್ತಮ ನಿರ್ದೇಶಕ ಮತ್ತು ನಟ ಶಂಕರ್‌ನಾಗ್ ಅವರ ನೆನಪು ಚಿತ್ರರಸಿಕರ ಮನದಲ್ಲಿ ಸದಾ ಹಸಿರಾಗಿರುತ್ತದೆ. ರಂಗಭೂಮಿ ಕ್ಷೇತ್ರದಲ್ಲೂ ತಮ್ಮದೇ ಆದ ಛಾಪು ಮೂಡಿಸಿದ್ದರು' ಎಂದು ಜಯಕರ್ನಾಟಕ ಸಂಘಟನೆಯ ಯೋಗಣ್ಣ ಹೇಳಿದರು.

ನಗರದ ಸರೋವರ ಹೋಟೆಲ್‌ನಲ್ಲಿ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಶಂಕರ್‌ನಾಗ್ ಹುಟ್ಟು ಹಬ್ಬದ ಅಂಗವಾಗಿ ಹಮ್ಮಿಕೊಂಡಿದ್ದ ಪೌರಕಾರ್ಮಿಕರಿಗೆ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ಶಂಕರ್‌ನಾಗ್ ಅವರು ಜನರ ಮನದಲ್ಲಿ ಇನ್ನೂ ಜೀವಂತಾಗಿ ಉಳಿದಿದ್ದಾರೆ ಎಂದರೆ ಅವರು ಮಾಡಿರುವ ಕಲಾ ಸೇವೆಯೇ ಕಾರಣ. ಅದರಲ್ಲಿ ಎಲ್ಲವೂ ಅಡಗಿದೆ ಎಂದರು. ನಗರಸಭೆ ಅಧ್ಯಕ್ಷ ಪ್ರಕಾಶ್ ಮಾತನಾಡಿ, 'ಶಂಕರ್‌ನಾಗ್ ಅವರು ಕನ್ನಡ ಚಲನಚಿತ್ರ ಕ್ಷೇತ್ರದಲ್ಲಿ ಅವಿರತವಾಗಿ ಶ್ರಮಿಸಿದ ಮಹಾನಟ, ಆಟೋ ಚಾಲಕನ ಪಾತ್ರದಿಂದ ಹಿಡಿದು ಎಲ್ಲಾ ವರ್ಗದ ಜನರ ಬವಣೆಯನ್ನು ಬೆಳ್ಳಿತೆರೆಯ ಮೇಲೆ ತೋರಿಸಿದ ಕೀರ್ತಿ ಶಂಕರ್‌ನಾಗ್ ಅವರದ್ದಾಗಿದೆ' ಎಂದು ಶ್ಲಾಘಿಸಿದರು.



ಉದಯವಾಹಿನಿ ಚಿತ್ರ

ಜೀವಧಾರೆ ಟ್ರಸ್ಟ್ ಅಧ್ಯಕ್ಷ ಎಂ.ಎಸ್.ನಟರಾಜು ಮಾತನಾಡಿದರು. ಪೌರಕಾರ್ಮಿಕರಾದ ಪಳನಿ, ಕರ್ಣ, ನಾಗರಾಜ, ಮುರುಗೇಶ್, ಸುರೇಶ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ರವಿ, ಶಿವಲಿಂಗು, ಮುಖಂಡ ವಸಂತ್ ಕುಮಾರ್ ಇದ್ದರು.

---

## ಕನ್ನಡ ಸಾಹಿತ್ಯ ಸಮ್ಮೇಳನ: ಪ್ರಚಾರ ಸಮಿತಿಗೆ 1.30 ಕೋಟಿ ನಿಗದಿ

• **ಉದಯವಾಹಿನಿ ಮಂಡ್ಯ**

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ಸಮಿತಿಗೆ ಅಂದಾಜು 1.30 ಕೋಟಿ ಆಯವ್ಯಯ ನಿಗದಿಯಾಗಿದ್ದು, ಎಲ್ಲಾ ಉಪಸಮಿತಿಗಳು ಪ್ರಚಾರ ಕಾರ್ಯಗಳನ್ನು ಚುರುಕುಗೊಳಿಸಬೇಕು' ಎಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ಕೆಲಸಗಳು ಹೆಚ್ಚು ನಡೆಯಲಿ ಎಂದರು. ಪೋಸ್ಟರ್, ಕಮಾನು, ಹೆದ್ದಾರಿ ಫಲಕಗಳು ಸೇರಿದಂತೆ ವಿವಿಧ ಪ್ರಚಾರ ಸಾಮಗ್ರಿಗಳ ವಿನ್ಯಾಸಗಳು ಆಕರ್ಷಣೀಯವಾಗಿ ಸಿದ್ಧಪಡಿಸಿ. ಪ್ರತಿದಿನ ವಿವಿಧ ಸಮಿತಿಗಳು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆಯುತ್ತಿರುವ ಕೆಲಸಗಳನ್ನು ಕ್ರೋಡೀಕರಣ ಮಾಡಿಕೊಂಡು ಸುದ್ದಿಗಳನ್ನು ಬಿಡುಗಡೆ ಮಾಡಿ ಎಂದರು.

ಪ್ರಚಾರ ಸಮಿತಿ ಕ್ರಿಯಾಯೋಜನೆ ಹಾಗೂ ಪ್ರಚಾರ ಸಮಿತಿಯಲ್ಲಿ ಎದುರಾಗುವ ಕುಂದುಕೊರತೆಗಳನ್ನು ಆಲಿಸುವುದರ ಜೊತೆಗೆ ವಿವಿಧ ರೀತಿಯ ಪ್ರಚಾರ ಕಾರ್ಯದ ಮಾಹಿತಿಯನ್ನು ಸಮಿತಿ ಸದಸ್ಯರೊಂದಿಗೆ ಹಂಚಿಕೊಂಡರು. ರೂಪಿಸಿರುವ ಕ್ರಿಯಾ ಯೋಜನೆಗೆ ಹೋಲಿಸಿದರೆ ಪ್ರಚಾರ ಸಮಿತಿಗೆ ನೀಡಿರುವ ಅಂದಾಜು ಅನುದಾನ ಕಡಿಮೆ ಇದೆ. ಆದ್ದರಿಂದ ಹೆಚ್ಚಿನ ಅನುದಾನಕ್ಕೆ ಬೇಡಿಕೆ ಇಡುತ್ತೇನೆ. ಪ್ರಾಯೋಜಕತ್ವದಾರರನ್ನು ಸಂಪರ್ಕಿಸುವುದು ಸಹ ಸಮಿತಿಯ ಹೆಗಲ ಮೇಲಿದೆ. ಸಮಿತಿಯ ಸದಸ್ಯರು ತಂಡಗಳನ್ನು ರಚಿಸಿಕೊಂಡು ಪ್ರಯೋಜಕತ್ವಕ್ಕೆ ಸಂಪರ್ಕಿಸಿ ಎಂದರು.



ಉದಯವಾಹಿನಿ ಚಿತ್ರ

ಸಭೆಯಲ್ಲಿ ಕಸಾಪ ಜಿಲ್ಲಾ ಸಂಚಾಲಕಿ ಮೀರಾ ಶಿವಲಿಂಗಯ್ಯ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ರಾಘವೇಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ನಿರ್ಮಲ, ಕಸಾಪ ಗೌರವ ಕಾರ್ಯದರ್ಶಿಗಳಾದ ಕೃಷ್ಣೇಗೌಡ ಹುಸ್ಕೂರು, ಹರ್ಷ, ಪ್ರಚಾರ ಸಮಿತಿಯ ಸದಸ್ಯರು ಪಾಲ್ಗೊಂಡಿದ್ದರು.

---

## ಆಲೂಗಡ್ಡೆಗೆ ಅಂಗಮಾರಿ ರೋಗ: ರೈತರು ತೀವ್ರ ಆತಂಕಕ್ಕೆ

• **ಉದಯವಾಹಿನಿ, ಗುಂಡ್ಲುಪೇಟೆ**

ತಾಲ್ಲೂಕಿನ ಪ್ರಮುಖ ತೋಟಗಾರಿಕೆ ಬೆಳೆಗಳಲ್ಲಿ ಪ್ರಮುಖವಾಗಿರುವ ಆಲೂಗಡ್ಡೆಗೆ ಅಂಗಮಾರಿ ರೋಗ ಕಾಣಿಸಿಕೊಂಡಿದ್ದು, ರೈತರು ತೀವ್ರ ಆತಂಕಕ್ಕೆ ಒಳಗಾಗಿದ್ದಾರೆ. ಸಾವಿರಾರು ರೂಪಾಯಿ ವ್ಯಯಿಸಿ ಬಿತ್ತನೆ ಮಾಡಿರುವ ಆಲೂಗಡ್ಡೆ ರೋಗಕ್ಕೆ ತುತ್ತಾಗುತ್ತಿರುವುದನ್ನು ಕಂಡು ಮರುಗುತ್ತಿದ್ದಾರೆ.

ಕೆಲವು ಕಡೆ ಆಲೂಗಡ್ಡೆ ಕೊಯ್ಲು ಹಂತಕ್ಕೆ ಬಂದರೆ, ಕೆಲವು ಕಡೆ ಗೆಡ್ಡೆ ಕಟ್ಟುವ ಹಂತದಲ್ಲಿದೆ. ತಾಲ್ಲೂಕಿನಲ್ಲಿ ಈಚೆಗೆ ಎಡೆಬಿಡದೆ ಸುರಿದ ಭಾರಿ ಮಳೆಗೆ ಭೂಮಿಯಲ್ಲಿ ತೇವಾಂಶ ಹೆಚ್ಚಾಗಿದ್ದರಿಂದ ಹೂ ಬಿಡುವ ಮುನ್ನವೇ ಆಲೂಗಡ್ಡೆ ಬೆಳೆಗೆ ಅಂಗಮಾರಿ ರೋಗ ಕಾಣಿಸಿಕೊಂಡಿದೆ. ಅಂಗಮಾರಿ ರೋಗಬಾಧಿತ ಗಿಡದ ಎಲೆಗಳು ಕಂದು ಮತ್ತು ಕಪ್ಪು ಬಣ್ಣಕ್ಕೆ ತಿರುಗಿ ಬೆಳೆ ನಾಶವಾಗುತ್ತಿದ್ದು ರೈತರು ನಷ್ಟದ ಭೀತಿಯಲ್ಲಿದ್ದಾರೆ.

ಆಲೂಗಡ್ಡೆ ಬೆಳೆಯಲ್ಲಿ ಅಂಗಮಾರಿ ರೋಗ ನಿಯಂತ್ರಣಕ್ಕೆ ರೈತರು ಹಲವು ಬಗೆಯ ಕೀಟನಾಶಕಗಳನ್ನು ಸಿಂಪಡಿಸುತ್ತಿದ್ದು, ಬೆಳೆ ಉಳಿಸಿಕೊಳ್ಳಲು ಯತ್ನಿಸುತ್ತಿದ್ದಾರೆ. ಆದರೆ, ರೋಗ ಸಂಪೂರ್ಣವಾಗಿ ಹತೋಟಿಗೆ ಬಾರದಿರುವುದು ರೈತರಲ್ಲಿ ಆತಂಕ ಹೆಚ್ಚಿಸಿದೆ.

ಕೀಟನಾಶಕ ಸಿಂಪಡಿಸಿ ಮೂರು ದಿನ ಕಳೆಯುವಷ್ಟರಲ್ಲಿ ಮತ್ತೆ ರೋಗ ಕಾಣಿಸಿಕೊಳ್ಳುತ್ತಿದ್ದು ಅಕ್ಕಪಕ್ಕದ ಜಮೀನಿನಲ್ಲಿ ಬಿತ್ತನೆ ಮಾಡಿರುವ ಆಲೂಗಡ್ಡೆ ಬೆಳೆಗೂ ವಿಸ್ತರಿಸುತ್ತಿರುವುದರಿಂದ ಈ ಬಾರಿ ಬಹುತೇಕ ಆಲೂಗಡ್ಡೆ ಬೆಳೆ ರೈತರ ಕೈಸೇರುವ ಸಾಧ್ಯತೆಗಳು ಕಡಿಮೆ ಎನ್ನಲಾಗುತ್ತಿದೆ. ರೋಗ ನಿಯಂತ್ರಣಕ್ಕೆ ತರಲಾಗದೆ ರೈತರು ದಿಕ್ಕು ತೋಚದೆ ತಲೆ ಮೇಲೆ ಕೈಹೊತ್ತು ಕುಳಿತುಕೊಳ್ಳುವಂತಾಗಿದೆ.

> **ತಾಲ್ಲೂಕಿನಲ್ಲಿ 800 ರಿಂದ 1,200 ಹೆಕ್ಟೇರ್ ಪ್ರದೇಶದಲ್ಲಿ ಆಲೂಗಡ್ಡೆ ಬೆಳೆಯಲಾಗಿದೆ. ಜೂನ್ ತಿಂಗಳಲ್ಲಿ ಬಿತ್ತನೆ ಮಾಡಿದ್ದವರಿಗೆ ಉತ್ತಮ ಬೆಲೆ ಹಾಗೂ ಇಳುವರಿ ದೊರೆತಿದೆ. ಆದರೆ, ಆಗಸ್ಟ್‌ನಲ್ಲಿ ಆಲೂಗಡ್ಡೆ ಬಿತ್ತನೆ ಮಾಡಿದವರಿಗೆ ಹೊಡೆತ ಬಿದ್ದಿದೆ. ಈ ಸಂದರ್ಭ ಸತತ ಸುರಿದ ಜಿಟಿಜಿಟಿ ಮಳೆಗೆ ಆಲೂಗಡ್ಡೆಗೆ ಕೊಳೆ ರೋಗ ಕಾಣಿಸಿಕೊಂಡಿದೆ ಎನ್ನುತ್ತಾರೆ ರೈತರು.**



ಉದಯವಾಹಿನಿ ಚಿತ್ರ

ಒಂದು ಹೆಕ್ಟೇರ್ ಆಲೂಗಡ್ಡೆ ಬಿತ್ತನೆ ಮಾಡಲು ರೈತರಿಗೆ 60 ರಿಂದ 80 ಸಾವಿರ ಖರ್ಚು ತಗುಲುತ್ತದೆ. ಮೂರು ದಿನಗಳಿಗೊಮ್ಮೆ ಅಂಗಮಾರಿ ರೋಗ ನಿಯಂತ್ರಣಕ್ಕೆ 2 ರಿಂದ 3 ಸಾವಿರ ವ್ಯಯಿಸಿ ಔಷಧಿ ಸಿಂಪಡಿಸುತ್ತಿದ್ದರೂ ರೋಗ ಕಡಿಮೆಯಾಗುತ್ತಿಲ್ಲ. ಕಳೆದ ಹಲವು ದಿನಗಳಿಂದ ಮೋಡ ಕವಿದ ವಾತಾವರಣವಿದ್ದು ಅಂಗಮಾರಿ ರೋಗ ಮತ್ತಷ್ಟು ಉಲ್ಬಣಗೊಂಡು ಆಲೂಗಡ್ಡೆ ಬೆಳೆ ಸಂಪೂರ್ಣವಾಗಿ ನಾಶವಾಗುವ ಭೀತಿ ಎದುರಾಗಿದೆ ಎನ್ನುತ್ತಾರೆ ರೈತರು.

---

## ಚೆಲುವ ನಾರಾಯಣಸ್ವಾಮಿಗೆ ವಜ್ರಖಚಿತ ರಾಜಮುಡಿ ಕಿರೀಟ ಧಾರಣೆ

• **ಉದಯವಾಹಿನಿ, ಮೇಲುಕೋಟೆ**

ಚೆಲುವ ನಾರಾಯಣಸ್ವಾಮಿಗೆ ರಾತ್ರಿ ವಜ್ರಖಚಿತ ರಾಜಮುಡಿ ಕಿರೀಟಧಾರಣೆ ಮಹೋತ್ಸವ ವೈಭವದಿಂದ ನೆರವೇರಿತು. ಜಿಲ್ಲಾ ಖಜಾನೆಯಿಂದ ಪೊಲೀಸ್ ಭದ್ರತೆಯೊಂದಿಗೆ ಮೇಲುಕೋಟೆಗೆ ತಂದ ರಾಜಮುಡಿ ತಿರುವಾಭರಣಪೆಟ್ಟಿಗೆ ಪಾರ್ಕಾವಣೆ ಮಾಡಿ 7-15ಕ್ಕೆ ಸ್ವಾಮಿಗೆ ಧರಿಸಿ ವೈಭವದಿಂದ ಉತ್ಸವ ನೆರವೇರಿಸಲಾಯಿತು ಚತುರ್ವೇದಿಗಳಲ್ಲಿ ನಡೆದ ಉತ್ಸವ 9 ಗಂಟೆಗೆ ಮುಕ್ತಾಯವಾಯಿತು.

ಕಾರ್ತಿಕ ಮಾಸದ ಜಾತ್ರಾ ಮಹೋತ್ಸವಕ್ಕಾಗಿ ಮೈಸೂರು ಮಹಾರಾಜ ರಾಜಒಡೆಯರ್ ಭಕ್ತಿಪೂರ್ವಕವಾಗಿ ಸಮರ್ಪಿಸಿದಸಿಂಹಲಾಂಚನವಿರುವ ಅಪರೂಪದ ವಜ್ರಗಳಿಂದ ಕೂಡಿದ ರಾಜಮುಡಿ ಕಿರೀಟ, ರಾಜಲಾಂಛನ ಗಂಡುಬೇರುಂಡ ಪದಕ, ಹನ್ನೆರಡು ಆಳ್ವಾರುಗಳನ್ನು ಒಳಗೊಂಡ ಪದಪೀಠ, ಶಂಕ, ಚಕ್ರ, ಗದೆ, ಶಿರಚ್ಚಕ್ರ, ಅಭಯ ಹಸ್ತ, ಪಾದಜೋಡಿ ಕರ್ಣ ಕುಂಡಲ ಸೇರಿದಂತೆ 16 ಬಗೆಯ ವಜ್ರ, ಪಚ್ಚೆ, ರತ್ನ ಮುತ್ತುಗಳಿಂದ ಕೂಡಿದ ಐತಿಹಾಸಿಕ ಆಭರಣಗಳನ್ನು ತೊಡಿಸಿ ದಿವ್ಯ ಪ್ರಬಂಧ ಪಾರಾಯಣ ಹಾಗೂ ಮಂಗಳವಾದ್ಯದೊಂದಿಗೆ ಉತ್ಸವ ನೆರವೇರಿಸಲಾಯಿತು. ದೇವಾಲಯದ ಆಡಳಿತಾಧಿಕಾರಿಯೂ ಆದ ಉಪವಿಭಾಗಾಧಿಕಾರಿ ಶ್ರೀನಿವಾಸ್ ರಾಜಮುಡಿ ಮತ್ತು ತಿರುವಾಭರಣಗಳನ್ನು ಪರಿಶೀಲಿಸಿ ಸ್ಥಾನೀಕರು ಅರ್ಚಕ ಪರಿಚಾರಕರ ವಶಕ್ಕೆ ನೀಡಿದರು. ಪಾಂಡವಪುರ ತಹಶೀಲ್ದಾರ್ ಸಂತೋಷ್ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಶೀಲ. ಸ್ಥಾನೀಕರಾದ ಶ್ರೀನಿವಾಸನರಸಿಂಹನ್ ಗುರೂಜಿ, ಕರಗಂ ರಾಮಪ್ರಿಯ ತಿರುನಾರಾಯಣ ಅಯ್ಯಂಗಾರ್ ಸಂಪತ್ಕುಮಾರನ್, ಮುಕುಂದನ್ ಶ್ರೀರಾಮನ್ ಅರ್ಚಕ ವರದರಾಜ ಭಟ್ಟರ್ ಪರಿಚಾರಕ ಎಂ.ಎನ್ ಪಾರ್ಥಸಾರಥಿ ಮತ್ತಿತರರು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಕಿರೀಟಧಾರಣೆ ಮಹೋತ್ಸವ ವೈಭವ**

ತಮಿಳುನಾಡು ಸರ್ಕಾರದ ಪರವಾಗಿ ಹಾಜರಾಗಿದ್ದ ಕಾಂಚೀಪುರಂ ವಿಭಾಗದ ಧಾರ್ಮಿಕದತ್ತಿ ಇಲಾಖೆಯ ಜಂಟಿ ಆಯುಕ್ತ ಕುಮಾರ ದೊರೈ ಶ್ರೀ ಪೆರೆಂಬೂದೂರು ರಾಮಾನುಜರ ದೇಗುಲದ ರಾಜು ಇಲಂ ಪೆರುವಲತಿ ಮತ್ತು ಚಕ್ರಪಾಣಿ ಸೇರಿದಂತೆ ಅಧಿಕಾರಿಗಳು ಭಾಗವಹಿಸಿ ಸರ್ಕಾರದ ಗೌರವ ಸಮರ್ಪಣೆ ಮಾಡಿದರು.

---


## ಭಗೀರಥ ಪುತ್ಥಳಿ ನಿರ್ಮಾಣಕ್ಕೆ ಸಿಎಂ ಒಪ್ಪಿಗೆ: ಅಭಿನಂದನೆ

• **ಉದಯವಾಹಿನಿ, ಚಾಮರಾಜನಗರ**

ಜಿಲ್ಲಾಡಳಿತ ಭವನದ ಮುಂಭಾಗ ಮಹರ್ಷಿ ಭಗೀರಥ, ಮಹರ್ಷಿ ವಾಲ್ಮೀಕಿ ಹಾಗೂ ಕನಕದಾಸರ ಪುತ್ಥಳಿ ನಿರ್ಮಾಣಕ್ಕೆ ಒಪ್ಪಿಗೆ ಸೂಚಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಮುದಾಯದ ಪರವಾಗಿ ಅಭಿನಂದನೆ ಸಲ್ಲಿಸಲಾಗುವುದು ಎಂದು ಹೊಸದುರ್ಗದ ಭಗೀರಥ ಪೀಠದ ಪುರುಷೋತ್ತಾಮಾನಂದ ಪುರಿ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ದೊಡ್ಡಮೋಳೆ ಗ್ರಾಮದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳುವ ಸಂದರ್ಭ ಜಿಲ್ಲಾ ಉಪ್ಪಾರ ಯುವಕರ ಸಂಘದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಮಹರ್ಷಿಗಳಾದ ವಾಲ್ಮೀಕಿ, ಕನಕದಾಸ, ಭಗೀರಥರರು ನಾಡಿಗೆ ನೀಡಿರುವ ಕೊಡುಗೆ ಅಪಾರ ಎಂದರು.

ರಾಜ್ಯದಲ್ಲಿ ಮೊದಲ ಬಾರಿಗೆ ಭಗೀರಥರ ಪುತ್ಥಳಿ ನಿರ್ಮಾಣವಾಗುವುದು ಖುಷಿಯ ವಿಚಾರ. ಪುತ್ಥಳಿ ನಿರ್ಮಾಣ ಸಂಬಂಧ ವಾಲ್ಮೀಕಿ ಸಮುದಾಯದ ಶ್ರೀಗಳು, ಕನಕಪೀಠದ ಶ್ರೀಗಳ ಜೊತೆಗೆ ಚರ್ಚಿಸಿ ಶಂಕುಸ್ಥಾಪನೆಗೆ ದಿನಾಂಕ ನಿಗದಿ ಮಾಡಿದರೆ ಮುಖ್ಯಮಂತ್ರಿಗಳೊಟ್ಟಿಗೆ ಮೂರು ಸಮುದಾಯಗಳ ಸ್ವಾಮೀಜಿಗಳು ಭಾಗವಹಿಸುತ್ತೇವೆ ಎಂದು ತಿಳಿಸಿದರು. ಸಮುದಾಯಗಳ ಮಹನೀಯರ ಪುತ್ಥಳಿ ನಿರ್ಮಾಣ ಸಾಮಾಜಿಕ ನ್ಯಾಯವಾಗಿದ್ದು, ಸಾಮರಸ್ಯ ಮೂಡಿಸುತ್ತದೆ. ಎಲ್ಲಾ ಸಮುದಾಯಗಳು ಈ ಕಾರ್ಯಕ್ಕೆ ಸಹಕಾರ ನೀಡಬೇಕು ಎಂದರು.ಜಿಲ್ಲಾ ಉಪ್ಪಾರ ಯುವಕರ ಸಂಘದ ಜಿಲ್ಲಾ ಘಟಕ ಅಧ್ಯಕ್ಷ ಜಯಕುಮಾರ್, ಯಳಂದೂರು ಉಪ್ಪಾರ ಸಮಾಜದ ಮುಖಂಡರಾದ ವೈ.ಕೆ.ರಾಜು, ಯರಿಯೂರು ದೊಡ್ಡರಾಜು ಇದ್ದರು.



ಉದಯವಾಹಿನಿ ಚಿತ್ರ

---

# ಚನ್ನಪಟ್ಟಣ ಉಪ ಚುನಾವಣೆ: ಪ್ರಚಾರದಲ್ಲಿ ಪ್ರತಿಧ್ವನಿಸಿದ 'ಮೇಕೆದಾಟು' ರಾಜಕೀಯ

## • ಕಾಂಗ್ರೇಸ್‌ನವರು ತಮ್ಮ ಮಿತ್ರಪಕ್ಷ ಡಿಎಂಕೆಯನ್ನು ಮೊದಲು ಒಪ್ಪಿಸಲಿ: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

• **ಉದಯವಾಹಿನಿ, ಚನ್ನಪಟ್ಟಣ**

ಉಪ ಚುನಾವಣೆ ಪ್ರಚಾರದಲ್ಲಿ ಮೇಕೆದಾಟು ಅಣೆಕಟ್ಟೆ ನಿರ್ಮಾಣ ಅನುಮತಿ ವಿಷಯವು ಪ್ರತಿಧ್ವನಿಸಿದ್ದು, ಕಾಂಗ್ರೆಸ್ ಮತ್ತು ಜೆಡಿಎಸ್ ನಾಯಕರ ನಡುವೆ ಪರಸ್ಪರ ವಾಕ್ಸಮರಕ್ಕೂ ಕಾರಣವಾಗಿದೆ.

ಯೋಜನೆಗೆ ಯಾಕಿನ್ನೂ ಅನುಮತಿ ಕೊಡಿಸಿಲ್ಲ' ಎಂಬ ಕಾಂಗ್ರೆಸ್ ನಾಯಕರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಕಾಂಗ್ರೆಸ್‌ನವರು ತಮ್ಮ ಮಿತ್ರಪಕ್ಷ ಡಿಎಂಕೆಯನ್ನು ಮೊದಲು ಒಪ್ಪಿಸಲಿ' ಎಂದು ಸವಾಲು ಹಾಕಿದ್ದಾರೆ.

ತಾಲ್ಲೂಕಿನ ಮುಕುಂದ ಗ್ರಾಮದಲ್ಲಿ ಪುತ್ರ ನಿಖಿಲ್ ಕುಮಾರಸ್ವಾಮಿ ಪರವಾಗಿ ಪ್ರಚಾರ ನಡೆಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವರು ಡಿಎಂಕೆಯನ್ನು ಒಪ್ಪಿಸಿದರೆ ಕೇಂದ್ರ ಸರ್ಕಾರದಿಂದ ಅನುಮತಿ ಕೊಡಿಸುವ ಜವಾಬ್ದಾರಿ ನಮ್ಮದು.

ಆದರೆ, ಅವರ ಮಿತ್ರಪಕ್ಷ ಕ್ಯಾತೆ ತೆಗೆದುಕೊಂಡು ಕೂತಿದೆಯಲ್ಲಾ. ಕಾಂಗ್ರೆಸ್‌ನವರು ಮೊದಲು ಅದರ ಬಗ್ಗೆ ಬಾಯಿ ಬಿಡಲಿ' ಎಂದರು.

'ಯೋಗೇಶ್ವರ್ ಕಾಂಗ್ರೆಸ್ ಪಕ್ಷಕ್ಕೆ ಸೇರುವ ವ್ಯಾಪಾರ ಮೂರು ತಿಂಗಳ ಹಿಂದೆ ಲೋಕಸಭೆ ಚುನಾವಣೆ ಸಂದರ್ಭದಲ್ಲೇ ಆಗಿದೆ ಹೋಗಿದೆ.

ನೆಪ ಮಾತ್ರಕ್ಕೆ ಲೋಕಸಭೆ ಚುನಾವಣೆಯಲ್ಲಿ ನಮ್ಮೊಂದಿಗಿದ್ದ ಅವರು, ಮಾನಸಿಕವಾಗಿ ಕಾಂಗ್ರೆಸ್‌ನಲ್ಲಿದ್ದರು.

ಕಡೆಗೆ ಇಬ್ಬರಿಗೂ ಟೋಪಿ ಹಾಕಿ ಹೋದರು' ಎಂದು ಬೇವೂರಿನಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನಿಂದ ಮೇಕೆದಾಟು ಯೋಜನೆ ಕಾರ್ಯಗತಗೊಳಿಸಲು ಸಾಧ್ಯವಿಲ್ಲ. ನಾನದನ್ನೂ ಮಾಡಿಯೇ ತೀರುತ್ತೇವೆ. ಉಪ ಚುನಾವಣೆಯಲ್ಲಿ ನಿಖಿಲ್ ಗೆದ್ದರೆ ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ ಹೋರಾಟ ನಡೆಸಿ ಯೋಜನೆ ಜಾರಿಗೊಳಿಸುವೆ' ಎಂದು ಭರವಸೆ ನೀಡಿದರು.

ಜನರನ್ನು ಸುಲಿಗೆ ಮಾಡುತ್ತಿರುವ ರಾಜ್ಯದ ಕಾಂಗ್ರೆಸ್ ಸರ್ಕಾರ ಅವಧಿ ಪೂರ್ಣಗೊಳಿಸುವುದಿಲ್ಲ. ಇಂತಹ ಸರ್ಕಾರ ಇರಲೇಬಾರದು. ಹಾಗಾಗಿ, ನಿಖಿಲ್ ಬೆಂಬಲಿಸಿ ಪ್ರಧಾನಿ ಮೋದಿ ಮತ್ತು ಕೇಂದ್ರ ಸಚಿವ ಕುಮಾರಸ್ವಾಮಿ ಕೈ ಬಲಪಡಿಸಿ ಎಂದು ಮನವಿ ಮಾಡಿದರು.



ಉದಯವಾಹಿನಿ ಚಿತ್ರ

**ಮೇಕೆದಾಟುಗೆ ಅನುಮತಿ ಕೊಡಿಸುವೆ**

ಚನ್ನಪಟ್ಟಣ ತಾಲ್ಲೂಕಿನ ಹುಣಸನಹಳ್ಳಿಯಲ್ಲಿ ಕಾಂಗ್ರೆಸ್ ಪಕ್ಷದಿಂದ ನಡೆದ ತಿಗಳ ಸಮುದಾಯದ ಸಮಾವೇಶದಲ್ಲಿ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಮಾಜಿ ಸಂಸದ ಡಿ.ಕೆ. ಸುರೇಶ್ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ ಶಾಸಕ ಶರತ್ ಬಚ್ಚೇಗೌಡ ಸೇರಿದಂತೆ ಸಮುದಾಯದ ಮುಖಂಡರು ಒಗ್ಗಟ್ಟು ಪ್ರದರ್ಶಿಸಿದರು. ಎಚ್.ಡಿ. ದೇವೇಗೌಡ ಜೆಡಿಎಸ್

### ಎಲ್ಲಿ ಜಮೀನು ಕೊಟ್ಟಿದ್ದಾರೆ?

**ದಾಖಲೆ ಬಿಡುಗಡೆ ಮಾಡಲಿ: 'ಶಾಲೆಗೆ 25 ಎಕರೆ ದಾನ ನೀಡಿದ್ದೇನೆ. ದೇವೇಗೌಡರ ಕುಟುಂಬದವರು ಎಲ್ಲಾದರೂ ಜಮೀನು ದಾನ ನೀಡಿದ್ದಾರಾ?' ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, 'ಜಮೀನು ಕೊಡಲಿಕ್ಕೆ ಅವರೇನು ಮಹಾರಾಜರ ವಂಶಸ್ಥರಾ? ಇಷ್ಟಕ್ಕೂ ಎಲ್ಲಿ ಜಮೀನು ಕೊಟ್ಟಿದ್ದಾರೆ? ದಾಖಲೆ ಸಮೇತ ಜನರಿಗೆ ತಿಳಿಸಲಿ. ನಾನೂ ಸಂತೋಷಪಡುವೆ. ಸುಳ್ಳಿಗೂ ಮಿತಿ ಇದೆ. ಇವರಂತೆ ನಾನು ಮಾಡಿರುವ ಕೆಲಸಗಳಿಗೆ ಬೋರ್ಡ್ ಹಾಕಿಕೊಂಡಿಲ್ಲ. ರಾಜ್ಯದ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಏನೆಲ್ಲಾ ಮಾಡಿದ್ದೇನೆ ಎಂಬುವುದು ಜನತೆಗೆ ಗೊತ್ತಿದೆ' ಎಂದರು.**

> **ಮಾಡಿಯೇ ತೀರುವೆ: ಮೂರು ದಿನಗಳ ಹಿಂದೆಯಷ್ಟೇ ಪ್ರಚಾರಸಭೆಯಲ್ಲಿ, 'ನನ್ನ ಕೊನೆಯುಸಿರು ಹೋಗುವುದರೊಳಗೆ ಮೇಕೆದಾಟುಗೆ ಅನುಮತಿ ಕೊಡಿಸುವೆ' ಎಂದಿದ್ದ ಗೌಡರು, ತಾಲ್ಲೂಕಿನ ಎಸ್.ಎಂ. ಹಳ್ಳಿಯಲ್ಲಿ ನಡೆದ ಪ್ರಚಾರ ನಡೆಸುವಾಗ ಮತ್ತೆ ತಮ್ಮ ಮಾತು ಪುನರುಚ್ಚರಿಸಿದರು.**

ರಾಷ್ಟ್ರೀಯ ಅಧ್ಯಕ್ಷಇಂಡಿಯಾ ಮೈತ್ರಿಕೂಟದಲ್ಲಿ ಪ್ರಧಾನಿಯಾಗಬಲ್ಲ ನಾಯಕ ಯಾರಾದಾರೂ ಇದ್ದಾರೆಯೇ? ಸ್ಟಾಲಿನ್ ಅಥವಾ ಮಮತಾ ಬ್ಯಾನರ್ಜಿ ಪ್ರಧಾನಿ ಆಗಬಹುದೇ? ಎಚ್.ಡಿ. ಕುಮಾರಸ್ವಾಮಿ ಕೇಂದ್ರ ಸಚಿವ ನಾವು ಕಡಲೆಕಾಯಿ ಗಿಡ ಕೀಳುತ್ತೇವೆ ಎಂದಿಲ್ಲ.

ಸರ್ಕಾರವನ್ನೇ ಕಿತ್ತೊಗೆಯುತ್ತೇವೆ ಎಂದಿರೋದು. ಈ ಭ್ರಷ್ಟ ಸರ್ಕಾರವನ್ನು ಕಿತ್ತೊಗೆಯಬೇಕು ಎಂಬುದು ಜನರ ಭಾವನೆಯಾಗಿದೆ. ಅದನ್ನೇ ದೇವೇಗೌಡರು ಹೇಳಿದ್ದಾರೆ.

---


ಉದಯವಾಹಿನಿ

ಪ್ರಾದೇಶಿಕ

ಸೋಮವಾರ 11 ನವೆಂಬರ್ 2024




## ಮಿನಿ ನ್ಯೂಸ್

### ದಲಿತರು ಪೂಜೆ ಮಾಡಿದಕ್ಕೆ ಹೊತ್ತಿದ ಕಿಡಿ

• **ಉದಯವಾಹಿನಿ, ಮಂಡ್ಯ**

ಹಿಂದಿನ ಕಾಲದಲ್ಲಿ ಇದ್ದಂತಹ ಜಾತಿ ತಾರತಮ್ಯ ಪ್ರಸ್ತುತ ದೇಶದ ಹಲವು ಪ್ರದೇಶಗಳಲ್ಲಿ ಇನ್ನು ಆಚರಣೆಯಲ್ಲಿ ಇದೆ. ರಾಜ್ಯದಲ್ಲಿ ಇದೀಗ ಜಾತಿ ತಾರತಮ್ಯ ಮತ್ತೆ ಭುಗಿಲೆದಿದ್ದು ಮಂಡ್ಯ ಜಿಲ್ಲೆಯ ಹನಕೆರೆ ಗ್ರಾಮದಲ್ಲಿ ದಲಿತರು ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿರುವ ವಿಚಾರವಾಗಿ ಸವರ್ಣಿಯರು ಅಸಮಾಧಾನ ಹೊರಹಾಕಿದ್ದು, ಇದೀಗ ಗ್ರಾಮದಲ್ಲಿ ಬೂದಿ ಮುಚ್ಚಿದ ಕೆಂಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹೌದು ಮಂಡ್ಯದ ಹನಕೆರೆಯಲ್ಲಿ ಬೂದಿ ಮುಚ್ಚಿದ ಕೆಂಡದಂತಹ ಸ್ಥಿತಿ ನಿರ್ಮಾಣವಾಗಿದೆ. ಗ್ರಾಮದಲ್ಲಿರುವ ಶ್ರೀ ಕಾಲಭೈರವೇಶ್ವರ ಸ್ವಾಮಿ ದೇವಾಲಯದಲ್ಲಿ ವಿರೋಧದ ನಡುವೆ ಶ್ರೀ ಕಾಲಭೈಲೇಶ್ವರನಿಗೆ ದಲಿತರು ಪೂಜೆ ಸಲ್ಲಿಸಿದ್ದಾರೆ. ದಲಿತರ ದೇಗುಲಕ್ಕೆ ಪ್ರವೇಶಕ್ಕೆ ಸವರ್ಣೀಯರು ಸಮಾಧಾನ ಹೊರ ಹಾಕಿದ್ದಾರೆ.

ದೇಗುಲದ ಒಳನೋಗಿ ಉತ್ಸವ ಮೂರ್ತಿಯನ್ನು ಹೊರ ತಂದು ಕಿಡಿ ಕಾರಿದ್ದಾರೆ. ದೇವಾಲಯ ನಾಮಫಲಕವನ್ನು ಹೊರಗೆ ಎಸೆದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸದ್ಯ ಶ್ರೀ ಕಾಲಭೈರವೇಶ್ವರ ಸ್ವಾಮೀಜಿ ಬಾಗಿಲು ಬಂದಾಗಿದ್ದು, ಪರಿಸ್ಥಿತಿಯನ್ನು ಅಧಿಕಾರಿಗಳು ಮತ್ತು ಪೊಲೀಸರು ತಿಳಿಗೊಳಿಸಿದ್ದಾರೆ.

ಇದೆ ಸಂದರ್ಭದಲ್ಲಿ ದೇವಸ್ಥಾನಕ್ಕೆ ಬರುವುದಿಲ್ಲ ಎಂದು ಸವರ್ಣಿಯರು ಅಲ್ಲಿಂದ ತೆರಳಿದ್ದಾರೆ. ಮತ್ತೊಂದು ಕೊಠಡಿಯಲ್ಲಿ ಸವರ್ಣಯರು ಉತ್ಸವ ಮೂರ್ತಿಯನ್ನು ಇಟ್ಟಿದ್ದಾರೆ.ಸಂಜೆ ಉತ್ಸವ ಮೂರ್ತಿಯನ್ನು ದೇಗುಲಕ್ಕೆ ಕೊಂಡೊಯ್ಯಲು ನಿರ್ಧಾರ ಮಾಡಿದ್ದಾರೆ.

### ಮಾಜಿ ಸಂಸದ, ಶಾಸಕರ ನಡುವೆ ವಾಗ್ಯುದ್ಧ

• **ಉದಯವಾಹಿನಿ, ಮಡಿಕೇರಿ**

ಕೊಡಗು ಜಿಲ್ಲೆಯಲ್ಲಿ ಬಿಜೆಪಿ ಮುಖಂಡ ಪ್ರತಾಪಸಿಂಹ ಹಾಗೂ ಶಾಸಕ ಎ.ಎಸ್.ಪೊನ್ನಣ್ಣ ಅವರ ನಡುವೆ ಆರೋಪ, ಪ್ರತ್ಯಾರೋಪಗಳು ನಡೆದಿವೆ. ಪೊನ್ನಂಪೇಟೆಯಲ್ಲಿ ನಡೆದ ಪ್ರತಿಭಟನೆ ವೇಳೆ ಪ್ರತಾಪಸಿಂಹ ಅವರು, ಕಾನೂನು ಸಲಹೆಗಾರರಿಂದಲೇ ಸಿದ್ದರಾಮಯ್ಯ ಅವರಿಗೆ ದುಸ್ಥಿತಿ ಒದಗಿದೆ. ನಿವೇಶನ ಪಡೆದುಕೊಂಡಿರುವುದೇ ಅಕ್ರಮ ಎಂದು ಹೇಳುವ ಕನಿಷ್ಠ ಜ್ಞಾನವೂ ಕಾನೂನು ಸಲಹೆಗಾರರಿಗೆ ಇಲ್ಲ' ಎಂದು ಆರೋಪಿಸಿದರು.

ಜೊತೆಗೆ, 'ಒಂದೂವರೆ ವರ್ಷದಲ್ಲಿ ಇಲ್ಲಿನ ಇಬ್ಬರೂ ಶಾಸಕರು ಯಾವುದೇ ಅಭಿವೃದ್ಧಿ ಕೆಲಸ ಮಾಡಿಲ್ಲ. ಬಿಜೆಪಿಯ ಕೆ.ಜಿ.ಬೋಪಯ್ಯ ಹಾಗೂ ಎಂ.ಪಿ.ಅಪ್ಪಚ್ಚುರಂಜನ್ ಅವರು ಮಾಡಿದ ಅಭಿವೃದ್ಧಿ ಕೆಲಸಗಳಿಗೆ ಮತ್ತೊಮ್ಮೆ ಭೂಮಿಪೂಜೆ ನೆರವೇರಿಸಿದರು. ಜಲಜೀವನ್ ಮಿಷನ್‌ನಲ್ಲಿ ಅಕ್ರಮವಾಗಿದೆ ಎಂದು ಆರೋಪಿಸಿದ್ದನ್ನು ಬಿಟ್ಟು ಬೇರೆ ಯಾವುದೇ ಕೆಲಸ ಮಾಡುತ್ತಿಲ್ಲ' ಎಂದು ಹರಿಹಾಯ್ದರು.

ಇವರ ಆರೋಪಕ್ಕೆ ಮಡಿಕೇರಿಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಶಾಸಕ ಎ.ಎಸ್.ಪೊನ್ನಣ್ಣ, 'ಪ್ರತಾಪಸಿಂಹ ರಾಜಕೀಯವಾಗಿ ತಾವು ಎಲ್ಲಿದ್ದೇನೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು' ಎಂದು ತಿರುಗೇಟು ನೀಡಿದರು. 'ಅವರೊಬ್ಬ ಕೀಳುಮಟ್ಟದ ರಾಜಕಾರಣಿ ಎಂದು ಗುರುತಿಸಿ ಅವರ ಪಕ್ಷದವರೇ ಅವರಿಗೆ ಟಿಕೆಟ್ ಕೊಡದೇ ಸಜ್ಜನರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಟಿಕೆಟ್ ನೀಡಿದ ಬಿಜೆಪಿ ವರಿಷ್ಠರಿಗೆ ಧನ್ಯವಾದ ಅರ್ಪಿಸುವೆ. ಇಂತಹ ಪ್ರತಾಪಸಿಂಹ ಅವರ ಸಲಹೆಯ ಅಗತ್ಯ ಇಲ್ಲ' ಎಂದು ಟೀಕಿಸಿದರು.

### ಕಾಂಗ್ರೇಸ್‌ನಿಂದಲೇ ದಲಿತರ ಶೋಷಣೆ ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ

• **ಉದಯವಾಹಿನಿ, ಚನ್ನಪಟ್ಟಣ**

ದೇಶದಲ್ಲಿ ದಲಿತ ಸಮುದಾಯವನ್ನು ಶೋಷಣೆ ಮಾಡಿಕೊಂಡೇ ಬಂದ ಕಾಂಗ್ರೆಸ್ ಅನ್ನು ದಲಿತ ಸಮುದಾಯ ತಿರಸ್ಕರಿಸಬೇಕು ಎಂದು ಮಾಜಿ ಸಚಿವ ಎಚ್.ಕೆ.ಕುಮಾರಸ್ವಾಮಿ ಮನವಿ ಮಾಡಿದರು.

ದಲಿತ ಸಮುದಾಯದ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಹಣವನ್ನು ಕಾಂಗ್ರೆಸ್ ಸರ್ಕಾರ ಲೂಟಿ ಮಾಡಿ ಇತರ ಯೋಜನೆಗಳಿಗೆ ಬಳಸಿಕೊಂಡಿದೆ. ದಲಿತ ಸಮುದಾಯದ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನ ಕೂಡ ನೀಡಿಲ್ಲ. ಇಂತಹ ಸರ್ಕಾರಕ್ಕೆ ಬುದ್ಧಿ ಕಲಿಸಲು ದಲಿತ ಸಮುದಾಯ ಮುಂದಾಗಬೇಕು ಎಂದು ಮನವಿ ಮಾಡಿದರು. ಮಾಜಿ ಶಾಸಕ ರಾಜಣ್ಣ ಮಾತನಾಡಿ, ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಶೋಷಿಸಿದ, ದಲಿತ ಸಮುದಾಯವನ್ನು ಮತ ಬ್ಯಾಂಕ್ ಮಾಡಿಕೊಂಡು ಶೋಷಿಸಿರುವ ಕಾಂಗ್ರೆಸ್ ದಲಿತ ಸಮುದಾಯ ತಕ್ಕ ಪಾಠ ಕಲಿಸುವ ಸಂದರ್ಭ ಬಂದಿದೆ. ಇದನ್ನು ದಲಿತ ಸಮುದಾಯ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದರು.ಮಾಜಿ ಶಾಸಕ ಡಾ.ಅನ್ನದಾನಿ, ದಲಿತ ಸಮುದಾಯದ ಮುಖಂಡರಾದ ಕಂತೂರುದೊಡ್ಡಿ ಮುನಿವೆಂಕಟಪ್ಪ, ಪಟ್ಲು ದೇವರಾಜು ಹಾಜರಿದ್ದರು.

### ನನ್ನ ಹೋರಾಟ ಅಭಿವೃದ್ಧಿಗೆ: ಯೋಗೇಶ್ವರ್

• **ಉದಯವಾಹಿನಿ, ಚನ್ನಪಟ್ಟಣ**



ನೀರಾವರಿ ಸೇರಿದಂತೆ ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ನಾನು ಹೋರಾಟ ಮಾಡುತ್ತಿದ್ದೇನೆ. ಆದರೆ, ಜೆಡಿಎಸ್ ನಾಯಕರು ತಮ್ಮ ಕುಟುಂಬದ ಕುಡಿಯು ಪಟ್ಟಾಭಿಷೇಕಕ್ಕಾಗಿ ಹೋರಾಡುತ್ತಿದ್ದಾರೆ. ನಮ್ಮಿಬ್ಬರಲ್ಲಿ ಯಾರು ಹಿತವರು ಎಂದು ನೀವೇ ಯೋಚಿಸಿ ಮತ ಹಾಕಿ' ಎಂದು ಮನವಿ ಮಾಡಿದ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಅವರು ದೇವೇಗೌಡರ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದರು. ತಾಲ್ಲೂಕಿನ ಹುಣಸನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ತಿಗಳ ಸಮುದಾಯ ಸಮಾವೇಶದಲ್ಲಿ ಮಾತನಾಡಿದ ಅವರು, ಇಲ್ಲಿನ ಬಿಸಲಿಮ್ಮ ನಮ್ಮ ಮನೆದೇವರು. ರಾಜಕೀಯ ಪ್ರಾರಂಭದ ದಿನಗಳಿಂದಲೂ ಈ ಸಮುದಾಯ ನನ್ನ ಕೈ ಹಿಡಿದಿದೆ. ಈ ಬಾರಿಯು ನಿಮ್ಮೆಲ್ಲರ ಆಶೀರ್ವಾದ ನನ್ನ ಮೇಲಿರಲಿ' ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವಿದ್ದು, ಕ್ಷೇತ್ರದ ಅಭಿವೃದ್ಧಿಗಾಗಿ ಆ ಪಕ್ಷದ ಅಭ್ಯರ್ಥಿಯಾಗಿರುವ ನನ್ನ ಗೆಲುವು ಅನಿವಾರ್ಯವಾಗಿದೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ನುಡಿದಂತೆ ನಡೆದಿರುವ ಸರ್ಕಾರ, ತಾಲ್ಲೂಕಿನ ಅಭಿವೃದ್ಧಿಗೆ ಈಗಾಗಲೇ 500 ಕೋಟಿಗೂ ಹೆಚ್ಚು ಅನುದಾನ ಬಿಡುಗಡೆ ಮಾಡಿದೆ' ಎಂದು ಹೇಳಿದರು. 2018ರಿಂದ 2024ರವರೆಗೆ ಕ್ಷೇತ್ರದ ಶಾಸಕರಾಗಿದ್ದ ಕುಮಾರಸ್ವಾಮಿ, ಮುಖ್ಯಮಂತ್ರಿ ಹುದ್ದೆಯನ್ನೂ ಅಲಂಕರಿಸಿದ್ದರು. ಆದರೂ, ಕ್ಷೇತ್ರ ಯಾಕೆ ಅಭಿವೃದ್ಧಿಯಾಗಿಲ್ಲ ಎಂದು ಮತದಾರರು ಕೇಳಬೇಕಿದೆ. ಚುನಾವಣೆ ಬಂದಾಗ ಮಾತ್ರ ನಿಮ್ಮೂರಿಗೆ ಬರುವ ಇವರನ್ನು ನಂಬಬೇಡಿ. ಸದಾ ನಿಮ್ಮ ಜೊತೆ ಇರುವ ನನಗೆ ಈ ಬಾರಿ ಅವಕಾಶ ಮಾಡಿಕೊಡಿ' ಎಂದು ಬೇಡಿದರು. ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮಾತನಾಡಿ, ಅಧಿಕಾರಕ್ಕಾಗಿ ಕ್ಷೇತ್ರ ಬಿಟ್ಟು ಮಂಡ್ಯಕ್ಕೆ ಹೋದ ಕುಮಾರಸ್ವಾಮಿ ಅವರು ಯಾವ ಮುಖ ಇಟ್ಟುಕೊಂಡು ಮತ ಕೇಳಲು ಬಂದಿದ್ದಾರೆ? ನಿಖಿಲ್ ಎರಡು ಬಾರಿ ಸೋತಿದ್ದಾರೆ ಎಂದು ಮತ ಕೇಳುತ್ತಾರಾ ಅಥವಾ ನಾನೇನು ಕೆಲಸ ಮಾಡಿಲ್ಲ ಎಂದು ಹೇಳುತ್ತಾರಾ? ಹೊರಗಿನವರನ್ನು ಬಿಟ್ಟು, ತಾಲ್ಲೂಕಿನ ಕೆರೆ-ಕಟ್ಟೆಗಳನ್ನು ತುಂಬಿಸಿದ ಯೋಗೇಶ್ವರ್ ಅವರಿಗೆ ಜನ ಮತ ಕೊಡಬೇಕು' ಎಂದರು.

ಅಂತರಾಳದಿಂದ... EDITORIAL

# ವಕ್ಫ್ ಆಸ್ತಿ ವಿವಾದ: ಪರಿಹಾರಕ್ಕೆ ಸೂಕ್ತ ಮಾರ್ಗೋಪಾಯ ಶೋಧಿಸಿ

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಆಸ್ತಿ ವಿಷಯದಲ್ಲಿ ರೈತರಿಗೆ ನೋಟಿಸ್ ನೀಡಿರುವುದು ಹಾಗೂ ಕೆಲವು ಮಠ ಮಂದಿರಗಳ ಸ್ವಾಧೀನದಲ್ಲಿರುವ ಆಸ್ತಿಗಳ ಪಹಣಿಯಲ್ಲಿ ಮಂಡಳಿಯ ಹೆಸರು ಉಲ್ಲೇಖವಾಗಿರುವುದು ರಾಜಕೀಯ ಜಿದ್ದಾಜಿದ್ದಿಗೆ ಕಾರಣವಾಗಿದೆ. ಕೇಂದ್ರ ಸಚಿವರು, ಬಿಜೆಪಿಯ ಚುನಾಯಿತ ಪ್ರತಿನಿಧಿಗಳು ಹೋರಾಟದ ಮುಂಚೂಣಿಯಲ್ಲಿ ನಿಂತು, ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಹರಿಹಾಯುತ್ತಿದ್ದಾರೆ. ಇದರಿಂದಾಗಿ, ದೀರ್ಘಕಾಲದಿಂದ ತಮ್ಮ ಸ್ವಾಧೀನದಲ್ಲಿರುವ ಜಮೀನು ಕೈತಪ್ಪಬಹುದು ಎಂಬ ಭೀತಿ ರೈತ ಸಮೂಹದಲ್ಲಿ ಮೂಡಿದೆ. ಬಿಜೆಪಿಯು ತಾನು ಬಯಸಿದಂತೆ ವಕ್ಸ್ ಕಾಯ್ದೆಗೆ ತಿದ್ದುಪಡಿ ತರುವ ಪ್ರಯತ್ನಕ್ಕೆ ಪೂರಕವಾಗಿ ರಾಜ್ಯದಲ್ಲಿನ ವಕ್ಫ್ ಆಸ್ತಿ ವಿವಾದವನ್ನು ಬಳಸಿಕೊಳ್ಳುತ್ತಿದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ. ಜಂಟಿ ಸದನ ಸಮಿತಿಯ ಅಧ್ಯಕ್ಷರು ತರಾತುರಿಯಲ್ಲಿ ರಾಜ್ಯಕ್ಕೆ ಭೇಟಿ ನೀಡಿ. ಅಹವಾಲು ಆಲಿಸಿರುವುದನ್ನು ನೋಡಿದರೆ ಕಾಂಗ್ರೆಸ್ ಮುಖಂಡರ ಆರೋಪದಲ್ಲಿ ಹುರುಳಿದ್ದಂತೆ ತೋರುತ್ತದೆ.

> 'ರೈತರನ್ನು ಒಕ್ಕಲೆಬ್ಬಿಸುವ ಯಾವುದೇ ಉದ್ದೇಶ ಸರ್ಕಾರಕ್ಕೆ ಇಲ್ಲ. ರೈತರಿಗೆ ನೀಡಿರುವ ನೋಟಿಸ್ ಹಿಂದಕ್ಕೆ ಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಆದರೂ ವಕ್ಸ್ ಆಸ್ತಿ ವಿವಾದದ ರಾಜಕೀಯ ಜಟಾಪಟಿ ನಿಂತಿಲ್ಲ. ಈ ವಿವಾದವನ್ನೇ ಅಸ್ತ್ರವಾಗಿ ಬಳಸಿಕೊಂಡು ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಪ್ರಯತ್ನಗಳೂ ನಡೆಯುತ್ತಿವೆ. ನಾಡಿನ ಹಿತದೃಷ್ಟಿಯಿಂದ ಇದು ಒಳ್ಳೆಯ ಬೆಳವಣಿಗೆ ಅಲ್ಲ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ವಕ್ಸ್ ಕಾಯ್ದೆಗೆ ತಿದ್ದುಪಡಿ ತರಲು ಮುಂದಾಗಿದೆ. ಇದಕ್ಕೆ ವಿರೋಧ ಪಕ್ಷಗಳು ಪ್ರತಿರೋಧ ಒಡ್ಡಿದ ಕಾರಣ. ತಿದ್ದುಪಡಿ. ಮಸೂದೆಯನ್ನು ಸಂಸತ್ತಿನ ಜಂಟಿ ಸದನ ಸಮಿತಿಯ ಪರಿಶೀಲನೆಗೆ ಒಪ್ಪಿಸಲಾಗಿದೆ.

ಮಹಾರಾಷ್ಟ್ರ ಮತ್ತು ಜಾರ್ಖಂಡ್ ವಿಧಾನಸಭೆ




ಉದಯವಾಹಿನಿ ಚಿತ್ರ

ಚುನಾವಣೆ ಹಾಗೂ ಕರ್ನಾಟಕದ ಮೂರು ವಿಧಾನ ಸಭಾ ಕ್ಷೇತ್ರಗಳ ಉಪಚುನಾವಣೆಯೂ ವಕ್ಫ್ ಆಸ್ತಿಗೆ ಸಂಬಂಧಿಸಿದ ಗದ್ದಲ ಹೆಚ್ಚಾಗಲು ಕಾರಣ ಇದ್ದಿರಬಹುದು ಎಂಬ ಗುಮಾನಿಯೂ ಇದೆ. ಸರ್ಕಾರಿ ಸಂಸ್ಥೆಯೇ ಆಗಿರುವ ವಕ್ಸ್ ಮಂಡಳಿಗೆ ಕಾಯ್ದೆಯ ಬಲ ಇದೆ. ಇದರ ಉಸ್ತುವಾರಿಗೆ ಸಚಿವರಿದ್ದಾರೆ. ಸರ್ಕಾರದ ಅಧಿಕಾರಿಗಳನ್ನೇ ಒಳಗೊಂಡ ಆಡಳಿತ ಮಂಡಳಿಯೂ ಇದೆ. ಮುಸ್ಲಿಂ ಸಮುದಾಯಕ್ಕೆ ಸೇರಿದವರೊಬ್ಬರನ್ನು ಮಂಡಳಿಯ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸುತ್ತದೆ. ಧಾರ್ಮಿಕ ಹಾಗೂ ಸಾಮಾಜಿಕ ಸೇವೆಯ ಉದ್ದೇಶಕ್ಕೆ ವ್ಯಕ್ತಿ ಮತ್ತು ಸಂಘ-ಸಂಸ್ಥೆಗಳು ಮಂಡಳಿಗೆ ನೀಡಿದ ಜಮೀನನ್ನು ವಕ್ಫ್ ಆಸ್ತಿ ಎಂದು ಪರಿಗಣಿಸಲಾಗುತ್ತದೆ. ಒಮ್ಮೆ ಹೀಗೆ ನೀಡಿದ ಆಸ್ತಿಯು ಶಾಶ್ವತವಾಗಿ ವಕ್ಫ್ ಆಸ್ತಿಯಾಗುತ್ತದೆ ಎನ್ನುತ್ತದೆ ಕಾಯ್ದೆ. ಭೂಸುಧಾರಣೆ ಕಾಯ್ದೆ ಜಾರಿಯಾಗುವ ಮುನ್ನ ಕರ್ನಾಟಕದ ವಕ್ಫ್ ಮಂಡಳಿಯ ಒಡೆತನದಲ್ಲಿ 1.70 ಲಕ್ಷ ಎಕರೆ ಜಮೀನಿತ್ತು. ಭೂಸುಧಾರಣೆ ಕಾಯ್ದೆ ಜಾರಿಗೊಂಡ ಬಳಿಕ, ಉಳುಮೆ ಮಾಡುತ್ತಿದ್ದ ರೈತರಿಗೆ 79.000 ಎಕರೆ ಜಮೀನು ವರ್ಗಾವಣೆಯಾಯಿತು ಎಂದು ವರದಿಗಳು ಹೇಳುತ್ತವೆ. ಆದಕ್ಕೂ ಕಾಯ್ದೆಯ ರಕ್ಷಣೆ ಇತ್ತು. ಆದರೆ, ಸಯ್ಯದ್ ಅಲಿ ಮತ್ತು ಇತರರು ಹಾಗೂ ಆಂಧ್ರಪ್ರದೇಶ ವಕ್ಫ್ ಮಂಡಳಿ ನಡುವಣ ಪ್ರಕರಣದಲ್ಲಿ 1998ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ತೀರ್ಪು, ಆಸ್ತಿಗಳ ಮೇಲೆ ವಕ್ಫ್ ಮಂಡಳಿಯ ಹಕ್ಕು ಪ್ರತಿಪಾದನೆಗೆ ಬಲ ನೀಡಿತು. ಒಮ್ಮೆ ವಕ್ಫ್ ಆಸ್ತಿ ಎಂದು ಜಮೀನಿನ ದಾಖಲೆಯಲ್ಲಿ ನಮೂದಾದರೆ ಅದು ಕಾಯಂ ಆಗಿ ವಕ್ಫ್ ಆಸ್ತಿ ಆಗುತ್ತದೆ. ಇನಾಮದಾರಿ ಮತ್ತು ಗೇಣಿದಾರಿ ಪದ್ಧತಿ, ಭೂಸುಧಾರಣಾ ಕಾಯ್ದೆಗಳ ಅನ್ವಯ ವಕ್ಸ್ ಜಮೀನು ವರ್ಗಾವಣೆಯಾಗಿದ್ದಲ್ಲಿ ಅದನ್ನು ಮರುವಶಕ್ಕೆ ಪಡೆಯಬೇಕು' ಎಂದು ತೀರ್ಪಿನಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿತು. ಈ ಅಂಶವು ಈಗ ಉಲ್ಬಣಗೊಂಡಿರುವ ವಿವಾದಕ್ಕೆ ಕಾರಣವಾಗಿದೆ. ಈ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಲು ಯಾವುದೇ ಪಕ್ಷದ ನೇತೃತ್ವದ ಸರ್ಕಾರವೂ ಗಮನಹರಿಸಲಿಲ್ಲ. ಎರಡೂವರೆ ದಶಕಗಳಿಂದ ರಾಜ್ಯದಲ್ಲಿ ಅಧಿಕಾರ ನಡೆಸಿದ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ನೇತೃತ್ವದ ಸರ್ಕಾರಗಳು ಸುಪ್ರೀಂ ಕೋರ್ಟ್‌ನ ಈ ತೀರ್ಪನ್ನು ಅನುಷ್ಠಾನಗೊಳಿಸುವ ದಿಸೆಯಲ್ಲೇ ಹೆಜ್ಜೆ ಇಟ್ಟವು.

2021ರಲ್ಲಿ ಬಿಜೆಪಿಯ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರವೂ ಇದೇ ಮಾರ್ಗ ಅನುಸರಿಸಿತು. ಸುಪ್ರೀಂ ಕೋರ್ಟ್ ತೀರ್ಪನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾದ ಅನಿವಾರ್ಯಕ್ಕೆ ಸಿಲುಕಿದ ಅಧಿಕಾರಿಗಳು, ರೈತರ ಹಿತ, ಸಾಧಕ ಬಾಧಕ ಯೋಚಿಸದೇ ಕ್ರಮ ವಹಿಸಲು ಮುಂದಾದ ಕಾರಣ ನೋಟಿಸ್ ಜಾರಿಯಾಯಿತು. ಈ ಎಲ್ಲಾ ತೊಡಕುಗಳು ಮತ್ತು ಅವುಗಳಿಂದ ಹೊರಬರುವ ಮಾರ್ಗೋಪಾಯಗಳ ಕುರಿತು ಜನಪ್ರತಿನಿಧಿಗಳು ಯೋಚಿಸಬೇಕೇ ವಿನಾ ಅದರಿಂದ ರಾಜಕೀಯ ಲಾಭ ಪಡೆಯಲು ಸ್ಪರ್ಧೆಗೆ ಇಳಿಯುವುದು ತರವಲ್ಲ. ದಶಕಗಳಿಂದ ಕಗ್ಗಂಟಾಗಿ ಉಳಿದಿರುವ ಆಸ್ತಿ ವಿವಾದದ ಪ್ರಕರಣವನ್ನು ಪರಿಹರಿಸಿ ರೈತರ ಹಿತ ಕಾಯಬೇಕಾದ ಜವಾಬ್ದಾರಿ ಆಡಳಿತ ಪಕ್ಷಕ್ಕೂ ಇದೆ. ವಿರೋಧ ಪಕ್ಷಗಳಿಗೂ ಇದೆ. ವಕ್ಫ್ ಆಸ್ತಿ ವಿವಾದವನ್ನು ಮುಂದಿಟ್ಟುಕೊಂಡು ಕೋಮು ಧ್ರುವೀಕರಣಕ್ಕೆ ಪ್ರಯತ್ನಿಸುವುದು ಸಲ್ಲದು. ಈ ವಿವಾದಕ್ಕೆ ಯುಕ್ತವಾಗಿ ತೆರೆ ಎಳೆಯಬೇಕಾಗಿದೆ. ಕಾನೂನಾತ್ಮಕ ಪರಿಹಾರಗಳ ಕುರಿತು ಗಂಭೀರವಾಗಿ ಯೋಚಿಸಬೇಕಿದೆ. ಆಡಳಿತಾರೂಢರು ವಿರೋಧ ಪಕ್ಷಗಳನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಪರಿಹಾರ ಮಾರ್ಗ ಶೋಧಿಸಬೇಕು. ವಸ್ತುಸ್ಥಿತಿಯನ್ನು ಜನರಿಗೆ ಮನವರಿಕೆ ಮಾಡಿಕೊಡುವ ಕೆಲಸ ಆಗಬೇಕು. ಮತೀಯ ದ್ವೇಷಕ್ಕೆ ಎಳ್ಳಷ್ಟೂ ಅವಕಾಶವಾಗದಂತೆ ಮತ್ತು ರೈತರ ಹಿತಕ್ಕೆ ಬಾಧಕವಾಗದಂತೆ ಎಚ್ಚರ ವಹಿಸಬೇಕು.

# ರಾಮಾಯಣ



## ಬ್ರಹ್ಮದತ್ತನ ವೃತ್ತಾಂತ

• ಹಿಂದಿನ ಸಂಚಿಕೆಯಿಂದ 22ನೆಯ ಅಧ್ಯಾಯ

ಶ್ರೀರಾಮ, ಪೂರ್ವದಲ್ಲಿ ಜಿತೇಂದ್ರಿಯನಾಗಿ ಸದಾಚಾರಸಂಪನ್ನನಾದ ಚೂಳಿ ಎಂಬ ಮಹಾ ಮುನಿಯು ಬ್ರಹ್ಮದೇವನನ್ನು ಕುರಿತು ತಪಸ್ಸನ್ನು ಮಾಡುತ್ತಿದ್ದನು. ಆಗ ಊರಿಳೆ ಎಂಬವಳ ಮಗಳಾದ ಸೋಮದೆ ಎಂಬ ಗಂಧರ್ವಸ್ತ್ರೀಯು ಆ ಮುನೀಶ್ವರನಿಗೆ ಸೇವೆಯನ್ನು ಮಾಡಿ ಕೊಂಡಿದ್ದಳು ಆಕೆಯ ಸೇವೆ ಸತ್ಕಾರಗಳನ್ನು ಕಂಡು ಆತನು ಸುಪ್ರೀತನಾಗಿ ಅವಳನ್ನು ಕುರಿತು ಎಲೈ ಸ್ತ್ರೀಯೆ, ನಿನ್ನ ಸೇವೆ ಸತ್ಕಾರಗಳಿಂದ ನಾನು ಸಂತುಷ್ಟನಾದೆನು. ನಿನಗೆ ಬೇಕಾದ ವರವನ್ನು ಬೇಡಿಕೊ ' ಎಂದು ಮಡಿದನು.

ಸೋಮದೆಯು ಆ ಮುನೀಶ್ವರನ ಪ್ರೀತಿಯನ್ನು ಕಂಡು ಸಂತೋಷದಿಂದ 'ಮುನೀಶ್ವರ, ನೀನು ಹೇಗೆ ತಪಸ್ಸಾಮರ್ಥದಿಂದುಂಟಾದ ತೇಜಸ್ಸಿನಿಂದ ಒಪ್ಪುತ್ತಿದ್ದೀಯೋ ಹಾಗೆ ಬ್ರಹ್ಮತೇಜಸ್ಸುಳ್ಳ ಮಗನನ್ನು ಬಯಸುತ್ತೇನೆ. ನನಗೆ ಪತಿಯಿಲ್ಲ. ನಾನು ವಿವಾಹವಾದವಳಲ್ಲ. ಆದಕಾರಣ ವೇದವೇದಾಂಗಪಾರಂಗತನಾದ ಮಗನನ್ನು ಕೊಡಬೇಕು ' ಎಂದು ಕೇಳಿದಳು. ಆಗ ಚೂಳಿ ಎಂಬ ಋಷೀಶ್ವರನು ಆಕೆಗೆ ಮನಶ್ಶಕ್ತಿಯಿಂದ ಬ್ರಹ್ಮದತ್ತನೆಂಬ ಕುಮಾರನನ್ನು ಕೊಟ್ಟನು. ಆ ಕುಮಾರನು ಕಾಂಪಿಲ್ಯವೆಂಬ ಪಟ್ಟಣದಲ್ಲಿ ರಾಜ್ಯವನ್ನು ಆಳಿಕೊಂಡು ದೇವೇಂದ್ರನಂತೆ ಅತ್ಯಂತ ಐಶ್ವರ್ಯವಂತನಾಗಿದ್ದನು.ಇತ್ತ ಕುಶನಾಭನು ಮಂತ್ರಿಗಳೊಡನೆ ಯೋಚಿಸಿ ಬ್ರಹ್ಮದತ್ತನಿಗೆ ತನ್ನ ನೂರು ಮಂದಿ ಕುಮಾರಿಯರನ್ನು ಕೊಡಬೇಕೆಂದು ನಿಶ್ಚಯಿಸಿದನು.

ಮತ್ತು ಆತನನ್ನು ಕರೆಯಿಸಿ ತನ್ನ ಕುಮಾರಿಯರನ್ನು ವಿಧ್ಯುಕ್ತ ಪ್ರಕಾರದಲ್ಲಿ ವಿವಾಹವನ್ನು ಮಾಡಿ ಕೊಟ್ಟನು ಬ್ರಹ್ಮದತ್ತನು ಕೈಹಿಡಿದ ಕೂಡಲೆ ಅವರ ಕುಬ್ಜತ್ವವು ಹೋಗಿ ಮೊದಲಿನ ರೀತಿಯಲ್ಲಿ ಮೋಹನವಾದ ತನುಸೊಬಗಿನಿಂದ ಒಪ್ಪಿದರು. ಅದನ್ನು ಕಂಡು ಕುಶನಾಭನು ಅತಿಹರ್ಷವಟ್ಟು ತನ್ನ ಅಳಿಯನಾದ ಬ್ರಹ್ಮದತ್ತನಿಗೆ ಬಳುವಳಿಯನ್ನು ಕೊಟ್ಟು ಆತನ ಕೂಡ ತನ್ನ ಮಕ್ಕಳನ್ನು ಕಳುಹಿಸಿದನು. ಸೋಮದೆಯೆಂಬ ಗಂಧರ್ವಸ್ತ್ರೀಯು ತನ್ನ ಮಗನಾದ ಬ್ರಹ್ಮದತ್ತನನ್ನೂ ನೂರು ಮಂದಿ ಸೊಸೆಯರನ್ನೂ ಕಂಡು ಬಹಳ ಹರ್ಷಪಡುತ್ತಿದ್ದಳು. ಕುಶನಾಭನು ತನ್ನ ನೂರು ಮಂದಿ ಮಕ್ಕಳ ಕುಬ್ಜತ್ವವನ್ನು ಪರಿಹರಿಸಿ ಮೊದಲಿನ ಹಾಗೆಯೇ ರೂಪಲಾವಣ್ಯವನ್ನು ಅನುಗ್ರಹಿಸಿದ ಅಳಿಯನನ್ನು ಪಡೆದು ಹರ್ಷದಿಂದಿದ್ದನು.''

## ವಿಶ್ವಾಮಿತ್ರನ ವೃತ್ತಾಂತ

ಬ್ರಹ್ಮದತ್ತನು ತನ್ನ ನೂರು ಮಂದಿ ಕುಮಾರಿಯರನ್ನು ಮದುವೆಯಾದ ಮೇಲೆ ಕುಶನಾಭನು ತನಗೆ ಗಂಡು ಸಂತಾನವಾಗಬೇಕೆಂದು ಪುತ್ರಕಾಮೇಷ್ಟಿಯನ್ನು ಮಾಡಿದನು. ಆಗ ಕುಶನೆಂಬ ಬ್ರಹ್ಮಪುತ್ರನು ಆ ಯಾಗಶಾಲೆಗೆ ಬಂದು ಕುಶನಾಭನನ್ನು ಕುರಿತು ಎಲೈ ಕುಶನಾಭನೆ, ನಿನಗೆ ಮಹಾಧರ್ಮಾತ್ಮನಾದ ಗಾಧಿಯೆಂಬ ಕುಮಾರನು ಜನಿಸುವನು. **ಮುಂದುವರಿಯುವುದು...**

# 'ಇ' ಆಡಳಿತ ಕ್ರಮಕ್ಕೆ ಸಚಿವ ರಾಮಲಿಂಗಾ ರೆಡ್ಡಿ ಸೂಚನೆ

## 2025ರ ಜನವರಿ ಅಥವಾ ಫೆಬ್ರವರಿಯಿಂದ ಹೊಸ ಸ್ಮಾರ್ಟ್ ಕಾರ್ಡ್ ಯೋಜನೆ ಅನುಷ್ಠಾನ ಪ್ರಕ್ರಿಯೆ

• ಉದಯವಾಹಿನಿ ಬೆಂಗಳೂರು

ಡ್ರೈವಿಂಗ್ ಲೈಸೆನ್ಸ್ (DL) ಹಾಗೂ ವಾಹನ ನೋಂದಣಿ (RC) ಕಾರ್ಡ್‌ಗಳನ್ನು ಇನ್ನಷ್ಟು ಹೈಟೆಕ್ ಹಾಗೂ ಗುಣ ಮಟ್ಟದ ರೂಪದಲ್ಲಿ ಕೊಡಲು ಸಾರಿಗೆ ಇಲಾಖೆ ಯೋಜನೆ ಸಿದ್ಧಪಡಿಸಿದೆ. ಕ್ಯೂಆರ್ ಕೋಡ್ ಮತ್ತು ಚಿಪ್ ಆಧಾರಿತ ಕಾರ್ಡ್‌ಗಳು ವಿತರಣೆಯಾಗಲಿದ್ದು, 2025ರ ಜನವರಿ ಅಥವಾ ಫೆಬ್ರವರಿಯಿಂದ ಹೊಸ ಸ್ಮಾರ್ಟ್ ಕಾರ್ಡ್ ಯೋಜನೆ ಅನುಷ್ಠಾನ ಪ್ರಕ್ರಿಯೆ ಆರಂಭವಾಗಲಿದೆ.ಈ ಕುರಿತು ಇ ಆಡಳಿತ ಕ್ರಮಕ್ಕೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಸೂಚನೆ ನೀಡಿದ್ದಾರೆ.

ಪ್ರಸ್ತುತ ಕೊಡುತ್ತಿರುವ ಆರ್‌ಸಿ ಹಾಗೂ ಡಿಎಲ್‌ಗಳು ಪಾಲಿ ವಿನ್ವೈಲ್ ಕ್ಲೋರೈಡ್ (ಪಿವಿಸಿ) ಕಾರ್ಡ್‌ಗಳಾಗಿವೆ. ಹೊಸ ಯೋಜನೆಯಲ್ಲಿ ಪಾಲಿ ಕಾರ್ಬನೇಟ್ ಕಾರ್ಡ್ (ಪಿಸಿಸಿ)ಗಳನ್ನು ವಿತರಣೆ ಮಾಡಲಾಗುತ್ತದೆ. ಇವು ಬ್ಯಾಂಕ್‌ಗಳು ವಿತರಿಸುವ ಕಾರ್ಡ್‌ಗಳ ಮಾದರಿಯಲ್ಲಿ ಅತ್ಯಂತ ಉತ್ತಮ ಗುಣಮಟ್ಟದ ಕಾರ್ಡ್‌ಗಳಾಗಿರುತ್ತವೆ.



ಉದಯವಾಹಿನಿ ಚಿತ್ರ

ಮೊದಲಿನ ಕಾರ್ಡ್‌ಗಳಲ್ಲಿ ಹಳೆಯದಾಗುತ್ತಿದ್ದಂತೆ ಕಾರ್ಡ್ ಮೇಲಿರುವ ಅಕ್ಷರಗಳು ಅಳಿಸಿ ಹೋಗುತ್ತಿತ್ತು. ಆದರೆ, ಪಿಸಿಸಿ ಕಾರ್ಡ್‌ಗಳಲ್ಲಿ ಲೇಸರ್ ಇನ್‌ಗ್ರೇಡಿಂಗ್ ಇರುವುದರಿಂದ ಎಷ್ಟೇ ವರ್ಷಗಳಾದರೂ ಅಕ್ಷರಗಳು ಅಳಿಸಿ ಹೋಗುವುದಿಲ್ಲ. ಕಾರ್ಡ್‌ಗಳು ಸಹ ಮುರಿಯುವ ಸಾಧ್ಯತೆ ಕಡಿಮೆ. ಹೊಸ ಸ್ಮಾರ್ಟ್ ಕಾರ್ಡ್ ಯೋಜನೆಗೆ ಈಗಾಗಲೇ ಟೆಂಡರ್ ಆಹ್ವಾನಿಸಿದ್ದು, ಅದರಂತೆ ಟೆಂಡರ್ ಪ್ರಕ್ರಿಯೆಗಳು ಮುಂದುವರಿದಿದೆ. ಈವರೆಗೆ ಸ್ಮಾರ್ಟ್ ಕಾರ್ಡ್‌ಗಳಲ್ಲಿ ಬರೀ ಚಿಪ್ ವ್ಯವಸ್ಥೆ ಇತ್ತು. ಹೊಸ ಕಾಡ್‌ಗಳಲ್ಲಿ ಚಿಪ್ ಜತೆಗೆ ಕ್ಯೂಆರ್ ಕೋಡ್ ಸಹ ಇರಲಿದೆ. ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ಡಿಎಲ್ ಹಾಗೂ ಆರ್‌ಸಿ ಕಾರ್ಡ್‌ನಲ್ಲಿರುವ ಪ್ರಾಥಮಿಕ ಮಾಹಿತಿ ತಕ್ಷಣವೇ ಸಿಗಲಿದೆ. ಸಂಪೂರ್ಣ ಮಾಹಿತಿ ಬೇಕಾದರೆ ಚಿಪ್ ಕಾರ್ಡ್ ರೀಡರ್ ಬಳಸಿ ನೋಡಬಹುದು. ಸ್ಮಾರ್ಟ್ ಕಾರ್ಡ್ ಪ್ರಿಂಟಿಂಗ್ ವ್ಯವಸ್ಥೆಯನ್ನು ಆಯಾ ಆರ್‌ಟಿಒ ಕಚೇರಿಯಲ್ಲೇ ಮಾಡಲಾಗಿತ್ತು.

ಆದರೆ, ಹೊಸ ಯೋಜನೆಯಲ್ಲಿ ಶಾಂತಿನಗರದಲ್ಲಿರುವ ಸಾರಿಗೆ ಆಯುಕ್ತರ ಕೇಂದ್ರ ಕಚೇರಿಯಲ್ಲೇ ಕೇಂದ್ರೀಕೃತ ವ್ಯವಸ್ಥೆ ಮಾಡಲಾಗುವುದು. ಒಂದೇ ಕಡೆ ಮುದ್ರಿಸಿ ಎಲ್ಲಾ ಆರ್‌ಟಿಒ ಕಚೇರಿಗಳಿಗೆ ಪೂರೈಕೆ ಮಾಡಲಾಗುವುದು.

ವಾಹನ ಮಾಲೀಕನ ಹೆಸರು, ವಿಳಾಸ, ಫೋಟೋ, ಜನ್ಮ ದಿನಾಂಕ, ಸಿಂಧುತ್ವ ಅವಧಿ, ಮೊಬೈಲ್ ಸಂಖ್ಯೆ ಸೇರಿ 25ಕ್ಕೂ ಹೆಚ್ಚು ವಿವರ ಡಿಎಲ್‌ನಲ್ಲಿ ಇರಲಿದೆ. ಆರ್‌ಸಿ ಕಾರ್ಡ್‌ನಲ್ಲಿ ವಾಹನ ಮಾದರಿ, ನೋಂದಣಿ ದಿನಾಂಕ, ತಯಾರಿಕಾ ದಿನ, ಮಾಲೀಕರ ವಿವರ, ತಯಾರಿಕಾವಿವರ, ಇಂಜಿನ್ ನಂಬರ್, ಚಾಸ್ಸಿ ನಂಬರ್, ನೋಂದಣಿ ಸಂಖ್ಯೆ ಇನ್ನಿತರ ಮಾಹಿತಿ ಇರಲಿದೆ.

- ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿದರೆ ವಾಹನ, ಮಾಲೀಕರ ವಿವರ ಲಭ್ಯವಾಗುತ್ತದೆ.
- ಅಪಘಾತ, ಕಳ್ಳತನ, ಸಂಚಾರ ನಿಯಮ ಉಲ್ಲಂಘನೆ ವೇಳೆ ಪರಿಶೀಲನೆಗೆ ಉಪಯುಕ್ತವಾಗಿದೆ
- ವಾಹನ ಹಾಗೂ ವಾಹನ ಮಾಲೀಕರ ಮಾಹಿತಿ ದೃಢೀಕರಣ ಪೊಲೀಸರಿಗೆ ಸುಲಭ ಕಾರ್ಯ
- ಕಾರ್ಡ್‌ಗಳಲ್ಲಿರುವ ಅಕ್ಷರ ಅಳಿಸಿ ಹೋಗಲ್ಲ, ಮುರಿದು ಹೋಗುವ ಸಾಧ್ಯತೆಯೂ ಕಡಿಮೆ
- ಹಳೇ ಕಂಪ್ಯೂಟರ್. ಪ್ರಿಂಟರ್‌ಗಳಿಂದ ತುಂಬಿರುವ ಕಚೇರಿಗಳಿಗೆ ಹೈಟೆಕ್ ಸೌಲಭ್ಯ ಇದರಿಂದ ಇ ಆಡಳಿತ ಸೇವೆಗೆ ಬಲ
- ಕೇಂದ್ರೀಕೃತ ವ್ಯವಸ್ಥೆ ಜಾರಿಯಿಂದ ಸ್ಮಾರ್ಟ್ ಕಾರ್ಡ್ ಪೂರೈಕೆಯಲ್ಲಿ ವ್ಯತ್ಯಾಸ ಆಗುವುದಿಲ್ಲ.

# ಹಿಂದೂ ಜನಜಾಗೃತಿ ಸಮಿತಿಯಿಂದ ಶಾಲಾ ಮಕ್ಕಳಿಗೆ ಸಂಸ್ಕಾರ ನೋಟ್ ಬುಕ್ ವಿತರಣೆ

• ಉದಯವಾಹಿನಿ ಬೆಂಗಳೂರು

ಮೂಡಲಪಾಳ್ಯದ ಸರಸ್ವತಿನಗರದ ಸ್ವಾಮಿ ವಿವೇಕಾನಂದ ಶಾಲೆಯಲ್ಲಿನ ಮಕ್ಕಳಿಗೆ ಹಿಂದೂ ಜನಜಾಗೃತಿ ಸಮಿತಿ ವತಿಯಿಂದ 'ಸಮಾಜ ಸಹಾಯ' ಅಭಿಯಾನದ ಅಡಿಯಲ್ಲಿ ಸಂಸ್ಕಾರ ನೋಟ್ ಬುಕ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಕಾರ್ಯಕರ್ತರಾದ ಸೌ. ಸವಿತ ಕ್ಷಾತ್ರ ಇವರು ಮಕ್ಕಳಿಗೆ ನಾವು ಅಭ್ಯಾಸಕ್ಕಿಂತ ಮೊದಲು ದೇವರ ಪ್ರಾರ್ಥನೆಯನ್ನು ಮಾಡಿದರೆ ನಮ್ಮ ಸ್ಮರಣ ಶಕ್ತಿ ಮತ್ತು ಏಕಾಗ್ರತೆ ಹೆಚ್ಚಾಗುತ್ತದೆ. ನಾವು ಸುಸಂಸ್ಕಾರ ಬೆಳೆಸಿಕೊಳ್ಳುವುದರ ಮೂಲಕ ದೇಶಕ್ಕೆ ಒಳ್ಳೆಯ ಪ್ರಜೆಗಳಾಗುತ್ತೇವೆ ಎಂದು ವಿದ್ಯಾರ್ಥಿಗಳಿಗೆ ಪ್ರಬೋಧನೆ ನೀಡಿದರು. ಈ ವೇಳೆ ಸಮಿತಿಯ ಕಾರ್ಯಕರ್ತರಾದ ಸೌ. ಶರಾವತಿ, ಸೌ. ಸಂಧ್ಯಾ, ಶ್ರೀಮತಿ ರಜನಿ, ಸೌ. ತೇಜಸ್ವಿನಿ, ಸೌ. ಪುಷ್ಪ, ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಹಿಂದೂ ಜನಜಾಗೃತಿ ಸಮಿತಿಯು ಕಳೆದ 22 ವರ್ಷಗಳಿಂದ ಸಮಾಜದಲ್ಲಿನ ಜನರಿಗೆ ರಾಷ್ಟ್ರಪ್ರೇಮ, ಧರ್ಮಜಾಗೃತಿಯ ಕಾರ್ಯವನ್ನು ಮಾಡುತ್ತಾ ಬಂದಿದೆ. ನೈತಿಕ ಮೌಲ್ಯಗಳಿಂದ ಭ್ರಷ್ಟವಾಗುತ್ತಿರುವ ಸಮಾಜಕ್ಕೆ ಧರ್ಮಶಿಕ್ಷಣದ ಮೂಲಕ ಧರ್ಮಪ್ರೇಮವನ್ನು ಜಾಗೃತ ಗೊಳಿಸುವ ಕಾರ್ಯವನ್ನು ಸಮಿತಿಯು ಮಾಡುತ್ತಿದೆ. ಈ ಸಂಸ್ಕಾರ ನೋಟ್ ಬುಕ್ಕಿನಲ್ಲಿ ಝಾನ್ಸಿರಾಣಿ ಲಕ್ಷ್ಮೀ ಬಾಯಿ, ಕಿತ್ತೂರು ರಾಣಿಚೆನ್ನಮ್ಮ ರಂತಹ ವೀರ ವನಿತೆಯರ, ಛತ್ರಪತಿ ಶಿವಾಜಿ ಮಹಾರಾಜರು, ಶ್ರೀ ಕೃಷ್ಣ ದೇವರಾಯರಂತಹ ಧರ್ಮನಿಷ್ಠರು, ಆಯುರ್ವೇದ ಪಿತಾಮಹ ಚರಕ ಹಾಗೂ ಹಲವಾರು ಸ್ವಾತಂತ್ರ್ಯ ಹೋರಾಟಗಾರರ ರಾಷ್ಟ್ರ ಪ್ರೇಮದ ಮಾಹಿತಿಗಳನ್ನು ಒಳಗೊಂಡಿದೆ.



ಉದಯವಾಹಿನಿ ಚಿತ್ರ

ಸಮಾಜಕ್ಕೆ ಧರ್ಮಶಿಕ್ಷಣದ ಮೂಲಕ ಧರ್ಮಪ್ರೇಮ

# ಧರ್ಮ ಕೀರ್ತಿರಾಜ್‌ಗೆ ನಾಲಾಯಕ್ ಪಟ್ಟ

• ಉದಯವಾಹಿನಿ ಬೆಂಗಳೂರು

ತರಲೆ, ತುಂಟಾಟ, ಮನಸ್ತಾಪದಿಂದಲೇ ಕಿರುತೆರೆ ಲೋಕದಲ್ಲಿ ಸಾಕಷ್ಟು ಸದ್ದು ಮಾಡಿರುವ ಕನ್ನಡದ ಜನಪ್ರಿಯ ರಿಯಾಲಿಟಿ ಶೋ ಬಿಗ್‌ಬಾಸ್ ಮನರಂಜನೆಯ ಫ್ಯಾಕ್ಟರ್ ಎಂದೇ ಹೇಳಲಾಗಿದ್ದು, ಒಂದಿಲ್ಲೊಂದು ಕಾರಣಕ್ಕೆ ಜನರ ಗಮನ ಸೆಳೆಯುತ್ತಿದೆ. ಇನ್ನು ವಾರಾಂತ್ಯದಲ್ಲಿ ನಿರೂಪಕ ಕಿಚ್ಚ ಸುದೀಪ್ ನಡೆಸಿಕೊಡುವ ಪಂಚಾಯ್ತಿಯಲ್ಲಿ ಮನೆಯಲ್ಲಿ ನಡೆದ ಬೆಳವಣಿಗೆಗಳ ಬಗ್ಗೆ ಮಾತನಾಡಲಾಗುವುದು.

ಅದರಂತೆ ಸುದೀಪ್ ಅವರು ಸ್ಪರ್ಧಿಗಳಿಗೆ ಟಾಸ್ಕ್ ಮತ್ತು ಪ್ರಶ್ನೆಗಳನ್ನು ಕೇಳುತ್ತಾರೆ. ಆದರೆ, ಇದೀಗ ಸುದೀಪ್ ಕೇಳಿರುವ ಪ್ರಶ್ನೆ ಸ್ಪರ್ಧಿ ಧರ್ಮ ಅವರ ಮನಸ್ಸನ್ನು ನುಚ್ಚು ನೂರು ಮಾಡಿದೆ. ಸದ್ಯ ಬಿಡುಗಡೆಯಾಗಿರುವ ಪ್ರೋಮೋ ನೋಡುವುದಾದರೆ ನಿರೂಪಕ ಸುದೀಪ್ ಅವರು ಮನೆಮೆಚ್ಚಿದ ನಾಲಾಯಕ್ ಎಂದು ಸ್ಪರ್ಧಿಗಳಿಗೆ ಪ್ರಶ್ನೆ ಕೇಳುತ್ತಾರೆ.

ಇದಕ್ಕೆ ಉತ್ತರಿಸುವ ಸ್ಪರ್ಧಿಗಳ ಪೈಕಿ ಬಹುತೇಕರು ಧರ್ಮ ಕೀರ್ತಿರಾಜ್ ಅವರ ಹೆಸರನ್ನು ಹೇಳುತ್ತಾರೆ.


ಉದಯವಾಹಿನಿ ಚಿತ್ರ

ಮನೆಯವರು ಅದಕ್ಕೆ ನೀಡಿದ ಕಾರಣ ಕೇಳಿ ಧರ್ಮ ಕೀರ್ತಿರಾಜ್ ಅವರ ಮನಸ್ಸು ಹೊಡೆಯುವಂತೆ ಮಾಡಿದೆ.

ಸುದೀಪ್ ಅವರ ಪ್ರಶ್ನೆಗೆ ಹನುಮಂತು, ಭವ್ಯಾ ಗೌಡ, ಚೈತ್ರಾ ಕುಂದಾಪುರ, ಮೋಕ್ಷಿತಾ ಪೈ, ಹಾಗೂ ಮಂಜು ಮಾತನಾಡಿದ್ದು, ಮುನ್ನುಗ್ಗಿ ಹೋಗುವ ಗುಣ ಇಲ್ಲ ಎಂದು ಹೇಳಿದ್ರು. ಅವರ ತನವನ್ನು ಬಿಟ್ಟು ಕೊಟ್ಟು ಆಟವಾಡ್ತಿದ್ದಾರೆ.

ಟಾಸ್ಕ್ ಆಡುವ ವೇಳೆ ಯಾವ ರೀತಿ ಆಡಬೇಕೆಂದು ನಮ್ಮನ್ನ ಕೇಳಿದ್ರು ಎಂದೆಲ್ಲಾ ಕಾರಣವನ್ನು ನೀಡಿದ್ದಾರೆ. ನಾಲಾಯಕ್ ಅವಾರ್ಡ್ ಪಡೆದ ಧರ್ಮ ಕೀರ್ತಿರಾಜ್ ಅದೇನೋ ಮಹಾನ್ ತಪ್ಪು ನಾನು ಮಾಡಿಲ್ಲ. ಅದೇ ಒಂದು ರೀಸನ್ ಇಟ್ಕೊಂಡು ಪ್ರತಿ ಬಾರಿ ಹೇಳಿದ್ರೆ ನನಗೂ ಬೇಸರವಿದೆ. ಎಲ್ಲರೂ ಅವರ ಫೀಲ್ಡ್ ನಲ್ಲಿ ಕಷ್ಟಪಟ್ಟು ಮುಂದೆ ಬಂದಿರ್ತಾರೆ. ಆ ವರ್ಡ್ ನನಗೆ ತುಂಬಾ ನಾಟಿದೆ, ಮನಸ್ಸಿಗೆ ಚುಚ್ಚಿದೆ ಎಂದು ರಾತ್ರಿ ಸ್ಪರ್ಧಿಗಳಾದ ಶಿಶಿರ್, ಐಶ್ವರ್ಯಾ ಬಳಿ ಹೇಳಿಕೊಂಡಿದ್ದಾರೆ.

> ಮನೆಯವರು ಕೊಟ್ಟ ಅವಾರ್ಡ್‌ನಿಂದ ಘಾಸಿ ಆಯ್ತಾ ಧರ್ಮ ಮನಸ್ಸು ಎಂದ ಶೀರ್ಷಿಕೆಯಡಿ ಪ್ರೋಮೋ ಬಿಡುಗಡೆಯಾಗಿದ್ದು, ವೀಕ್ಷಕರು ಸಂಚಿಕೆಯನ್ನು ವೀಕ್ಷಿಸಲು ಕಾತುರದಿಂದ ಕಾಯುತ್ತಿದ್ದಾರೆ. ಇನ್ನೂ ಈ ವಾರದ ನಾಮಿನೇಷನ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ವೋಟಿಂಗ್ ಲೈನ್ಸ್ ತೆರೆದಿಲ್ಲದಿರುವುದು ವೀಕ್ಷಕರ ತಲೆಕೆಡಿಸಿದೆ. ಈ ವಾರ ಬಿಗ್‌ಬಾಸ್ ಎಲಿಮಿನೇಷನ್ ಇದೆಯಾ ಇಲ್ಲವಾ ಎಂದು ಕಾದು ನೋಡಬೇಕಿದೆ.

# ಹೋಟೆಲ್, ಬೇಕರಿಗಳಿಗೆ ಫೋಸ್ಟಾಕ್ ಪ್ರಮಾಣಪತ್ರ ಕಡ್ಡಾಯ

• ಉದಯವಾಹಿನಿ ಬೆಂಗಳೂರು

ಆಹಾರ ಕಲಬೆರಕೆ ತಡೆಗೆ, ಹೋಟೆಲ್‌ಗಳಲ್ಲಿ ಗುಣಮಟ್ಟ ಆಹಾರ ಲಭ್ಯತೆ ಉದ್ದೇಶದಿಂದ ಆರೋಗ್ಯ ಇಲಾಖೆ ಅಧೀನದ ಆಹಾರ ಸುರಕ್ಷತೆ, ಗುಣಮಟ್ಟ ಪ್ರಾಧಿಕಾರ, ರಾಜ್ಯದ ಎಲ್ಲಾ ಬಗೆಯ ಹೋಟೆಲ್‌ಗಳು, ಬೇಕರಿಗಳು, ಆನ್‌ಲೈನ್‌ನಲ್ಲಿ ಫುಡ್ ಡೆಲಿವರಿ ಮಾಡುವ ಕಂಪನಿಗಳು ಹಾಗೂ ಪಿಜ್ಜಾ, ಬರ್ಗರ್ ಮಾರಾಟ ಮಾಡುವ ಹೋಟೆಲ್‌ಗಳು ಆಹಾರ ಸುರಕ್ಷತೆ ತರಬೇತಿ ಮತ್ತು ಪ್ರಮಾಣೀಕರಣ (ಫೋಸ್ಟಾಕ್) ಪತ್ರ ಪಡೆಯುವುದು ಕಡ್ಡಾಯಗೊಳಿಸಿದೆ.

ರಾಜ್ಯದಲ್ಲಿ 6 ಲಕ್ಷಕ್ಕೂ ಅಧಿಕ ಆಹಾರ ಉದ್ದಿಮೆಗಳಿಗೆ ಪರವಾನಗಿ ನೀಡಲಾಗಿದೆ. ಅಂದಾಜು 14 ಲಕ್ಷ ಆಹಾರ ಉದ್ದಿಮೆಗಳು ಪ್ರಾಧಿಕಾರದಲ್ಲಿ ನೊಂದಾಣಿ ಮಾಡಿಕೊಂಡಿವೆ. ಸಾರ್ವಜನಿಕರಿಗೆ ಗುಣಮಟ್ಟ ಆಹಾರ ಒದಗಿಸುವುದು ಆಹಾರ ಉದ್ದಿಮೆಗಳ ಕರ್ತವ್ಯ. ಆದರೆ, ಬಹುತೇಕ ಹೋಟೆಲ್, ರಸ್ತೆಬದಿಯಲ್ಲಿ ಮಾರಾಟ ಮಾಡುವವರು ಆಹಾರ, ಸಿಹಿ, ಖಾರ ತಿನಿಸು, ಕರಿದ ಪದಾರ್ಥಗಳಲ್ಲಿ ರುಚಿ ಹೆಚ್ಚಿಸಲು, ಬಣ್ಣದಿಂದ ಆಕರ್ಷಿಸಲು ಅಪಾಯಕಾರಿ ರಾಸಾಯನಿಕ ಅಂಶ ಬಳಸಿ ಕಲಬೆರಕೆ ಆಹಾರ ಮಾರಾಟ ಮಾಡುತ್ತಿದ್ದಾರೆ. ಕಲಬೆರಕೆ ಆಹಾರ ಮತ್ತು ಗಂಭೀರ ರೋಗಗಳ ಪ್ರಮಾಣ ತಡೆಯುವ ಉದ್ದೇಶದಿಂದ ಪ್ರಾಧಿಕಾರವೂ, ಕಾನೂನಿನ ಅನ್ವಯ ಪ್ರತಿ ಆಹಾರ ಉದ್ಯಮಗಳು ಫೋಸ್ಟಾಕ್ ಪಡೆಯುವಂತೆ ನಿಯಮ ಜಾರಿಗೆ ತಂದಿದೆ. ಕಾಯ್ದೆ ಅನ್ವಯ 2006ರಿಂದ ಎಲ್ಲಾ ಆಹಾರ ಉದ್ದಿಮೆದಾರರು ಫೋಸ್ಟಾಕ್ ಪ್ರಮಾಣಪತ್ರ ಪಡೆಯುವುದು ಕಡ್ಡಾಯವಾಗಿದೆ. ಈ ಬಗ್ಗೆ 2017ರಲ್ಲಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ರಸ್ತೆ ಬದಿ ಹೋಟೆಲ್ ನಡೆಸುತ್ತಿರುವವರು ಸೇರಿ ಎಲ್ಲಾ ಬಗೆಯ ಹೋಟೆಲ್ ಮಾಲೀಕರು ಕಡ್ಡಾಯವಾಗಿ ಆಹಾರ ವ್ಯಾಪಾರ ನಿರ್ವಾಹಕರಿಗೆ (ಎಫ್‌ಬಿಒ)ಫೋಸ್ಟಾಕ್ ಪತ್ರ ಪಡೆಯಬೇಕು. ಪ್ರತಿ ಆಹಾರ ವ್ಯಾಪಾರದ ಕಾರ್ಯಾಚರಣಾ ಆವರಣದ ಆಹಾರ ವಿತರಣೆಯಲ್ಲಿ ಎಲ್ಲಾ ಅಥವಾ ಕನಿಷ್ಠ 5 ಆಹಾರ ನಿರ್ವಾಹಕರು ಕಡ್ಡಾಯವಾಗಿ ತರಬೇತಿ ಪಡೆಯಬೇಕು. ಪರವಾನಗಿ ಅಥವಾ ನೋಂದಣಿ ಸಂದರ್ಭದಲ್ಲಿ ಫೋಸ್ಟಾಕ್ ಪ್ರಮಾಣ ಪತ್ರವನ್ನು ಅಗತ್ಯ ದಾಖಲೆ ಎಂದು ಪರಿಗಣಿಸಲಾಗಿದೆ.




> ಆಯಾ ಜಿಲ್ಲೆಯ ಜಿಲ್ಲಾಧಿಕಾರಿ, ಇಲಾಖೆಗಳ ಆಯುಕ್ತರು, ಆಹಾರ ಸುರತಾಧಿಕಾರಿಗಳು ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಫೋಸ್ಟಾಕ್ ಪ್ರಮಾಣೀಕರಣ ಕಡ್ಡಾಯವಾಗಿ ಜಾರಿಗೊಳಿಸಲಾಗಿದೆ. ಸೂಕ್ತ ತರಬೇತಿ ಪಡೆದ ನಂತರ ವ್ಯಾಪಾರ ನಡೆಸುವ ಸ್ಥಳಗಳಲ್ಲಿ ಪ್ರಮಾಣಪತ್ರವನ್ನು ಪ್ರದರ್ಶಿಸುವಂತೆ ನೋಡಿಕೊಳ್ಳಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಗ್ಲೋಬಲ್ ಇನ್‌ಸ್ಟಿಟ್ಯೂಟ್ ಫಾರ್ ಎಜುಕೇಶನ್ ಬೆಂಗಳೂರು ಸಂಸ್ಥೆಯನ್ನು ಅಧಿಕೃತ ಮತ್ತು ಪ್ರಮಾಣೀಕೃತವಾಗಿ ಫೋಸ್ಟಾಕ್ ಸೇವಾ ಪೂರೈಕೆದಾರೆಂದು ಗುರುತಿಸಲಾಗಿದೆ.

ಪ್ರಮಾಣ ಪತ್ರ ನೀಡುವ ಮುನ್ನ ನಿಗದಿತ ಶುಲ್ಕ ಕಟ್ಟಿಸಿಕೊಂಡು ಕೇಂದ್ರ ಸರ್ಕಾರದ ನೋಂದಾಯಿತ ತರಬೇತಿದಾರರಿಂದ ಒಂದು ದಿನ ಗುಣಟಮಟ್ಟ ಆಹಾರ ಕುರಿತು ಸೂಕ್ತ ತರಬೇತಿ ನಡೆಸಲಾಗುತ್ತದೆ. ಇದಾದ ಬಳಿಕ ಪರೀಕ್ಷೆ ನಡೆಸಿ ವಾರದೊಳಗೆ ಫೋಸ್ಟಾಕ್ ಪ್ರಮಾಣ ಪತ್ರ ನೀಡಲಾಗುತ್ತದೆ.

# ವಿಧಾನಸೌಧ ಮುಂಭಾಗದಲ್ಲೇ ಭುವನೇಶ್ವರಿ ಪ್ರತಿಮೆ ನಿರ್ಮಿಸಿ

• ಉದಯವಾಹಿನಿ ಬೆಂಗಳೂರು

ವಿಧಾನಸೌಧ ಆವರಣದಲ್ಲಿ 25 ಅಡಿ ಎತ್ತರದ ನಾಡದೇವತೆ ತಾಯಿ ಭುವನೇಶ್ವರಿ ಪ್ರತಿಮೆಯನ್ನು ಸ್ಥಾಪಿಸುವುದಾಗಿ ಸಿಎಂ ಸಿದ್ದರಾಮಯ್ಯ ಘೋಷಿಸಿರುವುದು ಕನ್ನಡಿಗರಿಗೆ ಹೆಮ್ಮೆ ತಂದಿದೆ. ಆದರೆ, ಈ ಪ್ರತಿಮೆಯನ್ನು ವಿಧಾನಸೌಧ ಹಿಂಭಾಗದ ಬದಲು ಮುಂಭಾಗದಲ್ಲಿ ಪ್ರತಿಷ್ಠಾಪಿಸಬೇಕೆಂದು 'ನೈಜ ಹೋರಾಟಗಾರರ ವೇದಿಕೆ' ಸರ್ಕಾರವನ್ನು ಒತ್ತಾಯಿಸಿದೆ.


ಉದಯವಾಹಿನಿ ಚಿತ್ರ

ವಿಕಾಸಸೌಧ ಹಾಗೂ ವಿಧಾನಸೌಧ ಮಧ್ಯೆ ಪ್ರತಿಷ್ಠಾಪಿಸಿರುವ ಮಹಾತ್ಮ ಗಾಂಧಿ ಪ್ರತಿಮೆಯು ಸಾರ್ವಜನಿಕರ ಗಮನ ಸೆಳೆಯುತ್ತಿದೆ. ಅಂಬೇಡ್ಕರ್, ಜವಹರಲಾಲ್ ನೆಹರು, ನಾಡಪ್ರಭು ಕೆಂಪೇಗೌಡ ಹಾಗೂ ಜಗದ್ಗುರು ಬಸವಣ್ಣ ಅವರ ಪ್ರತಿಮೆಯನ್ನು ವಿಧಾನಸೌಧ ಮುಂಭಾಗದಲ್ಲಿ ಪ್ರತಿಷ್ಠಾಪಿಸಲಾಗಿದೆ. ಹಾಗಾಗಿ, ಕನ್ನಡಿಗರ ಹೆಮ್ಮೆಯ ಪ್ರತಿಕವಾದ ಭುವನೇಶ್ವರಿ ಪ್ರತಿಮೆಯನ್ನು ವಿಧಾನಸೌಧದ ಮೆಟ್ಟಿಲುಗಳ ಮುಂಭಾಗದ ಜಾಗದಲ್ಲೇ ಪ್ರತಿಷ್ಠಾಪಿಸಬೇಕು. ವಿಧಾನಸೌಧದ ಹಿಂಭಾಗದಲ್ಲಿ ಪ್ರತಿಷ್ಠಾಪಿಸಿದರೆ ನ್ಯಾಯ ಸಮ್ಮತವಲ್ಲ ಮತ್ತು ಇದು ಕನ್ನಡಿಗರಿಗೆ ಮಾಡುವ ದ್ರೋಹವಾಗಲಿದೆ. ವಿಧಾನಸೌಧಕ್ಕೆ ಬರುವವರಿಗೆ ಪ್ರತಿಮೆ ಸಮರ್ಪಕವಾಗಿ ಕಾಣುವುದಿಲ್ಲ ಎಂದು ವೇದಿಕೆ ಅಧ್ಯಕ್ಷ ಎಚ್.ಎಂ. ವೆಂಕಟೇಶ ಹೇಳಿದ್ದಾರೆ.

ದೆಹಲಿ ಮೂಲದ ಕಲಾವಿದರಿಗೆ ಪ್ರತಿಮೆ ನಿರ್ಮಾಣದ ಗುತ್ತಿಗೆ ಕೊಟ್ಟಿರುವುದು ಸರಿಯಲ್ಲ. ರಾಜ್ಯದಲ್ಲಿ ಸಾಕಷ್ಟು ಒಳ್ಳೆಯ ಕಲಾವಿದರಿದ್ದು, ಪ್ರತಿಮೆ ನಿರ್ಮಾಣ ಕಾರ್ಯವನ್ನು ಕನ್ನಡಿಗರಿಗೆ ನೀಡಬೇಕಿತ್ತು ಎಂದರು.

# ತಿರುಗಿ ಬಿದ್ದ ಶಾಸಕ, ಸರ್ಕಾರಕ್ಕೆ ಮುಜುಗರ!

## ಸರ್ಕಾರದ ವಿರುದ್ಧ ಮತ್ತೊಬ್ಬ ಪ್ರಭಾವಿ ಕಾಂಗ್ರೆಸ್ ಶಾಸಕ ತಿರುಗಿ ಬಿದ್ದಿದ್ದಾರೆ

• ಉದಯವಾಹಿನಿ ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರದ ಟೈಮ್ ಸರಿ ಇರುವಂತೆ ಇಲ್ಲ. ಇತ್ತೀಚಿನ ದಿನಗಳಲ್ಲಿ ಒಂದಿಲ್ಲ ಒಂದು ಸಂಕಷ್ಟದಲ್ಲಿ ರಾಜ್ಯ ಸರ್ಕಾರ ಸಿಕ್ಕಿ ಹಾಕಿಕೊಳ್ಳುತ್ತಲ್ಲೇ ಇದೆ. ಇನ್ನೂ ಕೆಲವು ಸಮಸ್ಯೆಗಳನ್ನು ರಾಜ್ಯ ಸರ್ಕಾರವೇ ಎಳೆದುಕೊಳ್ಳುತ್ತಿದೆ. ಇದೀಗ ಇನ್ನೇನು ಉಪ ಚುನಾವಣೆ ಬಂದೇ ಬಿಡ್ತು ಎನ್ನುವಾಗಲೇ ಕಾಂಗ್ರೆಸ್‌ನ ಪ್ರಭಾವಿ ಶಾಸಕರೇ ರಾಜ್ಯ ಸರ್ಕಾರದ ವಿರುದ್ಧ ತಿರುಗಿ ಬಿದ್ದಿದ್ದಾರೆ.ಇದು ರಾಜ್ಯ ಸರ್ಕಾರ ಹಾಗೂ ಸಚಿವರಿಗೆ ಇನ್ನಿಲ್ಲದಂತೆ ಮುಜುಗರವನ್ನುಂಟು ಮಾಡಿದೆ.

ರಾಜ್ಯದಲ್ಲಿ ಕೆಲವು ಸಚಿವರು ನಮ್ಮ ಮಾತೇ ಕೇಳ್ತಿಲ್ಲ. ನಮಗೆ ಗೌರವ ಕೊಡ್ತಿಲ್ಲ. ಅಲ್ಲದೇ ಅನುದಾನ ಹಾಗೂ ನಮ್ಮ ಕೆಲಸ ಮಾಡಿಕೊಡ್ತಿಲ್ಲ ಅಂತ ಈಗಾಗಲ ಹಲವು ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೀಗ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಮತ್ತೊಬ್ಬ ಪ್ರಭಾವಿ ಕಾಂಗ್ರೆಸ್ ಶಾಸಕರೇ ತಿರುಗಿ ಬಿದ್ದಿದ್ದಾರೆ. ಇದು ರಾಜ್ಯ ಸರ್ಕಾರಕ್ಕೆ ಬಿಸಿ ತುಪ್ಪವಾಗಿ ಪರಿಣಮಿಸಿದೆ.

ಈ ರೀತಿ ಕಾಂಗ್ರೆಸ್‌ನ ಒಬ್ಬೊಬ್ಬರೇ ಶಾಸಕರು ಆರೋಪ ಮಾಡುತ್ತಿರುವುದನ್ನು ನೋಡಿದರೆ, ಕಾಂಗ್ರೆಸ್‌ನಲ್ಲಿ ಎಲ್ಲವೂ ಸ್ಪಷ್ಟವಾಗಿಲ್ಲ ಎನ್ನುವುದು ತೋರಿಸುತ್ತದೆ. ಅದರಲ್ಲೂ ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಉಪ ಚುನಾವಣೆ ತೀರ ಸಮೀಪಿಸಿದೆ. ಈಗ ಕಾಂಗ್ರೆಸ್ ಶಾಸಕರೊಬ್ಬರು ಗಂಭೀರ ಆರೋಪ ಮಾಡಿದ್ದಾರೆ. ಕಾಂಗ್ರೆಸ್‌ನಲ್ಲಿ ಹಾಗೂ ಜಿಲ್ಲೆಯಲ್ಲೇ ನಾನೇ ಹಿರಿಯ. ನಾನು ಈ ಭಾಗದ ಹಿರಿಯ ಶಾಸಕನೂ ಹೌದು ಆದರೆ, ನಂಗೇ ಕ್ಯಾರೇ ಅಂತಿಲ್ಲ. ಜಿಲ್ಲೆಯ ವಿವಿಧ ಅಭಿವೃದ್ಧಿ ವಿಚಾರ ಹಾಗೂ ಪಕ್ಷದ ವಿಚಾರಗಳಲ್ಲಿ ನನ್ನನ್ನು ಲೆಕ್ಕಕ್ಕೆ ತೆಗೆದುಕೊಳ್ಳುತ್ತಿಲ್ಲ ಎಂದು ಶಾಸಕ ಹಾಗೂ ಕೆಯುಐಡಿಎಫ್ ಮಂಡಳಿ ಅಧ್ಯಕ್ಷ ಎಸ್.ಎನ್ .ನಾರಾಯಣಸ್ವಾಮಿ ಅವರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

ಅಷ್ಟೇ ಅಲ್ಲ ರಾಜ್ಯದ ಪ್ರಭಾವಿ ಸಚಿವರಲ್ಲಿ ಒಬ್ಬರಾಗಿರುವ ಹಾಗೂ ಕೋಲಾರ ಉಸ್ತುವಾರಿ ಸಚಿವ ಬೈರತಿ ಸುರೇಶ್ ವಿರುದ್ಧ ತಿರುಗಿ ಬಿದ್ದಿದ್ದಾರೆ. ಪಕ್ಷ ಸಂಘಟನೆ ಹಾಗೂ ಅಭಿವೃದ್ಧಿ ವಿಚಾರದಲ್ಲಿ ನನ್ನ ಮಾತನ್ನು ಪರಿಗಣಿಸುತ್ತಿಲ್ಲ ಎಂದು ಅವರು ಹೇಳಿದ್ದಾರೆ.

ಅಧಿಕಾರಿಗಳ ವರ್ಗಾವಣೆ ವಿಚಾರದಲ್ಲಿ ನನ್ನ ಮಾತಿಗೆ ಬೆಲೆನೇ ಕೊಡ್ತಿಲ್ಲ. ಕೋಲಾರದಲ್ಲಿ ಒಂದಷ್ಟು ಗುಂಪುಗಳಿವೆ.

ಹೀಗಾಗಿ ಕಾಂಗ್ರೆಸ್ ಕೋಲಾರದಲ್ಲಿ ಹೊಲಸಾಗಿದೆ ಎಂದು ನೇರವಾಗಿಯೇ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಷ್ಟೇ ಅಲ್ಲ ಇಲ್ಲಿ ಯಾರ್ಯಾರೋ ನಾಯಕರಾಗಿದ್ದಾರೆ. ಈಚೆಗೆ ಇಲ್ಲಿ ನಡೆದ ಸಭೆಯಲ್ಲಿ ಗಲಾಟೆ ಆಗಿತ್ತು. ಇದರಿಂದ ನಾವೆಲ್ಲ ತಲೆ ತಗ್ಗಿಸುವಂತಾಗಿದೆ ಎಂದಿದ್ದಾರೆ.

**ನಾನು ಮಂತ್ರಿಯಾಗ್ತೀನಿ ನೋಡ್ತಿರಿ**

> ನಾನು ಸಹ ಮುಂದೆ ಸಚಿವನಾಗ್ತಿನಿ ಅಂತ ಶಾಸಕ ಎಸ್.ಎನ್.ನಾರಾಯಣಸ್ವಾಮಿ ಅವರು ಹೇಳಿದ್ದಾರೆ. ಈಗ ನನಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ಕೊಟ್ಟಿದ್ದಾರೆ. ಎರಡೂವರೆ ವರ್ಷವಾದ ಮೇಲೆ ನನಗೂ ಸಚಿವ ಸ್ಥಾನ ಕೊಡುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭರವಸೆ ಕೊಟ್ಟಿದ್ದಾರೆ ಎಂದಿದ್ದಾರೆ.

ಜಿಲ್ಲೆಯ ವಿವಿಧ ಅಭಿವೃದ್ಧಿ

> ರಾಜ್ಯದಲ್ಲಿ ಒಬ್ಬೊಬ್ಬ ಶಾಸಕರು ಈ ರೀತಿ ರಾಜ್ಯ ಸರ್ಕಾರ ಹಾಗೂ ಪಕ್ಷದ ವಿರುದ್ಧ ಹೇಳಿಕೆಗಳನ್ನು ಕೊಡುತ್ತಿರುವುದು ಕಾಂಗ್ರೆಸ್ ಸರ್ಕಾರಕ್ಕೆ ತೀವ್ರ ಮುಜುಗರವನ್ನು ಉಂಟು ಮಾಡ್ತಿದೆ. ಈಗಾಗಲೇ ಕಾಂಗ್ರೆಸ್‌ನಲ್ಲಿ ಎಲ್ಲವೂ ಸರಿ ಇಲ್ಲ ಎಂದು ವಿರೋಧ ಪಕ್ಷಗಳು ಆರೋಪ ಮಾಡುತ್ತಿದ್ದು, ಇದೀಗ ರಾಜ್ಯದ ಶಾಸಕರೇ ಈ ರೀತಿ ಆರೋಪ ಮಾಡಿರುವುದು. ವಿರೋಧ ಪಕ್ಷಗಳಿಗೆ ಅಸ್ತ್ರಸಿಕ್ಕಂತಾಗಿದೆ.



## ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

**ದಿನಕ್ಕೊಂದು ಮುಕ್ತಕ -21**

ಸಂಬಂಧ ಜೊತೆಯಲ್ಲಿ ಇರುವಾಗ ಖುಷಿಯಲ್ಲಿ
ಬಂಧನವು ಎಲ್ಲಿಯೂ ಇರಲಾರದು
ಚಂದವೈ ಎಲ್ಲಾ ಗೆಳೆತನದಲ್ಲಿ ಸುಖವಿರಲು
ನಂದನವು ಜೀವನವು ಲಕ್ಷ್ಮಿ ದೇವಿ...

ಭಾವಾರ್ಥ : ಸಂಬಂಧವು ಚಂದವಿದ್ದಾಗ ಯಾರು ಏನೇ ಹೇಳಿದರು ಏನೇ ಮಾಡಿದರು ಎಲ್ಲವೂ ಚಂದವಾಗಿರುತ್ತದೆ. ಎಂತಹ ಕಠಿಣವಾದ ವಿಷಯ ವಾದರೂ ಸುಲಭವಾಗಿ ತೆಗೆದು ಕೊಳ್ಳುತ್ತಾರೆ. ಆಗ ಯಾರ ಮೇಲೆ ಬಂಧನವನ್ನು ಹೇರುವುದಿಲ್ಲ. ತಪ್ಪು ಕಲ್ಪನೆಗಳು ಸಹ ಬರುವುದಿಲ್ಲ. ಅಂತಹ ಸಂಬಂಧದಲ್ಲಿ ಎಲ್ಲವೂ ಚಂದವಾಗಿರುತ್ತದೆ ಎಲ್ಲರೂ ಸುಖ-ಶಾಂತಿಯಾಗಿ ಸಂತೋಷದಿಂದ ಜೀವನವನ್ನು ನಡೆಸುತ್ತಾರೆ. ಆಗ ಯಾರೇ ಆಗಲಿ ಅದನ್ನು ನಂದನವನದಂತೆ ಕಲ್ಪಿಸಿ ಜೀವನವನ್ನು ಮಾಡುತ್ತಾರೆ. ಅಷ್ಟರ ಮಟ್ಟಿಗೆ ಸಂತೋಷವನ್ನು ಅಲ್ಲಿ ಪಡೆಯುತ್ತಾರೆ . ಎಲ್ಲೆಡೆ ಸಂತೋಷವಿದ್ದರೆ ಚಂದ. ಅಂತೆಯೇ ನಂಬಿಕೆಯು ಇರಬೇಕು. ಅದೇ ರೀತಿ ಸ್ವಲ್ಪ ಬದಲಾವಣೆ ಏನಾದರೂ ಸಂಬಂಧದಲ್ಲಿ ಆದರೆ ಸ್ವಲ್ಪ ಇರಿಸು ಮುರಿಸು ಆದರೂ ಸಹ ದೊಡ್ಡ ಅಪಚಾರ ಎಸಗಿದಂತೆ ವರ್ತಿಸುತ್ತಾರೆ. ಎಲ್ಲರೂ ಸಂತೋಷದಲ್ಲಿದ್ದರೆ ಸಂಬಂಧವಾಗಲಿ,ಗೆಳೆತನವಾಗಲಿ ಸಂತೋಷದಲ್ಲೇ ಕಳೆಯುತ್ತೇವೆ.


ಹಸಿರು ತುಂಬಿದ ನಂದನವನದಂತೆ ಎಲ್ಲವೂ ಇದ್ದರೆ ಚಂದ. ಬರಡು ಭೂಮಿಯ ರೀತಿಯಲ್ಲಿ ದ್ವೇಷವನ್ನು ತುಂಬಿ ಕೊಳ್ಳದೆ ಎಲ್ಲರೂ ಹೊಂದಾಣಿಕೆಯಲ್ಲಿ ಜೀವಿಸಬೇಕು.

# ಶಿಗ್ಗಾಂವಿ ಉಪಚುನಾವಣೆ; ಬೊಮ್ಮಾಯಿ ವಿರುದ್ಧ ತೊಡೆತಟ್ಟಿದ ಪೈಲ್ವಾನ

## ಕ್ಷೇತ್ರವನ್ನು ಬಿಜೆಪಿ ತೆಕ್ಕೆಯಲ್ಲಿ ಉಳಿಸಿಕೊಳ್ಳಲು ಬೊಮ್ಮಾಯಿ ಕಸರತ್ತು, ಈ ಬಾರಿಯಾದರೂ ಹಿಡಿತ ಸಾಧಿಸಲು ಕೈ ತೀವ್ರ ಪೈಪೋಟಿ

**ಶಿಗ್ಗಾಂವಿ:** ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಬಿಜೆಪಿ–ಕಾಂಗ್ರೆಸ್ ನೇರ ಹಣಾಹಣಿಯಿದೆ. ಕಾಂಗ್ರೆಸ್‌ನಿಂದ ಯಾಸೀರ್ ಅಹಮದ್ ಖಾನ್ ಪಠಾಣ, ಬಿಜೆಪಿಯಿಂದ ಭರತ್ ಬೊಮ್ಮಾಯಿ ಕಣದಲ್ಲಿದ್ದಾರೆ. ಕ್ಷೇತ್ರವನ್ನು ಬಿಜೆಪಿ ತೆಕ್ಕೆಯಲ್ಲಿ ಉಳಿಸಿಕೊಳ್ಳಲು ಬಸವರಾಜ ಬೊಮ್ಮಾಯಿ ಕಸರತ್ತು ನಡೆಸಿದ್ದಾರೆ. ಕ್ಷೇತ್ರದಲ್ಲಿ ಈ ಬಾರಿಯಾದರೂ ಹಿಡಿತ ಸಾಧಿಸಲು ಕಾಂಗ್ರೆಸ್, ತೀವ್ರ ಪೈಪೋಟಿ ಒಡ್ಡುತ್ತಿದೆ.

ಶಿಗ್ಗಾಂವಿ, ಸವಣೂರು ತಾಲ್ಲೂಕು ವ್ಯಾಪ್ತಿಯುಳ್ಳ ಈ ಕ್ಷೇತ್ರ, ಭಾವೈಕ್ಯ ಹಾಗೂ ಸೌಹಾರ್ದಕ್ಕೆ ಹೆಸರಾಗಿದೆ. ಜನಸಂಖ್ಯೆಯಲ್ಲಿ ಲಿಂಗಾಯತರು ಮೊದಲ ಸ್ಥಾನದಲ್ಲಿದ್ದರೆ, ಅಲ್ಪಸಂಖ್ಯಾತರು ಎರಡನೇ ಸ್ಥಾನದಲ್ಲಿದ್ದಾರೆ. ಕುರುಬರು, ಪರಿಶಿಷ್ಟ ಪಂಗಡ–ಪರಿಶಿಷ್ಟ ಜಾತಿ, ಇತರೆ ಸಮುದಾಯದವರು ನಂತರದ ಸ್ಥಾನದಲ್ಲಿದ್ದಾರೆ. 2008ರಲ್ಲಿ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾದ ಬಸವರಾಜ ಬೊಮ್ಮಾಯಿ ಅವರು ಸರ್ವಜನಾಂಗದ ಅಭಿವೃದ್ಧಿಗೆ ಬದ್ಧ' ಎಂದು ಶಪಥ ಮಾಡಿ ನಾಲ್ಕು ಅವಧಿಯೂ ವಿಧಾನಸೌಧ ಪ್ರವೇಶಿಸಿದರು. ಅವರು ಸಂಸದರಾಗಿದ್ದರಿಂದ ತೆರವಾಗಿರುವ ಶಾಸಕ ಸ್ಥಾನಕ್ಕೆ


ಉದಯವಾಹಿನಿ ಚಿತ್ರ

ಉಪ ಚುನಾವಣೆ ನಡೆಯುತ್ತಿದ. ಈಗ ಅವರ ಮಗ ಭರತ್ ಬೊಮ್ಮಾಯಿ ಅವರು ಟೊಂಕಕಟ್ಟಿ ನಿಂತಿದ್ದಾರೆ. ನಮ್ಮದು ಸಾಮಾಜಿಕ ನ್ಯಾಯದ ಪಕ್ಷ' ಎನ್ನುವ ಕಾಂಗ್ರೆಸ್, ಕ್ಷೇತ್ರದಲ್ಲಿ ಎರಡನೇ ಸ್ಥಾನ ದಲ್ಲಿರುವ ಅಲ್ಪಸಂಖ್ಯಾತ ಸಮಯದಾಯದ ಯಾಸೀರ್ ಅಹಮದ್ ಖಾನ್ ಪಠಾಣ ಅವರಿಗೆ ಎರ ಡನೇ ಬಾರಿ ಟಿಕೆಟ್ ನೀಡಿದೆ.

2023ರ ಸಾರ್ವತ್ರಿಕ ಚುನಾವಣೆಯಲ್ಲಿ ಬೊಮ್ಮಾಯಿ ವಿರುದ್ಧ ಸೋತಿದ್ದ ಪಠಾಣ ಅವರಿಗೆ ಎರಡನೇ ಬಾರಿಗೆ ಟಿಕೆಟ್ ಸಿಕ್ಕಿದೆ. ಅವರ ಗೆಲುವಿಗೆ ಸಚಿವರು, ಶಾಸಕರು ಶ್ರಮಿಸುತ್ತಿದ್ದಾರೆ. 'ಪೈಲ್ವಾನ್ ಪಠಾಣ' ಎಂದು ಪ್ರಚಾರ ಮಾಡುತ್ತಿದ್ದಾರೆ.

> ಟಿಕೆಟ್ ಹಂಚಿಕೆ ವಿಚಾರದಲ್ಲಿ ಬಿಜೆಪಿಯ ಶ್ರೀಕಾಂತ ದುಂಡಿಗೌಡ್ರ ಹಾಗೂ ಕಾಂಗ್ರೆಸ್‌ನ ಅಜ್ಜಂಪೀರ ಖಾದ್ರಿ, ಮಂಜುನಾಥ ಕುನ್ನೂರ ಬಂಡಾಯ ಎದ್ದಿದ್ದರು. ಖಾದ್ರಿ ಹಾಗೂ ಕುನ್ನೂರ, ಪಕ್ಷೇತರರಾಗಿ ನಾಮಪತ್ರ ಸಲ್ಲಿಸಿ ನಾಯಕರ ಮನವೊಲಿಕೆ ನಂತರ ವಾಪಸು ಪಡೆದುಕೊಂಡಿದ್ದಾರೆ. ಬಂಡಾಯದ ಬಿಸಿ ಆರಿದಂತೆ ಕಂಡರೂ ಹೊಗೆ ಮಾತ್ರ ನಿಂತಿಲ್ಲ.

ತಂದೆಯ ಕೆಲಸ ನೋಡಿ, ಮತ ನೀಡಿ' ಎಂದು ಭರತ್ ಬೊಮ್ಮಾಯಿ ಪ್ರಚಾರ ಮಾಡಿದರೆ, ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಕೆಲಸ, ಸಿದ್ದರಾಮಯ್ಯ–ಡಿ.ಕೆ. ಶಿವಕುಮಾರ ಮುಖ ನೋಡಿ ಮತ ಹಾಕಿ' ಎಂದು ಯಾಸೀರ್ ಅಹಮದ್ ಪಠಾಣ ಮತ ಯಾಚಿಸುತ್ತಿದ್ದಾರೆ. ಈ ಕ್ಷೇತ್ರವನ್ನು ಹೇಗಾದರೂ ಮಾಡಿ ತಮ್ಮದಾಗಿಸಿಕೊಳ್ಳುವುದು ಸಂಸದ ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪ್ರತಿಷ್ಠೆ ಯಾಗಿದೆ.

> **ಸವಾಲಿಗೆ- ಪ್ರತಿ ಸವಾಲು**
>
> ಚುನಾವಣೆ ಫಲಿತಾಂಶದ ಮೇಲೆ 'ಹೊಗೆ' ಪರಿಣಾಮ ಬೀರಬಹುದು. ಧಾರವಾಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ, ಶಿಗ್ಗಾವಿ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಬಾರಿ ಕಾಂಗ್ರೆಸ್‌ಗೆ ಬಹುಮತ ಸಿಕ್ಕಿದೆ (ಬಿಜೆಪಿಗಿಂತ 8,500 ಹೆಚ್ಚಿನ ಮತಗಳು). ಇದೇ ಫಲಿತಾಂಶ, ಉಪ ಚುನಾವಣೆಯಲ್ಲಿ ಮರುಕಳಿಸಬಹುದೆಂಬ ಲೆಕ್ಕಾಚಾರ ಕಾಂಗ್ರೆಸ್‌ನದ್ದು. 'ಸವಾಲಿಗೆ-ಪ್ರತಿ ಸವಾಲು' ಎಂಬ ಜಿದ್ದಾಜಿದ್ದಿನಲ್ಲಿ ನಡೆಯುತ್ತಿರುವ ಪ್ರಚಾರಗಳಿಂದ ಚುನಾವಣೆ ಕಣ ರಂಗೇರಿದೆ.


ಕ್ಷೇತ್ರದಲ್ಲಿ ಗೆಲುವು ಯಾರಿಗೆ ಎಂಬುದು ಹೇಳುವುದು ಸುಲಭವಲ್ಲ. ಪಕ್ಷಕ್ಕಿಂತ ಬಸವರಾಜ ಬೊಮ್ಮಾಯಿ ವ್ಯಕ್ತಿನಿಷ್ಠೆಯ ಕಟ್ಟಾ ಅಭಿಮಾನಿಗಳು ಕ್ಷೇತ್ರದಲ್ಲಿದ್ದಾರೆ. ಸತತ ಸೋಲು ಕಂಡರೂ ಕಾಂಗ್ರೆಸ್ ಬೇರುಗಳು ಕ್ಷೇತ್ರದಲ್ಲಿ ಚಿಗುರೊಡೆದಿವೆ. ಅತ್ತಿತ್ತ ಪಕ್ಷ ಬದಲಾಯಿಸುವ ಜನರೂ ಹೆಚ್ಚಾಗಿದ್ದಾರೆ. 'ಹಣ–ಹೆಂಡ ಚುನಾವಣೆಯಲ್ಲಿ ಕೆಲಸ ಮಾಡಲಿದೆ' ಎಂದು ಕಾಂಗ್ರೆಸ್–ಬಿಜೆಪಿ, ಪರಸ್ಪರ ಆರೋಪ ಮಾಡು ತ್ತಿವೆ. ನಾಮಪತ್ರ ಸಲ್ಲಿಕೆ ದಿನದಿಂದಲೇ, ತಲೆ ಎಣಿಕೆ ಲೆಕ್ಕ ಶುರುವಾಗಿದೆ.

ಭರತ್ ಅಭ್ಯರ್ಥಿಯಾದರೂ ತಂದೆಯೇ ಹೆಚ್ಚು ಪ್ರಚಾರ ಮಾಡುತ್ತಿದ್ದಾರೆ. ತಂದೆ ಕಟ್ಟಿರುವ ಬಿಜೆಪಿ ಸಾಮ್ರಾಜ್ಯ ಮಗನ ತೆಕ್ಕೆಗೆ ಹೋಗದಂತೆ ನೋಡಿಕೊಳ್ಳಲು, ಪಠಾಣ ಪರವಾಗಿ ಸರ್ಕಾರವೇ ಬಂಡೆಯಂತೆ ನಿಂತಿದೆ. ಬೊಮ್ಮಾಯಿಗೆ ಜೈ ಎನ್ನುವ ಪಡೆ ಕ್ಷೇತ್ರದಲ್ಲಿದ್ದು, ಮಗನಿಗೆ ಪಟ್ಟಾಭಿಷೇಕ ಮಾಡಲು ಕಾಯುತ್ತಿದೆ. ಕಾಂಗ್ರೆಸ್‌ಗೆ ಗೆಲ್ಲುವ ಅವಕಾಶವಿದ್ದರೂ ಬಿಜೆಪಿ ಸುಲಭವಾಗಿ ಕೈ ಚೆಲ್ಲುವುದಿಲ್ಲವೆಂಬುದು ಮತದಾರರಿಗೆ ಗೊತ್ತಿದೆ. ಕಾಂಗ್ರೆಸ್ ಹೆಣೆಯುವ ತಂತ್ರಕ್ಕೆ, ಬಿಜೆಪಿಯೂ ಪ್ರತಿತಂತ್ರ ಹೆಣೆಯುತ್ತಿದೆ. ಕಣದಲ್ಲಿರುವ ಕೆಆರ್‌ಎಸ್ ಪಕ್ಷದ ರವಿ ಕೃಷ್ಣಾರೆಡ್ಡಿ ಹಾಗೂ ಪಕ್ಷೇತರರು ಸೇರಿ 6 ಮಂದಿ, ಮತ ಸೆಳೆಯಲು ಪ್ರಚಾರ ಮಾಡುತ್ತಿದ್ದಾರೆ. ಎಲ್ಲವನ್ನೂ ಮತದಾರರು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ.

# ಐಕ್ಯೂ ಇಂಟರ್ ನ್ಯಾಷನಲ್ ಶಾಲೆಯಲ್ಲಿ ಆರೋಗ್ಯ ಕಾರ್ಯಾಗಾರ

• ಉದಯವಾಹಿನಿ, ಸಿಂಧನೂರು

ತಾಲ್ಲೂಕಿನ ಹೊಸಳ್ಳಿ ( ಇ ಜೆ) ಕ್ರಾಸ್‌ನಲ್ಲಿ ಬರುವ ಐಕ್ಯೂ ಇಂಟರ್ನ್ಯಾಷನಲ್ ಕಾಲೇಜ್‌ನಲ್ಲಿ ನಡೆದ ಹದಿ ಹರೆಯವದವರ ಆರೋಗ್ಯ ಶಿರ್ಷಿಕ ಅಡಿಯಲ್ಲಿ ಶ್ರೀ ನೆಕ್ಕುಂಟಿ ಸೂರ್ಯ ನಾರಾಯಣ ಎಜುಕೇಷನ್ ಟ್ರಸ್ಟ್ ವತಿಯಿಂದ ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಾಗಾರ ಕಾರ್ಯಕ್ರಮಕ್ಕೆ ಆಗಮಿಸಿ ನಂತರ ಮಾತನಾಡಿದ ಶ್ರೀ ತತ್ವ ಶಂಕರ್ ಆಸ್ಪತ್ರೆಯ ಖ್ಯಾತ ವೈದ್ಯರಾದ ಡಾ. ಸಾಮ್ಯ ಪಾಟೀಲ್ ಅವರು ಬದಲಾದ ಜೀವನ್ ಶೈಲಿಯಲ್ಲಿ ಆರೋಗ್ಯದ ಬಗ್ಗೆ ಕಾಳಜಿ ಹಾಗೂ ಆಹಾರ ಪದ್ಧತಿ ಮತ್ತು ಯೋಗ ವ್ಯಾಯಾಮ ದೈಹಿಕ. ಮತ್ತು ಮಾನಸಿಕ ಸಮತೋಲನ ಬಗ್ಗೆ ವಿದ್ಯಾರ್ಥಿನಿಯರಿಗೆ ಸವಿಸ್ತಾರವಾಗಿ ತಿಳಿಸಿದರು.


ಉದಯವಾಹಿನಿ ಚಿತ್ರ

ಹೆಣ್ಣುಮಕ್ಕಳ ತಮ್ಮ ವೈಯಕ್ತಿಕ ಆರೋಗ್ಯ ಬಗ್ಗೆ ಗಮನಹರಿಸಬೇಕು. ಮತ್ತು ವಿದ್ಯಾರ್ಥಿನಿಯರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಇಂತಹಾ ಸಾಮಾಜಿಕ ಕಾರ್ಯಕ್ರಮ ಹಮ್ಮಿಕೊಂಡಿರುವುದು ನಿಜಕ್ಕೂ ಶ್ಲಾಘನೀಯ ಎಂದರೆ ತಪ್ಪಾಗಲಾರದು. ಇವತ್ತಿನ ದಿನಮಾನದಲ್ಲಿ ವಿದ್ಯಾರ್ಥಿನಿಯರು ಆರೋಗ್ಯ ಕಡೆಗೆ ಗಮನ ಹರಿಸಬೇಕು. ಆರೋಗ್ಯದಲ್ಲಿ ಏರುಪೇರು ಕಂಡು ಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಬೇಕು ಎಂದು ಸಂಸ್ಥೆ ಕಾರ್ಯನಿರ್ವಾಹಕ

> ಈ ಸಂದರ್ಭದಲ್ಲಿ ಶಾಲೆಯ ಪ್ರಾಚಾರ್ಯ ರಾದ ರಾಜಶೇಖರ ಗೆಜ್ಜೆ ಅವರು ವಿದ್ಯಾರ್ಥಿನಿಯರು ಕಾಳಜಿ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ಸದಾ ಬದ್ಧರಾಗಿರಬೇಕು ಆಗ ಮಾತ್ರ ಏನಾದರೂ ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ರಾಘವೇಂದ್ರ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಾಲೆಯ ಶಿಕ್ಷಕಿ ಕುಮಾರಿ ಮೈಮುದಾ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ಕುಮಾರಿ ಅರುಣಾ ಬಿ ಆರ್. ಅಥಿತಿ ಪರಿಚಯ ನಿರೂಪಿಸಿ ಶಿಕ್ಷಕಿ ಶ್ರೀಮತಿ ಜ್ಯೋತಿ ಸೇರಿದಂತೆ ಇತತರ ಇದ್ದರು.

# ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಮತಯಾಚನೆ

• ಉದಯವಾಹಿನಿ,ಚಿಂಚೋಳಿ

ಬಳ್ಳಾರಿ ಜಿಲ್ಲೆಯ ಸಂಡೂರು ವಿಧಾನಸಭಾ ಉಪಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ತುಕಾರಾಂ ಅವರ ಪರವಾಗಿ ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ರವರು ಭರ್ಜರಿಯಾಗಿ ಮತಯಾಚನೆ ಮಾಡಿದರು.

ಬಳ್ಳಾರಿಯ ಸಂಡೂರು ಕ್ಷೇತ್ರದ ಕಾಂಗ್ರೆಸ್ ಪಕ್ಷದ ಕಛೇರಿಯಲ್ಲಿ ಹಮ್ಮಿಕೊಂಡ ಬಂಜಾರ ಸಮಾಜದ ಪ್ರಮುಖ ಮುಖಂಡರ, ಕಾರ್ಯಕರ್ತರ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು,ಗೋರ್ ಖರೀಬ್ ಜನರ ಕಷ್ಟದುಃಖದಲ್ಲಿ ಪಾಲ್ಗೊಂಡು ಹಗಲಿರುಳು ಬಡವರ ಪರ ಶ್ರಮಿಸುವ ಪಕ್ಷ ಯಾವುದಾದರೂ ಇದ್ದರೆ ಅದು ವೇ ಕಾಂಗ್ರೆಸ್ ಪಕ್ಷವಾಗಿದೆ. ಈಗಾಗಲೇ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಘೋಷಣೆ ಮಾಡಲಾ ಗಿರುವ ಐದು ಗ್ಯಾರಂಟಿ ಗಳು ಜನರ ಮನೆ ಬಾಗಿಲಿಗೆ ಮುಟ್ಟುತ್ತಿವೆ,ಇದರಿಂದ ಬಡವರಿಗೆ ಮಧ್ಯಮ


ಉದಯವಾಹಿನಿ ಚಿತ್ರ

ವರ್ಗದವರ ಕುಟುಂಬಕ್ಕೆ ನೆರವಾಗಿ ಅನುಕೂಲವಾಗುತ್ತಿದೆ, ತಾವೆಲ್ಲರೂ ಒಗ್ಗಟ್ಟಾಗಿ ಮತ್ತೊಮ್ಮೆ ಕಾಂಗ್ರೆಸ್ ಅಭ್ಯರ್ಥಿಗೆ ಬಹುಮತದಿಂದ ಗೆಲ್ಲಿಸಿಕೊಡಿ ಕ್ಷೇತ್ರದ ಅಭಿವೃದ್ಧಿ ಮಾಡಲು ಮತ್ತೊಮ್ಮೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು, ಸಂಡೂರು ಉಪಚುನಾವಣೆ ಉಸ್ತುವಾರಿಗಳು ಗೋಪಿನಾಥ್ ಪಳನಿಯಪ್ಪನ, ಮಾಜಿ ಸಚಿವ ಪಿ.ಟಿ ಪರಮೇಶ್ವರ ನಾಯಕ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಮೇಶ ಮರಗೋಳ, ಕ್ಯಾಂಪ್ ಉಸ್ತುವಾರಿ ಲೋಕೇಶ ನಾಯಕ, ನಾಮದೇವ ರಾಠೋಡ್ ಉಪಸ್ಥಿತರಿದ್ದರು.


# ಅಂಬಾ ಭವಾನಿ ದೇವಾಲಯದ 3ನೇ ವಾರ್ಷಿಕೋತ್ಸವ

• ಉದಯವಾಹಿನಿ, ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣದ ಲಕ್ಷ್ಮಿ ಚಿತ್ರಮಂದಿರ ಹಿಂಭಾಗದಲ್ಲಿರುವ ಶ್ರೀ ಅಂಬಾ ಭವಾನಿ ದೇವಾಲಯದ ಮೂರನೇ ವರ್ಷದ ವಾರ್ಷಿಕೋತ್ಸವ ರವಿವಾರ ಎಲ್ಲಾ ಭಕ್ತರು ಸೇರಿ ಶ್ರದ್ಧಾಭಕ್ತಿಯಿಂದ ಆಚರಿಸಿದರು.

ರವಿವಾರ ಬೆಳಿಗ್ಗ ದೇವಿಗೆ ವಿಶೇಷ ಅಭಿಷೇಕ ಪೂಜೆ ಮಾಡಿ ದೇವಾಲಯದಿಂದ ಪಟ್ಟಣದ ಕಿಲ್ಲಾಗಲ್ಲಿಯ ಗುಂಡಪ್ಪನ ಬಾವಿಗೆ ದೇವಿಯ ಉತ್ಸವ ಮೂರ್ತಿಯನ್ನು ಪಲ್ಲಕ್ಕಿಯಲ್ಲಿರಿಸಿ ಕಳಸ ಮೆರವಣಿಗೆ ಮೂಲಕ ಗಂಗಸ್ಥಳಕ್ಕೆ ಹೋಗಿ ಅಲ್ಲಿಂದ ಸಕಲ ಮಂಗಲವಾದ್ಯಗಳೊಂದಿಗೆ ಅದ್ದೂರಿಯಾಗಿ ಮೆರವಣಿಗೆಯೊಂದಿಗೆ ದೇವಾಲಯಕ್ಕೆ ಬರಲಾಯಿತು. ದೇವಾಲಯದಲ್ಲಿ ವಿಶೇಷವಾಗಿ ಶ್ರೀ ಅಂಬಾ ಭವಾನಿ ದೇವಿಯ ಪೂಜೆಯೊಂದಿಗೆ ಶ್ರೀ ಸತ್ಯನಾರಾಯಣ ಪೂಜೆಯನ್ನು ಮಾಡಲಾಯಿತು.

ಈ ವೇಳೆ ಜಾತ್ರಾ ಸಮಿತಿಯ ಮರಾಠಾ ಸೇವಾ ಸಂಘದಿಂದ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಸಮಾಜ ಸೇವಕ ಸಿ.ಬಿ ಅಸ್ಕಿ ಹಾಗೂ ತಾಲ್ಲೂಕ ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಮತ್ತು ಸಿದ್ದಲಿಂಗ ಚಿನಿವಾರ ಸದಾಶಿವ ಬುಡ್ಡರ ಅವರನ್ನು ಸನ್ಮಾನಿಸಲಾಯಿತು.


ಉದಯವಾಹಿನಿ ಚಿತ್ರ

ಅಂಬಾ ಭವಾನಿ ಜಾತ್ರಾ ಮಹೋತ್ಸವದಲ್ಲಿ ಸಮಾಜದ ಮುಖಂಡರು ಮರಾಠ ಸೇವಾ ಸಂಘದ ಅಧ್ಯಕ್ಷ ಭರತ ಭೋಸಲೆ,ರಾಜೇಂದ್ರ ಭೋಸಲೆ, ಮಾರುತಿ ನಲವಡೆ, ರಾಜು ಜಾಧವ, ಕಿರಣ್ ದೂದಾಣಿ, ಸಚಿನ ಸಾಲೂಂಕಿ, ಶಿವಾಜಿ ಬಿಜಾಪುರ, ಹಣಮಂತ ನಲವಡೆ, ಅಮಿತ ಗಾಯಕವಾಡ, ವಿಶ್ವನಾಥ ಶಿಂಧೆ ರಾಘವೇಂದ್ರ ನಲವಡೆ, ರಾಘವೇಂದ್ರ ಘಾಟಗೆ, ತಾನಾಜಿ ಘೋರ್ಪಡೆ, ವಿನೋಧ ಪವಾರ,ಅಮರ ಭೋಸಲೆ, ವಿನಾಯಕ ಘಾಟಗೆ,ಲೋಹಿತ್ ಘಾಟಗೆ,ಗಣೇಶ ಘಾಟಗೆ ಸಂತೋಷ ಚವ್ಹಾಣ, ಅಣ್ಣಾಜಿ ಪವಾರ ಅಂಭಾಜಿ ಘಾಟಗೆ ಅರ್ಚಕ ಕೃಷ್ಣ ಅಗ್ನಿಹೋತ್ರಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ರಾಜಕೀಯ ವ್ಯವಸ್ಥೆಯನ್ನೇ ಭ್ರಷ್ಟ ಮಾಡಿದ ಪ್ರಧಾನಿ ಮೋದಿ

• ಉದಯವಾಹಿನಿ, ಹುಬ್ಬಳ್ಳಿ



ನರೇಂದ್ರ ಮೋದಿ ಅವರು ಇಲೆಕ್ಟ್ರಾಲ್ ಬಾಂಡ್ ಜಾರಿಗೆ ತಂದು ಇಡೀ ರಾಜಕೀಯ ವ್ಯವಸ್ಥೆ ಯನ್ನೇ ಭ್ರಷ್ಟ ಮಾಡಿದ್ದಾರೆ. ಹೀಗಿದ್ದಾಗ ಅವರು ರಾಜ್ಯ ಸರ್ಕಾರದ ಭ್ರಷ್ಟಾಚಾರದ ಕುರಿತು ಮಾತನಾಡುತ್ತಾರೆ ಎಂದರೆ ಅದಕ್ಕಿಂತ ದೊಡ್ಡ ದುರಂತ ಇನ್ನೊಂದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ವ್ಯಂಗ್ಯವಾಡಿದರು. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನರೇಂದ್ರ ಮೋದಿ, ಬಿಜೆಪಿ ಮುಖಂಡರು ಕೇಂದ್ರದ ಇಡಿ, ಸಿಬಿಐ ಇತರೆ ತನಿಖಾ ಸಂಸ್ಥೆಗಳನ್ನು ಕಂಪನಿಗಳಿಗೆ ಛೂ ಬಿಟ್ಟು ಬೆದರಿಸಿ ಅವರಿಂದ ಇಲೆಕ್ಟ್ರಾಲ್ ಬಾಂಡ್ ಪಡೆದು ಕೊಂಡಿದ್ದಾರೆ.

ಇದು ಭ್ರಷ್ಟಾಚಾರ ಅಲ್ಲವೇ? ಅವರ್ಯಾರಿಗೂ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆಯೇ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಹಣದ ಹೊಳೆ ಹರಿಸುತ್ತಿದೆ ಎನ್ನುವ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಪ್ರತಿ ಚುನಾವಣೆಯಲ್ಲೂ ಬಿಜೆಪಿ ಹೀಗೆಯೇ ಆರೋಪಿಸುತ್ತದೆ. ಚನ್ನಪಟ್ಟಣದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿ ಅಭ್ಯರ್ಥಿ ಪರವಾಗಿ ಮತ ಚಲಾಯಿಸುವಂತೆ ಅವರು ನಮಾಜ್ ಮ್ಯಾಟ್ ಮತ್ತು ಸಾವಿರ ರೂಪಾಯಿ ಕೊಡುತ್ತಿರುವುದು ಎಲ್ಲರಿಗೂ ಗೊತ್ತಿದೆ. ಹೀಗಾಗಿ ಅವರು ಚುನಾವಣೆಯಲ್ಲಿ ಅವ್ಯವಹಾರ ನಡೆಯುತ್ತಿದೆ ಎಂದು ಹೇಳಿಕೆ ನೀಡುವುದು ಹಾಸ್ಯಾಸ್ಪದ' ಎಂದರು.

ಹೇಗಾದರೂ ಮಾಡಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ಥಿರಗೊಳಿಸಬೇಕು ಎನ್ನುವುದು ಬಿಜೆಪಿ ಉದ್ದೇಶವಾಗಿದ್ದು, ಯಾವ್ಯಾವುದೋ ಹಗರಣ ಎನ್ನುತ್ತ ಸಿದ್ದ ರಾಮಯ್ಯ ಅವರಿಗೆ ಇ.ಡಿ ನೋಟಿಸ್ ನೀಡಿ ಬೆದರಿಸಲು ಯತ್ನಿಸುತ್ತಿದೆ. ಸರ್ಕಾರ ಅಸ್ಥಿರ ಗೊಳಿಸಬೇಕೆಂದರೆ ಅದಕ್ಕೆ ದೊಡ್ಡ ತಡೆ ಸಿದ್ದರಾಮಯ್ಯ. ಹಾಗಾಗಿ, ಮೊದಲು ಅವರನ್ನು ಅಧಿಕಾರದಿಂದ ಕೆಳಗಿಳಿಸಿದರೆ ನಂತರ ಸರ್ಕಾರವನ್ನು ಸುಲಭವಾಗಿ ಬೀಳಿಸಬಹುದು ಎನ್ನುವುದು ಅದರ ಲೆಕ್ಕಾಚಾರ. ಇಲ್ಲಷ್ಟೇ ಅಲ್ಲ, ಕಾಂಗ್ರೆಸ್ ಸರ್ಕಾರ ಇರುವ ಎಲ್ಲಾ ರಾಜ್ಯದಲ್ಲಿಯೂ ಅವರು ಇದನ್ನೇ ಮಾಡುತ್ತಿದ್ದಾರೆ. ನಾವು ಅದ್ಯಾವುದಕ್ಕೂ ತಲೆಕೆಡಿಸಿಕೊಳ್ಳುವುದಿಲ್ಲ, ಕಾನೂನು ಹೋರಾಟ ನಡೆಸುತ್ತೇವೆ' ಎಂದರು.

> ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವುದರಿಂದ ಅಧಿಕಾರಿಗಳು ಕಾಂಗ್ರೆಸ್ ಪರವಾಗಿ ಕೆಲಸ ಮಾಡುತ್ತಾರೆ ಎಂದು ವಿರೋಧ ಪಕ್ಷಗಳು ಆರೋಪಿಸುವುದು ಸಾಮಾನ್ಯ. ಅಂತಹ ಪರಿಸ್ಥಿತಿ ಕಾಂಗ್ರೆಸ್ ಆಡಳಿತದಲ್ಲಿ ಇಲ್ಲ. ಮುಡಾದಲ್ಲಿ ನಡೆದಿದೆ ಎನ್ನಲಾದ ಹಗರಣದ ಆರೋಪದ ಕುರಿತು ಎಲ್ಲಾ ಅಧಿಕಾರಿಗಳು ತನಿಖೆಗೆ ಪಾರದರ್ಶಕವಾಗಿ ಸಹಕರಿಸುತ್ತಿದ್ದಾರೆ' ಎಂದು ಪ್ರಶ್ನೆಯೊಂದಕ್ಕೆ ಯತೀಂದ್ರ ಉತ್ತರಿಸಿದರು.

# ವಕ್ಫ್ ಆಸ್ತಿ ವಿಷಯಕ್ಕೆನೇ ನನ್ನ ಮಗ ಆತ್ಮಹತ್ಯೆ ಮಾಡಿಕೊಂಡಿದ್ದು: ರೈತ

• ಉದಯವಾಹಿನಿ, ಹಾವೇರಿ

ಜಿಲ್ಲೆಯ ಹಾನಗಲ್ ತಾಲ್ಲೂಕಿನ ಹರನಗಿರಿ ಗ್ರಾಮದ ರೈತ ರುದ್ರಪ್ಪ ಬಾಳಿಕಾಯಿ (24) ಆತ್ಮಹತ್ಯೆ ಪ್ರಕರಣ ಹೊಸ ತಿರುವು ಪಡೆದಿದೆ. 'ನಮ್ಮ ಜಮೀನು, ವಕ್ಫ್ ಆಸ್ತಿ ಆಯಿತು ಎಂಬ ಕಾರಣಕ್ಕೆ ಮಗ ರುದ್ರಪ್ಪ ಆತ್ಮಹತ್ಯೆ ಮಾಡಿಕೊಂಡ' ಎಂದು ರುದ್ರಪ್ಪ ತಂದೆ ಚನ್ನಪ್ಪ ಬಾಳಿಕಾಯಿ ಆರೋಪಿಸಿದ್ದಾರೆ.

'ಅಲ್ಲಾಪುರ ಗ್ರಾಮದಲ್ಲಿದ್ದ ಮೊಹಮ್ಮದ್ ಯೂಸೂಫ್ ಎಂಬುವರಿಗೆ ಸೇರಿದ್ದ 4 ಎಕರೆ 36 ಗುಂಟೆ ಜಮೀನನ್ನು ನಮ್ಮ ತಂದೆ 1964ರಲ್ಲಿ ಖರೀದಿಸಿದ್ದರು. ಎಲ್ಲಾ ದಾಖಲೆಗಳು ತಂದೆ ಹೆಸರಿಗೆ ವರ್ಗಾವಣೆಯಾಗಿದ್ದವು. ಅವರ ನಂತರ, ನನ್ನ ಹೆಸರಿಗೆ ಜಮೀನು ಬಂದಿತ್ತು. 2015ರಲ್ಲಿ ಪೊಲೀಸರ ಸಮೇತ ಬಂದ ಉಪವಿಭಾಗಾಧಿಕಾರಿ ಹಾಗೂ ಇತರರು ಜಮೀನು ಸುಪರ್ದಿಗೆ ಪಡೆದು, 'ವಕ್ಫ್ ಆಸ್ತಿ ಮೊಕಾಶಿ ಟ್ರಸ್ಟ್'ಗೆ ನೀಡಿದ್ದಾರೆ'ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

ಜಮೀನು ತೆರವಿಗೆ ನಮ್ಮ ಒಪ್ಪಿಗೆ ಇರಲಿಲ್ಲ. ಪಂಚನಾಮೆಯಲ್ಲಿ ಮಗನ ನಕಲಿ ಸಹಿ ಮಾಡಲಾಗಿದೆ. ನಮ್ಮ ಪರ ಧ್ವನಿ ಎತ್ತಿದ್ದಕ್ಕೆ ತೇಜಸ್ವಿ ಸೂರ್ಯ ವಿರುದ್ಧ ಎಫ್‌ಐಆರ್ ದಾಖಲಿಸಿದ್ದು ಸರಿಯಲ್ಲ


ಉದಯವಾಹಿನಿ ಚಿತ್ರ

ಎಂದರು. 7 ಲಕ್ಷ ಸಾಲ ತೀರಿಸಲಾಗದೇ ಮಗ ಆತ್ಮಹತ್ಯೆ ಮಾಡಿಕೊಂಡನೆಂದು ಪೊಲೀಸರೇ ಸಿದ್ಧಪಡಿಸಿದ ದೂರಿಗೆ ನಾನು ಪೊಲೀಸರ ಒತ್ತಾಯದಿಂದ ಸಹಿ ಮಾಡಿದೆ. ಸರ್ಕಾರದಿಂದ 5 ಲಕ್ಷ ಪರಿಹಾರ ಬಂತು. ಆದರೆ, ನಂತರ ವಕ್ಫ್‌ಗೆ ಸಂಬಂಧಿಸಿದಂತೆ ದೂರು ಕೊಡಲು ಆಗಲಿಲ್ಲ'ಎಂದರು.

'ವಕ್ಫ್ ಆಸ್ತಿ ವಿಷಯಕ್ಕೆ ಮಗ ರುದ್ರಪ್ಪ ಆತ್ಮಹತ್ಯೆ ಮಾಡಿಕೊಂಡಿ ರುವುದಾಗಿ ತಂದೆ ಹೇಳಿದ್ದು, ದಾಖಲೆಗಳನ್ನು ಪಡೆದಿದ್ದೇವೆ. ವಕ್ಫ್ ಆಸ್ತಿಯೆಂದು ರಾಜ್ಯದಲ್ಲಿ 9 ಲಕ್ಷ ಎಕರೆ ಕಬಳಿಸುವ ಹುನ್ನಾರ ನಡೆದಿದೆ. ರೈತರ ಕಾನೂನು ಹೋರಾಟ ನಮ್ಮ ಬೆಂಬಲವಿದ್ದು, ಎಲ್ಲಾ ವೆಚ್ಚವನ್ನು ನಾವೇ ಭರಿಸುತ್ತೇವೆ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು. ಬಿಜೆಪಿ ನಿಯೋಗದ ನೇತೃತ್ವ ವಹಿಸಿಕೊಂಡು ರುದ್ರಪ್ಪ ಮನೆಗೆ ಭೇಟಿ ನೀಡಿದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಕ್ಫ್ ಆಸ್ತಿ ವಿಷಯದಲ್ಲಿ ಸುಪ್ರೀಂಕೋರ್ಟ್ ಆದೇಶಿಸಿದೆ. ಇದನ್ನು ಉಲ್ಲಂಘಿಸಿ, ನೋಟಿಸ್ ನೀಡದೇ ಜಮೀನು ವಕ್ಫ್ ಆಸ್ತಿ ಮಾಡಲಾಗಿದೆ' ಎಂದರು.

'ಬೆಂಗಳೂರಿನ ಮೆಜೆಸ್ಟಿಕ್, 175 ಎಕರೆ ಇದೆ. ಇದು ಸಹ ವಕ್ಫ್ ಆಸ್ತಿಯೆಂದು ಹೇಳುತ್ತಿದ್ದಾರೆ. ನಾಳೆ ವಿಧಾನಸೌಧವೂ ವಕ್ಫ್ ಆಸ್ತಿಯಾದರೂ ಆಶ್ಚರ್ಯವಿಲ್ಲ' ಎಂದು ತಿಳಿಸಿದರು.

> ರಾಜಧಾನಿ ಬೆಂಗಳೂರಿನ ಮೆಜೆಸ್ಟಿಕ್ ಕೇಂದ್ರ, ಬಸ್ ನಿಲ್ದಾಣ ಸಹ ವಕ್ಫ್ ಆಸ್ತಿ ಎಂಬುದಾಗಿ ವಕ್ಫ್ ಮಂಡಳಿ ಹೇಳುತ್ತಿದೆ ಜಮೀನು ವಕ್ಫ್ ಆಸ್ತಿ ಆಯಿತೆಂದು ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ' ಎನ್ನಲಾದ ರೈತ ರುದ್ರಪ್ಪ ಅವರ ಹಾನಗಲ್ ತಾಲ್ಲೂಕಿನ ಹರನಗಿರಿ ಗ್ರಾಮಕ್ಕೆ ಭೇಟಿ ನೀಡಿದ ಅವರು, ವಕ್ಫ್ ಮೂಲಕ ರಾಜ್ಯ ಸರ್ಕಾರ, 9 ಲಕ್ಷ ಎಕರೆ ಜಮೀನು ಕಬಳಿಸಲು ಹೊರಟಿದೆ
>
> – ಪ್ರಲ್ಹಾದ್ ಜೋಶಿ, ಕೇಂದ್ರ ಸಚಿವ

# ಮಲ್ಪೆ ಅಭಿವೃದ್ಧಿ ಸಮಿತಿ ಸಭೆ: ಪ್ರವಾಸಿಗರಿಗೆ ಸೌಕರ್ಯ ಕಲ್ಪಿಸಿ

• ಉದಯವಾಹಿನಿ, ಉಡುಪಿ

ಮಲ್ಪೆ ಕಡಲ ತೀರಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದ್ದು, ಪ್ರವಾಸಿಗರ ಅನುಕೂಲಕ್ಕಾಗಿ ಅಗತ್ಯ ಮೂಲ ಸೌಕರ್ಯಗಳ ಕಾಮಗಾರಿಗಳನ್ನು ಕೈಗೊಳ್ಳಲು ಮುಂದಾಗಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ವಿದ್ಯಾಕುಮಾರಿ ಸೂಚನೆ ನೀಡಿದರು. ಮಣಿಪಾಲದ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮಲ್ಪೆ ಅಭಿವೃದ್ಧಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಲ್ಪೆ, ಪಡುಕೆರೆ ಬೀಚ್ ಪ್ರದೇಶದ ಸ್ವಚ್ಛತಾ ನಿರ್ವಹಣೆ, ಫುಡ್‌ಕೋರ್ಟ್, ಶೌಚಾಲಯ, ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒಳಗೊಂಡಂತೆ ಬೀಚ್ ಪ್ರದೇಶದ ಮಾಸ್ಟರ್ ಪ್ಲಾನ್ ವರದಿಯನ್ನು ಶೀಘ್ರ ತಯಾರಿಸಬೇಕು ಎಂದರು. ಮಲ್ಪೆ ಕಡಲ ತೀರದಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಯಾವುದೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಸುರಕ್ಷತೆಗೆ ಪ್ರಥಮ ಆದ್ಯತೆಯನ್ನು ನೀಡುವುದರೊಂದಿಗೆ ಕಾಮಗಾರಿಗಳನ್ನು ಕೈಗೊಳ್ಳಬೇಕು. ರಾಜ್ಯ ಹಾಗೂ ಹೊರ ರಾಜ್ಯಗಳಿಂದ ಬರುವವರಿಗೆ ಸ್ಥಳೀಯ ಕಡಲ ತೀರದ ಮಾಹಿತಿ ಇರುವುದಿಲ್ಲ. ಅವರಿಗೆ ಮಾಹಿತಿ ತಿಳಿಸಲು ಒತ್ತು ನೀಡಬೇಕು. ಇದರಿಂದ ಯಾವುದೇ ಅವಘಡಗಳು ಆಗದಂತೆ ತಪ್ಪಿಸಲು ಸಾಧ್ಯ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> **ಜೀವ ರಕ್ಷಕ ಸಿಬ್ಬಂದಿಯನ್ನು ಯೋಜಿಸಿ**
>
> ಬೀಚ್ ಪ್ರದೇಶಗಳಲ್ಲಿ ಪ್ರವಾಸಿಗರ ಸುರಕ್ಷತೆಗಾಗಿ ಜೀವ ರಕ್ಷಕ ಸಿಬ್ಬಂದಿಯನ್ನು ಆಯ್ಕೆ ಮಾಡಿ, ಅವರಿಗೆ ಅಗತ್ಯ ತರಬೇತಿ ನೀಡಿ ಅವರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಬೇಕು ಎಂದ ಅವರು, ಸೇಂಟ್ ಮೇರೀಸ್ ದ್ವೀಪಕ್ಕೆ ಅಗತ್ಯವಿರುವ ಜೀವ ರಕ್ಷಕ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಸೂಚಿಸಿದರು.

ಬೀಚ್ ಪ್ರದೇಶದಲ್ಲಿ ಜಲ ಸಾಹಸ ಚಟುವಟಿಕೆಗಳು ನಡೆಸುವಾಗ ಗುತ್ತಿಗೆದಾರರು ಬೋಟ್‌ನ ಸಾಮರ್ಥ್ಯ ಮೀರಿ ಹೆಚ್ಚಿನ ಪ್ರವಾಸಿಗರನ್ನು ಕರೆದುಕೊಂಡು ಹೋಗುವ ಬಗ್ಗೆ ದೂರುಗಳು ಕೇಳಿ ಬರುತ್ತಿವೆ ಗುತ್ತಿಗೆದಾರರು ನಿಯಮ ಮೀರಿ ಹಾಗೂ ಸಾಮರ್ಥ್ಯ ಮೀರಿ ಪ್ರವಾಸಿಗರನ್ನು ಬೋಟ್‌ನಲ್ಲಿ ಕರೆದುಕೊಂಡು ಬಂದಲ್ಲಿ ದಂಡ ವಿಧಿಸುವುದರ ಜೊತೆಗೆ ನೋಟಿಸ್ ನೀಡಬೇಕೆಂದು ಸೂಚನೆ ನೀಡಿದರು.

# ವಡಗೇರಾ ಮರೆತ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ

## ತಾಲ್ಲೂಕು ಕೇಂದ್ರವಾಗಿ 7 ವರ್ಷಗಳು ಕಳೆದಿವೆ, ತಾಲ್ಲೂಕಿನ ಅಭಿವೃದ್ಧಿ ಮರೀಚಿಕೆ, ಅತೀ ಹಿಂದುಳಿದ ತಾಲ್ಲೂಕು ಎಂದು ಘೋಷಣೆ

• ಉದಯವಾಹಿನಿ, ವಡಗೇರಾ

ಸರ್ಕಾರ ರಚನೆಯಾಗಿ ಒಂದೂವರೆ ವರ್ಷವಾದರೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಈವರೆಗೂ ಒಂದೇ ಒಂದು ಬಾರಿಯೂ ತಾಲ್ಲೂಕಿಗೆ ಭೇಟಿ ನೀಡಿಲ್ಲ. ಜನರ ಸಮಸ್ಯೆ ಆಲಿಸಿಲ್ಲ. ಹೀಗಾಗಿ ತಾಲ್ಲೂಕಿನ ಜನರು ಸಚಿವರ ಬರುವಿಕೆಗಾಗಿ ಬಕ ಪಕ್ಷಿಯಂತೆ ಕಾಯುವಂತಾಗಿದೆ. ತಾಲ್ಲೂಕು ಕೇಂದ್ರವಾಗಿ 7 ವರ್ಷಗಳು ಕಳೆದಿವೆ. ತಾಲ್ಲೂಕಿನ ಅಭಿವೃದ್ಧಿ ಮರೀಚಿಕೆಯಾಗಿದೆ.

ಹಿಂದಿನ ಬಿಜೆಪಿ ಸರ್ಕಾರದಲ್ಲಿ ಯಾದಗಿರಿ ಉಸ್ತುವಾರಿ ಸಚಿವರಾಗಿದ್ದ ಪ್ರಭು ಚವ್ಹಾಣ ಅವರು, ವಡಗೇರಾ ಪಟ್ಟಣಕ್ಕೆ ಭೇಟಿ ನೀಡಿ ಜನರ ಸಮಸ್ಯೆ ಆಲಿಸಿದ್ದರು. ನಂತರ ಅದೇ ಸರ್ಕಾರದಲ್ಲಿ


ಉದಯವಾಹಿನಿ ಚಿತ್ರ

ಜನರ ಸಮಸ್ಯೆ ಆಲಿಸಿಲ

ಸಮಾಜ ಕಲ್ಯಾಣ ಸಚಿವರಾಗಿದ್ದ ಕೋಟೆ ಶ್ರೀನಿವಾಸ ಪೂಜಾರಿ ಅವರು, ಬೆಂಡೆಬೆಂಬಳಿ ಮೊರಾರ್ಜಿ ವಸತಿ ಶಾಲಾ ಆವರಣದಲ್ಲಿ ಎಲ್ಲಾ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ್ದರು. ಆದರೆ ನಮ್ಮದೇ ಜಿಲ್ಲೆಯವರಾಗಿರುವ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಮಾತ್ರ ವಡಗೇರಾ ತಾಲ್ಲೂಕಿಗೆ ಭೇಟಿ

> **ಇದ್ಯಾವುದನ್ನೂ ಮಾಡಿಲ್ಲ**
>
> ಅಕಾಲಿಕ ಮಳೆಯಾಗಿ ರೈತರ ಜಮೀನಿನಲ್ಲಿ ಬೆಳೆದಿದ್ದ ವಿವಿಧ ಬೆಳೆಗಳು ಹಾಳಾಗಿವೆ. ಬೆಳೆಹಾನಿ ಪರಿಹಾರ ಕೊಡಿಸುವ ಭರವಸೆ ನೀಡುವುದಕ್ಕಾದರೂ ಸಚಿವರು ತಾಲ್ಲೂಕಿಗೆ ಭೇಟಿ ನೀಡಿ, ರೈತರೊಂದಿಗೆ ಚರ್ಚಿಸಬೇಕಿತ್ತು. ಆದರೆ ಸಚಿವರು ಇದ್ಯಾವುದನ್ನೂ ಮಾಡಿಲ್ಲ. ತಾಲ್ಲೂಕಿನ ವ್ಯಾಪ್ತಿಯ ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ಉಸ್ತುವಾರಿ ಸಚಿವರಿಗೆ ತಿಳಿಸಿ, ಪರಿಹಾರ ಕಂಡುಕೊಳ್ಳಲು ಕಾಯುತಿದ್ದಾರೆ.

ಕೊಟ್ಟಿಲ್ಲ. ಹೀಗಾಗಿ ತಾಲ್ಲೂಕಿನ ಜನರ ಗೋಳು ಕೇಳವವರು ಇಲ್ಲದಂತಾಗಿದೆ ಎಂದು ಸಾರ್ವಜನಿಕರು ಅಳಲು ತೊಂಡಿಕೊಂಡರು.

ಈ ಭಾಗದ ರೈತರು ತಮ್ಮ ಜಮೀನುಗಳ ಮಾರಾಟ ಹಾಗೂ ಖರೀದಿಗೆ ದೂರದ ಶಹಾಪುರಕ್ಕೆ ಹೋಗಬೇಕು. ಅದರಿಂದ ರೈತರ ಸಮಯ ಹಾಗೂ ಹಣ ಎರಡೂ ಪೋಲಾಗುತ್ತಿದೆ. ನೋಂದಣಿಗೆ ಸರ್ಕಾರಕ್ಕೆ ಕಟ್ಟುವ ಶುಲ್ಕ ಸಹ ಶಹಾಪುರದ ಪಾಲಾಗುತ್ತಿದೆ. ಒಂದು ವೇಳೆ ವಡಗೇರಾದಲ್ಲಿ ನೋಂದಣಿ ಕಚೇರಿ ಆರಂಭವಾದರೆ ನೋಂದಣಿ ಶುಲ್ಕ ವಡಗೇರಾ ತಾಲ್ಲೂಕಿನ ಖಾತೆಗೆ ಜಮೆಯಾಗುತ್ತದೆ. ಮಿನಿವಿಧಾನಸೌಧ ನಿರ್ಮಾಣಕ್ಕಾಗಿ ನಿವೇಶನ ಮಂಜೂರಾಗಿದೆ. ನಿರ್ಮಾಣಕ್ಕೆ ಕ್ರಮಕೈಗೊಂಡಿಲ್ಲ.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಲ್ಲಿ ಅತೀ ಹಿಂದುಳಿದ ತಾಲ್ಲೂಕು ಎಂದು ಘೋಷಣೆಯಾಗಿರುವ ವಡಗೇರಾ ತಾಲ್ಲೂಕಿನಲ್ಲಿ, ಶಿಕ್ಷಣ, ಕೃಷಿ, ಕುಡಿಯುವ ನೀರಿನ ಸಮಸ್ಯೆಗಳ ಜತೆಗೆ ತಾಲ್ಲೂಕು ಕಚೇರಿಗಳು ಇಲ್ಲ. ಹೀಗಾಗಿ ಈ ಭಾಗದ ರೈತರು, ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳಿಗಾಗಿ ಹಳೆಯ ತಾಲ್ಲೂಕು ಶಹಾಪುರಕ್ಕೆ ತೆರಳಬೇಕಾಗಿದೆ.

ರಾಜಶೇಖರ ಕಾಡಂನೋರ, ಅಧ್ಯಕ್ಷ ಬಿಜೆಪಿ ಗ್ರಾಮೀಣ ಮಂಡಲ ವಡಗೇರಾಜಿಲ್ಲಾ ಉಸ್ತುವಾರಿ ಸಚಿವರು ಕೇವಲ ಯಾದಗಿರಿ ಶಹಾಪುರ ಹಾಗೂ ಕಲಬುರಗಿಗೆ ಮಾತ್ರ ಸೀಮಿತರಾಗಿದ್ದಾರೆ. ಹಿಂದುಳಿದ ವಡಗೇರಾ ತಾಲ್ಲೂಕು ಕೇಂದ್ರಕ್ಕೆ ಈವರೆಗೂ ಭೇಟಿ ನೀಡಿಲ್ಲ. ರೈತರು ಹಾಗೂ ಸಾರ್ವಜನಿಕರ ಸಮಸ್ಯೆ ಆಲಿಸಿಲ್ಲ. ಚಮರಡ್ಡಿ ಬಾಗ್ಲಿ ಅಧ್ಯಕ್ಷ ಯಾದಗಿರಿ ಗ್ರಾಮೀಣ ಬ್ಲಾಕ್ ಕಾಂಗ್ರೆಸ್‌ಜಿಲ್ಲಾ ಉಸ್ತುವಾರಿ ಮಂತ್ರಿಗಳಿಗೆ ಬಿಡುವಿಲ್ಲದ ಕಾರ್ಯಕ್ರಮಗಳು ಇರುವುದರಿಂದ ವಡಗೇರಾ ತಾಲ್ಲೂಕು ಕೇಂದ್ರಕ್ಕೆ ಭೇಟಿ ನೀಡಲು ಆಗಿಲ್ಲ.

ಮುಂಬರುವ ದಿನಗಳಲ್ಲಿ ರೈತರ ಹಾಗೂ ಸಾರ್ವಜನಿಕರು ಸಮಸ್ಯೆಗಳನ್ನು ಆಲಿಸಲಿದ್ದಾರೆ.

# ಮಿನಿ ನ್ಯೂಸ್

## ಬೃಹದಾಕಾರದ ಒಣಗಿದ ಬೇವಿನ ಮರವನ್ನು ತೆರವುಗೊಳಿಸಲು ಸುಧಾಕರ್ ಆಗ್ರಹ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಪೋಲಕಪಳ್ಳಿಯ ಸಾಲು ಮರದ ತಿಮ್ಮಕ್ಕ ಉದ್ಯಾನವನ ಸಮೀಪ ಮುಖ್ಯ ರಸ್ತೆಯ ಪಕ್ಕದಲ್ಲಿರುವ ಬೃಹತಕಾರದ ಬೇವಿನ ಮರವೊಂದು ಒಣಗಿ ಹೋಗಿದ್ದು ಬಿಳುವ ಸ್ಥಿತಿಯಲ್ಲಿದ್ದು ಅದನ್ನು ತೆರವುಗೊಳಿಸುವಂತೆ ಈಗಾಗಲೇ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು ಪ್ರಯೋಜನವಾಗಿಲ್ಲ ಒಣಗಿದ ಮರದಿಂದ ಯಾವುದೇ ಅನಾಹುತವಾದರೆ ಇದಕ್ಕೆ ನೇರಹೊಣೆ ಅರಣ್ಯ ಇಲಾಖೆಯಾಗಿದೆ ಎಂದು ಸಮಾಜ ಸೇವಕ ಸುಧಾಕರ್ ಭೀಮರಾವ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ಸಾಲು ಮರದ ತಿಮ್ಮಕ್ಕನವರ ಉದ್ಯಾನವನದಿಂದ 100ಮೀಟರ್ ಅಂತರದಲ್ಲಿ ಬೇವಿನ ಮರವೊಂದು ಒಣಗಿ ಹೋಗಿ ಸವಾರರ ಮೇಲೆ ಬೀಳುವ ಸ್ಥಿತಿ ನಿರ್ಮಾಣವಾಗಿದೆ,ಇದರಿಂದ ಮುಖ್ಯ ರಸ್ತೆ ಇರುವುದರಿಂದ ಸಾವಿರಾರು ವಾಹನ ಸವಾರರು ಜೀವ ಕೈಯಲ್ಲಿ ಹಿಡಿದುಕೊಂಡು ಓಡಾಡುತ್ತಿದ್ದಾರೆ ಆದರೆ ಅರಣ್ಯ ಇಲಾಖೆಗೆ ಮರ ತೆರವುಗೊಳಿಸಲು ಅಕ್ಟೋಬರ್ 24ರಂದು ಮನವಿ ಸಲ್ಲಿಸಿದರು ಇಲ್ಲಿಯವರೆಗೆ ಕ್ಯಾರೆ ಅನ್ನದ ಅರಣ್ಯ ಇಲಾಖೆಗೆ ಯಾವುದೇ ಅನಾಹುತವಾಗಿ ಪ್ರಾಣಹಾನಿಯಾದರೆ ಇದಕ್ಕೆ ನೇರಹೊಣೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಹೊಣೆಗಾರನಾಗಿ ಮಾಡಬೇಕು ಎಂದರು.

## ಆಟವಾಡುತ್ತಾ ನೀರಿನ ತೊಟ್ಟಿಯಲ್ಲಿ ಬಿದ್ದು ಬಾಲಕ ಸಾವು

• ಉದಯವಾಹಿನಿ, ಹಾವೇರಿ

ಶಾಲೆಯ ಬಳಿ ಇರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ನೀರಿನ ತೊಟ್ಟಿಗೆ ಬಾಲಕನೊಬ್ಬ ಬಿದ್ದು ಮುಳುಗಿ ದಾರುಣವಾಗಿ ಸಾವನಪ್ಪಿರುವ ಘಟನೆ ಹಾವೇರಿ ಜಿಲ್ಲೆ ರಟ್ಟೀಹಳ್ಳಿ ತಾಲ್ಲೂಕಿನ ಕಡೂರು ಗ್ರಾಮದಲ್ಲಿ ನಡೆದಿದೆ.ಮೃತ ಬಾಲಕನನ್ನು ಪ್ರಜ್ವಲ್ (9) ಎಂದು ತಿಳಿದುಬಂದಿದೆ. ಸಾಯಂಕಾಲ ಶಾಲೆ ಮುಗಿದ ತಕ್ಷಣ ಪ್ರಜ್ವಲ್ ಮನೆಗೆ ಬಂದು ಬಳಿಕ ಹೊರಗಡೆ ಆಟ ಆಡಲು ತೆರಳಿದ್ದಾನೆ.

ಈ ವೇಳೆ ಶಾಲೆಯ ಬಳಿ ಇರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ನೀರಿನ ತೊಟ್ಟಿಗೆ ಬಿದ್ದಿದ್ದಾನೆ. ಸಂಜೆಯಾದರೂ ಪ್ರಜ್ವಲ್ ಮನೆಗೆ ಬಾರದೇ ಇರುವುದನ್ನು ಗಮನಿಸಿದ ಮನೆಯವರು ಗಾಬರಿಗೊಂಡು ಎಲ್ಲಾ ಕಡೆ ಹುಡುಕಾಡಿದ್ದಾರೆ.

ಕೊನೆಗೆ ನೀರಿನ ತೊಟ್ಟಿಯಲ್ಲಿ ಪ್ರಜ್ವಲ್ ಬಿದ್ದು ಮುಳುಗಿ ಸಾವನ್ನಪ್ಪಿರುವುದು ಗೊತ್ತಾಗಿದೆ. ಬಾಲಕನ ಮೃತದೇಹವನ್ನು ನೀರಿನ ತೊಟ್ಟಿಯಿಂದ ಮೇಲಕ್ಕೆತ್ತಿ ರಟ್ಟೀಹಳ್ಳಿ ತಾಲ್ಲೂಕು ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ದಾಖಲಿಸಲಾಗಿದೆ. ಘಟನೆ ಕುರಿತಂತೆ ರಟ್ಟೀಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಪ್ರಕರಣ ನಡೆದಿದೆ.

## ಚಿತ್ರದುರ್ಗದಲ್ಲಿ ಖಾಸಗಿ ಬಸ್ ಪಲ್ಟಿ 10ಕ್ಕೂ ಹೆಚ್ಚು ಜನರಿಗೆ ಗಾಯ

• ಉದಯವಾಹಿನಿ, ಚಿತ್ರದುರ್ಗ

ಚಾಲಕನ ಅಜಾಗರೂಕತೆಯಿಂದ ಖಾಸಗಿ ಬಸ್ ಪಲ್ಟಿಯಾದ ಪರಿಣಾಮ 10 ಕ್ಕೂ ಹೆಚ್ಚು ಜನರು ಗಾಯಗೊಂಡಿರುವ ಘಟನೆ ಚಿತ್ರದುರ್ಗ ಜಿಲ್ಲೆಯಲ್ಲಿ ನಡೆದಿದೆ.ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಬುಡ್ನಹಟ್ಟಿಯಲ್ಲಿ ಖಾಸಗಿ ಬಸ್ ಪಲ್ಟಿಯಾಗಿದೆ.

ಬಡ್ನಹಟ್ಟಿ ಬಳಿ ಚಾಲಕನ ಅಜಾಗರೂಕತೆಯಿಂದ ಅವಘಡ ಸಂಭವಿಸಿದೆ ಎನ್ನಲಾಗಿದ್ದು, ಘಟನೆಯಲ್ಲಿ 10 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.ಗಾಯಗೊಂಡ ಪ್ರಯಾಣಿಕರನ್ನು ಚಳ್ಳಕೆರೆ ತಾಲ್ಲೂಕಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಚಳ್ಳಕೆರೆ ಪೊಲೀಸ್ ಠಾಣಾ ಪ್ರಕರಣ ನಡೆದಿದೆ.

## ಸೋನಿಯಾ, ರಾಹುಲ್ ನನ್ನ ನಾಯಕರಲ್ಲ, ಸಿದ್ದರಾಮಯ್ಯ ಮಾತ್ರ ನನ್ನ ನಾಯಕ

• ಉದಯವಾಹಿನಿ, ಕೊಪ್ಪಳ

ಸದ್ಯ ರಾಜ್ಯದಲ್ಲಿ ವಕ್ಫ್ ವಿವಾಹ ತೀವ್ರ ಸ್ವರೂಪ ಪಡೆದುಕೊಂಡಿದೆ ಸಿಎಂ ಸಿದ್ದರಾಮಯ್ಯ ರೈತರಿಗೆ ನೀಡಿದ ನೋಟಿಸ್ ಪಡೆಯುವಂತೆ ಸೂಚನೆ ನೀಡಿದರು ಕೂಡ ಬಿಜೆಪಿ ನಾಯಕರು ಪ್ರತಿಭಟನೆ ಹೋರಾಟ ನಡೆಸಿದರು. ಇದೀಗ ಕಾಂಗ್ರೆಸ್ ಶಾಸಕ ಇಕ್ಬಾಲ್ ಅನ್ಸಾರಿ ಸಿಎಂ ಸಿದ್ದರಾಮಯ್ಯ ಮಾತ್ರ ನಮ್ಮ ನಾಯಕರು ಸೋನಿಯಾ, ರಾಹುಲ್ ಗಾಂಧಿ ಅವರನ್ನು ನಮ್ಮ ನಾಯಕರೆಂದು ಒಪ್ಪಿಕೊಂಡಿಲ್ಲ ಎಂದು ತಿಳಿಸಿದ್ದಾರೆ. ಕೊಪ್ಪಳ ನಗರದಲ್ಲಿ ನಿನ್ನೆ ಸಂಜೆ ನಡೆದ ಸ್ವತಂತ್ರ ಹೋರಾಟಗಾರರ ಜಯಂತಿ ಕಾರ್ಯಕ್ರಮದಲ್ಲಿ ಇಕ್ಬಾಲ್ ಅನ್ಸಾರಿ ಮಾತನಾಡಿ,ಸಿದ್ದರಾಮಯ್ಯ ಸಿಎಂ ಇರೋವರಗೆ ನಮ್ಮ ಮುಸ್ಲಿಂ ಸಮಾಜದವರು ಏನಾದ್ರು ಮಾಡಿಕೊಳ್ಳಬೇಕು.

ಅವರ ನಂತರ ನಮಗೆ ಚೊಂಬೆ ಗತಿಯಾಗುತ್ತೆ ಎಂದು ಕಾಂಗ್ರೆಸ್ ಶಾಸಕ ಇಕ್ಬಾಲ್ ಅನ್ಸಾರಿ ಹೇಳಿಕೆಯನ್ನು ನೀಡಿದ್ದಾರೆ. ಸಿದ್ದರಾಮಯ್ಯ ಬಳಿ ಸಮಾಜದವರು ಆರು ತಿಂಗಳಿಗೊಮ್ಮೆ ಹೋಗಬೇಕು, ನೂರು ಕೋಟಿ ರೂ. ಅನುದಾನ ತಂದು, ಸಮಾಜದ ಕೆಲಸ ಮಾಡಬೇಕು. ನಾವು ನೀವು, ನಮ್ಮ ಸಮಾಜದವರು ಏನಾದ್ರು ಮಾಡಿಕೊಳ್ಳಬೇಕು. ನಂತರ ಚಂಬೇ ಗತಿಯಾಗುತ್ತದೆ ಎಂದು ಹೇಳಿದ್ದಾರೆ. ಇನ್ನು ನಾನು ಸಿದ್ದರಾಮಯ್ಯರನ್ನು ಮಾತ್ರ ನನ್ನ ನಾಯಕ ಎಂದು ಒಪ್ಪಿಕೊಂಡಿದ್ದೇನೆ. ರಾಹುಲ್ ಗಾಂಧಿ, ಸೋನಿಯಾಗಾಂಧಿರನ್ನು ಕೂಡಾ ನಾನು ನಮ್ಮ ನಾಯಕ ಅಂತ ಒಪ್ಪಿಕೊಂಡಿಲ್ಲ ಎಂದು ಇಕ್ಬಾಲ್ ಅನ್ಸಾರಿ ಹೇಳಿದ್ದಾರೆ.

## ಆರ್ಮಿ ಸೆಲೆಕ್ಷನ್‌ಗಾಗಿ ಓಪನ್ ರ್‍ಯಾಲಿ ಹರಿದುಬಂದ ಅಭ್ಯರ್ಥಿಗಳು

• ಉದಯವಾಹಿನಿ, ಬೆಳಗಾವಿ

ಗಡಿ ಜಿಲ್ಲೆ ಬೆಳಗಾವಿಯ ಮರಾಠಾ ರೆಜಿಮೆಂಟ್ ನಲ್ಲಿ ಆರ್ಮಿ ನೇಮಕಾತಿಗಾಗಿ ಓಪನ್ ರ್‍ಯಾಲಿ ಆಯೋಜಿಸಲಾಗಿದ್ದು, ರಾಜ್ಯ, ಹೊರ ರಾಜ್ಯಗಳಿಂದ ಯುವಕರ ದಂಡೇ ಹರಿದು ಬಂದಿದೆ.ಮರಾಠಾ ರೆಜಿಮೆಂಟ್‌ನಲ್ಲಿ ಆರ್ಮಿ ಸೆಲೆಕ್ಷನ್ ಗಾಗಿ 30,000ಕ್ಕೂ ಹೆಚ್ಚು ಯುವಕರು ಆಗಮಿಸಿದ್ದು, ಸ್ಥಳದಲ್ಲಿ ನೂಕು ನುಗ್ಗಲು ಉಂಟಾಗಿದೆ.

ರಾಜ್ಯದ ವಿವಿಧ ಜಿಲ್ಲೆಗಳು, ಮಹಾರಾಷ್ಟ್ರದಿಂದಲೂ ಯುವಕರು ಆಗಮಿಸಿದ್ದು, ಬೆಳಿಗ್ಗೆಯಿಂದಲೂ ಸರತಿ ಸಾಲಿನಲ್ಲಿ ನಿಂತಿದ್ದಾರೆ. ಈ ವೇಳೆ ನೂಕಾಟ ತಳ್ಳಾಟ ನಡೆದು, ಕೆಲ ಯುವಕರು ಬಿದ್ದು ಗಾಯಗೊಂಡಿದ್ದಾರೆ. ಹುಬ್ಬಳ್ಳಿಯ ಅಲ್ಲಾಭಕ್ಷ ಯರಗಟ್ಟಿ ಹಾಗೂ ಗೊಕಾಕ್ ತಾಲ್ಲೂಕಿನ ಬೆಟಗೇರಿ ಗ್ರಾಮದ ಪ್ರವೀಣ್ ಮಕಾಳೆ ಎಂಬು ವವರು ಗಾಯಗೊಂಡಿದ್ದು, ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ನೂಕಾಟ–ತಳ್ಳಾಟದಿಂದ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸರು ಲಾಠಿ ಬೀಸಿ ಯುವಕರ ಗುಂಪನ್ನು ಚದುರಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ.

**ವೃಷಭ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಮಿಥುನ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಕರ್ಕಾಟಕ** ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗ ದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

**ಸಿಂಹ** ನಿಮ್ಮ ಹೃದಯ ಬಡಿತವು ನಿಮ್ಮ ಸಂಗಾತಿಯೊಡನೆ ಲಯದಲ್ಲಿ ಪ್ರೀತಿಯ ಸಂಗೀತವನ್ನು ನುಡಿಸುತ್ತದೆ. ಸಹೋದ್ಯೋಗಿಗಳು ಮತ್ತು ಹಿರಿಯರ ಸಂಪೂರ್ಣ ಸಹಕಾರದಿಂದ ಕಛೇರಿಯಲ್ಲಿ ಕೆಲಸ ಬೇಗ ಮುಗಿಯುತ್ತದೆ.

**ಕನ್ಯಾ** ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ.

**ತುಲಾ** ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು.

**ವೃಶ್ಚಿಕ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು.

**ಧನಸ್ಸು** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ.

**ಮಕರ** ನಿಮ್ಮ ಕಣ್ಣುಗಳು ಅದೆಷ್ಟು ಪ್ರಕಾಶಮಾನವಾಗಿವೆಯೆಂದರೆ ಅವು ನಿಮ್ಮ ಪ್ರೇಮಿಯ ಕಾಳರಾತ್ರಿಯನ್ನು ಬೆಳಗಬಹುದು. ನಿಮ್ಮ ಪಾಲುದಾರರನ್ನು ಲಘುವಾಗಿ ತೆಗೆದುಕೊಳ್ಳಬೇಡಿ.

**ಕುಂಭ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ. ಭೇಟಿ ನೀಡುವ ಅತಿಥಿಗಳು ನಿಮ್ಮ ಸಂಜೆಯನ್ನು ಆಕ್ರಮಿಸಿಕೊಳ್ಳಬಹುದು.

**ಮೀನ** ಸಂಬಂಧಿಗಳು ಬೆಂಬಲ ನೀಡುತ್ತಾರೆ ಮತ್ತು ನಿಮ್ಮ ಮನಸ್ಸಿಗೆ ಆ ಹೊರೆಯಾದ ಆ ತೊಂದರೆಯನ್ನು ಕಡಿಮೆ ಮಾಡುತ್ತಾರೆ. ಧಾರ್ಮಿಕ ಮತ್ತು ಶುದ್ಧಪ್ರೀತಿಯನ್ನು ಅನುಭವಿಸಿ.

# ಆಶ್ರಯ ಮನೆಗೆ 'ಇ-ಸ್ವತ್ತು' ತೊಡಕು: ಫಲಾನುಭವಿಗಳು ಪರದಾಟ

**● ಆಸ್ತಿ ದಾಖಲೆಗಳಲ್ಲಿನ ಗೊಂದಲದಿಂದ ಗ್ರಾಮೀಣ ಪ್ರದೇಶದಲ್ಲಿ ಇ-ಸ್ವತ್ತು ಪಡೆಯುವುದು ಸುಲಭವಲ್ಲ**

• **ಉದಯವಾಹಿನಿ, ದಾವಣಗೆರೆ**

ವಸತಿ ಯೋಜನೆಗಳಿಗೆ 'ಇ-ಸ್ವತ್ತು' ಹಾಜರುಪಡಿಸಲಾಗದೇ ಮಂಜೂರಾದ ಮನೆಗಳನ್ನು ನಿರ್ಮಿಸಿಕೊಳ್ಳಲು ಗ್ರಾಮೀಣ ಪ್ರದೇಶದ ಫಲಾನುಭವಿಗಳು ಪರದಾಡುತ್ತಿದ್ದಾರೆ. ರಾಜೀವ ಗಾಂಧಿ ವಸತಿ ನಿಗಮದ ನಿಯಮಗಳಿಗೆ ಅನುಗುಣವಾದ ಭೂದಾಖಲೆ ಒದಗಿಸಲು ಸಾಧ್ಯವಾಗದೇ ಅಸಹಾಯಕತೆಯಲ್ಲಿದ್ದಾರೆ.

ಬಡವರಿಗೆ ಸೂರು ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಬಸವ ವಸತಿ ಯೋಜನೆ, ಅಂಬೇಡ್ಕರ್ ವಸತಿ ಯೋಜನೆ ರೂಪಿಸಿದೆ.

3 ವರ್ಷಗಳ ಬಳಿಕ ಮನೆಗಳಿಗೆ ಮಂಜೂರಾತಿ ದೊರಕಿದೆ. ವಸತಿ ಸೌಲಭ್ಯ ಪಡೆಯಲು ಬಹುದಿನಗಳಿಂದ ಕಾಯುತ್ತಿದ್ದ ರಾಜ್ಯದ ಜನರಿಗೆ 'ಇ-ಸ್ವತ್ತು' ನಿರಾಸೆಯುಂಟು ಮಾಡಿದೆ.

ಗ್ರಾಮ ಠಾಣಾ ವ್ಯಾಪ್ತಿಯ ಕ್ರಮಬದ್ಧ ಆಸ್ತಿಗಳಿಗೆ ಗ್ರಾಮ ಪಂಚಾಯಿತಿ 'ಇ-ಸ್ವತ್ತು' ನೀಡುತ್ತದೆ. ನಮೂನೆ- 9, ನಮೂನೆ- 11 'ಎ' ಹಾಗೂ 11 'ಬಿ' (ಕ್ರಮಬದ್ಧವಲ್ಲದ ಆಸ್ತಿ) ಖಾತೆಗಳನ್ನು 'ದಿಶಾಂಕ್' ಆಯಪ್ ಮೂಲಕ ಸೃಜಿಸುವ ಅಧಿಕಾರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ (ಪಿಡಿಒ) ಇದೆ.

ಆಸ್ತಿ ದಾಖಲೆಗಳಲ್ಲಿನ ಗೊಂದಲದಿಂದ ಗ್ರಾಮೀಣ ಪ್ರದೇಶದಲ್ಲಿ ಇ-ಸ್ವತ್ತು ಪಡೆಯುವುದು ಸುಲಭವಲ್ಲ ಎಂಬಂತಾಗಿದೆ.

**ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ**

ಫಲಾನುಭವಿಯ ಕುಟುಂಬದ ಸದಸ್ಯರ ಹೆಸರಿನಲ್ಲಿ ನಿವೇಶನ ಇದ್ದರೆ ವಸತಿ ನಿರ್ಮಾಣಕ್ಕೆ ಈ ಹಿಂದೆ ಅನುಮೋದನೆ ಸಿಗುತ್ತಿತ್ತು. ಮನೆ ನಿರ್ಮಾಣವಾದ ಬಳಿಕ ಮಾಲೀಕತ್ವದ ವಿಚಾರವಾಗಿ ವ್ಯಾಜ್ಯಗಳು ಶುರುವಾಗುತ್ತಿದ್ದವು. ಹೀಗಾಗಿ, ಫಲಾನುಭವಿ ಅಥವಾ ಅವರ ಪತಿ-ಪತ್ನಿ ಹೆಸರಿಗೆ 'ಇ-ಸ್ವತ್ತು' ಇದ್ದರೆ ಮಾತ್ರ ಮಂಜೂರಾತಿ ಆದೇಶ ನೀಡಲಾಗುತ್ತಿದೆ. ಭೂ ಪರಿವರ್ತನೆ, ಪಾಲು ವಿಭಾಗ, ಪೌತಿ ಖಾತೆಯ ತೊಡಕಿನಿಂದಾಗಿ ಇಂತಹ ಭೂಮಿಗೆ ಇ-ಸ್ವತ್ತು ಸೃಜಿಸಲು ಸಾಧ್ಯವಾಗುತ್ತಿಲ್ಲ.

'ಬಸವ ವಸತಿ ಯೋಜನೆ, ಅಂಬೇಡ್ಕರ್ ವಸತಿ ಯೋಜನೆಯಡಿ 245 ಮನೆಗಳು ಮಂಜೂರಾಗಿವೆ. 2021ರ ಬಳಿಕ ಇದೇ ಮೊದಲ ಬಾರಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಇಷ್ಟು ಪ್ರಮಾಣದ ಮನೆ ಸಿಕ್ಕಿರುವುದಕ್ಕೆ ಖುಷಿಯಾಗಿತ್ತು. ಆದರೆ, 'ಇ-ಸ್ವತ್ತು' ಸೇರಿ ಅಗತ್ಯ ದಾಖಲೆಗಳನ್ನು ಒದಗಿಸಲು 88 ಫಲಾನುಭವಿಗಳಿಗೆ ಮಾತ್ರ ಸಾಧ್ಯವಾಗಿದೆ. ವಸತಿ ರಹಿತರು ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ' ಎಂದು ದಾವಣಗೆರೆ ತಾಲ್ಲೂಕಿನ ಮುದಹದಡಿ ಗ್ರಾಮ ಪಂಚಾಯಿತಿ ಸದಸ್ಯ ಪಿ.ಎನ್. ಮಹೇಂದ್ರ ಬೇಸರ ವ್ಯಕ್ತಪಡಿಸಿದರು.

ಆಯ್ಕೆಯಾದ ಸಾಮಾನ್ಯ ವರ್ಗದ ಫಲಾನುಭವಿಗೆ 1.20 ಲಕ್ಷ ಹಾಗೂ ಪರಿಶಿಷ್ಟ ಜಾತಿ, ಪಂಗಡದ ಫಲಾನುಭವಿಗೆ 1.70 ಲಕ್ಷ ಸಹಾಯಧನ ಲಭ್ಯವಾಗುತ್ತದೆ. ನರೇಗಾ ಯೋಜನೆಯಡಿ 27,000 ವೆಚ್ಚದ ಕಾಮಗಾರಿ ಮಾಡಿಕೊಳ್ಳಲು ಅವಕಾಶವಿದೆ. ಈ ಸಹಾಯಧನ ಕಡಿಮೆ ಎಂಬ ಕೊರಗು ಅನೇಕರಲ್ಲಿದೆ. ನಗರ ವಸತಿ ಯೋಜನೆಯಡಿ ಫಲಾನುಭವಿಗೆ ಲಭ್ಯ ವಾಗುತ್ತಿರುವ 3 ಲಕ್ಷ ಸಹಾಯಧನದ ಸೌಲಭ್ಯವನ್ನು ಗ್ರಾಮೀಣ ಪ್ರದೇಶಕ್ಕೂ ವಿಸ್ತರಿಸಲಾಗುತ್ತದೆ ಎಂಬ ವದಂತಿಯಿಂದ ಪ್ರಸಕ್ತ ಸಾಲಿನಲ್ಲಿ ಮನೆ ನಿರ್ಮಾಣಕ್ಕೆ ಜನ ಉತ್ಸುಕತೆ ತೋರುತ್ತಿಲ್ಲ' ಎನ್ನುತ್ತಾರೆ ಅಧಿಕಾರಿಗಳು.ಮನೆ ತಿರಸ್ಕರಿಸುವ ಫಲಾನುಭವಿ.

**ಕಂದಾಯ ಇಲಾಖೆ ಜತೆ ಚರ್ಚಿಸಿ ಪರಿಹರಿಸುವ ಪ್ರಯತ್ನ**



> ಗ್ರಾಮ ಠಾಣಾ ವ್ಯಾಪ್ತಿಯ ನಿಗದಿಯಲ್ಲಿ ಕೆಲ ತೊಂದರೆ ಆಗಿದೆ. ಕಂದಾಯ ಇಲಾಖೆ ಜತೆ ಚರ್ಚಿಸಿ ಪರಿಹರಿಸುವ ಪ್ರಯತ್ನ ನಡೆಯುತ್ತಿದೆ ಮನೆ ನಿರ್ಮಾಣಕ್ಕೆ ನೀಡುವ ಸಹಾಯಧನದ ಮೊತ್ತ ಕಡಿಮೆ ಎಂಬ ಕಾರಣವನ್ನು ಮುಂದಿಟ್ಟು ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ (ಪಿಎಂಎವೈ) ಮಂಜೂರಾದ ಮನೆಗಳನ್ನು ಕೆಲ ಫಲಾನುಭವಿಗಳು ತಿರಸ್ಕರಿಸುತ್ತಿದ್ದಾರೆ
>
> **-ಸುರೇಶ್ ಬಿ.ಇಟ್ನಾಳ್,** ಸಿಇಒ, ಜಿಲ್ಲಾ ಪಂಚಾಯಿತಿ, ದಾವಣಗೆರೆ

### ಭೂದಾಖಲೆಯ ಸಮಸ್ಯೆ

ವಸತಿ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಿದ ಬಹುತೇಕರು ಗ್ರಾಮ ಠಾಣಾ ವ್ಯಾಪ್ತಿಯ ಹೊರಗಿದ್ದಾರೆ. ಭೂಪರಿವರ್ತನೆ ಮಾಡದೇ ನಿರ್ಮಾಣಗೊಂಡ ಬಡಾವಣೆಯಲ್ಲಿ ನಿವೇಶನ ಹೊಂದಿದ್ದಾರೆ. ಭೂದಾಖಲೆಯ ಸಮಸ್ಯೆಯಿಂದ ಫಲಾನುಭವಿಯ ಹೆಸರಿನಲ್ಲಿನ 'ಇ-ಸ್ವತ್ತು' ಪಡೆಯಲು ಆಗುತ್ತಿಲ್ಲ. ಕಂದಾಯ ಮತ್ತು ಭೂದಾಖಲೆ ಇಲಾಖೆ ಇಂತಹ ಆಸ್ತಿಗಳ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುತ್ತಿಲ್ಲ. ಇದರಿಂದ 'ಇ-ಸ್ವತ್ತು' ವಿತರಣೆಯಲ್ಲಿ ತೊಂದರೆ ಉಂಟಾಗಿದೆ ಎಂಬುದು ಪಿಡಿಒ ಒಬ್ಬರ ಹೇಳಿಕೆ.

## ಮೈಸೂರು ಹುಲಿ ಟಿಪ್ಪು ಸುಲ್ತಾನ್ ಜಯಂತಿ ಆಚರಣೆ

• **ಉದಯವಾಹಿನಿ, ಕೆಂಭಾವಿ**

ಪಟ್ಟಣದ ಟಿಪ್ಪು ಸುಲ್ತಾನ ವೃತ್ತದಲ್ಲಿ ಟಿಪ್ಪುಸುಲ್ತಾನ್ ಸಂಯುಕ್ತ ರಂಗ ವತಿಯಿಂದ ಹಜರತ್ ಟಿಪ್ಪು ಸುಲ್ತಾನ ರವರ 275ನೇ ಜಯಂತೋತ್ಸವ ಕಾರ್ಯಕ್ರಮವನ್ನು ಸಿಹಿ ಹಂಚುವುದರ ಮೂಲಕ ಆಚರಿಸಲಾಯಿತು.

ನಂತರ ಮಾತನಾಡಿದ ಕೆಂಭಾವಿ ಟಿಪ್ಪು ಸುಲ್ತಾನ ಸಂಘದ ಅಧ್ಯಕ್ಷರಾದ ಶಫೀಕ್ ದಫೇದಾರ್ ದೇಶ ಕಂಡ ಅಪ್ರತಿಮವೀರ ಸೇನಾನಿ, ದೇಶಪ್ರೇಮಿ, ವೀರ ಸ್ವಾತಂತ್ರ್ಯ ಹೋರಾಟಗಾರ ಮತ್ತು ಪರಧರ್ಮ ಸಹಿಷ್ಣುತೆಯ ಸೌಹಾರ್ದತೆಯ ಧೀರ ಟಿಪ್ಪು ಸುಲ್ತಾನ, ದಕ್ಷಿಣ ಭಾರತದ ಮೈಸೂರು ರಾಜ್ಯದ ಮುಸಲ್ಮಾನ ದೊರೆ, ಬ್ರಿಟಿಷರ ವಿರುದ್ಧ ಹೋರಾಡಿದ ಸ್ವಾತಂತ್ರ್ಯ ಸೇನಾನಿ ಟಿಪ್ಪು ಎಂದರು. ವೀರ ಪರಾಕ್ರಮಿ ಮೈಸೂರು ಹುಲಿ ಎಂದು ಪ್ರಖ್ಯಾತನಾದ ಸುಲ್ತಾನ್ ಫತೇಹ್ ಅಲಿ ಸಾಹಬ್ ಟಿಪ್ಪು ಜಯಂತಿ ಪಟ್ಟಣದಲ್ಲಿ ಸಂಭ್ರಮದಿಂದ ಆಚರಣೆ ಮಾಡಬೇಕೆಂದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಶಹಪೂರಿನ ಯುವ ಮುಖಂಡ ನಯುಮ್ ಅಫಗಾನ ಮಾತನಾಡಿ ದೇಶದ ನೆಲ,ಜಲ,ನಾಡು, ರಕ್ಷಣೆಗಾಗಿ ತನ್ನ ಹೆತ್ತ ಮಕ್ಕಳನ್ನೇ ಒತ್ತೆಯಿಟ್ಟು ಬ್ರಿಟಿಷರ ವಿರುದ್ಧ ಹೋರಾಡಿದ ಸ್ವತಂತ್ರ ಸೇನಾನಿಯಾಗಿದ್ದಾರೆ ಅವರ ಸಾಹಸ ಧೈರ್ಯ ಶೌರ್ಯ ಪರಾಕ್ರಮವನ್ನು ಮೆಚ್ಚುವಂತದ್ದು ಇಂದಿನ ಪೀಳಿಗೆಗೆ ಅವರ ಆದರ್ಶಗಳು ಮಾದರಿಯಾಗಬೇಕು, ತಮ್ಮ ಆಡಳಿತದ ಅವಧಿಯಲ್ಲಿ ಜನಪರವಾದ ಕಾರ್ಯಕ್ರಮವನ್ನು ನೀಡಿದ ಶ್ರೇಯಸ್ಸು, ಟಿಪ್ಪು ಸುಲ್ತಾನ ರದಾಗಿದೆ. ಸರ್ವಧರ್ಮದ ಶ್ರೇಷ್ಠತೆಗಾಗಿ ಬದುಕಿದ ಧೀಮಂತ ನಾಯಕ ಎಂದು ಹೇಳಿದರು.



☛ ಉದಯವಾಹಿನಿ ಚಿತ್ರ

ಟಿಪ್ಪು ಸುಲ್ತಾನ ಭಾವಚಿತ್ರಕ್ಕೆ ಮಹಿಪಾಲ್ ರೆಡ್ಡಿ ದಿಗ್ಗಾವಿ ಮಾಲಾರ್ಪಣೆ ಮಾಡಿದರು. ಮಾಜಿ ಜಿಲ್ಲಾ ಪಂಚಾಯಿತ ಅಧ್ಯಕ್ಷರಾದ ಸಿದ್ದನಗೌಡ ಪೊಲೀಸ್ ಪಾಟೀಲ ನೆರವೇರಿಸಿದರು ಧ್ವಜಾರೋಹಣ ನೆರವೇರಿಸಿದರು.

ಈ ಸಂದರ್ಭದಲ್ಲಿ, ಕಾಜಾ ಪಟೇಲ್ ಕಾಚೂರು, ಸಂಜೀವ್ ರಾವ್ ಕುಲಕರ್ಣಿ, ಕೆ.ಡಿ.ನಾಸಿ,ಮೈಬೂಬ್ ಸಾಬ್ ದಪೇದರ್ , ಸೈಯದ್ ಹುಸೇನ್ ಮೌಲಾನ, ಗಾಲಿಬ್ ಖಾನ್ ಇನಾಮ್ದಾರ್, ರಫೀಕ್ ವಡಿಕೇರಿ ಬಿ.ಜೆಡ್,ನಾಲ್ತಾವಾಡ , ರಫೀಕ್ ಖಾಜಿ. ಆದಮ ನಾಸೀ,ರಾಜಕ್ ಸಾಸನೂರ,ಬಿ. ಕೆ.ನಾಶಿ,ಅಲ್ಲಾಬಕ್ಷ್ ಹುಳಬುತ್ತಿ,,ನಯುಮ ಖಾಜಿ, ಹನೀಫ್ ಸಾಸನೂರ್, ಎಸ್.ಕೆ.ಮಹ್ಮದ ಖಾಜಿ, ಜಿಲಾನಿ ನಾಶಿ, ಬಾಬಾ ತಾಳಿಕೋಟಿ, ಇತರರು ಇದ್ದರು.

## ಪ್ರಶಸ್ತಿ ಪ್ರದಾನ ಮಾಡಲು ಸರ್ಕಾರವು ಶಿಷ್ಟಾಚಾರ ಪಾಲನೆಯ ಅಂಶಗಳನ್ನು ಕಡ್ಡಾಯಗೊಳಿಸಿ: ಯಾಕಾಪೂರ

• **ಉದಯವಾಹಿನಿ,ಚಿಂಚೋಳಿ**

ಸರ್ಕಾರ ಯಾವುದೇ ಇಲಾಖೆಗಳ ನಿಗಮ ಮಂಡಳಿಗಳು,ಸಹಕಾರ ಸಂಘಗಳು ವಿವಿಧ ಇಲಾಖೆಗಳಲ್ಲಿ ಸಾಧನೆಗೈದ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲು ಸರ್ಕಾರದ ಶಿಷ್ಟಚಾರ ಪಾಲನೆ ನಿಯಮಗಳಲ್ಲಿ ಕೆಲವು ಅಂಶಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಮಾರ್ಗಸೂಚಿಗಳನ್ನು ಹೊರಡಿಸಬೇಕು ಎಂದು ಸಮಾಜ ಸೇವಕ ರಮೇಶ ಯಾಕಾಪೂರ ಆಗ್ರಹಿಸಿದರು.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಪ್ರಶಸ್ತಿ ಪ್ರದಾನ ಮಾಡಲು ವಿಶೇಷ ಸಾಧನೆ ಮಾಡಿದ ವ್ಯಕ್ತಿಗಳನ್ನು ಗುರುತಿಸಲು ಮತ್ತು ಸರ್ಕಾರದ ಇತರ ಸಂಸ್ಥೆಗಳು ಹಮ್ಮಿಕೊಳ್ಳುವ ಸಮಾರಂಭಗಳಲ್ಲಿ ಅಂದರೆ ಸ್ವಾತಂತ್ರ್ಯ ದಿನಾಚರಣೆ, ಗಣರಾಜೋತ್ಸವ ದಿನಾಚರಣೆ, ಕರ್ನಾಟಕ ರಾಜ್ಯೋತ್ಸವ,ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಹಾಗೂ ಮಹಾಪುರುಷರ ಜಯಂತಿ ಆಚರಣೆ ಹಾಗೂ ಸರ್ಕಾರ ಆಯೋಜಿಸುವ ಇತರೆ ಯಾವುದೇ ಸಮಾರಂಭಗಳಲ್ಲಿ ಅಧ್ಯಕ್ಷತೆ ಮತ್ತು ಅತಿಥಿಗಳ ಸ್ಥಾನಗಳಿಗೆ ಮತ್ತು ವಿಶೇಷ ಆಹ್ವಾನಿತರನ್ನು ಅಹ್ವಾನಿಸಲು ಸರ್ಕಾರದ ಶಿಷ್ಟಚಾರ ನಿಯಮದಂತೆ ಮಾನದಂಡಗಳು ಕಡ್ಡಾಯವಾಗಿ ಪಾಲಿಸಲು ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಕಾರಣ ಈ ಮೊದಲು ಮುಖ್ಯಮಂತ್ರಿಯವರ ಕಾರ್ಯಕ್ರಮವೊಂದರಲ್ಲಿ ಒಬ್ಬ ರೌಡಿ ಶೀಟರ ಪಾಲುಗೊಂಡಿದ್ದು ಇದ್ದರಿಂದ ಮುಖ್ಯಮಂತ್ರಿಯವರ ಹಾಗೂ ಪೋಲೀಸ್ ಅಧಿಕಾರಿಗಳು ಆತಂಕಕ್ಕೊಳಾಗಿದ್ದರು, ಈ ಘಟನೆ ಜರುಗಿದ ನಂತರವೂ ಕೂಡ ಸರ್ಕಾರ ಹೊರಡಿಸಲಾದ ಶಿಷ್ಟಚಾರದ ನಿಯಮ ಪಾಲಿಸುವ ಆದೇಶದಲ್ಲಿ ರೌಡಿ ಶೀಟರರವರನ್ನು ಯಾವುದೇ ಕಾರಣಕ್ಕೆ ಸಮಾರಂಭದಲ್ಲಿ ಭಾಗವಹಿಸದಂತೆ ತಡೆಯುವ ಸೂಚನೆ ಇರುವುದಿಲ್ಲಾ. ಇತ್ತೀಚೆಗೆ ಸರ್ಕಾರ ಮತ್ತು ಇತರ ನಿಗಮ ಮಂಡಳಿಗಳು,ಸಹಕಾರ ಸಂಘಗಳು, ಆಯೋಜಿಸುವ ಸಮಾರಂಭಗಳಲ್ಲಿ ರೌಡಿ ಶೀಟರ್‌ಗಳು ಭಾಗವಹಿಸುತ್ತಿರುವುದು ಸಾಮಾನ್ಯವಾಗಿದೆ.



**ಕಟ್ಟುನಿಟ್ಟಿನ ಸೂಚನೆ ನೀಡಬೇಕು**

ರೌಡಿ ಶೀಟರ್‌ಗಳು ಮತ್ತು ಅವರ ಜೊತೆಯಲ್ಲಿ ಸಮಾರಂಭದಲ್ಲಿ ಪಾಲುಗೊಂಡ ಅಧಿಕಾರಿಗಳು ಪೊಲೀಸ್ ಅಧಿಕಾರಿಗಳು ಕೂಡ ಕೈ ಕಟ್ಟಿಕೊಂಡು ಕುಳಿತುಕೊಳ್ಳುವ ಅನಿವಾರ್ಯತೆ ಉಂಟಾಗಿರುತ್ತದೆ,ಇದನ್ನು ತಡೆಯಲು ಸರ್ಕಾರದ ಶಿಷ್ಟಚಾರದ ನಿಯಮಗಳಲ್ಲಿ ಈ ಅಂಶ ಅಳವಡಿಸಿ ಮಾರ್ಗಸೂಚಿಗಳನ್ನು ಹೊರಡಿಸಬೇಕು ಎಂದು ಅವರು ರಾಜ್ಯದ ಮುಖ್ಯಮಂತ್ರಿಗಳಿಗೆ,ಗೃಹ ಸಚಿವರಿಗೆ,ಸರ್ಕಾರದ ಕಾರ್ಯದರ್ಶಿಯವರಿಗೆ ಪತ್ರ ಬರೆದು ಆಗ್ರಹಿಸಿದ್ದಾರೆ.

## ಟಿಪ್ಪು ಸುಲ್ತಾನ್ ಜಯಂತಿ ಆಚರಣೆ



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೆಂಭಾವಿ**

ಪಟ್ಟಣದ ಯಾಳಗಿ ಗ್ರಾಮದ ಡಾ ಬಿ ಆರ್ ಅಂಬೇಡ್ಕರ್ ವೃತ್ತದಲ್ಲಿ ಮೈಸೂರು ಹುಲಿ ಹಜರತ್ ಟಿಪ್ಪು ಸುಲ್ತಾನ್ ಅವರ ಜಯಂತಿ ಮಾಡಲಾಯಿತು, ಈ ಸಂದರ್ಭದಲ್ಲಿ ಮಾತನಾಡಿದ ಆರ್ ಬಿ ಕನ್ನಡಿಗ ಟಿಪ್ಪು ತನ್ನ ಆಳ್ವಿಕೆಯಲ್ಲಿ ಹೊಸ ಕ್ಯಾಲೆಂಡರ್, ಹೊಸ ನಾಣ್ಯ ಮತ್ತು ಏಳು ಹೊಸ ಸರ್ಕಾರಿ ಇಲಾಖೆಗಳನ್ನು ಪರಿಚಯಿಸಿದನು ಮತ್ತು ರಾಕೆಟ್ ಬಳಕೆಯಲ್ಲಿ ಮಿಲಿಟರಿ ಆವಿಷ್ಕಾರಗಳನ್ನು ಮಾಡಿದರು.

ಈ ಸಂದರ್ಭದಲ್ಲಿ, ಡಿಎಸ್‌ಎಸ್ ಮುಖಂಡರು ಶಿವಶರಣಪ್ಪ ನಾಗರೆಡ್ಡಿ, ಅಬ್ದುಲ್ ಸಿಪಾಯಿ, ಮೆರಸಾಬ್ ಅಡಿಗಿನಾಳ, ಬಂದೇ ನವಾಜ್ ಚಳಗಿ, ಚಾಂದ್ ಸಾಬ್ ವಡೇಗೇರಿ, ಮಲಕ್ ಚೌದ್ರಿ, ಮಾಂತೇಶ್ ನಡೆನ ಕೇರಿ, ಯಾಕೋಬ್ಬಲಿ ಭಗವಾನ್, ದವಲು ಅಪರಾಧ, ಮೌಲಾಲಿ ತಳ್ಳೋಳಿ, ಇರ್ಫಾನ್ ಅಡಗಿನಾಳ, ಮಡಿವಾಳಪ್ಪ ಜಲಪುರ್, ಅಮೀನ್ ಅಪರಾಧ, ಇನ್ನು ಅನೇಕ ಜನ ಇದ್ದರು

## ಇಬ್ಬರು ಬಾಲಕರಿಗೆ 25 ವರ್ಷ ಜೈಲು

• **ಉದಯವಾಹಿನಿ, ರಾಣೆಬೆನ್ನೂರು**

ಬಾಲಕಿಯ ಮೇಲೆ ಅತ್ಯಾಚಾರ ಎಸಗಿ, ಕೊಲೆ ಮಾಡಿದ ಇಬ್ಬರು ಬಾಲಕರಿಗೆ ಸೆಷನ್ಸ್ ನ್ಯಾಯಾಧೀಶ ನಿಂಗನಗೌಡ ಪಾಟೀಲ ಅವರು 25 ವರ್ಷ ಜೈಲು ಮತ್ತು ತಲಾ 3 ಲಕ್ಷ ದಂಡ ವಿಧಿಸಿ ಆದೇಶಿಸಿದ್ದಾರೆ. ದಂಡದ ಹಣದಲ್ಲಿ ಮೃತ ಬಾಲಕಿಯ ತಾಯಿ ಮತ್ತು ತಮ್ಮನಿಗೆ 3 ಲಕ್ಷ ಪರಿಹಾರ, ಕರ್ನಾಟಕ ಸರ್ಕಾರವು ನೊಂದವರ ಪರಿಹಾರ ನಿಧಿ ಯೋಜನೆಯಡಿ ನೀಡುವ ಪರಿಹಾರ ನಿಧಿಯಿಂದ ಬಾಲಕಿಯ ತಾಯಿ, ತಮ್ಮನಿಗೆ 10 ಲಕ್ಷ ಪರಿಹಾರ ನೀಡಬೇಕೆಂದು ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ವಿಜಯಕುಮಾರ ಶಂಕರಗೌಡ ಪಾಟೀಲ ವಾದ ಮಂಡಿಸಿದ್ದರು.

**ಹಿನ್ನೆಲೆ:** 2016 ರಲ್ಲಿ ನ. 19ರಂದು ಇಬ್ಬರು ಬಾಲಕರು ಮನೆಯೊಂದರಲ್ಲಿ ಯಾರೂ ಇಲ್ಲದ ವೇಳೆ ಬಾಲಕಿಯನ್ನು ಸ್ಟೋರ್ ರೂಂಗೆ ಕರೆದೊಯ್ದು, ಅತ್ಯಾಚಾರ ಮಾಡಿ ಕುತ್ತಿಗೆಗೆ ಚಾಕುವಿನಿಂದ ಚುಚ್ಚಿ ಕೊಲೆ ಮಾಡಿದ್ದರು. ಈ ಬಗ್ಗೆ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಗರ ಠಾಣೆ ಸಿಪಿಐ ರವೀಂದ್ರ ಕುರುಬಗಟ್ಟಿ ಅವರು ತನಿಖೆ ಕೈಗೊಂಡು ಇಬ್ಬರು ಬಾಲಕರನ್ನು ಬಂಧಿಸಿ ಪೋಕ್ಸೊ ಕಾಯ್ದೆಯ ಅಡಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಸುಮಾರು 8 ವರ್ಷಗಳ ಕಾಲ ವಿಚಾರಣೆಯ ನಂತರ ಈಗ ನ್ಯಾಯಾಲಯವು ತೀರ್ಪು ನೀಡಿದೆ.

## ಮಾಹೆ ವಿಶ್ವವಿದ್ಯಾಲಯದ 32ನೇ ಘಟಿಕೋತ್ಸವ

• **ಉದಯವಾಹಿನಿ, ಉಡುಪಿ**

ತಾಂತ್ರಿಕತೆಯ ವಿಕಾಸದ ಪರಿಣಾಮವಾಗಿ ಇಂದು ಅಮೆಜಾನ್ ಮತ್ತು ಸ್ವಿಗ್ಗಿಯಂತಹ ಕೃತಕ ಬುದ್ಧಿಮತ್ತೆ (ಎಐ) ಚಾಲಿತ ವೇದಿಕೆಗಳು ಜನಪ್ರಿಯವಾಗುತ್ತಿವೆ ಎಂದು ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ರೋಬೋಟಿಕ್ಸ್ ಮತ್ತು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ (ಎನ್‌ಐಆರ್‌ಎ) ಮಹಾನಿರ್ದೇಶಕ ಡಾ.ಇಂದ್ರಜಿತ್ ಭಟ್ಟಾಚಾರ್ಯ ಹೇಳಿದರು. ಮಣಿಪಾಲದ ಕೆಎಂಸಿ ಗ್ರೀನ್ಸ್‌ನಲ್ಲಿ ನಡೆದ ಮಣಿಪಾಲ್ ಅಕಾಡೆಮಿ ಆಫ್ ಹೈಯರ್ ಎಜುಕೇಶನ್(ಮಾಹೆ) ವಿಶ್ವವಿದ್ಯಾಲಯದ 32ನೇ ಘಟಿಕೋತ್ಸವದ ಎರಡನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಗಿ ಚಾಲಿತ ಎಂಜಿನ್‌ಗಳಿಂದ ಆರಂಭವಾಗಿ ಸೈಬರ್ ಭೌತಿಕ ವ್ಯವಸ್ಥೆಗಳವರೆಗೆ ನಮ್ಮ ತಾಂತ್ರಿಕ ವಿಕಾಸದ ಪ್ರಯಾಣವು ಮುಂದುವರಿದಿದೆ ಈಗ ಅದು ಕೃತಕ ಬುದ್ಧಿಮತ್ತೆಯ ಕಡೆಗೆ ಹೊರಳಿದೆ ಎಂದರು.

## ಶಿಗ್ಗಾಂವಿ ಅಭಿವೃದ್ಧಿ ಮಾಡದ ಬೊಮ್ಮಾಯಿ: ಸಚಿವ ಖಂಡ್ರೆ

• **ಉದಯವಾಹಿನಿ, ಹುಬ್ಬಳ್ಳಿ**

ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಶಿಗ್ಗಾವಿ ಕ್ಷೇತ್ರಕ್ಕೆ ಯಾವ ಕೊಡುಗೆಯೂ ನೀಡಿಲ್ಲ. ಹೀಗಿದ್ದಾಗ ಯಾವ ಮುಖ ಇಟ್ಟುಕೊಂಡು ಅವರು ಅಲ್ಲಿ ಮತ ಯಾಚಿಸುತ್ತಾರೆ ಎಂದು ಸಚಿವ ಈಶ್ವರ ಖಂಡ್ರೆ ಪ್ರಶ್ನಿಸಿದರು. ಶಿಗ್ಗಾವಿಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ.


ಒಂದು ಕ್ರೀಡಾಂಗಣ ನಿರ್ಮಿಸಿಕೊಡಿ ಎಂದು ಅಲ್ಲಿಯ ಯುವಕರು ವಿನಂತಿಸಿದ್ದರೂ, ಬಿಜೆಪಿಯಿಂದ ಅದು ಸಾಧ್ಯವಾಗಿಲ್ಲ. ಏನೂ ಅಭಿವೃದ್ಧಿ ಕೆಲಸಗಳನ್ನು ಮಾಡದೆ, ಯುವಕರಿಂದ ಮತ್ತು ರೈತರಿಂದ ಮತ ಯಾಚಿಸುತ್ತಿದ್ದಾರೆ' ಎಂದು ವ್ಯಂಗ್ಯವಾಡಿದರು. ಉಪ ಚುನಾವಣೆಯ ಮೂರು ಕ್ಷೇತ್ರದಲ್ಲೂ ಕಾಂಗ್ರೆಸ್ ಪರ ಅಲೆ ಇದೆ. ಸ್ಪಷ್ಟ ಬಹುಮತ ಪಡೆದು ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ. ಯಾವುದೇ ಭ್ರಷ್ಟಾಚಾರ ನಡೆಸದೆ ನಾವು ಅಭಿವೃದ್ಧಿ ಮಾಡಿ ತೋರಿಸಿದ್ದೇವೆ. ಬಿಜೆಪಿಯವರು ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆ ಎಂದು ಅಧಿಕಾರಕ್ಕೆ ಬಂದು, ಏನೂ ಮಾಡದೆ ಮೋಸ ಮಾಡಿದ್ದಾರೆ. ನಾವು ಮಧ್ಯವರ್ತಿ ಇಲ್ಲದೆ ಪಂಚ ಗ್ಯಾರಂಟಿ ಯೋಜನೆ ನೀಡಿ, ನುಡಿದಂತೆ ನಡೆದಿದ್ದೇವೆ. ಹೀಗಾಗಿ ಬಿಜೆಪಿಯವರ ಮಾತಿಗೆ ಮತದಾರರು ಮರುಳಾಗುವುದಿಲ್ಲ ಎಂದರು. ರಾಜ್ಯದಲ್ಲಿ ಬಿಜೆಪಿ ಆಡಳಿತವಿದ್ದಾಗ ಕೇಂದ್ರ ಸರ್ಕಾರದಿಂದ ಸುತ್ತೋಲೆ ಬಂದಿದೆ ಎಂದು, ಹಿಂದುಳಿದ ವರ್ಗದ ಮಕ್ಕಳ ಶಿಷ್ಯವೇತನ ಬಂದ್ ಮಾಡಿದೆ. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಸರ್ವಾಧಿಕಾರಿಯಂತೆ ವರ್ತಿಸುತ್ತಿದೆ.

ದೇಶದಲ್ಲಿ ಅವರದ್ದು ಹಿಟ್ಲರ್ ಶಾಹಿ ಆಡಳಿತ' ಎಂದು ಸಚಿವ ಈಶ್ವರ ಖಂಡ್ರೆ ಅಕ್ರೋಶ ವ್ಯಕ್ತಪಡಿಸಿದರು.

> ಶಿಗ್ಗಾಂವಿ ಕ್ಷೇತ್ರದ ಜನತೆಗೆ ಪ್ರಗತಿಬೇಕಾಗಿದ್ದು, ಕಾಂಗ್ರೆಸ್‌ಗೆ ಬೆಂಬಲ ಸೂಚಿಸುತ್ತಿದ್ದಾರೆ. ನಮ್ಮ ಅಭ್ಯರ್ಥಿ ಯಾಸಿರಖಾನ್ ಪಠಾನ್ 25 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ
>
> -ಸಚಿವ ಖಂಡ್ರೆ



## ಸಂಚಾರ ಸಾರಿಗೆ ಬಸ್ಸಿನಲ್ಲಿ ಕನ್ನಡದ ಕಂಪು



☛ ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮುದ್ದೇಬಿಹಾಳ**

ಕನ್ನಡ ರಾಜ್ಯೋತ್ಸವದ ಅಂಗವಾಗಿ ಬಿನ್ನ ವಿಶಿಷ್ಠವಾದ ವಿನ್ಯಾಸ ಸಾರಿಗೆ ವಾಹನದಲ್ಲಿ ಕನ್ನಡ ಸಾಹಿತ್ಯ ಹಾಗೂ ನಾಡ ನುಡಿ ಜಲ .ಕವಿಗಳ.ಹಾಗೂ ಪ್ರತಿ ಜಿಲ್ಲೆ ವಿಶೇಷತೆ ಸೂಚಿಸುವ ಎಲ್ಲಾ ರೀತಿಯ ಬಗ್ಗೆ ಪುಸ್ತಕ ಸಹಿತ ಅಲಂಕಾರಗೊಳೊಸಿ ಕನ್ನಡದ ಕಂಪನು ಪ್ರತಿ ಜಿಲ್ಲೆಗೂ ತಲುಪಿಸು ವಿನೂತನ ಸೇವೆ ಸಲ್ಲಿಸು ಸಂಕಲ್ಪದೊಂದಿಗೆ ಹಿರೆಕೆರೂರ ಘಟಕ ನಿರ್ವಾಹಕರಾದ ಶಶಿ ಭೂಸಲೆ ಅವರು ಶ್ರಮದ ಹಾಗೂ ಕನಸಿನ 'ಭುವನೇಶ್ವರಿ ಸಾರಥಿ''ಯನ್ನು ಸ್ವಾಗತಿಸಿ. ಸನ್ಮಾನಿಸಲಾಯಿತ್ತು.

ಈ ಸಂದರ್ಭದಲ್ಲಿ ಬಸವರಾಜ ಮುರಾಳ.ಮಾಜಿ ಕಂಟ್ರೋಲ್. ವಿಜಯ ಮುರಾಳ.ಶರಣು ಸಾಲವಾಡಗಿ. ವಿನೂದ ಯರಗಲ್.ವೀರೇಶ ಢವಳಗಿ.ಹಣಮಂತ ನಲವಡೆ. ಮುದ್ದೇಬಿಹಾಳ ಸಾರಿಗೆ ನಿಯಂತ್ರಕರು.ಹಾಗೂ ಸಿಬ್ಬಂದ ಸ್ವಾಗತಿಸಿ .ಶುಭ ಹಾರೈಸಿ.ಬಿಳ್ಕೋಡಲಾಯಿತು.

> ಇಂದು ಕನ್ನಡ ನಾಡು ನುಡಿ ವಿಚಾರಕ್ಕೆ ಬಂದಾಗ ಮೊದಲು ನೆನಪು ಆಗೋದೇ ನಮ್ಮ ಆಟೋ ಚಾಲಕರು ಹಾಗೂ ಬಸ್ ಚಾಲಕರು. ಹಿರೇಕೇರೂರ ಘಟಕದ ಬಸ್ ನಿರ್ವಾಹಕರಾದ ಶಶಿ ಬೋಸಲೆ ಅವರು ತಮ್ಮ ಸ್ವಂತ ಹಣದಿಂದ ಬಸ್ಸಿನಲ್ಲಿ ಪ್ರಯಾಣಿಕರಿಗೆ ಜ್ಞಾನ ಹೆಚ್ಚಾಗಲು ವಿದ್ಯಾರ್ಥಿಗಳಿಗೆ ಹಾಗೂ ಹಿರಿಯರಿಗೆ ಅನುಕೂಲ ವಾಗುವಂತ ಪುಸ್ತಕ ಇಡುವ ಮೂಲಕ ಪ್ರಯಾಣಿಕರು ಓದುವುದರಲ್ಲಿ ಸಂತಸದಲ್ಲಿ ಕನ್ನಡಾಂಬೆಯ ಹೆಮ್ಮೆಯ ಮಗನಾಗಿದ್ದಾರೆ.
>
> -ಶರಣು ಸಾಲವಾಡಗಿ, ಸಮಾಜ ಸೇವಕರು ಮುದ್ದೇಬಿಹಾಳ

## ಹೆಚ್ಚಿನ ದರ ವಸೂಲಿ: ಆಟೋ ಚಾಲಕರಿಗೆ ಬಿಸಿ ಮುಟ್ಟಿಸಿದ ಪೊಲೀಸರು

• **ಉದಯವಾಹಿನಿ, ಶಿವಮೊಗ್ಗ**

ಪ್ರಯಾಣಿಕರಿಂದ ಹೆಚ್ಚಿನ ದರ ವಸೂಲಿ ಮಾಡುತ್ತಿದ್ದ ಆಟೋ ಚಾಲಕರಿಗೆ ಶಿವಮೊಗ್ಗ ಪೊಲೀಸರು ಬಿಸಿ ಮುಟ್ಟಿಸಿದ್ದು, 200 ಆಟೋ ವಶಕ್ಕೆ ಪಡೆದಿದ್ದಾರೆ.ಶಿವಮೊಗ್ಗ ನಗರದಲ್ಲಿ ಆಟೋ ಮೀಟರ್‌ಗಳನ್ನು ಬಳಸದೆ, ಹೆಚ್ಚಿನ ದರವನ್ನು ಕೇಳುತ್ತಿರುವ ಬಗ್ಗೆ ಬಂದ ಮಾಹಿತಿಯ ಹಿನ್ನೆಲೆಯಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿ, ಆಟೋಗಳನ್ನು ತಡೆದು, ಮೀಟರ್ ಬಳಕೆ ಮಾಡುತ್ತಿರುವ ಬಗ್ಗೆ ತಪಾಸಣೆ ಮಾಡಿ, 100 IMV ಪ್ರಕರಣ ದಾಖಲಿಸಿ, 200 ವಾಹನ ವಶಕ್ಕೆ ಪಡೆದಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ, Area Domination ಭಾಗವಾಗಿ ವಾಹನ ತಪಾಸಣೆ ಮಾಡಿ ಲಘು ಪ್ರಕರಣ, IMV ಪ್ರಕರಣ ಮತ್ತು ಡಿ.ಡಿ. ಪ್ರಕರಣಗಳನ್ನು ದಾಖಲಿಸಿದೆ ಎಂದು ಎಸ್ಪಿ ಮಿಥುನ್ ಕುಮಾರ್ ತಿಳಿಸಿದ್ದಾರೆ.

## ಆರ್ಮಿ ರ್‍ಯಾಲಿಯಲ್ಲಿ ನೂಕು ನುಗ್ಗಲು: ಲಾಠಿ ಚಾರ್ಜ್

• **ಉದಯವಾಹಿನಿ, ಬೆಳಗಾವಿ**

ಬೆಳಗಾವಿಯ ಮರಾಠಾ ರೆಜಿಮೆಂಟ್‌ನಲ್ಲಿ ಇಂದು ನಡೆದ ಆರ್ಮಿ ಸೆಲೆಕ್ಷನ್ ಓಪನ್ ರ್‍ಯಾಲಿಯಲ್ಲಿ ನೂಕುನುಗ್ಗಲು ಉಂಟಾಯಿತು. ಇವಳೇ ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ. ಮಹಾರಾಷ್ಟ್ರ ಹಾಗೂ ಉತ್ತರ ಕರ್ನಾಟಕ ಭಾಗದಿಂದ ಅರ್ಜಿ ಹಾಕಿದ್ದ ಅಭ್ಯರ್ಥಿಗಳ ಆಯ್ಕೆಗೆ ಇಂದು ಆಹ್ವಾನಿಸಲಾಗಿದ್ದು, ಓಪನ್ ರ್‍ಯಾಲಿಯಲ್ಲಿ ಸುಮಾರು 30 ಸಾವಿರಕ್ಕೂ ಅಧಿಕ ಯುವಕರು ಭಾಗಿಯಾಗಿದ್ದರು.ರಾಜ್ಯದ ವಿವಿಧ ಜಿಲ್ಲೆಗಳು, ಮಹಾರಾಷ್ಟ್ರದಿಂದಲೂ ಯುವಕರು ಆಗಮಿಸಿದ್ದು, ಬೆಳಿಗ್ಗೆಯಿಂದಲೂ ಸರತಿ ಸಾಲಿನಲ್ಲಿ ನಿಂತಿದ್ದಾರೆ. ಈ ವೇಳೆ ನೂಕಾಟ ತಳ್ಳಾಟ ನಡೆದು, ಕೆಲ ಯುವಕರು ಬಿದ್ದು ಗಾಯಗೊಂಡಿದ್ದಾರೆ.

# ದೇಶದ ಸ್ವಾತಂತ್ರ್ಯಕ್ಕಾಗಿ ಎಲ್ಲರಿಂದಲೂ ತ್ಯಾಗ: ಮುಫ್ತಿ ನಜೀರ್ ಅಹ್ಮದ್

**ನಮ್ಮ ಧರ್ಮವನ್ನು ಪ್ರೀತಿಸುವುದರ ಜೊತೆಗೆ ಇತರ ಧರ್ಮದವರನ್ನೂ ಗೌರವಿಸುವ ಮನಸ್ಥಿತಿ ಎಲ್ಲರಿಗೂ ಇರಬೇಕು: ಅನ್ಸಾರಿ**

• **ಉದಯವಾಹಿನಿ, ಕೊಪ್ಪಳ**

ದೇಶದ ಸ್ವಾತಂತ್ರ್ಯಕ್ಕಾಗಿ ಜಾತಿ, ಧರ್ಮ ಹಾಗೂ ಸಮುದಾಯಗಳ ತಾರತಮ್ಯವಿಲ್ಲದೆ ಎಲ್ಲರೂ ಹೋರಾಡಿದ್ದಾರೆ. ಅದರಲ್ಲಿ ಅನೇಕರು ಪ್ರಾಣತ್ಯಾಗ ಮಾಡಿದ ಸತ್ಯದ ಇತಿಹಾಸದ ಕಥನವನ್ನು ನೀವೆಲ್ಲರೂ ಅರಿಯಬೇಕು. ಯಾರೂ ಜಾತಿ, ಧರ್ಮದ ಹೆಸರಿನಲ್ಲಿ ಸ್ವಾತಂತ್ರ್ಯ ಹೋರಾಟ ಮಾಡಿಲ್ಲ' ಎಂದು ಇಲ್ಲಿನ ಯುಸೂಫಿಯಾ ಮಸೀದಿಯ ಹಜರತ್ ಮುಫ್ತಿ ನಜೀರ್ ಅಹ್ಮದ್ ಖಾದ್ರಿ ತಸ್ಕೀನ್ ಅವರು ಹೇಳಿದರು.

ಸ್ವಾತಂತ್ರ್ಯ ಹೋರಾಟಗಾರರ ಜನ್ಮದಿನದ ಅಂಗವಾಗಿ ನಗರದ ಸಾಹಿತ್ಯ ಭವನದಲ್ಲಿ ಶನಿವಾರ ಮುಸ್ಲಿಂ ಯುವ ಸಮಿತಿಯಿಂದ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಎಲ್ಲಾ ಸಮುದಾಯಗಳ ಜನರ ತ್ಯಾಗದಿಂದ ನಾವು ಈಗ ಸ್ವತಂತ್ರದಿಂದ ಬದುಕುತ್ತಿದ್ದೇವೆ. ಟಿಪ್ಪು ಸುಲ್ತಾನ್ ಅವರನ್ನು ಶತ್ರುಗಳು ಹೊಗಳಿದರೆ ನಮ್ಮವರು ಅವರ ಶೌರ್ಯದ ಕಥನವನ್ನು ಪಠ್ಯದಿಂದ ತೆಗೆದು ಹಾಕುವ ಕೆಲಸ ಮಾಡುತ್ತಿದ್ದಾರೆ. ಇದು ಸರಿಯಲ್ಲ' ಎಂದರು.



☛ ಉದಯವಾಹಿನಿ ಚಿತ್ರ

**ಕಾನೂನಿನ ಚೌಕಟ್ಟಿನಲ್ಲಿ ನ್ಯಾಯ ಕೇಳಬೇಕು**

ಮಾಜಿ ಸಚಿವ ಇಕ್ಬಾಲ್ ಅನ್ಸಾರಿ ಮಾತನಾಡಿ 'ಭಾರತೀಯ ಮುಸಲ್ಮಾನರಿಗೆ ಕುರಾನ್ ಮತ್ತು ನಮ್ಮ ದೇಶದ ಸಂವಿಧಾನ ಮುಖ್ಯವಾಗಿದ್ದು ಅದರ ಅಡಿಯಲ್ಲಿಯೇ ಬದುಕು ಕಟ್ಟಿಕೊಳ್ಳಬೇಕಾಗಿದೆ, ಏನೇ ಸಮಸ್ಯೆಗಳಿದ್ದರೂ ಕಾನೂನಿನ ಚೌಕಟ್ಟಿನಲ್ಲಿ ನ್ಯಾಯ ಕೇಳಬೇಕು' ಎಂದರು.

'ರಾಷ್ಟ್ರೀಯ ಭಾವೈಕ್ಯ ಮನೋಭಾವನೆ ಬೆಳಸಿಕೊಂಡು ಜೀವನ ಸಾಗಿಸಬೇಕು. ಯಾವುದೇ ಕಾರಣಕ್ಕೂ ಇತರರಿಗೆ ನಮ್ಮ ಆಚರಣೆಗಳಿಂದ ತೊಂದರೆ ಉಂಟಾಗಬಾರದು. ನಮ್ಮ ಧರ್ಮವನ್ನು ಪ್ರೀತಿಸುವುದರ ಜೊತೆಗೆ ಇತರ ಧರ್ಮದವರನ್ನೂ ಗೌರವಿಸುವ ಮನಸ್ಥಿತಿ ಎಲ್ಲರಿಗೂ ಇರಬೇಕು' ಎಂದು ಸಲಹೆ ನೀಡಿದರು.

ಸಂಸದ ಕೆ. ರಾಜಶೇಖರ್ ಹಿಟ್ನಾಳ ಮಾತನಾಡಿ 'ಒಗ್ಗಟ್ಟಿನಲ್ಲಿ ಬಲವಿದೆ ಎನ್ನುವುದಕ್ಕೆ ಮುಸ್ಲಿಂ ಸಮಾಜ ಉದಾಹರಣೆಯಂತಿದೆ. ಇಂದು ತೋರಿದ ಸಂಘಟನೆ ಹಾಗೂ ಒಗ್ಗಟ್ಟು ಮಾದರಿಯಾಗಿದೆ' ಎಂದು ಪ್ರಶಂಸಿಸಿದರು.

ಮಾಜಿ ಸಂಸದ ಸಂಗಣ್ಣ ಕರಡಿ, ಮುನಿರಾಬಾದ್ ಕಾಡಾ ಅಧ್ಯಕ್ಷ ಹಸನಸಾಬ್ ದೋಟಿಹಾಳ, ಜೆಡಿಎಸ್ ಜಿಲ್ಲಾಧ್ಯಕ್ಷ ಸುರೇಶ ಭೂಮರಡ್ಡಿ, ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ, ಮುಖಂಡರಾದ ಕೆ.ಎಂ. ಸೈಯದ್, ಎಂ. ಕಾಟನ್ ಪಾಷಾ, ರಾಜಶೇಖರ ಅಡೂರ, ಸೋಮಶೇಖರ್ ಹಿಟ್ನಾಳ, ಯಮನೂರಪ್ಪ ನಾಯಕ, ಬಾಶುಸಾಬ್ ಖತೀಬ್, ಹುಸೇನ್‌ಪೀರಾ ಮುಜಾವರ, ಕಾರ್ಯಕ್ರಮ ಸಂಘಟಕ ಸಲೀಂ ಮಂಡಲಗಿರಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

### ಟಿಪ್ಪು ಬಿಟ್ಟು ಚರಿತ್ರೆ ನೋಡಲಾಗದು


ಉಪನ್ಯಾಸಕ ಚಂದ್ರಶೇಖರ್ ಮಾತನಾಡಿ 'ಪ್ರತಿ ಐದು ಕಿ.ಮೀ. ಒಂದರಂತೆ ಕನ್ನಡ ಶಾಲೆ ನಿರ್ಮಿಸಿದ ಟಿಪ್ಪು ಸುಲ್ತಾನ್ ಅವರನ್ನು ಹೊರಗಿಟ್ಟು ದೇಶದ ಚರಿತ್ರೆ ನೋಡಲು ಸಾಧ್ಯವೇ ಇಲ್ಲ. ಇದರ ಬಗ್ಗೆ ಚಿಂತಿಸುವವರು ಅವಿವೇಕಿಗಳು' ಎಂದರು. 'ಟಿಪ್ಪು ಸುಲ್ತಾನ್ ಮೈಸೂರಿನ ಹುಲಿಯಷ್ಟೇ ಅಲ್ಲ; ಮನೆಯಲ್ಲಿ ಕನ್ನಡ ಮಾತನಾಡಿ ಕನ್ನಡಿಗ ಎಂದು ಹೆಮ್ಮೆಯಿಂದ ಹೇಳಿಕೊಂಡಿದ್ದರು. ಇಂಥ ಕನ್ನಡಿಗನನ್ನು ಕನ್ನಡ ದ್ರೋಹಿ ಎನ್ನುತ್ತಿರುವುದು ಸರಿಯೇ' ಎಂದು ಪ್ರಶ್ನಿಸಿದರು.

### ಮುಸ್ಲಿಂ ಸಮುದಾಯಕ್ಕೆ ಆದ್ಯತೆ ನೀಡಿ

ಮಾಜಿ ಸಚಿವ ಇಕ್ಬಾಲ್ ಅನ್ಸಾರಿ 'ಕೊಪ್ಪಳದಲ್ಲಿ 40 ಸಾವಿರ ಮುಸ್ಲಿಮರಿದ್ದು ರಾಘವೇಂದ್ರ ಹಿಟ್ನಾಳ ಮೂರು ಬಾರಿ ಶಾಸಕರಾಗಲು ಅವರೆಲ್ಲರೂ ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಶಾಸಕರು ಯಾವತ್ತೂ ಸಮುದಾಯದ ಜನರನ್ನು ಕೈ ಬಿಡಬಾರದು' ಎಂದರು. ಸದಾ ಅವರ ಬೇಕು ಬೇಡಿಕೆಗಳಿಗೆ ಸ್ಪಂದಿಸಬೇಕು. ಸರ್ಕಾರದಿಂದ ಹೆಚ್ಚು ಅನುದಾನ ತಂದುಕೊಡಬೇಕು ಎಂದು ಸಲಹೆ ನೀಡಿದರು. 'ದೇಶದಲ್ಲಿ ಕೋಮುವಾದಿ ದುಷ್ಟ ಶಕ್ತಿಗಳು ಅಮಾಯಕ ಯುವಕರಲ್ಲಿ ಜಾತಿ ವಿಷಬೀಜ ಬಿತ್ತಿ ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ಅನವಶ್ಯಕ ಗೊಂದಲ ಸೃಷ್ಟಿಸುತ್ತಿದ್ದು ಅವರ ಬಗ್ಗೆ ಎಚ್ಚರದಿಂದ ಇರಬೇಕು' ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಮಾತನಾಡಿ 'ನಮ್ಮ ಕುಟುಂಬದ ಮೇಲೆ ಮುಸ್ಲಿಂ ಸಮುದಾಯದ ಜನರ ಋಣ ಬಹಳಷ್ಟಿದೆ. ಅವರ ಏನೇ ಸಮಸ್ಯೆಗಳಿದ್ದರೂ ಸ್ಪಂದಿಸುವೆ' ಎಂದು ಭರವಸೆ ನೀಡಿದರು.

# ಅರಿಜೋನಾದಲ್ಲಿ ಟ್ರಂಪ್ ಜಯಭೇರಿ: 7 ಸ್ವಿಂಗ್ ರಾಜ್ಯಗಳು ರಿಪಬ್ಲಿಕನ್ ಪಾಲು

## ನ. 5ರ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷಕ್ಕೆ ಒಲಿದ ಎಲ್ಲಾ ಏಳು ಸ್ವಿಂಗ್ ರಾಜ್ಯಗಳು, ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಹ್ಯಾರಿಸ್‌ಗೆ 226 ಮತಗಳು



**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಎರಡನೇ ಅವಧಿಗೆ ಅಧಿಕಾರ ಹಿಡಿಯಲು ಸಿದ್ದತೆ ನಡೆಸಿರುವ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್, ಅರಿಜೋನಾದಲ್ಲಿ ಶನಿವಾರ ಗೆಲುವು ಸಾಧಿಸಿದ್ದಾರೆ. ಈ ಮೂಲಕ ನವೆಂಬರ್ 5ರ ಚುನಾವಣೆಯಲ್ಲಿ ಎಲ್ಲಾ ಏಳು ಸ್ವಿಂಗ್ ರಾಜ್ಯಗಳು ರಿಪಬ್ಲಿಕನ್ ಪಕ್ಷದ ಪಾಲಾಗಿದೆ. ಅರಿಜೋನಾದಲ್ಲಿನ ಪ್ರಾಬಲ್ಯವನ್ನು ಮುಂದುವರಿಸಿರುವ ಟ್ರಂಪ್, ಅಲ್ಲಿನ 11 ಎಲೆಕ್ಟೊರಲ್ ಮತಗಳನ್ನು ಬಾಚಿಕೊಂಡಿದ್ದಾರೆ.

2016ರ ಚುನಾವಣೆಯಲ್ಲಿ ಟ್ರಂಪ್ ಅವರು ಅರಿಜೋನಾದಲ್ಲಿ ಪಾರಮ್ಯ ಮೆರೆದಿದ್ದರು. ಅಮೆರಿಕ ಚುನಾವಣೆಯಲ್ಲಿ ಫಲಿತಾಂಶ ಸ್ಪಷ್ಟವಾಗಿದ್ದರೂ, ಅಂತಿಮವಾಗಿ ಮತಗಳ ಹಂಚಿಕೆ ಚಿತ್ರಣ ಸಿಗಲು ಇನ್ನೂ ಸಾಕಷ್ಟು ಸಮಯ ತಗುಲಲಿದೆ. ಇತ್ತೀಚಿನ ಅಂಕಿ ಅಂಶಗಳ ಪ್ರಕಾರ ಟ್ರಂಪ್ ಅವರು ಈವರೆಗೂ 312 ಎಲೆಕ್ಟೊರಲ್ ಮತಗಳನ್ನು ಪಡೆದುಕೊಂಡಿದ್ದಾರೆ. ಶ್ವೇತ ಭವನದ ಗದ್ದುಗೆ ಏರಲು 270 ಮ್ಯಾಜಿಕ್ ಸಂಖ್ಯೆಯ ಅಗತ್ಯವಿದ್ದು, ಟ್ರಂಪ್ ಅವರು ಅದನ್ನೂ ದಾಟಿ ನಾಗಾಲೋಟ ಮುಂದುವರಿಸಿದ್ದಾರೆ.

**ಹೆಚ್ಚಿದ ಟ್ರಂಪ್ ಪ್ರಾಬಲ್ಯ:** 2016ರ ಚುನಾವಣೆಯಲ್ಲಿ ಗೆದ್ದು ಮೊದಲ ಬಾರಿ ಅಧ್ಯಕ್ಷರಾಗಿದ್ದ ವೇಳೆ ಟ್ರಂಪ್ ಅವರು 304 ಎಲೆಕ್ಟೊರಲ್ ಮತಗಳನ್ನು ಪಡೆದಿದ್ದರು. ಆಗ ಟ್ರಂಪ್ ಹೆಚ್ಚು ಜನಪ್ರಿಯರಾಗಿದ್ದರು. ಆದರೆ ಈ ಬಾರಿ ಕಮಲಾ ಹ್ಯಾರಿಸ್ ಅವರ ಸ್ಪರ್ಧೆ ಟ್ರಂಪ್‌ಗೆ ಹಿನ್ನಡೆ ಉಂಟು ಮಾಡುತ್ತದೆ ಎಂದು ಅಂದಾಜಿಸಲಾಗಿತ್ತು. 2020ರ ಚುನಾವಣೆಯ ಬಳಿಕ ಟ್ರಂಪ್ ಸಾಲು ಸಾಲು ವಿವಾದಗಳಲ್ಲಿ ಸಿಲುಕಿದ್ದರು.

ಹಾಗಿದ್ದರೂ ಟ್ರಂಪ್ ಭರ್ಜರಿ ಗೆಲುವು ಸಾಧಿಸಿರುವುದು ಚುನಾವಣಾ ಪಂಡಿತರನ್ನೇ ಚಕಿತಗೊಳಿಸಿದೆ. 50 ರಾಜ್ಯಗಳ ಪೈಕಿ ಅರ್ಧಕ್ಕೂ ಅಧಿಕ ರಾಜ್ಯಗಳಲ್ಲಿ ಟ್ರಂಪ್ ಜಯಭೇರಿ ಬಾರಿಸಿದ್ದಾರೆ ಎಂದು ಅಮೆರಿಕ ಮಾಧ್ಯಮ ಘೋಷಿಸಿವೆ. ಇದರಲ್ಲಿ ಕಳೆದ ಚುನಾವಣೆಯಲ್ಲಿ ಡೆಮಾ ಕ್ರಟಿಕ್ ಪರ ಮತ ಚಲಾಯಿಸಿದ್ದ ಸ್ವಿಂಗ್ ರಾಜ್ಯಗಳಾದ ಪೆನ್ಸಿಲ್ವೇನಿಯಾ, ಮಿಚಿಗನ್, ಜಾರ್ಜಿಯಾ, ವಿಸ್ಕನ್ಸಿನ್ ಕೂಡ ಸೇರಿವೆ. ಜತೆಗೆ ನಾರ್ತ್ ಕೆರೋಲಿನಾ ಮತ್ತು ನೆವಾಡದಲ್ಲಿಯೂ ಟ್ರಂಪ್ ಪ್ರಾಬಲ್ಯ ಪ್ರದರ್ಶಿಸಿದ್ದಾರೆ.

ಕೊನೆಗೂ ಅಖಾಡದಿಂದ ಅವರು ಹಿಂದೆ ಸರಿದಾಗ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮುನ್ನೆಲೆಗೆ ಬಂದಿದ್ದರು. ಇದು ಡೆಮಾಕ್ರಟಿಕ್ ಬೆಂಬಲಿಗರಲ್ಲಿ ಭಾರಿ ಉತ್ಸಾಹ ಮೂಡಿಸಿತ್ತು. ಆದರೆ ಕಮಲಾ ಹ್ಯಾರಿಸ್ ಪಡೆದ ಎಲೆಕ್ಟೊರಲ್ ಮತಗಳು 226ಕ್ಕೆ ಸೀಮಿತವಾಗಿದೆ. ಟ್ರಂಪ್ ಅವರು ಕಳೆದ ನಾಲ್ಕು ವರ್ಷಗಳಲ್ಲಿ ಸಾಲು ಸಾಲು ಕಾನೂನು ಸಂಘರ್ಷಗಳನ್ನು ಎದುರಿಸಿದ್ದರು. ಅಪರಾಧ ಶಿಕ್ಷೆ, ಕಚೇರಿಯಲ್ಲಿದ್ದಾಗ ಅಧಿಕಾರ ದುರ್ಬಳಕೆ ಮಾಡಿಕೊಂಡ ಆರೋಪದಡಿ ವಾಗ್ದಂಡನೆಗೂ ಗುರಿಯಾಗಿದ್ದರು. ಇವೆಲ್ಲವೂ ಟ್ರಂಪ್ ಪಾಲಿಗೆ ಪ್ರತಿಕೂಲವಾಗಿ ಪರಿಣಮಿಸಲಿದೆ ಎಂದೇ ಊಹಿಸಲಾಗಿತ್ತು. ಆದರೆ ಅವರು ಮತಗಳ ಅಂತರವನ್ನು ಹಿಗ್ಗಿಸಿಕೊಂಡಿದ್ದಾರೆ.

ಬರಾಕ್ ಒಬಾಮಾ ಅವರು ಸತತ ಎರಡು ಅವಧಿ ಆಡಳಿತ ನಡೆಸಿದ ಬಳಿಕ, ನಾಲ್ಕನೇ ಬಾರಿ ಅಮೆರಿಕವು ರಿಪಬ್ಲಿಕನ್ ಮತ್ತು ಡೆಮಾಕ್ರಟಿಕ್ ಪಕ್ಷಗಳ ನಡುವೆ ಅಧಿಕಾರ ಬದಲಾವಣೆ ಮಾಡುತ್ತಿದ್ದಾರೆ. 19ನೇ ಶತಮಾನದ ನಂತರ ಈ ರೀತಿಯ ಬದಲಾವಣೆ ಎಂದೂ ಕಂಡಿರಲಿಲ್ಲ.

### ಕಮಲಾ ಹ್ಯಾರಿಸ್‌ಗೆ ಆಘಾತ

**ಅತ್ತ, 81 ವರ್ಷದ ಜೋ ಬೈಡನ್ ಅವರನ್ನು ಡೆಮಾಕ್ರಟಿಕ್ ಬೆಂಬಲಿಗರು ಬಲವಂತವಾಗಿ ಚುನಾವಣಾ ಅಖಾಡದಿಂದ ಹಿಂದೆ ಸರಿಯುವಂತೆ ಮಾಡಿದ ಬಳಿಕ ಕಮಲಾ ಹ್ಯಾರಿಸ್ ಅವರನ್ನು ಅಭ್ಯರ್ಥಿಯನ್ನಾಗಿ ನಾಮ ನಿರ್ದೇಶನ ಮಾಡಲಾಗಿತ್ತು. ಬೈಡನ್ ಅವರ ತಡಬಡಾಯಿಸುವ ಭಾಷಣಗಳು, ಕಾರ್ಯವೈಖರಿ ಸ್ವತಃ ಡೆಮಾಕ್ರಟಿಕ್ ಪಕ್ಷದವರಿಂದಲೇ ಟೀಕೆಗೆ ಗುರಿಯಾಗಿತ್ತು.**

**ಅಮೆರಿಕ ಅಧ್ಯಕ್ಷರಾಗಿ 2016-2020ರವರೆಗೆ ಅಧಿಕಾರ ನಡೆಸಿದ್ದ ಡೊನಾಲ್ಡ್ ಟ್ರಂಪ್, ನಾಲ್ಕು ವರ್ಷದ ಬಳಿಕ ಮತ್ತೆ ಅಧಿಕಾರಕ್ಕೆ ಏರಲು ಅಣಿಯಾಗುತ್ತಿದ್ದಾರೆ. ಕಳೆದ ಬಾರಿಗಿಂತ ಈ ಬಾರಿ ಅವರ ಎಲೆಕ್ಟೊರಲ್ ಮತಗಳ ಪ್ರಮಾಣ ಏರಿಕೆಯಾಗಿರುವುದು ಗಮನಾರ್ಹ. ಹಾಗೆಯೇ ಎಲ್ಲಾ ಏಳು ಸ್ವಿಂಗ್ ರಾಜ್ಯಗಳು ಅವರ ರಿಪಬ್ಲಿಕನ್ ಪಾರ್ಟಿ ಪಾಲಾಗಿವೆ.**

# ಸಿಖ್ ಕಾರ್ಯಕರ್ತನ ಹತ್ಯೆ ಪ್ರಕರಣದಲ್ಲಿ ಆರ್ಶ್ ದಲ್ಲಾ ಗ್ಯಾಂಗ್‌ನ ಇಬ್ಬರ ಬಂಧನ

**ಚಂಡೀಗಢ:** ಕಳೆದ ತಿಂಗಳು ಸಿಖ್ ಕಾರ್ಯಕರ್ತನ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿದ್ದ ಕೆನಡಾ ಮೂಲದ ದರೋಡೆಕೋರ ಆರ್ಶ್ ದಲ್ಲಾ ಗ್ಯಾಂಗ್ನ ಇಬ್ಬರು ಸದಸ್ಯರನ್ನು ಮೊಹಾಲಿಯ ಖರಾರ್‌ನಲ್ಲಿ ಬಂಧಿಸಲಾಗಿದೆ. ಆರೋಪಿಗಳು ಮಧ್ಯಪ್ರದೇಶದಲ್ಲಿ ಮತ್ತೊಬ್ಬ ವ್ಯಕ್ತಿಯ ಕೊಲೆಯಲ್ಲೂ ಭಾಗಿಯಾಗಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ರಾಜ್ಯ ವಿಶೇಷ ಕಾರ್ಯಾಚರಣೆ ಕೋಶ, ದರೋಡೆಕೋರ ನಿಗ್ರಹ ದಳ ಮತ್ತು ಫರೀದ್ಕೋಟ್ ಪೊಲೀಸರ ಜಂಟಿ ಕಾರ್ಯಾಚರಣೆಯಲ್ಲಿ ಗುರುಪ್ರೀತ್ ಸಿಂಗ್ ಹರಿ ಹತ್ಯೆ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ಹೇಳಿದ್ದಾರೆ. ಸಿಖ್ ಕಾರ್ಯಕರ್ತ ಗುರುಪ್ರೀತ್ ಸಿಂಗ್ ಹರಿ ನೌ ಅಲಿಯಾಸ್ ಭೋಡಿ ಅವರನ್ನು ಅ 9 ರಂದು ಗ್ರಾಮದ ಗುರುದ್ವಾರದಿಂದ ಫರೀದ್ಕೋಟ್‌ನಲ್ಲಿ ತನ್ನ ಮೋಟಾರ್ಸೈಕಲ್‌ನಲ್ಲಿ ಮನೆಗೆ ಹಿಂದಿರುಗುತ್ತಿದ್ದಾಗ ಗುಂಡಿಕ್ಕಿ ಕೊಲ್ಲಲಾಗಿತ್ತು. ದರೋಡೆಕೋರ ಅರ್ಷದೀಪ್



ಸಿಂಗ್ ಅಲಿಯಾ ಅರ್ಶ್ ದಲ್ಲಾ ಈ ಪ್ರಕರಣದ ಮಾಸ್ಟರ್ ಮೈಂಡ್ ಎಂದು ಪೊಲೀಸರು ಆಗ ಹೇಳಿದ್ದರು.

ಕಟ್ಟುನಿಟ್ಟಾದ ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಅಸ್ಸಾಂನ ದಿಬ್ರುಗಢ ಜೈಲಿನಲ್ಲಿರುವ ಅಮತಪಾಲ್ ಸಿಂಗ್ ಅವರ ಆಜ್ಞೆಯ ಮೇರೆಗೆ ನೌವನ್ನು ಕೊಲ್ಲಲಾಯಿತು ಎಂದು ಪೊಲೀಸರು ಹೇಳಿದ್ದರು.

2024 ರ ನವೆಂಬರ್ 7 ರಂದು ಮಧ್ಯಪ್ರದೇಶದ ಗ್ವಾಲಿಯರ್‌ನಲ್ಲಿ ಅರ್ಶ್ ದಲ್ಲಾ ಅವರ ನಿರ್ದೇಶನದ ಮೇರೆಗೆ ಆರೋಪಿಗಳು ಜಸ್ವಂತ್ ಸಿಂಗ್ ಗಿಲ್ ಅವರನ್ನು ಕೊಂದಿದ್ದಾರೆ ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಡಿಜಿಪಿ ಯಾದವ್ ಹೇಳಿದ್ದಾರೆ.

# ಸಂವಿಧಾನಕ್ಕೆ ತಿದ್ದುಪಡಿ ತಂದದ್ದು ಕಾಂಗ್ರೆಸ್, ದೂರುವುದು ಬಿಜೆಪಿಯನ್ನು: ಗಡ್ಕರಿ

**ವಾರ್ಧಾ:** ಅಧಿಕಾರದಲ್ಲಿದ್ದಾಗ ಸಂವಿಧಾನಕ್ಕೆ ಹಲವು ತಿದ್ದುಪಡಿಗಳನ್ನು ತಂದ ಕಾಂಗ್ರೆಸ್ ಪಕ್ಷವು, ಇದೀಗ ಬಿಜೆಪಿಯು ಸಂವಿಧಾನ ಬದಲಾವಣೆಗೆ ಯತ್ನಿಸುತ್ತಿದೆ ಎಂದು ಭಾವನಾತ್ಮಕ ನೆಲೆಯಲ್ಲಿ ಆರೋಪ ಮಾಡುತ್ತಿದೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಆರೋಪಿಸಿದ್ದಾರೆ.

288 ಸದಸ್ಯ ಬಲದ 'ಮಹಾ' ವಿಧಾನಸಭೆಗೆ ನವೆಂಬರ್ 20ರಂದು ಮತದಾನ ನಡೆಯಲಿದೆ. ನವೆಂಬರ್ 23ರಂದು ಫಲಿತಾಂಶ ಪ್ರಕಟವಾಗಲಿದೆ. ವಿದರ್ಭದ ವಾರ್ಧಾ ಜಿಲ್ಲೆಯಲ್ಲಿ ನಡೆದ ವಿವಿಧ ಪ್ರಚಾರ ಸಭೆಗಳಲ್ಲಿ ಗಡ್ಕರಿ ಭಾನುವಾರ ಭಾಗಿಯಾದರು. ಇದೇ ವೇಳೆ, ಬಿಜೆಪಿಯು ಕಾರ್ಯಕರ್ತರಿಂದ ಕೂಡಿರುವ ಪಕ್ಷವಾಗಿದ್ದರೆ, ಕಾಂಗ್ರೆಸ್ ಕುಟುಂಬ ರಾಜಕಾರಣದಲ್ಲಿ ನಿರತವಾಗಿದೆ ಎಂದು ಹೇಳಿದ್ದಾರೆ. ಬಿಜೆಪಿಯು 400ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆದ್ದರೆ, ಸಂವಿಧಾನವನ್ನು ಬದಲಿಸಲಿದೆ ಎಂದು ಅವರು (ಕಾಂಗ್ರೆಸ್) ಭಾವನಾತ್ಮಕ ನೆಲೆಯಲ್ಲಿ ಹೇಳಿಕೆಗಳನ್ನು ನೀಡಿದ್ದರು. ಅವರು ಹೇಳಿದ್ದು ಸುಳ್ಳು' ಎಂದು ದಿಯೋಲಿಯಲ್ಲಿ ಟೀಕಿಸಿದ್ದಾರೆ.



ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ಗಡ್ಕರಿ, ಕೇಶವಾನಂದ ಭಾರ್ತಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಆದೇಶದ ಅನುಸಾರ, ಸಂವಿಧಾನದ ಪ್ರಧಾನ ಅಂಶಗಳನ್ನು ಬದಲಿಸಲು ಸಾಧ್ಯವಿಲ್ಲ ಎಂದು ಪ್ರಸ್ತಾಪಿಸಿದ್ದಾರೆ. ಮಾಜಿ ಪ್ರಧಾನಿ ದಿವಂಗತ ಇಂದಿರಾ ಗಾಂಧಿ ನೇತೃತ್ವದ ಕಾಂಗ್ರೆಸ್ ಸರ್ಕಾರವು ಸಂವಿಧಾನಕ್ಕೆ ಹಲವು ತಿದ್ದುಪಡಿಗಳನ್ನು ತಂದಿತ್ತು ಎಂದು ಸ್ಮರಿಸಿದ್ದಾರೆ.

ಸಂವಿಧಾನವನ್ನು ಬದಲಿಸಿದ ಅವರು, ನಮ್ಮನ್ನು ದೂರುತ್ತಿದ್ದಾರೆ. ಇಂದಿರಾ ಗಾಂಧಿ ಅವರ ಅವಧಿಯಲ್ಲಿ ಎಷ್ಟು ಬಾರಿ ಸಂವಿಧಾನಕ್ಕೆ ತಿದ್ದುಪಡಿ ತರಲಾಗಿದೆ? ಆದರೂ, ಕಾಂಗ್ರೆಸ್ ಅವುಗಳ ಬಗ್ಗೆ ಪ್ರತಿಕ್ರಿಯಿಸುವುದಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅರವಿ ವಿಧಾನಸಭೆ ಕ್ಷೇತ್ರದಲ್ಲಿ, ಕಾಂಗ್ರೆಸ್ ಪಕ್ಷವು ಗ್ರಾಮೀಣ ಭಾರತಕ್ಕೆ ಪ್ರಾಶಸ್ತ್ಯ ನೀಡಿದ್ದರೆ, ರೈತರು ಆತ್ಮಹತ್ಯೆ ಮಾಡಿಕೊಂಡು ಸಾಯುತ್ತಿರಲಿಲ್ಲ. ಹಳ್ಳಿಗಳಲ್ಲಿ ಬಡತನ ಕಡಿಮೆಯಾಗುತ್ತಿತ್ತು ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿಯು ಪ್ರಧಾನಿ ನರೇಂದ್ರ ಮೋದಿ ಅವರ ಪಕ್ಷವೂ ಅಲ್ಲ, ಗಡ್ಕರಿಯದ್ದೂ ಅಲ್ಲ. ಇದು ತಮ್ಮ ಪ್ರಾಣವನ್ನೇ ಸಮರ್ಪಿಸಲು ಸಿದ್ಧವಿರುವ ಕಾರ್ಯಕರ್ತರದ್ದು ಎಂದು ಹೇಳಿಕೊಂಡಿದ್ದಾರೆ.

ಬಿಜೆಪಿಯು ಕಾರ್ಯಕರ್ತರ ಪಕ್ಷವಾಗಿದೆ. ಇಲ್ಲಿ, ಒಬ್ಬ ಪ್ರಧಾನಿ ಮತ್ತೊಬ್ಬ ಪ್ರಧಾನಿಯಿಂದ ಜನ್ಮ ಪಡೆದಿಲ್ಲ. ಸಂಸದ, ಮತ್ತೊಬ್ಬ ಸಂಸದನಿಂದ ಹಾಗೆಯೇ, ಶಾಸಕ ಇನ್ನೊಬ್ಬ ಶಾಸಕನಿಂದ ಹುಟ್ಟಿಲ್ಲ' ಎಂದು ಪ್ರತಿಪಾದಿಸಿದ್ದಾರೆ. ಲೋಕಸಭೆಯಲ್ಲಿ ಮಹಾರಾಷ್ಟ್ರದ ನಾಗಪುರ ಕ್ಷೇತ್ರವನ್ನು ಪ್ರತಿನಿಧಿಸುವ ಗಡ್ಕರಿ, ಕಾರ್ಯಕರ್ತನಾಗಿ ಪಕ್ಷಕ್ಕಾಗಿ ದುಡಿಯುತ್ತಿದ್ದ ದಿನಗಳಲ್ಲಿ ವಾರ್ಧಾ ಜಿಲ್ಲೆಗೆ ಸ್ಕೂಟರ್‌ನಲ್ಲಿ ಬಂದಿದ್ದೆ ಎಂದು ನೆನಪಿಸಿಕೊಂಡಿದ್ದಾರೆ. ವಿದರ್ಭ ಅಥವಾ ಮಹಾರಾಷ್ಟ್ರದ ಪೂರ್ವ ಭಾಗದಲ್ಲಿಯೇ ಒಟ್ಟು 62 ವಿಧಾನಸಭೆ ಕ್ಷೇತ್ರಗಳಿವೆ.

# ಹಸೀನಾರನ್ನು ವಾಪಸ್ ಕರೆತರಲು ಇಂಟರ್‌ಪೋಲ್ ನೆರವು: ಬಾಂಗ್ಲಾ ಸರ್ಕಾರ



**ಢಾಕಾ:** ಮಾನವೀಯತೆಯ ವಿರುದ್ಧದ ಅಪರಾಧಗಳ ವಿಚಾರಣೆಯನ್ನು ಎದುರಿಸಲು ಮಾಜಿ ಪ್ರಧಾನಿ ಶೇಖ್ ಹಸೀನಾ ಮತ್ತು ಇತರ ಆರೋಪಿಗಳನ್ನು ಭಾರತದಿಂದ ಕರೆತರಲು ಇಂಟರ್‌ಪೋಲ್‌ನ ಸಹಾಯ ಕೋರುವುದಾಗಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಭಾನುವಾರ ಹೇಳಿದೆ. ವಿವಾದಾತ್ಮಕ ಉದ್ಯೋಗ ಮೀಸಲಾತಿಗೆ ಸಂಬಂಧಿಸಿದಂತೆ ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರದ ವಿರುದ್ಧ ಕಳೆದ ಆಗಸ್ಟ್‌ನಲ್ಲಿ ಪ್ರತಿಭಟನೆಗಳು ಭುಗಿಲೆದ್ದಿದ್ದವು. ಈ ವೇಳೆ ಅಪಾರ ಪ್ರಮಾಣದ ಸಾವುನೋವು ಸಂಭವಿಸಿದ್ದು, ಘಟನೆಗೆ ಹಸೀನಾ ಸರ್ಕಾರದ ಹಿಂಸಾತ್ಮಕ ನೀತಿಗಳು ಕಾರಣ ಎಂದು ಆರೋಪಿಸಲಾಗಿದೆ. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ ಆಗಸ್ಟ್ 5ರಂದು ಹಸೀನಾ ಭಾರತಕ್ಕೆ ಪಲಾಯನ ಮಾಡಿದ್ದರು. ಪ್ರತಿಭಟನೆಯ ಸಮಯದಲ್ಲಿ ಕನಿಷ್ಠ 753 ಜನ ಮೃತಪಟ್ಟು, ಸಾವಿರಾರು ಮಂದಿ ಗಾಯಗೊಂಡಿದ್ದರು. ಇದು ಮಾನವೀಯತೆಯ ವಿರುದ್ಧದ ಅಪರಾಧ ಹಾಗೂ ನರಮೇಧ' ಎಂದು ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಪ್ರತಿಪಾದಿಸಿದೆ.

### ಏನಿದು ಇಂಟರ್‌ಪೋಲ್

**ಇಂಟರ್‌ಪೋಲ್ ಎಂಬುದು ಇಂಟರ್‌ನ್ಯಾಷನಲ್ ಪೊಲೀಸ್ ಆರ್ಗನೈಸೇಷನ್' ಎಂಬುದರ ಸಂಕ್ಷಿಪ್ತ ರೂಪ. ಹೆಸರೇ ಹೇಳುವಂತೆ ಇದು ಅಂತರರಾಷ್ಟ್ರೀಯ ಪೊಲೀಸ್ ಸಂಘಟನೆ. ವಿಶ್ವದ 196 ದೇಶಗಳ ಸದಸ್ಯತ್ವ ಹೊಂದಿರುವ ಈ ಸಂಘಟನೆಯು ಅಪರಾಧಿಗಳ ಬಂಧನಕ್ಕೆ ಜಾಗತಿಕ ಮಟ್ಟದಲ್ಲಿ ದೇಶ-ದೇಶಗಳ ಮಧ್ಯೆ ಕೊಂಡಿಯಾಗಿ ಕಾರ್ಯನಿರ್ವಹಿಸುವ ಒಂದು ಸಂಸ್ಥೆಯಾಗಿದೆ. ಅನಗತ್ಯ ಸಂಘರ್ಷವನ್ನು ತಪ್ಪಿಸುವ ಉದ್ದೇಶದಿಂದಲೇ ಇಂಟರ್‌ಪೋಲ್ ಅಸ್ತಿತ್ವಕ್ಕೆ ಬಂದಿದ್ದು, ಅಪರಾಧಿ-ಆರೋಪಿಗಳಿಗೆ ಸಂಬಂಧಿಸಿದಂತೆ ಎರಡು ಅಥವಾ ಹಲವು ದೇಶಗಳ ನಡುವೆ ಮಧ್ಯಸ್ಥ ಸಂಸ್ಥೆಯಾಗಿ ಇಂಟರ್‌ಪೋಲ್ ಕಾರ್ಯನಿರ್ವಹಿಸುತ್ತದೆ.**

**60ಕ್ಕೂ ಹೆಚ್ಚು ದೂರು ದಾಖಲು:** ಹಸೀನಾ, ಅವರ ಪಕ್ಷದ ನಾಯಕರ ವಿರುದ್ಧ ಬಾಂಗ್ಲಾದ ಅಂತರ ರಾಷ್ಟ್ರೀಯ ಅಪರಾಧಗಳ ನ್ಯಾಯ ಮಂಡಳಿ, ಪ್ರಾಸಿಕ್ಯೂಷನ್‌ಗೆ ಮಾನವೀಯತೆಯ ವಿರುದ್ಧದ ಅಪರಾಧಗಳು, ನರಮೇಧ ಪ್ರಕರಣದ ಸಂಬಂಧ 60ಕ್ಕೂ ಹೆಚ್ಚು ದೂರುಗಳು ದಾಖಲಾಗಿವೆ.

**ಶೀಘ್ರದಲ್ಲೇ ರೆಡ್ ಕಾರ್ನರ್ ನೋಟಿಸ್:** ಇಂಟರ್‌ಪೋಲ್ ಮೂಲಕ ಶೀಘ್ರದಲ್ಲೇ ರೆಡ್ ಕಾರ್ನರ್ ನೋಟಿಸ್ ನೀಡಲಾಗುವುದು. ಈ ಪಲಾಯನವಾದಿ ಫ್ಯಾಸಿಸ್ಟ್‌ಗಳು ಜಗತ್ತಿನ ಯಾವ ಮೂಲೆಯಲ್ಲಿ ಅಡಗಿಕೊಂಡಿದ್ದರೂ, ಅವರನ್ನು ಮರಳಿ ಕರೆತಂದು ನ್ಯಾಯಾಲಯದಲ್ಲಿ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಕಾನೂನು ವ್ಯವಹಾರಗಳ ಸಲಹೆಗಾರ ಆಸಿಫ್ ನಜ್ರುಲ್ ತಿಳಿಸಿದ್ದಾರೆ. ಹಸೀನಾ, ಅವಾಮಿ ಲೀಗ್ ನಾಯಕರನ್ನು ಐಸಿಟಿ ನ್ಯಾಯ ಮಂಡಳಿಯಲ್ಲಿ ವಿಚಾರಣೆಗೆ ಒಳಪಡಿಸಲಾಗುವುದು ಎಂದು ಬಾಂಗ್ಲಾ ಮಧ್ಯಂತರ ಸರ್ಕಾರ ಈ ಹಿಂದೆ ಹೇಳಿತ್ತು. ಆದಾಗ್ಯೂ, ಕಳೆದ ತಿಂಗಳು ಯುಕೆ ಮೂಲದ ಫೈನಾನ್ಷಿಯಲ್ ಟೈಮ್ಸ್ ಪತ್ರಿಕೆಗೆ ನೀಡಿದ ಸಂದರ್ಶನದಲ್ಲಿ ಯೂನಸ್ ಅವರು, ಹಸೀನಾರನ್ನು ಭಾರತದಿಂದ ಹಸ್ತಾಂತರಿಸುವ ಬಗ್ಗೆ ತಮ್ಮ ಸರ್ಕಾರ ತಕ್ಷಣವೇ ಪ್ರಯತ್ನಿಸುವುದಿಲ್ಲ ಎಂದೂ ಹೇಳಿದ್ದರು.

# ಶಾಸಕನ ಪುತ್ರನನ್ನು ಅಪಹರಿಸಿ 10 ಕೋಟಿ ಬೇಡಿಕೆ

**ಪುಣೆ:** ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ಮುನ್ನ ಎನ್ಸಿಪಿ ಶಾಸಕ ಅಶೋಕ್ ಪವಾರ್ ಅವರ ಪುತ್ರ ತನ್ನಿಂದ 10 ಕೋಟಿ ರೂಪಾಯಿಗೆ ಬೇಡಿಕೆಯಿಟ್ಟು ವ್ಯಕ್ತಿಗಳ ಗುಂಪೊಂದು ತನ್ನನ್ನು ಅಪಹರಿಸಿತ್ತು ಎಂದು ಪೊಲೀಸರಿಗೆ ದೂರು ನೀಡಿದ್ದರೆ.

ಈ ಸಂಬಂಧ ಪೊಲೀಸರು ಮೂವರು ಪುರುಷರು ಮತ್ತು ಮಹಿಳೆಯ ವಿರುದ್ಧ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಿದ್ದಾರೆ ಎಂದು ತಿಳಿದು ಬಂದಿದೆ. ಆರೋಪಿಗಳು ಪುಣೆ ಜಿಲ್ಲೆಯ ಶಿರೂರು ಶಾಸಕರ ಪುತ್ರ ರುಶಿರಾಜ್ ಪವಾರ್ ಅವರನ್ನು ಎನ್ಸಿಪಿ (ಎಸ್ಪಿ) ಗೆ ಸೇರಲು ಬಯಸುವ ಕೆಲವು ವ್ಯಕ್ತಿಗಳೊಂದಿಗೆ ಸಭೆಗೆ ಬರುವಂತೆ ಆಹ್ವಾನಿಸಿದ್ದರು.

ನಂತರ ನನ್ನನ್ನು ಮೋಟಾರ್ ಬೈಕ್‌ನಲ್ಲಿ ಬಂಗಲೆಯೊಂದಕ್ಕೆ ಕರೆದೊಯ್ದು ಅಪರಿಚಿತ ಮಹಿಳೆ ಯೊಂದಿಗೆ ಅಶ್ಲೀಲ ವೀಡಿಯೊವನ್ನು ಚಿತ್ರೀಕರಿಸಲು ಒತ್ತಾಯಿಸಲಾಯಿತು ಎಂದು ದೂರು ನೀಡಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಪ್ರಸಾರ ಮಾಡದಿರಲು ಆರೋಪಿಗಳು 10 ಕೋಟಿ ರೂ.ಗೆ ಬೇಡಿಕೆ ಇಟ್ಟಿದ್ದರು ಎಂದು ಎಫ್‌ಐಆರ್‌ನಲ್ಲಿ



ಹೇಳಲಾಗಿದೆ. ರುಷಿರಾಜ್ ಸುಲಿಗೆ ಹಣದ ವ್ಯವಸ್ಥೆ ಮಾಡುವ ನೆಪದಲ್ಲಿ ಬಂಗಲೆಯಿಂದ ಹೊರಗೆ ಬಂದು ಪರಾರಿಯಾಗಿ ನಂತರ ಪೊಲೀಸ್ ಠಾಣೆಗೆ ತೆರಳಿ ಆರೋಪಿಗಳ ವಿರುದ್ಧ ದೂರು ದಾಖಲಿಸಿದ್ದರು.

ದೂರಿನ ಆಧಾರದ ಮೇಲೆ ಶಿರೂರು ಪೊಲೀಸರು ನಾಲ್ವರ ವಿರುದ್ಧ ಸೂಕ್ತ ಕಾನೂನು ನಿಬಂಧನೆಗಳ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

ದೂರಿನ ಪ್ರಕಾರ ನಾವು ಪ್ರಕರಣವನ್ನು ದಾಖಲಿಸಿಕೊಂಡಿದ್ದೇವೆ ಮತ್ತು ಹೆಚ್ಚಿನ ತನಿಖೆ ನಡೆಸುತ್ತಿದ್ದೇವೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಪಂಕಜ್ ದೇಶಮುಖ್ ತಿಳಿಸಿದ್ದಾರೆ. ನವೆಂಬರ್ 20 ರಂದು ರಾಜ್ಯ ವಿಧಾನಸಭಾ ಚುನಾವಣೆ ನಿಗದಿಯಾಗಿದೆ.

# ಇಸ್ರೋ-ನಾಸಾ ಜಂಟಿ ಗಗನಯಾತ್ರೆಗೆ ಪೈಲಟ್ ಆಗಿ ಭಾರತೀಯ ಆಯ್ಕೆ

**ನವದೆಹಲಿ:** ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪ್ರಯಾಣಿಸಲಿರುವ ಇಸ್ರೋ- ನಾಸಾ ಜಂಟಿ ಗಗನ ಯಾತ್ರೆಗೆ ಮೊದಲ ಬಾರಿಗೆ ಭಾರತೀಯ ವ್ಯಕ್ತಿಯೊಬ್ಬರು ಆಯ್ಕೆಯಾಗಿದ್ದಾರೆ.

ಇಸ್ರೋ-ನಾಸಾ ಜಂಟಿ ಗಗನಯಾತ್ರಿ ಮಿಷನ್ ಮುಂದಿನ ವರ್ಷ ಏಪ್ರಿಲ್ ಮತ್ತು ಜೂನ್ ನಡುವೆ ಉಡಾವಣೆಯಾಗುವ ನಿರೀಕ್ಷೆಯಿದೆ. ಭಾರತೀಯನೊಬ್ಬನ ಎರಡನೇ ಬಾಹ್ಯಾಕಾಶವನ್ನು ಈಗ ಜನಪ್ರಿಯವಾಗಿ ಮಿಷನ್ ಆಕಾಶ್ ಗಂಗಾ ಎಂದು ಕರೆಯಲಾಗುತ್ತದೆ.

ಅಮೆರಿಕದ ಅತ್ಯಂತ ಅನುಭವಿ ಗಗನಯಾತ್ರಿ, 64 ವರ್ಷದ ಡಾ ಪೆಗ್ಗಿ ಆನೆಟ್ ವಿಟ್ಸನ್ ನೇತೃತ್ವದ ತಂಡವನ್ನು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಕರೆದೊಯ್ಯುವ ಬಾಹ್ಯಾಕಾಶ ನೌಕೆಯನ್ನು ಭಾರತೀಯ ಶುಭಾಂಶು ಶುಕ್ಲಾ ಪೈಲಟ್ ಮಾಡಲಿದ್ದಾರೆ ಎಂದು ತಿಳಿದುಬಂದಿದೆ. ಗ್ರೂಪ್ ಕ್ಯಾಪ್ಟನ್ ಶುಕ್ಲಾ ಅವರ ಬ್ಯಾಕ್‌ಅಪ್ ಆಗಿರುವ



ಗ್ರೂಪ್ ಕ್ಯಾಪ್ಟನ್ ಪ್ರಶಾಂತ್ ಬಾಲಕಷ್ಣನ್ ನಾಯರ್ ಕೂಡ ಅದೇ ತರಬೇತಿಯನ್ನು ಪಡೆಯುತ್ತಿದ್ದಾರೆ ಇದನ್ನು ಆಕ್ಸಿಯಮ್ ಸ್ಪೇಸ್ ನಡೆಸುತ್ತಿದೆ.

ಭಾರತೀಯ-ಅಮೆರಿಕನ್ ಆಗಿ, ಈ ಕಾರ್ಯಾಚರಣೆಯು ಎರಡು ಪ್ರಪಂಚಗಳನ್ನು ಸೇತುವೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ ಆದರೆ ಭಾರತೀಯ ಸಮುದಾಯ ತನ್ನ ಮೊದಲ ಕಾರ್ಯಾಚರಣೆಯನ್ನು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಪ್ರಾರಂಭಿಸುವುದನ್ನು ನೋಡಲು ಜನರು ತುಂಬಾ ಉತ್ಸುಕರಾಗಿದ್ದಾರೆ ಮತ್ತು ಇದು ತುಂಬಾ ಉತ್ತೇಜನಕಾರಿಯಾಗಿದೆ.

# ಪಕ್ಷದ ಕಚೇರಿಯಲ್ಲಿ ಬಿಜೆಪಿ ನಾಯಕ ಶವವಾಗಿ ಪತ್ತೆ



**ಕೋಲ್ಕತ್ತಾ:** ಭಾರತೀಯ ಜನತಾ ಪಕ್ಷದ ಕಚೇರಿಯಲ್ಲಿ ಪಶ್ಚಿಮ ಬಂಗಾಳ ಬಿಜೆಪಿ ನಾಯಕನ ಶವ ಪತ್ತೆಯಾಗಿದೆ. ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯ ಉಸ್ತಿಯಲ್ಲಿರುವ ಪಕ್ಷದ ಕಚೇರಿಯಲ್ಲಿ ಬಿಜೆಪಿ ನಾಯಕ ಪೃಥ್ವಿರಾಜ್ ನಸ್ಕರ್ ಅವರ ಶವ ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಕೊಲೆಯನ್ನು ಆಡಳಿತಾರೂಢ ಟಿಎಂಸಿ ಪಕ್ಷ ದವರೇ ಮಾಡಿರಬಹುದು ಎಂದು ಬಿಜೆಪಿ ಅನು ಮಾನ ವ್ಯಕ್ತಪಡಿಸಿದೆ.

ಆದರೆ, ಪೊಲೀಸರು ಹತ್ಯೆಗೆ ಸಂಬಂಧಿಸಿದಂತೆ ಮಹಿಳೆಯೊಬ್ಬರನ್ನು ಬಂಧಿಸಿದ್ದಾರೆ. ಪಕ್ಷದ ಕಚೇರಿಯಲ್ಲಿ ನಸ್ಕರ್ ಅವರ ರಕ್ತಸಿಕ್ತ ಶವ ಪತ್ತೆಯಾಗಿದೆ. ನವೆಂಬರ್ 5 ರಿಂದ ನಾಪತ್ತೆಯಾಗಿದ್ದರು ಎಂದು ಅವರ ಕುಟುಂಬ ಸದಸ್ಯರು ತಿಳಿಸಿದ್ದಾರೆ.

ಪೊಲೀಸರು ಕಚೇರಿಯ ಬಾಗಿಲನ್ನು ಒಡೆದು ಒಳಗೆ ಪ್ರವೇಶಿಸಿದ್ದಾರೆ. ಪಕ್ಷದ ಕಚೇರಿಯ ಗೇಟ್ ಅನ್ನು ಲಾಕ್ ಮಾಡಲಾಗಿತ್ತು. ಶಂಕಿತ ದುಷ್ಕರ್ಮಿ ಹಿಂಬಾಗಿಲ ಮೂಲಕ ಪರಾರಿಯಾಗಿರಬೇಕು ಎಂದು ಶಂಕಿಸಲಾಗಿದೆ.

ಪ್ರಾಥಮಿಕ ತನಿಖೆ ಬಳಿಕ ಮಹಿಳೆಯನ್ನು ವಿಚಾರಿಸಿದಾಗ ತಾನೇ ತಪ್ಪು ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ. ಕೃತ್ಯಕ್ಕೆ ಯಾರಾದರೂ ನೆರವು ನೀಡಿದ್ದಾರೆಯೇ ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

**ಹತ್ಯೆಯ ನಂತರ ಬಿಜೆಪಿ ಮತ್ತು ಟಿಎಂಸಿ ನಡುವೆ ಮಾತಿನ ಚಕಮಕಿ ನಡೆದಿದೆ. ಪಕ್ಷದ ಜಿಲ್ಲಾ ಸಾಮಾಜಿಕ ಮಾಧ್ಯಮ ಸಂಚಾಲಕರನ್ನು ಟಿಎಂಸಿ ಗೂಂಡಾಗಳು ಅಪಹರಿಸಿ, ಚಿತ್ರಹಿಂಸೆ ನೀಡಿ ಹತ್ಯೆ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯ ಘಟಕ ಹೇಳಿದೆ. ಸಹಾಯಕ್ಕಾಗಿ ಅವರ ಕುಟುಂಬದ ಹತಾಶ ಮನವಿಯನ್ನು ಪೊಲೀಸರು ನಿರ್ಲಕ್ಷಿಸಿದ್ದಾರೆ ಎಂದು ಹೇಳಿದ್ದಾರೆ.**

**ಟಿಎಂಸಿ ನಡುವೆ ಮಾತಿನ ಚಕಮಕಿ**

### ಕಾರಣ ಬಿಜೆಪಿಗೆ ತಿಳಿದಿದೆ

**ಟಿಎಂಸಿಯ ಹಿರಿಯ ನಾಯಕ ಮತ್ತು ಮಾಜಿ ರಾಜ್ಯಸಭಾ ಸಂಸದ ಕುನಾಲ್ ಘೋಷ್ ಅವರು ನಸ್ಕರ್ ಅವರ ಸಾವಿನ ಹಿಂದಿನ ನಿಖರವಾದ ಕಾರಣ ಬಿಜೆಪಿಗೆ ತಿಳಿದಿದೆ ಆದರೆ ಟಿಎಂಸಿ ಬಗ್ಗೆ ಸುಳ್ಳು ಸುದ್ದಿ ಹರಡುತ್ತಿದ್ದಾರೆ ಎಂದು ಪ್ರತಿ ಆರೋಪ ಮಾಡಿದ್ದಾರೆ. ದೇಹದ ಕೆಲವು ಭಾಗಗಳಲ್ಲಿನ ಗಾಯವು ವ್ಯಕ್ತಿಯ ಕಡೆಗೆ ಆಕ್ರಮಣಕಾರನ ದ್ವೇಷ ಮತ್ತು ತಿರಸ್ಕಾರವನ್ನು ತೋರಿಸಿದೆ ಎಂದು ಟಿಎಂಸಿ ನಾಯಕ ಹೇಳಿಕೊಂಡಿದ್ದಾರೆ.**


# ಮಹಾ ಚುನಾವಣೆಗೆ ಕರ್ನಾಟಕ ಸರ್ಕಾರದಿಂದ 700 ಕೋಟಿ ರೂ.

## ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಆ ರಾಜ್ಯದಲ್ಲಿ ಪ್ರಚಾರ ಮಾಡುವಾಗ ಪ್ರಧಾನಿ ಮೋದಿ ಆರೋಪ

**ಮುಂಬಯಿ:** ಮಹಾರಾಷ್ಟ್ರ ಚುನಾವಣೆ ವೆಚ್ಚಕ್ಕಾಗಿ ಕರ್ನಾಟಕ ಕಾಂಗ್ರೆಸ್ ಸರಕಾರವು 700 ಕೋಟಿ ರೂ.ಗಳನ್ನು ವಸೂಲಿ ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದಾರೆ. ಇದೇ ವೇಳೆ ಕಾಂಗ್ರೆಸ್ ಆಡಳಿತದ ರಾಜ್ಯಗಳು ಗಾಂಧಿ-ನೆಹರು ಕುಟುಂಬಕ್ಕೆ 'ಎಟಿಎಂ'ಗಳಾಗಿ ಮಾರ್ಪಟ್ಟಿವೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಮಹಾರಾಷ್ಟ್ರ ವಿಧಾನಸಭೆ ಚುನಾವಣಾ ಪ್ರಚಾರಕ್ಕಾಗಿ ಅಕೋಲಾದಲ್ಲಿ ನಡೆದ ರ್ಯಾಲಿ ಉದ್ದೇ ಶಿಸಿ ಮಾತನಾಡಿದ ಪ್ರಧಿಧಾನಿ ಮೋದಿ ''ಮಹಾರಾಷ್ಟ್ರ ಚುನಾವಣೆ ಹೆಸರಿನಲ್ಲಿ ಕರ್ನಾಟಕದಲ್ಲಿ 'ವಸೂಲಿ' ಮೊತ್ತವನ್ನು ದ್ವಿಗುಣಗೊಳಿಸಲಾಗಿದೆ ಎಂದು ಜನರು ಹೇಳುತ್ತಿದ್ದಾರೆ. ಚುನಾವಣೆ ನಡೆಯುತ್ತಿರುವುದು ಮಹಾರಾಷ್ಟ್ರದಲ್ಲಿ. ಆದರೆ, ವಸೂಲಿಯನ್ನು ದ್ವಿಗುಣಗೊಳಿಸಿರುವುದು ಕರ್ನಾಟಕ ಮತ್ತು ತೆಲಂಗಾಣದಲ್ಲಿ, ಎಂದು ಆರೋಪಿಸಿದರು. ಇತ್ತೀಚಿನ ದಿನಗಳಲ್ಲಿ, ಹಿಮಾಚಲ ಪ್ರದೇಶ, ತೆಲಂಗಾಣ ಮತ್ತು ಕರ್ನಾಟಕ ರಾಜ್ಯಗಳು ಆ ಕುಟುಂಬದ 'ಎಟಿಎಂ'ಗಳಾಗಿ ಮಾರ್ಪಟ್ಟಿವೆ. ಆದರೆ, ಮಹಾರಾಷ್ಟ್ರವು ಯಾವುದೇ ಕಾರಣಕ್ಕೂ ಕಾಂಗ್ರೆಸ್ ಎಟಿಎಂ ಆಗಲು ನಾವು ಬಿಡುವುದಿಲ್ಲ,'' ಎಂದರು. ಮಹಾರಾಷ್ಟ್ರದ 'ಎಂವಿಎ' ವಿರುದ್ಧವೂ ವಾಗ್ದಾಳಿ ನಡೆಸಿದ ಪ್ರಧಾನಿ, ಇಡೀ ಮಹಾ ವಿಕಾಸ ಆಘಾಡಿಯು ಭ್ರಷ್ಟಾಚಾರ, ಬಹುಕೋಟಿ ಹಗರಣ ಮತ್ತು ಸುಲಿಗೆಯ ಮೇಲೆ ನಿಂತಿದೆ ಎಂಬುದು ಇಡೀ ರಾಷ್ಟ್ರಕ್ಕೆ ಗೊತ್ತಿದೆ. ಮಹಾ ವಿಕಾಸ ಅಘಾಡಿಯು ವರ್ಗಾವಣೆ ದಂಧೆ, ಹಗರಣಗಳು ಮತ್ತು ಲೂಟಿಗೆ ಸಮಾನಾರ್ಥಕವಾಗಿದೆ, ಎಂದು ವಾಗ್ದಾಳಿ ನಡೆಸಿದರು.

**ಒಬಿಸಿ ಹೆಗ್ಗುರುತು ಇಲ್ಲದಂತೆ ಮಾಡುವ ಪಿತೂರಿ**



**ಜಾತಿ ಗಣತಿಯನ್ನು ಟೀಕಿಸಿದ ಪ್ರಧಾನಿ:** ಹಿಂದುಳಿದ ವರ್ಗದ ವ್ಯಕ್ತಿಯೊಬ್ಬರು ದೇಶದ ಪ್ರಧಾನಿಯಾಗಿ ಚುಕ್ಕಾಣಿ ಹಿಡಿದಿರುವುದನ್ನು ಅರಗಿಸಿಕೊಳ್ಳಲಾಗದ ಕಾಂಗ್ರೆಸ್, ರಾಜಕೀಯ ಲಾಭಕ್ಕಾಗಿ ಎಸ್‌ಸಿ, ಎಸ್‌ಟಿ, ಒಬಿಸಿ ಸಮುದಾಯವನ್ನು ಜಾತಿ ಆಧಾರದಲ್ಲಿ ವಿಭಜಿಸಲು ಹೊರಟಿದೆ, ಎಂದು ಪ್ರಧಾನಿ ನರೇಂದ್ರ ಮೋದಿ ಗಂಭೀರ ಆರೋಪ ಮಾಡಿದ್ದಾರೆ.

ಮಹಾರಾಷ್ಟ್ರದ ನಾಂದೇಡ್‌ನಲ್ಲಿ ಶನಿವಾರ ಬಿಜೆಪಿ ಚುನಾವಣಾ ರ್ಯಾಲಿ ಉದ್ದೇಶಿಸಿ ಮಾತನಾಡಿದ ಮೋದಿ ಅವರು ಕಾಂಗ್ರೆಸ್ ಸರ್ಕಾರ ಇರುವ ಕಡೆಗಳಲ್ಲಿ ಪ್ರಸ್ತಾಪವಾಗಿರುವ ಜಾತಿ ಗಣತಿ ವಿಚಾರದ ಬಗ್ಗೆ ಟೀಕೆ ಮಾಡಿದರು., ಸಮಾಜದ ಪ್ರತಿಯೊಬ್ಬರ ಶ್ರೇಯೋಭಿವೃದ್ಧಿ, ಪ್ರತಿ ಕುಟುಂಬದ ಕಲ್ಯಾಣಕ್ಕೆ ಶ್ರಮಿಸುತ್ತಿರುವ ಒಬಿಸಿ ವರ್ಗದ ಪ್ರಧಾನಿ ಆಡಳಿತ ನಡೆಸುವುದನ್ನು ಕಾಂಗ್ರೆಸ್ ಸಹಿಸಿಕೊಳ್ಳುತ್ತಿಲ್ಲ.

ಒಬಿಸಿ ಪ್ರಧಾನಿ ಬಗ್ಗೆ ಅಸಹನೆ ಹೊಂದಿರುವ ಕಾಂಗ್ರೆಸ್ ಕಳೆದ 10 ವರ್ಷಗಳಿಂದ ಜನರನ್ನು ಜಾತಿ, ಮತ, ಪಂಥ, ಭಾಷೆ ಹೆಸರಿನಲ್ಲಿಒಡೆದು ಆಳಲು ಪ್ರಯತ್ನಿಸುತ್ತಿದೆ, ಎಂದು ವಾಗ್ದಾಳಿ ನಡೆಸಿದರು. ಒಬಿಸಿ ವರ್ಗವನ್ನು ಜಾತಿಯ ಹೆಸರಿನಲ್ಲಿ ಒಡೆದು ಸಣ್ಣಸಣ್ಣ ಸಮುದಾಯಗಳ ನಡುವೆ ಕಲಹ ಸೃಷ್ಟಿಸುವುದು ಕಾಂಗ್ರೆಸ್ ದುರುದ್ದೇಶವಾಗಿದೆ.

ಒಂದು ದೊಡ್ಡ ವರ್ಗವನ್ನು ಇಬ್ಭಾಗ ಮಾಡುವ ಮೂಲಕ ಒಬಿಸಿ ಹೆಗ್ಗುರುತು ಇಲ್ಲದಂತೆ ಮಾಡುವ ಪಿತೂರಿ ರೂಪಿಸಿದೆ.

ವಿಭಜನೆಯ ಕುತಂತ್ರಗಳನ್ನು ಜನ ಅರಿಯದೆ ಹೋದಲ್ಲಿ ದೇಶ ವಿನಾಶವಾಗಲಿದೆ. ಕಾಂಗ್ರೆಸ್ ಗುಪ್ತ ಕಾರ್ಯಸೂಚಿ ಬಗ್ಗೆ ಎಚ್ಚರಿಕೆಯಿಂದಿರಬೇಕು. ಇಂಥ ಷಡ್ಯಂತ್ರಗಳನ್ನು ವಿಫಲಗೊಳಿಸಬೇಕು. ನಾವು ಒಗ್ಗೂಡಿದರೆ ಮಾತ್ರ ಸುರಕ್ಷಿತವಾಗಿರುತ್ತೇವೆ,'' ಎಂದು ಒಗ್ಗಟ್ಟಿನ ಪಾಠ ಮಾಡಿದರು.

### ನಾಂದೇಡ್‌ನಲ್ಲಿ ಪ್ರಚಾರ

**ಕಾಂಗ್ರೆಸ್ ಹೈಕಮಾಂಡ್ ಅನ್ನು ತನ್ನ ಹಿಡಿತದಲ್ಲಿಟ್ಟುಕೊಂಡಿರುವ ಗಾಂಧಿ ಕುಟುಂಬ, ಯಾವ್ಯಾವ ರಾಜ್ಯಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದೆಯೋ ಅವೆಲ್ಲವುಗಳನ್ನು ತನ್ನ ಎಟಿಎಂ ಆಗಿ ಬಳಸಿಕೊಳ್ಳುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹರಿಹಾಯ್ದಿದ್ದಾರೆ. ಮಹಾರಾಷ್ಟ್ರ ಚುನಾವಣೆ ಹಿನ್ನೆಲೆಯಲ್ಲಿ, ಆ ರಾಜ್ಯದ ಅಕೋಲಾ, ನಾಂದೇಡ್‌ನಲ್ಲಿ ಪ್ರಚಾರ ಭಾಷಣ ಮಾಡಿದ ಮೋದಿ, ಮಹಾರಾಷ್ಟ್ರ ಚುನಾವಣಾ ವೆಚ್ಚಕ್ಕಾಗಿ ಕಾಂಗ್ರೆಸ್ ಹೈಕಮಾಂಡ್, ಕರ್ನಾಟಕದಿಂದ 700 ಕೋಟಿ ರೂ.ಗಳನ್ನು ಪಡೆದಿದೆ ಎಂದು ಆರೋಪಿಸಿದ್ದಾರೆ.**

- **ಕರ್ನಾಟಕ, ತೆಲಂಗಾಣ ಸರ್ಕಾರಗಳನ್ನು ಎಟಿಎಂಗಳನ್ನಾಗಿಸಿಕೊಂಡಿರುವ ಕಾಂಗ್ರೆಸ್ ಹೈಕಮಾಂಡ್**
- **ಮಹಾರಾಷ್ಟ್ರ ಚುನಾವಣೆಯ ಖರ್ಚಿಗಾಗಿ ಕರ್ನಾಟಕ ಸರ್ಕಾರದಿಂದ 700 ಕೋಟಿ ರೂ. ಪಡೆದಿದೆ ಎಂದು ಆರೋಪ**

# ಮಿನಿ ನ್ಯೂಸ್

## ಅಯ್ಯಪ್ಪನ ದರ್ಶನಕ್ಕೂ ಆಧಾರ್ ಕಡ್ಡಾಯ

**ತಿರುವನಂತಪುರ:** ಶಬರಿಮಲೆಗೆ ತೆರಳುವ ಅಯ್ಯಪ್ಪನ ಭಕ್ತರಿಗೆ ದೇವಸ್ಥಾನದ ಆಡಳಿತ ಮಂಡಳಿ ಆಧಾರ್ ಕಾರ್ಡ್ ಕಡ್ಡಾಯಗೊಳಿಸಿ ಮಹತ್ವದ ಸೂಚನೆ ನೀಡಿದೆ. ಕಾರ್ತಿಕ ಮಾಸವಾಗಿರುವುದರಿಂದ ಈ ಸಂದರ್ಭದಲ್ಲಿ ಹಲವು ದೇವಾಲಯಗಳಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿ ಇರುತ್ತದೆ. ಇನ್ನು ಕಾರ್ತಿಕ ಮಾಸದಲ್ಲಿ ಮಾಲೆ ಧರಿಸುವ ಸ್ವಾಮಿಗಳ ಸಂಖ್ಯೆಯೂ ಹೆಚ್ಚಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಎಂದು ತಿರುವಾಂಕೂರು ದೇವಸ್ಥಾನ ಮಂಡಳಿ ತಿಳಿಸಿದೆ.

ಅಯ್ಯಪ್ಪ ದರ್ಶನಕ್ಕೆ ದಿನಕ್ಕೆ 70 ಸಾವಿರ ಭಕ್ತರಿಗೆ ಅವಕಾಶ ನೀಡುವುದಾಗಿ ತಿಳಿಸಿರುವ ತಿರುವಾಂಕೂರು ದೇವಸ್ಥಾನದ ಅಧ್ಯಕ್ಷ ಪ್ರಶಾಂತ್ ತಿಳಿಸಿದ್ದಾರೆ. ಮಕರವಿಳಕ್ಕು ಋತುವಿನ ಪ್ರಕಾರ ಆನ್ಲೈನ್ ಬುಕಿಂಗ್ ಆಧಾರದ ಮೇಲೆ ಪ್ರತಿದಿನ 70,000 ಭಕ್ತರಿಗೆ ಪ್ರವೇಶಕ್ಕೆ ಅವಕಾಶ ನೀಡಲಾಗುವುದು, ತ್ವರಿತ ಬುಕಿಂಗ್ ಆಧಾರದ ಮೇಲೆ ಇನ್ನೂ 10,000 ಜನರಿಗೆ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ ಎಂದು ಅವರು ಹೇಳಿದ್ದಾರೆ.

## ಕಾಶ್ಮೀರದ ಸೋಪೋರ್‌ನಲ್ಲಿ ಓರ್ವ ಉಗ್ರನ ಹುಟ್ಟಡಗಿಸಿದ ಸೇನೆ

**ಸೋಪೋರ್:** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯ ಸೋಪೋರ್ ಪ್ರದೇಶದಲ್ಲಿ ಭಯೋತ್ಪಾದಕನನ್ನು ಹತ್ಯೆ ಮಾಡಲಾಗಿದೆ. ನಿನ್ನೆ ಸಂಜೆ ಭದ್ರತಾ ಪಡೆಗಳೊಂದಿಗೆ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಒಬ್ಬ ಭಯೋತ್ಪಾದಕನನ್ನು ಹತ್ಯೆ ಮಾಡಲಾಗಿದೆ ಎಂದು ಸೇನೆ ತಿಳಿಸಿದೆ. ಶೋಧ ಕಾರ್ಯ ಪ್ರಗತಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

ರಾಜಪುರ, ಸೋಪೋರ್, ಬಾರಾಮುಲ್ಲಾ ಸಾಮಾನ್ಯ ಪ್ರದೇಶದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಯಲ್ಲಿ ಒಬ್ಬ ಭಯೋತ್ಪಾದಕನನ್ನು ಹತ್ಯೆ ಮಾಡಲಾಗಿದೆ ಎಂದು ಅದು ಹೇಳಿದೆ. ಶೋಧ ಕಾರ್ಯಾಚರಣೆ ಪ್ರಗತಿಯಲ್ಲಿದೆ ಎಂದು ಚಿನಾರ್ ಕಾರ್ಪ್ಸ್ -ಇಂಡಿಯನ್ ಆರ್ಮಿ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಪಾರ್ಟಿಯಲ್ಲಿ ಎಣ್ಣೆ, ಮಾಂಸ ಬ್ರಿಟಿಷ್ ಹಿಂದೂಗಳು ಶಾಕ್

**ಬ್ರಿಟನ್:** ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್ ಆಯೋಜಿಸಿದ್ದ ದೀಪಾವಳಿ ಪಾರ್ಟಿಯಲ್ಲಿ ಮಾಂಸ, ಮದ್ಯ ಕಂಡು ಬ್ರಿಟಿಷ್ ಹಿಂದೂಗಳು ಶಾಕ್ ಆಗಿದ್ದಾರೆ. ಪ್ರಧಾನಮಂತ್ರಿಯವರ ಅಧಿಕೃತ ನಿವಾಸದಲ್ಲಿ ನಡೆದ ಸಮಾರಂಭದಲ್ಲಿ, ಸಮುದಾಯದ ಮುಖಂಡರು ಮತ್ತು ಉನ್ನತ ರಾಜಕಾರಣಿಗಳು ಭಾಗವಹಿಸಿದ್ದರು. ದೀಪಾಲಂಕಾರದ ದೀಪಗಳು, ಕೂಚಿಪುಡಿ ನೃತ್ಯ ಪ್ರದರ್ಶನ ಮತ್ತು ಸ್ಟಾರ್ಮರ್ ಅವರ ಭಾಷಣವನ್ನು ಸಮಾರಂಭ ಒಳಗೊಂಡಿತ್ತು. ಕೆಲವರು ಬ್ರಿಟಿಷ್ ಹಿಂದೂಗಳು, ಊಟದ ಮೆನುವಿನಲ್ಲಿ ಮದ್ಯ ಮತ್ತು ಮಾಂಸಾಹಾರಿ ಭಕ್ಷ್ಯಗಳನ್ನು ಒಳಗೊಂಡಿರುವುದನ್ನು ಕಂಡು ಆಘಾತ ವ್ಯಕ್ತಪಡಿಸಿದರು. ಅತಿಥಿಗಳಿಗೆ ಲ್ಯಾಂಬ್ ಕಬಾಬ್, ಬಿಯರ್ ಮತ್ತು ವೈನ್ ಅನ್ನು ನೀಡಲಾಗಿದೆ ಎಂದು ಆರೋಪಿಸಲಾಗಿದೆ. ಕಳೆದ ವರ್ಷ ರಿಷಿ ಸುನಕ್ ದೀಪಾವಳಿ ಹಬ್ಬ ಆಚರಣೆ ಸಂದರ್ಭದಲ್ಲಿ ಊಟದ ಮೆನುವಿನಲ್ಲಿ ಮಾಂಸ ಮತ್ತು ಮದ್ಯ ಇರಲಿಲ್ಲ. ಪ್ರಮುಖ ಬ್ರಿಟಿಷ್ ಹಿಂದೂ ಪಂಡಿತರಾದ ಸತೀಶ್ ಕೆ ಶರ್ಮಾ ಅವರು, ಪ್ರಧಾನ ಮಂತ್ರಿ ಕಚೇರಿಯಲ್ಲಿ ಸಂವೇದನಾಶೀಲತೆ ಕೊರತೆ ಎದ್ದು ಕಂಡಿದೆ ಎಂದು ಆರೋಪಿಸಿದ್ದಾರೆ.

ಕಳೆದ 14 ವರ್ಷಗಳಿಂದ 10 ಡೌನಿಂಗ್ ಸ್ಟ್ರೀಟ್‌ನಲ್ಲಿ ದೀಪಾವಳಿ ಆಚರಣೆಯು ಮಾಂಸ ಮತ್ತು ಮದ್ಯಪಾನವಿಲ್ಲದೇ ನಡೆಯುತ್ತಿದೆ. ಈ ವರ್ಷದ ಆಚರಣೆಯು ಮಾಂಸಾಹಾರ-ಪ್ರೇರಿತ ಮೂರ್ಖತನದ ಪ್ರಾಬಲ್ಯದ ಘಟನೆಯಾಗಿ ಕಂಡುಬಂದಿದ್ದರಿಂದ ನಾನು ನಿರಾಶೆಗೊಂಡಿದ್ದೇನೆ ಮತ್ತು ಆಘಾತಕ್ಕೊಳಗಾಗಿದ್ದೇನೆ. ಇದು ದುರಂತ. ಪ್ರಧಾನ ಮಂತ್ರಿಯ ಸಲಹೆಗಾರರು ತುಂಬಾ ಅಸಡ್ಡೆ ಮತ್ತು ನಿರ್ಲಕ್ಷ್ಯದಿಂದ ಇರುತ್ತಿದ್ದರು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. 10, ಡೌನಿಂಗ್ ಸ್ಟ್ರೀಟ್ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

## ಹಿಂದೂ ದೇವಾಲಯದ ಬಳಿ ಘರ್ಷಣೆ ಖಾಲಿಸ್ತಾನಿ ಬೆಂಬಲಿಗನ ಬಂಧನ

**ಒಟ್ಟಾವ:** ಕೆನಡಾದ ಬ್ರಾಂಪ್ಟನ್‌ನಲ್ಲಿರುವ ಹಿಂದೂಸಭಾ ದೇವಾಲಯದ ಮೇಲಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಬ್ಬ ಖಾಲಿಸ್ತಾನಿ ಬೆಂಬಲಿಗನನ್ನು ಪೀಲ್ ಪ್ರದೇಶದ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಇಂದರ್‌ಜೀತ್ ಗೋಸಲ್ ಎಂದು ಗುರುತಿಸಲಾಗಿದೆ. ಈತ ಕೆನಡಾದಲ್ಲಿ ಸಿಖ್ ಫಾರ್ ಜಸ್ಟಿಸ್ (ಎಸ್‌ಎಫ್‌ಜೆ) ಸಂಘಟನೆಯ ಸಂಯೋಜಕನಾಗಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದರ ಬೆನ್ನಲ್ಲೇ ಸಮಾರಂಭವೊಂದರಲ್ಲಿ ಖಾಲಿಸ್ತಾನಿ ಧ್ವಜವನ್ನು ಹಿಡಿದು ಭಾರತೀಯ ತ್ರಿವರ್ಣ ಧ್ವಜದ ಮೇಲೆ ನಿಂತಿರುವ ಇಂದರ್‌ಜೀತ್ ಫೋಟೊವೊಂದು ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿದೆ.

ನವೆಂಬರ್ 3ರಂದು ಖಾಲಿಸ್ತಾನ ಧ್ವಜಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಕೆನಡಾದ ಬ್ರಾಂಪ್ಟನ್‌ನಲ್ಲಿರುವ ಹಿಂದೂಸಭಾ ದೇವಾಲಯದ ಆವರಣದೊಳಗೆ ನುಗ್ಗಿ, ಅಲ್ಲಿನ ಜನರೊಂದಿಗೆ ಘರ್ಷಣೆ ನಡೆಸಿದ್ದರು. ಇದನ್ನು ಭಾರತದ ಹೈಕಮಿಷನ್ ಮತ್ತು ಭಾರತ ಸರ್ಕಾರ ತೀವ್ರವಾಗಿ ಖಂಡಿಸಿತ್ತು. ಅಲ್ಲದೆ ಪ್ರಧಾನಿ ನರೇಂದ್ರ ಮೋದಿ, ವಿಎಚ್‌ಪಿ, ಬಿಜೆಪಿ, ಕಾಂಗ್ರೆಸ್ ನಾಯಕರೂ ಖಂಡಿಸಿದ್ದರು. ದಾಳಿ ಕುರಿತ ವಿಡಿಯೊವೊಂದು ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕವಾಗಿ ಹಂಚಿಕೆಯಾಗಿದ್ದು, ಭಾರತೀಯರ ಆಕ್ರೋಶಕ್ಕೂ ಕಾರಣವಾಗಿತ್ತು.

## ನಿವೃತ್ತಿ ವಯಸ್ಸು ನಿಗದಿ: ಏರ್ ಇಂಡಿಯಾ ಪೈಲಟ್‌ಗಳ ಅಸಮಾಧಾನ

**ಮುಂಬೈ:** ವಿಸ್ತಾರಾ ಕಂಪನಿಯು ಏರ್ ಇಂಡಿಯಾ ವಿಮಾನಯಾನ ಕಂಪನಿ ಜೊತೆಗೆ ವಿಲೀನವಾಗುತ್ತಿದೆ. ಈ ನಡುವೆಯೇ ಟಾಟಾ ಸಮೂಹಕ್ಕೆ ಸೇರಿದ ಈ ಎರಡು ಕಂಪನಿಯ ಪೈಲಟ್‌ಗಳ ನಿವೃತ್ತಿ ವಯಸ್ಸಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ವಯೋಮಿತಿ ಬಗ್ಗೆ ಏರ್ ಇಂಡಿಯಾದ ಕೆಲವು ಪೈಲಟ್‌ಗಳು ಅಸಮಾಧಾನಗೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ. 1950ರಿಂದ ಕೇಂದ್ರ ಸರ್ಕಾರದ ಒಡೆತನದಲ್ಲಿದ್ದ ಏರ್ ಇಂಡಿಯಾವು, 2022ರಲ್ಲಿ ಟಾಟಾ ಸಮೂಹದ ತೆಕ್ಕೆಗೆ ಸೇರಿತು. ಈ ಪೈಲಟ್‌ಗಳ ನಿವೃತ್ತಿ ವಯಸ್ಸು 58ಕ್ಕೆ ನಿಗದಿಯಾಗಿದೆ.

ವಿಸ್ತಾರಾ ಪೈಲಟ್‌ಗಳ ವಯೋನಿವೃತ್ತಿಯನ್ನು 60 ವರ್ಷಕ್ಕೆ ನಿಗದಿಪಡಿಸಲಾಗಿದೆ ಎಂದು ಹೇಳಲಾಗಿದೆ. ಸಿಂಗಪುರ ಏರ್‌ಲೈನ್ಸ್ ಮತ್ತು ಟಾಟಾ ಸಮೂಹದ ಜಂಟಿ ಒಡೆತನದಲ್ಲಿರುವ ವಿಸ್ತಾರಾ ನವೆಂಬರ್ 11ರಂದು ಅಧಿಕೃತವಾಗಿ ವಿಲೀನಗೊಳ್ಳಲಿದೆ. 'ನಿವೃತ್ತಿ ವಯಸ್ಸಿಗೆ ಸಂಬಂಧಿಸಿದಂತೆ ಎದುರಾಗಿರುವ ಸಮಸ್ಯೆ ಪರಿಹರಿಸುವ ಬಗ್ಗೆ ಆಡಳಿತ ಮಂಡಳಿಯು ಇನ್ನೂ ಯಾವುದೇ ಕ್ರಮಕೈಗೊಂಡಿಲ್ಲ' ಎಂದು ಮೂಲಗಳು ಹೇಳಿವೆ. ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯದ (ಡಿಜಿಸಿಎ) ನಿಯಮಾವಳಿ ಪ್ರಕಾರ ಪೈಲಟ್‌ಗಳು 65 ವರ್ಷದವರೆಗೂ ಸೇವೆ ಸಲ್ಲಿಸಬಹುದಾಗಿದೆ.

# ಅಂಶುಗೀಗ ಸೆನ್ಸಾರ್ ಸರ್ಟಿಫಿಕೇಟ್ ಸಿಕ್ಕ ಖುಷಿ!


ಇತ್ತೀಚೆಗಷ್ಟೇ ಬಿಡುಗಡೆಗೊಂಡಿದ್ದ ಟ್ರೈಲರ್ ಮೂಲಕ ಪ್ರೇಕ್ಷಕರನ್ನೆಲ್ಲ ಮೋಡಿ ಮಾಡಿದ್ದ ಚಿತ್ರ 'ಅಂಶು' ನಮ್ಮ ನಡುವೆಯೇ ಘಟಿಸೋ ಕಥೆಯೊಂದು, ಕಮರ್ಶಿಯಲ್ ಜಾಡಿನಲ್ಲಿ ಮೂಡಿ ಬಂದಿರುವ ಸುಳಿವು ಕಂಡು ಎಲ್ಲರೂ ಥ್ರಿಲ್ ಆಗಿದ್ದರು. ಅದೇ ಖುಷಿಯಲ್ಲಿ ಬಿಡುಗಡೆಗೆ ಸಜ್ಜುಗೊಳ್ಳುತ್ತಿರೋ ಚಿತ್ರತಂಡವೀಗ ಮತ್ತೊಂದು ಖುಷಿಯ ವಿಚಾರವನ್ನು ಹಂಚಿಕೊಂಡಿದೆ. ಸೆನ್ಸಾರ್ ಪರೀಕ್ಷೆ ದಾಟಿಕೊಂಡಿರುವ ಅಂಶು ಚಿತ್ರಕ್ಕೀಗ ಯು/ಎ ಸರ್ಟಿಫಿಕೇಟ್ ಸಿಕ್ಕಿದೆ. ಸಾಮಾಜಿಕ ಸ್ಥಿತ್ಯಂತರವೊಂದಕ್ಕೆ ಸಿನಿಮಾ ಸ್ಪರ್ಶ ನೀಡಿರುವ ಕುಸುರಿ ಕೆಲಸಕ್ಕೆ ಸೆನ್ಸಾರ್ ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಮೂಲಕ ಅಂಶು ಇದೀಗ ನಿರ್ಣಾಯಕ ಘಟ್ಟ ತಲುಪಿಕೊಂಡಿದೆ. ಗ್ರಹಣ ಎಲ್‌ಎಲ್‌ಪಿ ಬ್ಯಾನರ್ ಅಡಿಯಲ್ಲಿ ರತನ್ ಗಂಗಾಧರ್ ಸಂಪತ್ ಶಿವಶಂಕರ್, ಕೃತಿ ನಾಣಯ್ಯ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಚೆಲುವರಾಜ್, ಜಯಚಂದ್ರ ಯಲ್ಲಪ್ಪ, ಪ್ರಮೋದ್ ಚಿನ್ನಸ್ವಾಮಿ, ಡಾ.ಮಧುರಾಜ್ ಸಹ ನಿರ್ಮಾಪಕರಾಗಿ ಸಾಥ್ ಕೊಟ್ಟಿದ್ದಾರೆ.

ಈ ಹಿಂದೆ ಫಸ್ಟ್ ಲುಕ್ ಟೀಸರ್ ಮೂಲಕವೇ ಗಮನ ಸೆಳೆದಿದ್ದ ಈ ಚಿತ್ರದಲ್ಲಿ ಗಟ್ಟಿಮೇಳ ಖ್ಯಾತಿಯ ನಿಶಾ ರವಿಕೃಷ್ಣನ್ ನಾಯಕಿಯಾಗಿ ನಟಿಸಿದ್ದಾರೆ. ಆ ಧಾರಾವಾಹಿಯಲ್ಲಿ ರೌಡಿ ಬೇಬಿ ಅವತಾರದಲ್ಲಿ ಕಂಗೊಳಿಸಿದ್ದ ನಿಶಾ ಇಲ್ಲಿ ಭಾವನಾತ್ಮಕ ಪಾತ್ರವೊಂದರ ಮೂಲಕ ಹಿರಿತೆರೆ ಪ್ರೇಕ್ಷಕರ ಮನಗೆಲ್ಲಲು ಮುಂದಾಗಿದ್ದಾರೆ.

ಅವರ ಪಾತ್ರದ ಚಹರೆ ಟ್ರೈಲರ್ ಮೂಲಕ ಸ್ಪಷ್ಟವಾಗಿಯೇ ಜಾಹೀರಾಗಿತ್ತು. ಅಂದಹಾಗೆ, ಇದು ಕನ್ನಡದ ಮಟ್ಟಿಗೆ ಅತ್ಯಪರೂಪವಾದ ಸೈಕ್ಯಾಡೆಲಿಕ್ ಥ್ರಿಲ್ಲರ್ ಜಾನರಿನ ಚಿತ್ರ.

ಎಂ.ಸಿ ಚನ್ನಕೇಶವ ಈ ಸಿನಿಮಾ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ಈ ಪ್ರಥಮ ಹೆಜ್ಜೆಯಲ್ಲಿಯೇ ಅವರು ಸಮಾಜಮುಖಿ ಕಥೆಯನ್ನು ದೃಶ್ಯಕ್ಕೆ ಒಗ್ಗಿಸಿದ್ದಾರೆ.






# ಸೂರ್ಯಗಿಂತ ಮೂರು ಪಟ್ಟು ಜಾಸ್ತಿ ಸಂಬಳ

ಕಾಲಿವುಡ್ ನಟ ಸೂರ್ಯ ಅವರು ಬಹುನಿರೀಕ್ಷಿತ 'ಕಂಗುವ' ಸಿನಿಮಾದಲ್ಲಿ ನಟಿಸಿದ್ದಾರೆ. ಈ ಸಿನಿಮಾ ನವೆಂಬರ್ 14ರಂದು ಬಿಡುಗಡೆ ಆಗಲಿದೆ. ಈ ಸಿನಿಮಾದ ಪ್ರಚಾರದ ಸಲುವಾಗಿ ಮಾಧ್ಯಮಗಳಿಗೆ ಸೂರ್ಯ ಅವರು ಸಂದರ್ಶನ ನೀಡಿದ್ದಾರೆ. ಇತ್ತೀಚೆಗೆ ನೀಡಿದ ಸಂದರ್ಶನದಲ್ಲಿ ಅವರು ಪತ್ನಿ ಜ್ಯೋತಿಕಾ ಬಗ್ಗೆ ಮಾತನಾಡಿದ್ದಾರೆ. ಈಗ ಸೂರ್ಯ ಅವರು ಕೋಟ್ಯಂತರ ರೂಪಾಯಿ ಸಂಭಾವನೆ ಪಡೆಯುತ್ತಾರೆ. ಆದರೆ ಒಂದು ಕಾಲದಲ್ಲಿ ಅವರ ಸಂಬಳ ಪತ್ನಿ ಜ್ಯೋತಿಕಾಗಿಂತ ಕಡಿಮೆ ಇತ್ತು. ಆ ದಿನಗಳನ್ನು ಸೂರ್ಯ ಅವರು ಈಗ ಮೆಲುಕು ಹಾಕಿದ್ದಾರೆ. ಸೂರ್ಯ ಅವರು ಫಿಲ್ಮಿ ಕುಟುಂಬದಿಂದ ಬಂದವರು. ಅವರಿಗೆ ಅವಕಾಶ ಸುಲಭವಾಗಿ ಸಿಕ್ಕಿತ್ತು. ಅವರ ಮಾತೃಭಾಷೆ ತಮಿಳು ಆದ್ದರಿಂದ ಅವರಿಗೆ ಡೈಲಾಗ್ ಹೇಳುವುದು ಕೂಡ ಸುಲಭ ಆಗಿತ್ತು. ಆದರೆ ಜ್ಯೋತಿಕಾ ಅವರು ಪರಭಾಷೆಯವರು. ಹಾಗಿದ್ದರೂ ಕೂಡ ಅವರು ಸೂರ್ಯಗಿಂತ ಚೆನ್ನಾಗಿ ಡೈಲಾಗ್ ಕಲಿತು ಹೇಳುತ್ತಿದ್ದರು. ಆ ಸಂದರ್ಭದಲ್ಲಿ ಸೂರ್ಯ ಅವರಿಗಿಂತ ಜ್ಯೋತಿಕಾ 3 ಪಟ್ಟು ಹೆಚ್ಚು ಸಂಬಳ ಪಡೆಯುತ್ತಿದ್ದರು! ಜ್ಯೋತಿಕಾ ಅವರು ಹೆಚ್ಚು ಸಂಬಳ ಪಡೆಯುತ್ತಿದ್ದ ಕಾಲದಲ್ಲೇ ಸೂರ್ಯ ಅವರನ್ನು ಮದುವೆ ಆದರು. ನಂತರ ಪತ್ನಿಗಿಂತಲೂ ಹೆಚ್ಚು ಸಂಬಳ ಪಡೆಯುವ ಮಟ್ಟಕ್ಕೆ ಸೂರ್ಯ ಅವರು ಬೆಳೆದರು. ಜ್ಯೋತಿಕಾ ಅವರು ಕುಟುಂಬಕ್ಕಾಗಿ ಹೆಚ್ಚು ಆದ್ಯತೆ ನೀಡಿದರು. ಬಳಿಕ ಅವರು ಸಿನಿಮಾಗಳಲ್ಲಿ ನಟಿಸುವುದು ಕಡಿಮೆ ಆಯಿತು. ಈಗ ಸಿನಿಮಾಗಳ ಆಯ್ಕೆಯಲ್ಲಿ ಜ್ಯೋತಿಕಾ ಅವರು ಚ್ಯೂಸಿ ಆಗಿದ್ದಾರೆ. ಪ್ರತಿ ಸಿನಿಮಾದಲ್ಲೂ ಸೂರ್ಯ ಅವರು ಸವಾಲಿನ ಪಾತ್ರಗಳನ್ನು ನಿಭಾಯಿಸುತ್ತಾರೆ. ಈಗ ಅವರು 'ಕಂಗುವ' ಸಿನಿಮಾದಲ್ಲೂ ಅಂತಹ ಒಂದು ಭಿನ್ನವಾದ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಅವರ ಗೆಟಪ್ ಡಿಫರೆಂಟ್ ಆಗಿದೆ. ಈ ಸಿನಿಮಾದಲ್ಲಿ ದಿಶಾ ಪಟಾನಿ, ಬಾಬಿ ಡಿಯೋಲ್ ಮುಂತಾದವರು ನಟಿಸಿದ್ದಾರೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ಬೇರೆ ಬೇರೆ ಭಾಷೆಗಳಿಗೆ ಡಬ್ ಆಗಿ ಈ ಸಿನಿಮಾ ತೆರೆ ಕಾಣಲಿದೆ.

# ರಾಜು ಈಗ ಜೇಮ್ಸ್ ಬಾಂಡ್



ಫಸ್ಟ್ ರ್‍ಯಾಂಕ್‌ರಾಜು ಸಿನಿಮಾ ಬಿಡುಗಡೆ ಆದಾಗ ಉತ್ತಮ ಪ್ರದರ್ಶನ ಕಂಡಿತ್ತು. ಸಿನಿಮಾದ ಹಾಸ್ಯ ಮತ್ತು ಅದು ನೀಡಿದ ಸಂದೇಶ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿತ್ತು. ಅದೇ 'ಫಸ್ಟ್ ರ್‍ಯಾಂಕ್ ರಾಜು' ಖ್ಯಾತಿಯ ಗುರುನಂದನ್ ಈಗ 'ರಾಜು ಜೇಮ್ಸ್ ಬಾಂಡ್' ಹೆಸರಿನ ಸಿನಿಮಾದಲ್ಲಿ ನಟಿಸಿದ್ದಾರೆ. ಸಿನಿಮಾದ ಚಿತ್ರೀಕರಣ ಬಹುತೇಕ ಅಂತ್ಯವಾಗಿದ್ದು, ಸಿನಿಮಾದ ಮೋಷನ್ ಪೋಸ್ಟರ್ ಇತ್ತೀಚೆಗಷ್ಟೆ ಬಿಡುಗಡೆ ಆಗಿದೆ. ಈ ಸಿನಿಮಾದಲ್ಲಿ ಸಿನಿಮಾದ ಬಿಡುಗಡೆ ದಿನಾಂಕವನ್ನು ಸಹ ಚಿತ್ರತಂಡ ಘೋಷಣೆ ಮಾಡಿದೆ.

'ರಾಜು ಜೇಮ್ಸ್ ಬಾಂಡ್' ಸಿನಿಮಾ ಡಿಸೆಂಬರ್ 27 ರಂದು ಬಿಡುಗಡೆ ಆಗಲಿದೆ. ನಿರ್ಮಾಪಕರಾದ ಮಂಜುನಾಥ್ ವಿಶ್ವಕರ್ಮ (ಲಂಡನ್) ಮತ್ತು ಕಿರಣ್ ಭರ್ತೂರು (ಕೆನಡಾ) ಮೋಷನ್ ಪೋಸ್ಟರ್ ಅನಾವರಣ ಮಾಡುವ ಮೂಲಕ ಚಿತ್ರದ ಪ್ರಚಾರಕ್ಕೆ ಚಾಲನೆ ನೀಡಿದರು. 'ಫಸ್ಟ್ ರ್‍ಯಾಂಕ್ ರಾಜು' ಸಿನಿಮಾದ ನಾಯಕ ಗುರುನಂದನ್ ಮಾತನಾಡಿ, 'ಜೇಮ್ಸ್ ಬಾಂಡ್' ರಾಜುಗೂ 'ಫಸ್ಟ್ ರ್‍ಯಾಂಕ್' ರಾಜೂಗೂ ಬಹಳ ವ್ಯತ್ಯಾಸ ಇದೆ. ಎರಡು ಪಾತ್ರಗಳು ಒಂದಕ್ಕೊಂದು ಬಹಳ ಭಿನ್ನ, ವೈರುದ್ಯ ಹೊಂದಿವೆ. 'ರಾಜು ಜೇಮ್ಸ್ ಬಾಂಡ್' ಸಿನಿಮಾದಲ್ಲಿ ಯಾವುದೇ ಅಶ್ಲೀಲ ಸಂಭಾಷಣೆ ಇರುವುದಿಲ್ಲ. ಇದೊಂದು ಶುದ್ಧ ಮನೋರಂಜನೆ ಸಿನಿಮಾ ಆಗಿರಲಿದೆ.. ಎರಡುಕಾಲು ಗಂಟೆಗಳ ಚಿತ್ರದಲ್ಲಿ ಮಕ್ಕಾಲು ಗಂಟೆ ನೀವು ನಗುವಿಗೆ ಮೀಸಲಿಡಬೇಕು. ವರ್ಷದ ಕೊನೆಯಲ್ಲಿ ನಗುನಗುತ್ತಾ ನೂತನ ವರ್ಷವನ್ನು ನಮ್ಮ ಸಿನಿಮಾ ಮೂಲಕ ಸ್ವಾಗತಿಸೋಣ' ಎಂದರು.

ಎಷ್ಟೋ ಜನ ನನ್ನನ್ನು ರಾಜು ಎಂದೇ ಗುರುತಿಸುತ್ತಾರೆ. ಅವರಿಗೆ ನನ್ನ ಹೆಸರು ಸಹ ಗೊತ್ತಿಲ್ಲ. ಈ ಚಿತ್ರದ ನಿರ್ದೇಶಕ ನಡುವಳ್ಳಿ ಅವರು ನನ್ನ ಹಿಂದಿನ ಜಾನರ್‌ಗೆ ಬ್ರೇಕ್ ಹಾಕಿ, ಹೊಸ ಶೈಲಿಯಲ್ಲಿ ನನ್ನನ್ನು ತೋರಿಸುವ ಪ್ರಯತ್ನ ಮಾಡಿದ್ದಾರೆ. ನನ್ನಿಂದ ಸಖತ್ ಡ್ಯಾನ್ಸ್, ಆಕ್ಷನ್ ಮಾಡಿಸಿದ್ದಾರೆ.



# ಮಾಸ್ ಕಥನದ ಸುಳಿವಿನೊಂದಿಗೆ 'ಗನ್ಸ್ ಅಂಡ್ ರೋಸಸ್'




ಸಿನಿಮಾ ಪಾಲಿಗೆ ಎಂದೂ ಹಳತಾಗದ ಕಥಾ ವಸ್ತುಗಳಲ್ಲಿ ಭೂಗತ ಜಗತ್ತೂ ಸೇರಿಕೊಂಡಿದೆ. ಆಯಾ ನಿರ್ದೇಶಕರ ಹೊಸತನದ ದೃಷ್ಟಿಗೆ ಈ ಲೋಕದ ಕಥಾ ಎಳೆಗಳು ತಾಜಾತನದಿಂದ ದಕ್ಕೋದಿದೆ. ಇದೀಗ ಪ್ರೇಕ್ಷಕರ ಗಮನ ಸೆಳೆದುಕೊಂಡಿರುವ 'ಗನ್ಸ್ ಅಂಡ್ ರೋಸಸ್' ಚಿತ್ರ ಟೀಸರ್ ನಲ್ಲಿಯೂ ಅಂಥಾದ್ದೇ ಕಥನದ ಸುಳಿವು ಸಿಕ್ಕಿದೆ. ದೃಶ್ಯಗಳಲ್ಲಿರೋ ಆವೇಗ, ಶ್ರೀಮಂತಿಕೆ, ಹೊಸತನಗಳ ಮೂಲಕ ಈ ಸಿನಿಮಾದ ಟೀಸರ್ ಪ್ರೇಕ್ಷಕರ ನಡುವಲ್ಲೊಂದು ಚರ್ಚೆ ಹುಟ್ಟು ಹಾಕಿದೆ. ಐದು ಭಾಷೆಗಳಲ್ಲಿ ತಯಾರುಗೊಂಡಿರುವ ಈ ಚಿತ್ರ ಇದೇ ಡಿಸೆಂಬರ್ 27 ರಂದು ಬಿಡುಗಡೆಗೊಳ್ಳಲಿದೆ.

ವಿಶೇಷವೆಂದರೆ, ಇದು ಕನ್ನಡ ಸೇರಿದಂತೆ ತಮಿಳು, ತೆಲುಗು, ಮಲೆಯಾಳಂ ಮತ್ತು ಹಿಂದಿ ಭಾಷೆಗಳಲ್ಲಿಯೂ ತಯಾರಾಗಿರುವ ಚಿತ್ರ. ಇದರ ನಾಯಕ ಅರ್ಜುನ್ ಕಥೆಗಾರರಾಗಿ, ಸಂಭಾಷಣಾಕಾರರಾಗಿ, ನಟರಾಗಿ ಹೆಸರಾಗಿರುವ ಅಜಯ್ ಕುಮಾರ್ ಅವರ ಪುತ್ರ. ಈ ಪ್ಯಾನ್‌ಇಂಡಿಯಾ ಚಿತ್ರದ ಮೂಲಕ ಅವರು ನಾಯಕನಾಗಿ ಎಂಟ್ರಿ ಕೊಡುತ್ತಿದ್ದಾರೆ. ಅವರಿಲ್ಲಿ ಪಕ್ಕಾ ಮಾಸ್ ಲುಕ್ಕಿನಲ್ಲಿ ಕಂಗೊಳಿಸಿದ್ದಾರೆ. ಈಗಾಗಲೇ ಬೇರೆ ಬೇರೆ ಭಾಷೆಗಳ ವಿತರಕರು ಚಿತ್ರವನ್ನು ವೀಕ್ಷಿಸಿದ್ದಾರೆ. ಅವರೆಲ್ಲರೂ ಅರ್ಜುನ್ ನಟನೆಯ ಕಸುವನ್ನು ಕಂಡು ಅಕ್ಷರಶಃ ಬೆರಗಾಗಿದ್ದಾರೆ. ಎಲ್ಲಾ ಭಾಷೆಗಳಿಗೂ ಹೊಂದಿಕೊಳ್ಳುವಂಥಾ ಅರ್ಜುನ್ ಅವರ ಛಾತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನಟನೆ, ಸಾಹಸ ಸನ್ನಿವೇಶ, ಡ್ಯಾನ್ಸ್ ಸೇರಿದಂತೆ ಎಲ್ಲದರಲ್ಲಿಯೂ ಅವರು ಪಳಗಿದ ನಟನಂತೆ ಕಾಣಿಸಿಕೊಂಡಿದ್ದಾರೆ.

ಹೀಗೊಂದು ಮೆಚ್ಚುಗೆ ಪರಭಾಷಾ ಚಿತ್ರರಂಗದ ಮಂದಿಯಿಂದಲೇ ಕೇಳಿ ಬಂದಿದೆ ಎಂದರೆ, ಈ ಸಿನಿಮಾದ ಬಗ್ಗೆ ಸಹಜವಾಗಿಯೇ ಕುತೂಹಲ ಮೂಡಿಕೊಳ್ಳುತ್ತದೆ. ದ್ರೋಣ ಕ್ರಿಯೇಷನ್ಸ್ ಬ್ಯಾನರಿನಡಿಯಲ್ಲಿ ಎಚ್.ಆರ್ ನಟರಾಜ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ನಿರ್ದೇಶನ ವಿಭಾಗದಲ್ಲಿ ಇಪ್ಪತ್ತೈದು ವರ್ಷಗಳಿಂದ ಚಿತ್ರರಂಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹೆಚ್.ಎಸ್ ಶ್ರೀನಿವಾಸ್ ಕುಮಾರ್ ಸದರಿ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ.

# ಅಲ್ಲು ಅರ್ಜುನ್‌ಗೆ ರಶ್ಮಿಕಾ ಸ್ಪೆಷಲ್ ಗಿಫ್ಟ್

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕೈತುಂಬಾ ಸಿನಿಮಾಗಳಿರುವ ನಡುವೆ ಸಹನಟ ಅಲ್ಲು ಅರ್ಜುನ್‌ಗೆ 'ಪುಷ್ಪ 2' ಬಿಡುಗಡೆಗೂ ಮುನ್ನವೇ ಸ್ಪೆಷಲ್ ಗಿಫ್ಟ್‌ವೊಂದನ್ನು ನೀಡಿದ್ದಾರೆ. ಅಲ್ಲು ಅರ್ಜುನ್ ಮತ್ತು ರಶ್ಮಿಕಾ ನಟನೆಯ 'ಪುಷ್ಪ 2' ಸಿನಿಮಾ ಡಿಸೆಂಬರ್ 5ರಂದು ರಿಲೀಸ್ ಆಗಲಿದೆ. ಇದೀಗ ಸಿನಿಮಾ ರಿಲೀಸ್‌ಗೂ ಮುನ್ನವೇ ವಿಶೇಷ ಗಿಫ್ಟ್‌ವೊಂದನ್ನು ಅಲ್ಲು ಅರ್ಜುನ್‌ಗೆ ರಶ್ಮಿಕಾ ನೀಡಿದ್ದಾರೆ.


ದೀಪಾವಳಿ ಹಬ್ಬದ ಪ್ರಯುಕ ಬೆಳ್ಳಿ ನಾಣ್ಯವೊಂದನ್ನು ಉಡುಗೊರೆಯಾಗಿ ನಟನಿಗೆ ಕೊಟ್ಟಿದ್ದಾರೆ. ಬೆಳ್ಳಿಯನ್ನು ಯಾರಿಗಾದರೂ ಉಡುಗೊರೆಯಾಗಿ ನೀಡಿದ್ರೆ ಅವರಿಗೆ ಅದೃಷ್ಟ ಬರುತ್ತದೆ ಎಂದು ನನ್ನ ತಾಯಿ ಆಗಾಗ ಹೇಳುತ್ತಿದ್ದರು. ನಿಮಗೆ ಹೆಚ್ಚಿನ ಅದೃಷ್ಟವನ್ನು ತರಲಿ ಎಂದು ನಾನು ಭಾವಿಸುತ್ತೇನೆ. ನಿಮಗೆ ಮತ್ತು ನಿಮ್ಮ ಕುಟುಂಬಕ್ಕೆ ದೀಪಾವಳಿ ಹಬ್ಬದ ಶುಭಾಶಯಗಳು ಎಂದು ರಶ್ಮಿಕಾ ಬರೆದು ಕಳುಹಿಸಿದ್ದಾರೆ. ಬೆಳ್ಳಿಯ ನಾಣ್ಯದ ಜೊತೆ ಸಿಹಿ ತಿನಿಸುಗಳನ್ನು ನಟಿ ಕಳುಹಿಸಿದ್ದಾರೆ. ರಶ್ಮಿಕಾ ಕಳುಹಿಸಿದ ಗಿಫ್ಟ್ ಫೋಟೋ ಕ್ಲಿಕ್ಕಿಸಿ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿ ಅಲ್ಲು ಅರ್ಜುನ್ ಥ್ಯಾಂಕ್ಯೂ ಎಂದಿದ್ದಾರೆ. ಈಗ ನನಗೆ ಹೆಚ್ಚು ಅದೃಷ್ಟ ಬೇಕು ಎಂದು ಬರೆದುಕೊಂಡಿದ್ದಾರೆ. ಅದಕ್ಕೆ ನಟಿ, ರಿಲೀಸ್ ಬಳಿಕ 'ಪುಷ್ಪ 2' ಚಿತ್ರ ಖಂಡಿತವಾಗಿಯೂ ಸದ್ದು ಮಾಡುತ್ತೆ. ನಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ಸಿಗಲಿದೆ. ನಮ್ಮ ಕೆಲಸವನ್ನು ಪ್ರೇಕ್ಷಕರು ಗುರುತಿಸುತ್ತಾರೆ. ಈ ವಿಷ್ಯದಲ್ಲಿ ನನಗೆ ನಂಬಿಕೆಯಿದೆ ಎಂದು ಪ್ರತಿಯುತ್ತರ ನೀಡಿದ್ದಾರೆ. ಪುಷ್ಪರಾಜ್ ಮತ್ತು ಶ್ರೀವಲ್ಲಿಯ ತೆರೆಹಿಂದಿನ ಸಂಭಾಷಣೆ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ. ಸಿನಿಮಾಗಾಗಿ ಎದುರು ನೋಡುತ್ತಿದ್ದಾರೆ.

# ಚಾಂಪಿಯನ್ಸ್ ಟ್ರೋಫಿಯಿಂದ ಭಾರತ ಹಿಂದೆ ಸರಿದರೆ, ಯಾವ ತಂಡಕ್ಕೆ ಚಾನ್ಸ್

2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯು ಪಾಕಿಸ್ತಾನದಲ್ಲಿ ನಡೆಯಲಿದೆ. ಆದರೆ ಪಾಕ್‌ನಲ್ಲಿ ಟೂರ್ನಿ ಆಡಲು ಭಾರತ ತಂಡ ಹಿಂದೇಟು ಹಾಕಿದೆ. ಅಲ್ಲದೆ ಹೈಬ್ರಿಡ್ ಮಾದರಿಯಲ್ಲಿ ಪಂದ್ಯಾವಳಿಯನ್ನು ಆಯೋಜಿಸಿದರೆ ಮಾತ್ರ ಭಾರತ ತಂಡ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾಗವಹಿಸುವ ಸಾಧ್ಯತೆಯಿದೆ.

ಇಲ್ಲಿ ಹೈಬ್ರಿಡ್ ಮಾದರಿ ಎಂದರೆ, ಟೂರ್ನಿಯು ಪಾಕಿಸ್ತಾನದಲ್ಲೇ ನಡೆದರೂ ಭಾರತದ ಪಂದ್ಯಗಳನ್ನು ತಟಸ್ಥ ಸ್ಥಳದಲ್ಲಿ ಆಯೋಜಿಸುವುದು. ಅದರಂತೆ ಭಾರತದ ಪಂದ್ಯಗಳನ್ನು ಯುಎಇ ಅಥವಾ ಶ್ರೀಲಂಕಾದಲ್ಲಿ ಆಯೋಜಿಸುವಂತೆ ಐಸಿಸಿಗೆ ಬಿಸಿಸಿಐ ಮನವಿ ಮಾಡಬಹುದು.

ಅತ್ತ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜಿಸಲು ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ನಿರಾಕರಿಸಿದರೆ, ಟೀಮ್ ಇಂಡಿಯಾ ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿಯಲಿದೆ. ಭಾರತ ತಂಡ ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿದರೆ ಯಾವ ತಂಡಕ್ಕೆ ಚಾನ್ಸ್ ಸಿಗಲಿದೆ ಎಂಬ ಪ್ರಶ್ನೆ ಮೂಡುವುದು ಸಹಜ.




ಈ ಪ್ರಶ್ನೆಗೆ ಉತ್ತರ ಶ್ರೀಲಂಕಾ. ಏಕೆಂದರೆ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಏಕದಿನ ವಿಶ್ವಕಪ್ 2023ರ ಅಂಕ ಪಟ್ಟಿಯಲ್ಲಿ ಟಾಪ್-8 ನಲ್ಲಿ ಕಾಣಿಸಿಕೊಂಡ ತಂಡಗಳು ಚಾಂಪಿಯನ್ಸ್ ಟ್ರೋಫಿಗೆ ಅರ್ಹತೆ ಪಡೆದುಕೊಂಡಿದೆ. ಆದರೆ ಈ 8 ತಂಡಗಳಲ್ಲಿ ಶ್ರೀಲಂಕಾ ಇಲ್ಲ.

**ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಲ್ಲಿ ಒಟ್ಟು 8 ತಂಡಗಳು**

ಒಂದು ವೇಳೆ ಇದೀಗ ಭಾರತ ತಂಡವು ಟೂರ್ನಿಯಿಂದ ಹಿಂದೆ ಸರಿದರೆ ಶ್ರೀಲಂಕಾ ತಂಡಕ್ಕೆ ಅವಕಾಶ ಸಿಗಲಿದೆ. ಏಕೆಂದರೆ ಏಕದಿನ ವಿಶ್ವಕಪ್ 2023ರ ಅಂಕ ಪಟ್ಟಿಯಲ್ಲಿ ಶ್ರೀಲಂಕಾ ತಂಡವು 9ನೇ ಸ್ಥಾನದಲ್ಲಿದೆ. ಹೀಗಾಗಿ ಒಂದು ತಂಡ ಟೂರ್ನಿಯನ್ನು ಬಹಿಷ್ಕರಿಸಿದರೆ, ಅಂಕ ಪಟ್ಟಿಯಲ್ಲಿ ನಂತರದ ಸ್ಥಾನದಲ್ಲಿರುವ ತಂಡಕ್ಕೆ ಅವಕಾಶ ನೀಡಲಾಗುತ್ತದೆ. ಅದರಂತೆ ಭಾರತ ತಂಡವು ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿದರೆ ಶ್ರೀಲಂಕಾ ತಂಡವು ಟೂರ್ನಿಗೆ ಅರ್ಹತೆ ಪಡೆಯಲಿದೆ.

# ಸಂಭಾವ್ಯ ತಂಡದಲ್ಲಿ ಸ್ಥಾನ ಪಡೆದ ದ್ರಾವಿಡ್ ಕಿರಿಯ ಪುತ್ರ

ರಾಹುಲ್ ದ್ರಾವಿಡ್ ಅವರ ಕಿರಿಯ ಪುತ್ರ ಅನ್ವಯ್ ದ್ರಾವಿಡ್ ಈ ಹಿಂದೆ 14 ವರ್ಷದೊಳಗಿನವರ ರಾಜ್ಯ ತಂಡದ ನಾಯಕರಾಗಿ ಕಾಣಿಸಿಕೊಂಡಿದ್ದರು. ಇದೀಗ ವಿಜಯ್ ಮರ್ಚೆಂಟ್ ಟೂರ್ನಿಗಾಗಿ ಆಯ್ಕೆ ಮಾಡಲಾದ ಕರ್ನಾಟಕ ಸಂಭಾವ್ಯ ತಂಡದಲ್ಲೂ ಸ್ಥಾನ ಪಡೆಯುವಲ್ಲಿ 16 ರಿಂದ ಶುರುವಾಗಲಿರುವ ವಿಜಯ್ ಮರ್ಚೆಂಟ್ ಟ್ರೋಫಿಗಾಗಿ ಕರ್ನಾಟಕ ಸಂಭಾವ್ಯ ಆಟಗಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಪಟ್ಟಿಯಲ್ಲಿ ಟೀಮ್ ಇಂಡಿಯಾದ ಮಾಜಿ ನಾಯಕ ರಾಹುಲ್ ದ್ರಾವಿಡ್ ಅವರ ಕಿರಿಯ ಪುತ್ರ ಅನ್ವಯ್ ದ್ರಾವಿಡ್ ಸ್ಥಾನ ಪಡೆದಿದ್ದಾರೆ. ದ್ರಾವಿಡ್ ಅವರ ಹಿರಿಯ ಪುತ್ರ ಸಮಿತ್ ದ್ರಾವಿಡ್ ಈಗಾಗಲೇ ಕರ್ನಾಟಕ ಅಂಡರ್-19 ತಂಡವನ್ನು ಪ್ರತಿನಿಧಿಸಿದ್ದು, ಇದೀಗ ಕಿರಿಯ ಪುತ್ರ ಕೂಡ ಅಣ್ಣನ ಹಾದಿಯಲ್ಲಿದ್ದಾರೆ.



ಅದರಂತೆ ವಿಜಯ್ ಮರ್ಚೆಂಟ್ ಟೂರ್ನಿಗಾಗಿ ಆಯ್ಕೆ ಮಾಡಲಾದ 35 ಸದಸ್ಯರ ಬಳಗದಲ್ಲಿ ಅನ್ವಯ್ ಹೆಸರು ಕೂಡ ಕಾಣಿಸಿಕೊಂಡಿದೆ. ವಿಶೇಷ ಎಂದರೆ ಅನ್ವಯ್ ದ್ರಾವಿಡ್ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್. ಈ ಹಿಂದೆ ರಾಹುಲ್ ದ್ರಾವಿಡ್ ಕೂಡ ವಿಕೆಟ್ ಕೀಪರ್ ಆಗಿ ಕರ್ನಾಟಕ ಪರ ಕ್ರಿಕೆಟ್ ಕೆರಿಯರ್ ಆರಂಭಿಸಿದ್ದರು. ಇದೀಗ ಕಿರಿಯ ಪುತ್ರ ಕೂಡ ವಿಕೆಟ್ ಕೀಪಿಂಗ್ ಜವಾಬ್ದಾರಿಯೊಂದಿಗೆ ಕಿರಿಯರ ತಂಡದಲ್ಲಿ ಮಿಂಚುತ್ತಿದ್ದಾರೆ.

ಇದೀಗ ವಿಜಯ್ ಮರ್ಚೆಂಟ್ ಟೂರ್ನಿಗಾಗಿ ಕರ್ನಾಟಕದ ಸಂಭಾವ್ಯ ತಂಡದಲ್ಲಿ ಮೂವರು ವಿಕೆಟ್ ಕೀಪರ್‌ಗಳು ಸ್ಥಾನ ಪಡೆದಿದ್ದು, ಅನ್ವಯ್ ಜೊತೆ ಆದಿತ್ಯ ಝಾ ಮತ್ತು ಜಾಯ್ ಜೇಮ್ಸ್ ಕೂಡ ಗ್ಲೌಸ್ ತೊಡಲು ಸಜ್ಜಾಗಿದ್ದಾರೆ. ಅಂದಹಾಗೆ ಕಳೆದ ವರ್ಷ ನಡೆದ ಅಂತರ ವಲಯ ಕೂಟದಲ್ಲಿ 14 ವರ್ಷದೊಳಗಿನವರ ರಾಜ್ಯ ತಂಡದ ನಾಯಕರಾಗಿ ಅನ್ವಯ್ ದ್ರಾವಿಡ್ ಕಾಣಿಸಿಕೊಂಡಿದ್ದರು. ಅಲ್ಲದೆ, ಇತ್ತೀಚೆಗೆ ಕೆಎಸ್‌ಸಿಎ 16 ವರ್ಷದೊಳಗಿನವರ ಅಂತರ ವಲಯ ಟೂರ್ನಿಯಲ್ಲಿ ತುಮಕೂರು ವಲಯ ವಿರುದ್ಧ ಬೆಂಗಳೂರು ವಲಯದ ಪರವಾಗಿ ಅನ್ವಯ್ ಅಜೇಯ 200 ರನ್ ಬಾರಿಸಿ ಮಿಂಚಿದ್ದರು.



# ಪಾಕ್‌ಗೆ ಐತಿಹಾಸಿಕ ಸರಣಿ ಜಯ




ಆಸ್ಟ್ರೇಲಿಯಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಪಾಕಿಸ್ತಾನ್ ತಂಡ 2-1 ಅಂತರದಿಂದ ಗೆದ್ದುಕೊಂಡಿದೆ. ಈ ಸರಣಿಯ ಮೊದಲ ಪಂದ್ಯದಲ್ಲಿ ಆಸ್ಟ್ರೇಲಿಯಾ 2 ವಿಕೆಟ್‌ಗಳ ರೋಚಕ ಜಯ ಸಾಧಿಸಿತ್ತು. ಇನ್ನು ಎರಡನೇ ಏಕದಿನ ಪಂದ್ಯದಲ್ಲಿ ಪಾಕಿಸ್ತಾನ್ 9 ವಿಕೆಟ್‌ಗಳ ಅಮೋಘ ಗೆಲುವು ದಾಖಲಿಸಿತ್ತು. ಇದೀಗ ಮೂರನೇ ಏಕದಿನ ಪಂದ್ಯದಲ್ಲೂ ಜಯ ಸಾಧಿಸಿ ಪಾಕ್ ತಂಡ ಸರಣಿ ವಶಪಡಿಸಿಕೊಂಡಿದೆ.

ಬರೋಬ್ಬರಿ 22 ವರ್ಷಗಳ ಬಳಿಕ ಪಾಕಿಸ್ತಾನ್ ತಂಡವು ಆಸ್ಟ್ರೇಲಿಯಾದಲ್ಲಿ ಪರಾಕ್ರಮ ಮೆರೆದಿದೆ. ಅದು ಕೂಡ ಕಾಂಗರೂ ನಾಡಿನಲ್ಲಿ ಆಸೀಸ್ ಪಡೆಯನ್ನು 2-1 ಅಂತರದಿಂದ ಮಣಿಸಿ ಏಕದಿನ ಸರಣಿ ಗೆಲ್ಲುವ ಮೂಲಕ ಎಂಬುದು ವಿಶೇಷ. ಅಂದರೆ ಪಾಕಿಸ್ತಾನ್ ತಂಡವು ಆಸ್ಟ್ರೇಲಿಯಾದಲ್ಲಿ ಏಕದಿನ ಸರಣಿ ಗೆದ್ದು ಬರೋಬ್ಬರಿ 22 ವರ್ಷಗಳಾಗಿತ್ತು.

ಆದರೆ ಈ ಬಾರಿ ಮೊಹಮ್ಮದ್ ರಿಝ್ವಾನ್ ಮುಂದಾಳತ್ವದಲ್ಲಿ ಕಣಕ್ಕಿಳಿದ ಪಾಕ್ ಪಡೆಯು ಆತಿಥೇಯರನ್ನು ಬಗ್ಗುಬಡಿದು 2 ದಶಕಗಳ ಬಳಿಕ ಸರಣಿ ಗೆಲ್ಲುವಲ್ಲಿ ಯಶಸ್ವಿಯಾಗಿದೆ. ಈ ಗೆಲುವಿನೊಂದಿಗೆ ಆಸೀಸ್ ಪಿಚ್‌ನಲ್ಲಿ ಸರಣಿ ಗೆಲ್ಲುವ ಪಾಕ್ ತಂಡದ 22 ವರ್ಷಗಳ ಕಾಯುವಿಕೆ ಕೂಡ ಕೊನೆಗೊಂಡಿದೆ.

ಇನ್ನು ಪರ್ತ್‌ನಲ್ಲಿ ನಡೆದ ನಿರ್ಣಾಯಕ ಪಂದ್ಯದಲ್ಲಿ ಟಾಸ್ ಸೋತು ಮೊದಲ ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ತಂಡವು ನಿರೀಕ್ಷಿತ ಪ್ರದರ್ಶನ ನೀಡಿರಲಿಲ್ಲ. ಪಾಕ್ ವೇಗಿಗಳ ಕರಾರುವಾಕ್ ದಾಳಿ ಮುಂದೆ ಪೆವಿಲಿಯನ್ ಪರೇಡ್ ನಡೆಸಿದ ಆಸ್ಟ್ರೇಲಿಯಾ 31.5 ಓವರ್‌ಗಳಲ್ಲಿ ಕೇವಲ 140 ರನ್‌ಗಳಿಸಿ ಆಲೌಟ್ ಆಯಿತು. 141 ರನ್‌ಗಳ ಸುಲಭ ಗುರಿಯನ್ನು ಬೆನ್ನತ್ತಿದ ಪಾಕಿಸ್ತಾನ್ ತಂಡಕ್ಕೆ ಆರಂಭಿಕರಾದ ಸೈಮ್ ಅಯ್ಯೂಬ್ ಹಾಗೂ ಅಬ್ದುಲ್ಲಾ ಶಫೀಕ್ ಉತ್ತಮ ಆರಂಭ ಒದಗಿಸಿದ್ದರು. ಮೊದಲ ವಿಕೆಟ್‌ಗೆ 84 ರನ್‌ಗಳ ಜೊತೆಯಾಟವಾಡಿದ ಬಳಿಕ ಅಬ್ದುಲ್ಲಾ ಶಫೀಕ್ (37) ವಿಕೆಟ್ ಒಪ್ಪಿಸಿದರು. ಇದರ ಬೆನ್ನಲ್ಲೇ ಸೈಮ್ ಅಯ್ಯೂಬ್ (42) ಕೂಡ ಔಟಾದರು. ಅಂತಿಮವಾಗಿ ಪಾಕ್ ತಂಡವು 26.5 ಓವರ್‌ಗಳಲ್ಲಿ 143 ರನ್ ಬಾರಿಸಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತು. ಈ ಮೂಲಕ 22 ವರ್ಷಗಳ ಬಳಿಕ ಆಸ್ಟ್ರೇಲಿಯಾದಲ್ಲಿ ಸರಣಿ ಗೆಲ್ಲುವಲ್ಲಿ ಪಾಕಿಸ್ತಾನ್ ತಂಡ ಯಶಸ್ವಿಯಾಗಿದೆ. ಇದಕ್ಕೂ ಮುನ್ನ 2002 ರಲ್ಲಿ ವಾಕರ್ ಯೂನಿಸ್ ನೇತೃತ್ವದ ಪಾಕ್ ಪಡೆ ಆಸ್ಟ್ರೇಲಿಯಾ ವಿರುದ್ಧ 2-1 ಅಂತರದಿಂದ ಏಕದಿನ ಸರಣಿ ಗೆದ್ದುಕೊಂಡಿತ್ತು. ಇದಾದ ಬಳಿಕ ಒಮ್ಮೆಯೂ ಪಾಕಿಸ್ತಾನ್ ತಂಡ ಆಸ್ಟ್ರೇಲಿಯಾದಲ್ಲಿ ಸರಣಿ ಜಯಿಸಿರಲಿಲ್ಲ.

# ಧೋನಿ, ರೋಹಿತ್ ಕ್ಲಬ್ ಸೇರಿದ ಪಾಕ್ ವೇಗಿ

ಪಾಕಿಸ್ತಾನ ಆಸ್ಟ್ರೇಲಿಯಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯನ್ನು 2-1 ಅಂತರದಿಂದ ಗೆದ್ದಿದೆ. ವೇಗಿ ಹ್ಯಾರಿಸ್ ರೌಫ್ ಅವರ ಅದ್ಭುತ ಬೌಲಿಂಗ್ ಪ್ರದರ್ಶನದ ಪಾಕ್ ಗೆಲುವಿಗೆ ಪ್ರಮುಖ ಕಾರಣವಾಯಿತು. ರೌಫ್, ಇಡೀ ಸರಣಿಯಲ್ಲಿ 10 ವಿಕೆಟ್ ಪಡೆದು ಸರಣಿ ಶ್ರೇಷ್ಠರಾಗಿ ಆಯ್ಕೆಯಾದರು. ಈ ಮೂಲಕ ರೌಫ್, ಧೋನಿ ಮತ್ತು ರೋಹಿತ್ ಶರ್ಮಾ ಅವರ ವಿಶೇಷ ಕ್ಲಬ್ ಸೇರಿದರು. ಆಸ್ಟ್ರೇಲಿಯಾ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯನ್ನು ಪಾಕಿಸ್ತಾನ 2-1 ಅಂತರದಿಂದ ಗೆದ್ದುಕೊಂಡಿದೆ.

ಪರ್ತ್‌ನಲ್ಲಿ ಭಾನುವಾರ ನಡೆದ ಕೊನೆಯ ಏಕದಿನ ಪಂದ್ಯದಲ್ಲಿ ಪಾಕಿಸ್ತಾನ 8 ವಿಕೆಟ್‌ಗಳಿಂದ ಕಾಂಗರೂಗಳನ್ನು ಸೋಲಿಸಿತು.

ಪಾಕ್ ತಂಡದ ಈ ಐತಿಹಾಸಿಕ ಗೆಲುವಿನಲ್ಲಿ ವೇಗಿ ಹ್ಯಾರಿಸ್ ರೌಫ್ ಅವರು ಪ್ರಮುಖ ಪಾತ್ರವಹಿಸಿದರು. ಆಡಿದ ಮೂರು ಪಂದ್ಯಗಳಲ್ಲಿ ಒಟ್ಟು 10 ವಿಕೆಟ್ ಪಡೆಯುವ ಮೂಲಕ ಸರಣಿ ಶ್ರೇಷ್ಠರಾಗಿ ಆಯ್ಕೆಯಾದರು.

**ಆಸೀಸ್ ವಿರುದ್ಧ ಶ್ರೇಷ್ಠ ಪ್ರದರ್ಶನ**

ಎರಡನೇ ಮತ್ತು ಮೂರನೇ ಏಕದಿನ ಪಂದ್ಯದಲ್ಲಿ ಮಾರಕ ದಾಳಿ ನಡೆಸಿದ್ದ ರೌಫ್, ಈ ಎರಡೂ ಪಂದ್ಯಗಳಲ್ಲಿ ಪಂದ್ಯದ ಆಟಗಾರನಾಗಿ ಆಯ್ಕೆಯಾಗಿದ್ದು ಮಾತ್ರವಲ್ಲದೆ ಸರಣಿಯ ಆಟಗಾರ ಪ್ರಶಸ್ತಿಯನ್ನು ಗೆಲ್ಲುವಲ್ಲಿ ಯಶಸ್ವಿಯಾದರು. ಈ ಪ್ರಶಸ್ತಿಯನ್ನು ಗೆಲ್ಲುವ ಮೂಲಕ ರೌಫ್, ಭಾರತದ ಮಾಜಿ ನಾಯಕ ಎಂಎಸ್ ಧೋನಿ ಮತ್ತು ರೋಹಿತ್ ಶರ್ಮಾ ಅವರ ವಿಶೇಷ ಕ್ಲಬ್‌ಗೆ ಸೇರ್ಪಡೆಗೊಂಡರು. ವಾಸ್ತವವಾಗಿ, ರೌಫ್ ಕಳೆದ 10 ವರ್ಷಗಳಲ್ಲಿ ಆಸ್ಟ್ರೇಲಿಯಾ ನೆಲದಲ್ಲಿ ಏಕದಿನ ಸರಣಿಯಲ್ಲಿ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ಗೆದ್ದ ಐದನೇ ಅತಿಥಿ ಕ್ರಿಕೆಟಿಗ ಎನಿಸಿಕೊಂಡಿದ್ದಾರೆ. ರೌಫ್‌ಗೂ ಮುನ್ನ ಧೋನಿ 2019ರಲ್ಲಿ ಇಲ್ಲಿ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದಿದ್ದರೆ, ದಕ್ಷಿಣ ಆಫ್ರಿಕಾದ ಡೇವಿಡ್ ಮಿಲ್ಲರ್ ಮತ್ತು ಇಂಗ್ಲೆಂಡ್‌ನ ಜೋ ರೂಟ್ 2018 ರಲ್ಲಿ ಈ ಪ್ರಶಸ್ತಿಗೆ ಭಾಜನರಾಗಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966